ಸಂಪುಟ: 05 ಸಂಚಿಕೆ: 136 ಪುಟಗಳು: 08 ಮಂಗಳವಾರ 29 ಜುಲೈ 2025
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

ಮುಂಜಾನೆ ಮಾತು
ಸಿಗದ ನಿನ್ನೆಯ
ಸಿಗುವ ನಾಳೆಯ ಮಧ್ಯೆ
ಸಿಕ್ಕಿರುವ ಈ ಕ್ಷಣ
ಸುಂದರವಾಗಿಸಿಕೊಳ್ಳಿ

# ಉದಯ ವಾಹಿನಿ
UV ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ರೈತರಿಗಾಗಿ ಜೋಶಿ ನೇತೃತ್ವದಲ್ಲಿ ಜೆಪಿ ನಡ್ಡಾಗೆ ಸಂಸದರ ಮನವಿ

• ಉದಯವಾಹಿನಿ, ನವದೆಹಲಿ

ಕರ್ನಾಟಕ ರಾಜ್ಯದಲ್ಲಿ ಮುಂಗಾರು ಹಂಗಾಮಿನ ಕೃಷಿ ಚಟುವಟಿಕೆ ಬಿರುಸುಗೊಂಡಿದ್ದು, ಅಧಿಕ ರಸಗೊಬ್ಬರ ಪೂರೈಕೆಗಾಗಿ ಕೇಂದ್ರ ಸಚಿವ ಪ್ರಲ್ಹಾದ ಜೋಶಿ ನೇತೃತ್ವದಲ್ಲಿ ರಾಜ್ಯ ಬಿಜೆಪಿ ಸಂಸದರೆಲ್ಲ ಸೇರಿ ಕೇಂದ್ರ ಸರ್ಕಾರದ ಗಮನ ಸೆಳೆದಿದ್ದಾರೆ. ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಅವರ ನೇತೃತ್ವದಲ್ಲಿ ರಾಜ್ಯ ಬಿಜೆಪಿ ಸಂಸದರೆಲ್ಲ ಒಟ್ಟಾಗಿ ಸೇರಿ ಕೇಂದ್ರ ರಾಸಾಯನಿಕ ಹಾಗೂ ರಸಗೊಬ್ಬರ ಇಲಾಖೆ ಸಚಿವ ಜೆ.ಪಿ.ನಡ್ಡಾ ಅವರನ್ನು ಭೇಟಿಯಾಗಿ ರೈತರ ಹಿತದೃಷ್ಟಿಯಿಂದ ರಾಜ್ಯಕ್ಕೆ ಮತ್ತಷ್ಟು ಅಧಿಕ ಪ್ರಮಾಣದಲ್ಲಿ ರಸಗೊಬ್ಬರ ಪೂರೈಸುವಂತೆ ಮನವಿ ಸಲ್ಲಿಸಿದರು.

ರಾಜ್ಯದಲ್ಲಿ ರಸಗೊಬ್ಬರದ ಅಭಾವವಿಲ್ಲ. ಕೇಂದ್ರ ಸರ್ಕಾರದಿಂದ ಸರಬರಾಜು ಆಗಿರುವ ರಸಗೊಬ್ಬರಗಳಲ್ಲಿ 1.65 ಲಕ್ಷ ಮೆಟ್ರಿಕ್ ಟನ್ ರಸಗೊಬ್ಬರವನ್ನು ರಾಜ್ಯ ಸರ್ಕಾರ ಸಂಗ್ರಹಣೆ ಮಾಡಿಟ್ಟುಕೊಂಡಿದೆ ಎಂದು ಸಚಿವ ಪ್ರಲ್ಹಾದ ಜೋಶಿ ಇದೇ ವೇಳೆ ಮಾಹಿತಿ ನೀಡಿದರು.

## ಐವರು ಪೊಲೀಸ್ ಅಧಿಕಾರಿಗಳ ಅಮಾನತು ವಾಪಸ್

• ಉದಯವಾಹಿನಿ, ಬೆಂಗಳೂರು

ಆರ್‌ಸಿಬಿ ವಿಜಯೋತ್ಸವದ ವೇಳೆ ಚಿನ್ನಸ್ವಾಮಿ ಕ್ರೀಡಾಂಗಣದ ಬಳಿ ಸಂಭವಿಸಿದ್ದ ಕಾಲ್ತುಳಿತದಲ್ಲಿ 11 ಜನ ಮೃತಪಟ್ಟ ಘಟನೆಗೆ ಸಂಬಂಧಿಸಿದಂತೆ ಕರ್ತವ್ಯಲೋಪವೆಂಬ ಆರೋಪದಲ್ಲಿ ಪೊಲೀಸ್ ಕಮಿಷನರ್ ಬಿ.ದಯಾನಂದ ಸೇರಿ ಐವರು ಪೊಲೀಸ್ ಅಧಿಕಾರಿಗಳನ್ನು ಅಮಾನತುಗೊಳಿಸಿ ಹೊರಡಿಸಿದ್ದ ಆದೇಶವನ್ನು ರಾಜ್ಯ ಸರ್ಕಾರ ಹಿಂಪಡೆದಿದೆ. ಹೆಚ್ಚುವರಿ ಪೊಲೀಸ್ ಕಮಿಷನರ್ ವಿಕಾಸ್ ಕುಮಾರ್. ಕೇಂದ್ರ ವಿಭಾಗದ ಡಿಸಿಪಿ ಟಿ. ಶೇಖರ್, ಕಬ್ಬನ್ ಪಾರ್ಕ್ ಎಸಿಪಿ ಸಿ. ಬಾಲಕೃಷ್ಣ ಮತ್ತು ಇನ್‌ಸ್ಪೆಕ್ಟರ್‌ರಾದ ಎ.ಕೆ. ಗಿರೀಶ್ ಅವರ ಅಮಾನತು ವಾಪಸ್ ಪಡೆಯಲಾಗಿದೆ. ಈ ಎಲ್ಲಾ ಅಧಿಕಾರಿಗಳ ಮೇಲೆ ನಿಯಮಾನುಸಾರ ಶಿಸ್ತುಕ್ರಮ ಬಾಕಿಯಿರಿಸಿ, ತಕ್ಷಣದಿಂದ ಕರ್ತವ್ಯಕ್ಕೆ ಮರಳಿ ನೇಮಿಸಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ ಸೋಮವಾರ ಆದೇಶ ಹೊರಡಿಸಿದೆ. ಜೂನ್ 4ರಂದು ನಡೆದಿದ್ದ ಕಾಲ್ತುಳಿತ ಘಟನೆ ಸಂಬಂಧಿಸಿದಂತೆ ತನಿಖೆಗೆ ರಾಜ್ಯ ಸರ್ಕಾರವು ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ. ಜಗದೀಶ್ ನೇತೃತ್ವದ ಮ್ಯಾಜಿಸ್ಟ್ರಿಯಲ್ ತನಿಖಾ ತಂಡ ಮತ್ತು ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಜಾನ್ ಮೈಕಲ್ ಕುನ್ನ ನೇತೃತ್ವದ ಏಕ ಸದಸ್ಯ ಆಯೋಗವನ್ನು ರಚಿಸಿತ್ತು.

## ಪ್ರತ್ಯೇಕ ಗ್ರಾ.ಪಂ; ಸೂಕ್ತ ಕ್ರಮಕ್ಕೆ ಸರ್ಕಾರಕ್ಕೆ ಹೈಕೋರ್ಟ್ ಆದೇಶ

• ಉದಯವಾಹಿನಿ, ಬೆಂಗಳೂರು

'ಬೆಳಗಾವಿ ಜಿಲ್ಲೆ ರಾಯಬಾಗ ತಾಲ್ಲೂಕಿನ ಬ್ಯಾಕೂಡ ಗ್ರಾಮ ಪಂಚಾಯಿತಿಯಿಂದ ಬೊಮ್ಮನಾಳ ಹಾಗೂ ಬೀರನಾಳ ಗ್ರಾಮಗಳನ್ನು ಬೇರ್ಪಡಿಸಿ ಪ್ರತ್ಯೇಕ ಗ್ರಾಮ ಪಂಚಾಯಿತಿ ರಚಿಸುವಂತೆ ಕೋರಿ ಗ್ರಾಮಸ್ಥರು ಸಲ್ಲಿಸಿರುವ ಅರ್ಜಿಗೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳಬೇಕು' ಎಂದು ಹೈಕೋರ್ಟ್ ರಾಜ್ಯ ಸರ್ಕಾರಕ್ಕೆ ಆದೇಶಿಸಿದೆ. ಈ ಸಂಬಂಧ ರಾಯಬಾಗ ತಾಲ್ಲೂಕಿನ ರಾಮ ಅಣ್ಣಪ್ಪ ಸವಸುದ್ದಿ ಹಾಲಪ್ಪ ಬಾಗಿ ಬೈರು ಧನಪಾಲ್ ಕಾಂಬ್ಳೆ ಗೂಳಪ್ಪ ಮಸಗೊಂಡೆ ಮತ್ತು ಸುಭಾಷ್ ಯಲ್ಲಪ್ಪ ನಾಯಕ್ ಸಲ್ಲಿಸಿದ್ದ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ನೇತೃತ್ವದ ವಿಭಾಗೀಯ ನ್ಯಾಯಪೀಠ ಸೋಮವಾರ ವಿಚಾರಣೆ ನಡೆಸಿತು. 'ಅರ್ಜಿದಾರರ ಮನವಿಯನ್ನು ಕಾನೂನು ರೀತ್ಯಾ ಪರಿಗಣಿಸಿ ನಾಲ್ಕು ತಿಂಗಳಲ್ಲಿ ಕ್ರಮ ಕೈಗೊಳ್ಳಬೇಕು' ಎಂದು ಬೆಳಗಾವಿ ಜಿಲ್ಲಾಧಿಕಾರಿಗೆ ನಿರ್ದೇಶಿಸಿ ಅರ್ಜಿ ವಿಲೇವಾರಿ ಮಾಡಿತು. 'ಬ್ಯಾಕೂಡ ಗ್ರಾ.ಪಂ ಬೊಮ್ಮನಾಳ ಗ್ರಾಮದಿಂದ 15 ಕಿ.ಮೀ ದೂರ ಇದೆ. ಈ ಗ್ರಾಮದ ಜನರು ಗ್ರಾ.ಪಂ ಕೇಂದ್ರ ಸ್ಥಾನಕ್ಕೆ ಹೋಗಬೇಕಾದರೆ ರಾಯಬಾಗ ಪಟ್ಟಣದ ಮೂಲಕ ಪ್ರಯಾಣಿಸಬೇಕು. ಇದರಿಂದ ಜನಸಾಮಾನ್ಯರು ಮಹಿಳೆಯರು ಹಿರಿಯ ನಾಗರಿಕರು ಶಾಲಾ ಮಕ್ಕಳಿಗೆ ಸಾಕಷ್ಟು ತೊಂದರೆ ಆಗುತ್ತಿದೆ' ಎಂದು ಅರ್ಜಿದಾರರು ದೂರಿದ್ದರು.

## ಚುನಾವಣಾ ಕಾರ್ಯಕ್ಕೆ ಶಿಕ್ಷಕೇತರರ ಬಳಕೆ: ಶಾಲಿನಿ ರಜನೀಶ್

• ಉದಯವಾಹಿನಿ, ಬೆಂಗಳೂರು

ಚುನಾವಣಾ ಕರ್ತವ್ಯಗಳಿಗೆ ವಿವಿಧ ಇಲಾಖೆ ಅಧಿಕಾರಿಗಳು, ಸಿಬ್ಬಂದಿ ಹಾಗೂ ಬೋಧಕೇತರ ಸಿಬ್ಬಂದಿಯನ್ನು ನಿಯೋಜಿಸುವಂತೆ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳಿಗೆ ಸೂಚಿಸಿದ್ದಾರೆ. ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯ ಹಾಗೂ ಮತಗಟ್ಟೆ ಅಧಿಕಾರಿಗಳಾಗಿ ಶಿಕ್ಷಕರನ್ನು ನೇಮಕ ಮಾಡುತ್ತಿರುವುದರಿಂದ ನಿತ್ಯದ ಪಾಠಗಳಿಗೆ ತೊಂದರೆಯಾಗುತ್ತಿದೆ. ಇದರಿಂದ ಮಕ್ಕಳ ಕಲಿಕೆಯ ಮೇಲೆ ಪರಿಣಾಮ ಬೀರುತ್ತಿದೆ ಎಂದು ಶಾಲಾ ಶಿಕ್ಷಣ ಇಲಾಖೆ ಪ್ರಧಾನ ಕಾರ್ಯದರ್ಶಿ ಮುಖ್ಯ ಚುನಾವಣಾಧಿಕಾರಿಗೆ ಪತ್ರ ಬರೆದು, ಮನವಿ ಮಾಡಿದ್ದಾರೆ. ಸುಪ್ರೀಂಕೋರ್ಟ್ ಸಹ ರಜಾ ದಿನಗಳು, ಬೋಧಕೇತರ ಅವಧಿಯಲ್ಲಿ ಶಿಕ್ಷಕರನ್ನು ಚುನಾವಣಾ ಕಾರ್ಯಕ್ಕೆ ನಿಯೋಜಿಸಬಹುದು ಎಂದಿದೆ. ಹಾಗಾಗಿ, ಬೋಧಕೇತರ ಹಾಗೂ ಇತರೆ ಇಲಾಖೆಯ ಸಿಬ್ಬಂದಿಯನ್ನು ಹೆಚ್ಚಿನ ಸಂಖ್ಯೆಯಲ್ಲಿ ಚುನಾವಣಾ ಕಾರ್ಯಗಳಿಗೆ ಬಳಸಿಕೊಳ್ಳುವಂತೆ ಸಲಹೆ ನೀಡಿದ್ದಾರೆ.

# ರಾಜನಾಥ್ ಸಿಂಗ್ ಕೊಟ್ಟ ಉತ್ತರಕ್ಕೆ ಸಂಸತ್ತಿನಲ್ಲಿ ಚಪ್ಪಾಳೆಯ ಸುರಿಮಳೆ!




ಆಪರೇಷನ್ ಸಿಂಧೂರದಲ್ಲಿ ನಮ್ಮ ಎಷ್ಟು ಯುದ್ಧ ವಿಮಾನಗಳನ್ನು ಪಾಕಿಸ್ತಾನ ಸೇನೆ ಹೊಡೆದುರುಳಿಸಿದೆ ಎಂದು ವಿರೋಧ ಪಕ್ಷದ ಕೆಲವೇ ಸದಸ್ಯರು ಕೇಳುತ್ತಿದ್ದಾರೆ..?, ಅವರ ಪ್ರಶ್ನೆ ನಮ್ಮ ರಾಷ್ಟ್ರೀಯ ಭಾವನೆಗಳನ್ನು ಸಮರ್ಪಕವಾಗಿ ಪ್ರತಿನಿಧಿಸುವುದಿಲ್ಲ ಎಂದು ನಾನು ಭಾವಿಸುತ್ತೇನೆ. ನಮ್ಮ ಸಶಸ್ತ್ರ ಪಡೆಗಳು ಎಷ್ಟು ಶತ್ರು ವಿಮಾನಗಳನ್ನು ಹೊಡೆದುರುಳಿಸಿದವು ಎಂದು ಅವರು ನಮ್ಮನ್ನು ಕೇಳಿಲ್ಲ. ಭಾರತ ಭಯೋತ್ಪಾದಕ ನೆಲೆಗಳನ್ನು ನಾಶಪಡಿಸಿದೆಯೇ ಎಂಬುದು ಅವರ ಪ್ರಶ್ನೆಯಾಗಿರಬೇಕು ಮತ್ತು ಅದಕ್ಕೆ ಉತ್ತರ, ಹೌದು. ನೀವು ಕೇಳಬೇಕಾದ ಪ್ರಶ್ನೆಯಿದ್ದರೆ, ಇದನ್ನು ಕೇಳಿ ಎಂದರು. ಭಯೋತ್ಪಾದಕ ದಾಳಿಯಲ್ಲಿ ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬಗಳಿಗೆ ನ್ಯಾಯ ಒದಗಿಸಲು ಈ ಕಾರ್ಯಾಚರಣೆ ಪ್ರಾರಂಭಿಸಲಾಯಿತು. ಪಾಕಿಸ್ತಾನ ಗಡಿ ದಾಟುವುದು ಅಥವಾ ಅವರ ಪ್ರದೇಶವನ್ನು ವಶಪಡಿಸಿಕೊಳ್ಳುವುದು ಆಪರೇಷನ್ ಸಿಂಧೂರದ ಉದ್ದೇಶವಾಗಿರಲಿಲ್ಲ. ಆಪರೇಷನ್ ಸಿಂಧೂರದ ಗುರಿಯು ಪಾಕಿಸ್ತಾನವು ಹಲವು ವರ್ಷಗಳಿಂದ ಪೋಷಿಸುತ್ತಿದ್ದ ಭಯೋತ್ಪಾದಕ ನರ್ಸರಿಗಳನ್ನು ನಿರ್ಮೂಲನೆ ಮಾಡುವುದಾಗಿತ್ತು ಮತ್ತು ಅದಕ್ಕಾಗಿ ನಮ್ಮ ಸಶಸ್ತ್ರ ಪಡೆಗಳಿಗೆ ಸಂಪೂರ್ಣ ಸ್ವಾತಂತ್ರ್ಯ ನೀಡಲಾಯಿತು ಎಂದು ತಿಳಿಸಿದರು.

### ಕುಟುಂಬಗಳಿಗೆ ನ್ಯಾಯ ಒದಗಿಸಲು ಕಾರ್ಯಾಚರಣೆ



# ರಾಜನಾಥ್ ಉತ್ತರ ವಿಪಕ್ಷಗಳು ತತ್ತರ

## ಗರಂ ಆದ್ರೂ ರಕ್ಷಣಾ ಸಚಿವರು..!

• ಉದಯವಾಹಿನಿ, ನವದೆಹಲಿ

ಭಾರತೀಯ ಸಶಸ್ತ್ರ ಪಡೆಗಳು ಪಾಕಿಸ್ತಾನದ ಒಂಬತ್ತು ಭಯೋತ್ಪಾದಕ ತಾಣಗಳ ಮೇಲೆ ಸಂಘಟಿತ ದಾಳಿ ನಡೆಸಿದ್ದವು, ಈ ಕಾರ್ಯಾಚರಣೆ ಕೇವಲ 22 ನಿಮಿಷಗಳಲ್ಲಿ ಪೂರ್ಣಗೊಂಡಿತು ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ತಿಳಿಸಿದರು. ಲೋಕಸಭೆ ಅಧಿವೇಶನದಲ್ಲಿ ಆಪರೇಷನ್ ಸಿಂಧೂರ್ ಕುರಿತು ಮಾಹಿತಿ ನೀಡಿದ ಅವರು, ಆಪರೇಷನ್ ಸಿಂಧೂರ್ ಕಾರ್ಯಾಚರಣೆಗೂ ಮುನ್ನ ನಮ್ಮ ಸೇನಾ ಪಡೆಗಳು ಪ್ರತಿಯೊಂದು ಅಂಶವನ್ನು ಅಧ್ಯಯನ ಮಾಡಿ, ಭಯೋತ್ಪಾದಕರಿಗೆ ಗರಿಷ್ಠ ಹಾನಿಯನ್ನುಂಟುಮಾಡುವ ಆಯ್ಕೆಯನ್ನು ಆರಿಸಿಕೊಂಡವು. ಆಪರೇಷನ್ ಸಿಂಧೂರ್ ಐತಿಹಾಸಿಕ ಮಿಲಿಟರಿ ಕ್ರಮ. ಭಯೋತ್ಪಾದನೆಯ ವಿರುದ್ಧ ನಮ್ಮ ನೀತಿಯ ಪರಿಣಾಮಕಾರಿಯಾಗಿದೆ ಎಂದು ಹೇಳಿದರು. ಯುದ್ಧಭೂಮಿಯಲ್ಲಿ ಶೌರ್ಯ ಪ್ರದರ್ಶಿಸಿದ ಭಾರತದ ಧೈರ್ಯಶಾಲಿ ಪುತ್ರರಿಗೆ ನಮನ. ಪಾಕಿಸ್ತಾನಕ್ಕೆ ನಮ್ಮ ನೆಲೆಗಳ ಮೇಲೆ ದಾಳಿ ಮಾಡಲು ಸಾಧ್ಯವಾಗಲಿಲ್ಲ, ನಮ್ಮ ಯಾವುದೇ ಪ್ರಮುಖ ಆಸ್ತಿ ಪಾಸ್ತಿಗೆ ಹಾನಿಯಾಗಿಲ್ಲ. ಪಾಕಿಸ್ತಾನ ಭಾರತೀಯ ಸೇನಾ ನೆಲೆಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಿತು, ಎಸ್ -400 ಮತ್ತು ಇತರ ವಾಯು ರಕ್ಷಣಾ ವ್ಯವಸ್ಥೆಗಳಿಂದ ಅದನ್ನು ಹಿಮ್ಮೆಟ್ಟಿಸಲಾಯಿತು ಎಂದು ಅವರು ಸದನಕ್ಕೆ ಮಾಹಿತಿ ನೀಡಿದರು. ಯಾವುದೋ ಒತ್ತಡದಿಂದ ಆಪರೇಷನ್ ಸಿಂಧೂರ್ ನಿಲ್ಲಿಸಲಾಗಿದೆ ಎಂದು ಹೇಳುವುದು ಆಧಾರರಹಿತ ಮತ್ತು ಸಂಪೂರ್ಣವಾಗಿ ತಪ್ಪು. ಮಿಲಿಟರಿ ಉದ್ದೇಶಗಳನ್ನು ಸಂಪೂರ್ಣವಾಗಿ ಸಾಧಿಸಿದ್ದರಿಂದ ಭಾರತ ಕಾರ್ಯಾಚರಣೆಯನ್ನು ನಿಲ್ಲಿಸಿತು ಎಂದು ತಿಳಿಸಿದರು. ತನ್ನ ಉಳುವಿಗಾಗಿ ಇತರರನ್ನು ಅವಲಂಬಿಸಿರುವ ದೇಶದೊಂದಿಗೆ ಪೈಪೋಟಿ ನಡೆಸುವುದು ನಮ್ಮ ಗುಣಮಟ್ಟ ಕಡಿಮೆ ಮಾಡಿದಂತೆ. ನಾವು 100 ತಪ್ಪುಗಳನ್ನು ಕ್ಷಮಿಸಬಹುದು ಎಂಬುದನ್ನು ಶ್ರೀಕೃಷ್ಣನಿಂದ ಕಲಿತಿದ್ದೇವೆ, ಆದರೆ ಧರ್ಮವನ್ನು ರಕ್ಷಿಸಲು, ನಾವು ಸುದರ್ಶನ ಚಕ್ರವನ್ನು ಬಳಸಲು ಬದ್ಧರಾಗಿದ್ದೇವೆ ಎಂದು ರಾಜನಾಥ್ ಸಿಂಗ್ ಪಾಕಿಸ್ತಾನಕ್ಕೆ ಎಚ್ಚರಿಕೆಯ ಸಂದೇಶ ರವಾನಿಸಿದರು.

ನಮ್ಮ ಸರ್ಕಾರ ಪಾಕಿಸ್ತಾನದೊಂದಿಗೆ ಶಾಂತಿ ಸ್ಥಾಪಿಸಲು ಹಲವು ಬಾರಿ ಪ್ರಯತ್ನಪಟ್ಟಿದೆ. ಆದರೆ ನಂತರ, 2016ರ ಸರ್ಜಿಕಲ್ ಸ್ಟ್ರೈಕ್, 2019ರ ಬಾಲಕೋಟ್ ವೈಮಾನಿಕ ದಾಳಿ ಮತ್ತು 2025ರ ಆಪರೇಷನ್ ಸಿಂಧೂರ್ ಮೂಲಕ, ನಾವು ಶಾಂತಿ ಸ್ಥಾಪಿಸಲು ವಿಭಿನ್ನ ಮಾರ್ಗವನ್ನು ಆರಿಸಿಕೊಂಡಿದ್ದೇವೆ. ನರೇಂದ್ರ ಮೋದಿ ಸರ್ಕಾರದ ನಿಲುವು ಸ್ಪಷ್ಟವಾಗಿದೆ. ಮಾತುಕತೆ ಮತ್ತು ಭಯೋತ್ಪಾದನೆ ಒಟ್ಟಿಗೆ ಹೋಗಲು ಸಾಧ್ಯವಿಲ್ಲ ಎಂದು ಹೇಳಿದರು.

1. ಲೋಕಸಭೆಯಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸುದೀರ್ಘ ಭಾಷಣ.
2. ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆ ಬಗ್ಗೆ ಇಂಚಿಂಚೂ ಮಾಹಿತಿ.
3. ಲೋಕಸಭೆಯಲ್ಲಿ ಪ್ರತಿಪಕ್ಷಗಳನ್ನು ತರಾಟೆಗೆ ತೆಗೆದುಕೊಂಡ ರಕ್ಷಣಾ ಸಚಿವ ರಾಜನಾಥ್ ಸಿಂಗ್.

### ತಲೆತಗ್ಗಿಸುವಂತೆ ಮಾಡಿದೆವು

ಭಾರತೀಯ ವಾಯುಪಡೆಯ ಪ್ರಚಂಡ ದಾಳಿಗಳು, ಎಲ್‌ಒಸಿಯಲ್ಲಿ ಭಾರತೀಯ ಸೇನೆಯ ಬಲವಾದ ಪ್ರತೀಕಾರ ಮತ್ತು ನೌಕಾಪಡೆಯ ದಾಳಿಯ ಭಯವು ಪಾಕಿಸ್ತಾನ ತಲೆಬಾಗುವಂತೆ ಮಾಡಿತು. ಪಾಕಿಸ್ತಾನದ ಈ ಸೋಲು ಅವರ ಸಾಮಾನ್ಯ ವೈಫಲ್ಯವಲ್ಲ, ಆದರೆ ಇದು ಅದರ ಮಿಲಿಟರಿ ಬಲ ಮತ್ತು ನೈತಿಕತೆಯ ಸೋಲು. ಭಾರತದ ಮಿಲಿಟರಿ ನೀತಿ ಇನ್ನು ಮುಂದೆ ರಕ್ಷಣಾತ್ಮಕವಲ್ಲ, ಆದರೆ ನಿರ್ಣಾಯಕ ಮತ್ತು ಆಕ್ರಮಣಕಾರಿ ಎಂದು ರಾಜನಾಥ್ ಸಿಂಗ್ ಸೂಚಿಸಿದರು. ಭಯೋತ್ಪಾದಕರಿಗೆ ಅವರ ಸ್ವಂತ ನೆಲದಲ್ಲಿ ಪಾಠ ಕಲಿಸಲಾಗುವುದು. ಭಾರತ ಈಗ ಮೌನವಾಗಿರುವುದಿಲ್ಲ ಎಂಬುದಕ್ಕೆ ಆಪರೇಷನ್ ಸಿಂಧೂರ್ ಸ್ಪಷ್ಟ ಸಂದೇಶವಾಗಿದೆ ಎಂದು ಹೇಳಿದರು.

### ಪ್ರಶ್ನೆಗಳಿಗೆ 3 ಪದಗಳಲ್ಲಿ ಉತ್ತರಿಸಿದ ಸಿಂಗ್

'ನಮ್ಮ ಪಡೆಗಳಿಂದ ಎಷ್ಟು ಶತ್ರು ಸೈನಿಕರು ಹತರಾದರು ಎಂದು ಪ್ರತಿಪಕ್ಷಗಳು ಒಮ್ಮೆಯೂ ನಮ್ಮನ್ನು ಕೇಳಲಿಲ್ಲ. ಅವರು ಇದನ್ನು ಕೇಳಬೇಕು' ಎಂದು ಹೇಳಿದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಭಾರತ ಪಾಕಿಸ್ತಾನದ ಭಯೋತ್ಪಾದಕ ಅಡಗುತಾಣಗಳನ್ನು ನಾಶಪಡಿಸಿದೆಯೇ ಎಂದು ಕೇಳಿದರೆ, ಅದಕ್ಕೆ ಉತ್ತರ - ಹೌದು. ಆಪರೇಷನ್ ಸಿಂಧೂರ್ ಯಶಸ್ವಿಯಾಗಿದೆಯೇ ಎಂದು ನೀವು ಕೇಳಬೇಕು, ಅದಕ್ಕೆ ಉತ್ತರ - ಹೌದು. ಈ ಕಾರ್ಯಾಚರಣೆಯಲ್ಲಿ ನಮ್ಮ ಧೈರ್ಯಶಾಲಿ ಸೈನಿಕರು ಏನಾದರೂ ನಷ್ಟ ಅನುಭವಿಸಿದ್ದಾರೆಯೇ ಎಂದರೆ ಅದಕ್ಕೆ ಉತ್ತರ - ಇಲ್ಲ' ಎಂದು ರಾಜನಾಥ್ ಸಿಂಗ್ ಹೇಳಿದರು. ನಮ್ಮ ಕ್ರಮವು ಸಂಪೂರ್ಣವಾಗಿ ಆತ್ಮರಕ್ಷಣೆಯದ್ದಾಗಿತ್ತು, ಪ್ರಚೋದನಕಾರಿ ಅಥವಾ ವಿಸ್ತರಣಾವಾದಿ ಆಗಿರಲಿಲ್ಲ ಎಂದ ರಕ್ಷಣಾ ಸಚಿವ ರಾಜನಾಥ್ ಸಿಂಗ್, ಆದರೆ, ಮೇ 10, 2025 ರಂದು ಮಧ್ಯಾಹ್ನ 1:30 ರ ಸುಮಾರಿಗೆ, ಪಾಕಿಸ್ತಾನವು ಕ್ಷಿಪಣಿಗಳು, ಡ್ರೋನ್‌ಗಳು, ರಾಕೆಟ್‌ಗಳು ಮತ್ತು ಇತರ ದೀರ್ಘ-ಶ್ರೇಣಿಯ ಶಸ್ತ್ರಾಸ್ತ್ರಗಳನ್ನು ಬಳಸಿಕೊಂಡು ಭಾರತದ ಮೇಲೆ ಬೃಹತ್ ದಾಳಿ ನಡೆಸಿತು.

### ಭಾರತದ ಸೇನಾ ಸಾಮರ್ಥ್ಯ ಅನಾವರಣ

ಆಪರೇಷನ್ ಸಿಂಧೂರ ಸೇನಾ ಕಾರ್ಯಾಚರಣೆಯು ಭಾರತದ ಸೇನಾ ಸಾಮರ್ಥ್ಯವನ್ನು ಜಗತ್ತಿಗೆ ಅನಾವರಣಗೊಳಿಸಿದೆ. ನಮ್ಮ ಎಸ್-400 ವಾಯು ರಕ್ಷಣಾ ವ್ಯವಸ್ಥೆಗಳು ಪಾಕಿಸ್ತಾನದ ಕ್ಷಿಪಣಿ ದಾಳಿಗಳನ್ನು ಸಂಪೂರ್ಣವಾಗಿ ವಿಫಲಗೊಳಿಸಿವೆ. ಮೂರು ದಿನಗಳ ಕಾರ್ಯಾಚರಣೆಯಲ್ಲಿ ಯಾವ ಸೇನಾ ಸಿಬ್ಬಂದಿಗೂ ಸಣ್ಣ ಗಾಯವಾಗಿಲ್ಲ ಎಂದು ರಕ್ಷಣಾ ಸಚಿವರ ಲೋಕಸಭೆಗೆ ತಿಳಿಸಿದರು. ತಮ್ಮ ಭಾಷಣದ ಮಧ್ಯೆ ಭಾರತದ ಸೇನಾ ಸಾಮರ್ಥ್ಯವನ್ನು ಹೊಗಳುವಾಗ ಪ್ರತಿಪಕ್ಷಗಳು ಕಡೆಪಕ್ಷ ಮೇಜು ತಟ್ಟಿ ಅಭಿನಂದನೆ ಸಲ್ಲಿಸಬೇಕು ರಾಜನಾಥ್ ಸಿಂಗ್ ಹೇಳುತ್ತಿದ್ದಂತೇ, ಆಡಳಿತ ಪಕ್ಷದ ಸದಸ್ಯರು ಮೇಜು ಕುಟ್ಟಿ ಸ್ವಾಗತಿಸಿದರು. ಕೂಡಲೇ ಕೆಲವು ಪ್ರತಿಪಕ್ಷ ಸದಸ್ಯರೂ ಅಭಿನಂದಿಸಿದರು. ಇದಕ್ಕೆ ಪ್ರತಿಯಾಗಿ ರಾಜನಾಥ್ ಸಿಂಗ್ ಪ್ರತಿಪಕ್ಷ ಸದಸ್ಯರಿಗೆ ಧನ್ಯವಾದ ಅರ್ಪಿಸಿದರು.

# ಕರ್ನಾಟಕದ ಪಾಲಿನ ಗೊಬ್ಬರವನ್ನೂ ಕೇಂದ್ರ ಸರ್ಕಾರ ಕೊಡುತ್ತಿಲ್ಲ

■ ಮಂಡ್ಯದಲ್ಲಿ 100 ಅಡಿ ರಸ್ತೆಗೆ ಸರ್ಕಾರ ಒಪ್ಪಿಗೆ ■ ಒಂದೇ ದಿನ 1,146 ಕೋಟಿ ರೂ. ಮೊತ್ತದ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ

• ಉದಯವಾಹಿನಿ, ಮಂಡ್ಯ

ರಾಜ್ಯಕ್ಕೆ ಕೊಡಬೇಕಾದಷ್ಟು ಗೊಬ್ಬರ ಕೊಡದೆ ಕೇಂದ್ರ ಸರ್ಕಾರ ರಾಜ್ಯದ ರೈತರ ವಿರೋಧಿಯಾಗಿದೆ. ನಮ್ಮ ಸರ್ಕಾರ ಕೇಂದ್ರಕ್ಕೆ ಪತ್ರ ಬರೆದು ಅಗತ್ಯ ಗೊಬ್ಬರ ಸರಬರಾಜು ಮಾಡುವಂತೆ ಒತ್ತಾಯಿಸಿ ಒಂದು ವಾರ ಕಳೆದರೂ ಇದುವರೆಗೂ ಕೊಟ್ಟಿಲ್ಲ. ಬಿಜೆಪಿ ಸಂಸದರು ಮತ್ತು ರಾಜ್ಯ ಪ್ರತಿನಿಧಿಸುವ ಕೇಂದ್ರ ಸಚಿವರು ಕೇಂದ್ರದ ಜೊತೆ ಮಾತನಾಡಿ ಗೊಬ್ಬರ ಕೊಡಿಸಲಿ ಎಂದು ಸಿಎಂ ಸಿದ್ದರಾಮಯ್ಯ ಸವಾಲು ಹಾಕಿದರು.

ಮದ್ದೂರು ವಿಧಾನಸಭಾ ಕ್ಷೇತ್ರದಲ್ಲಿ 1,146 ಕೋಟಿ ರೂಪಾಯಿ ಮೊತ್ತದ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಿ, ಫಲಾನುಭವಿಗಳಿಗೆ ಸವಲತ್ತುಗಳನ್ನು ವಿತರಿಸಿ ಅವರು ಮಾತನಾಡಿದರು.

ಒಂದೇ ದಿನ 1,146 ಕೋಟಿ ಮೊತ್ತದ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡಿದ್ದೇವೆ. ಅಭಿವೃದ್ಧಿಗೆ ಹಣ ಇಲ್ಲ ಎಂದು ಸುಳ್ಳು



ಹೇಳುವ ಬಿಜೆಪಿಗೆ ಇದು ನಮ್ಮ ಸರ್ಕಾರದ ಸವಾಲು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನುಡಿದರು.

ಕಾವೇರಿ ಅಭಿವೃದ್ಧಿ ನಿಗಮ ಒಂದರಲ್ಲೇ ಎರಡು ವರ್ಷದಲ್ಲಿ 560 ಕೋಟಿ ರೂ. ಅಭಿವೃದ್ಧಿ ಕಾರ್ಯಗಳನ್ನು ನಮ್ಮ ಸರ್ಕಾರ ಮಾಡಿದೆ. ನಾಲ್ಕು ವರ್ಷ ಬಿಜೆಪಿ ಸರ್ಕಾರ ಮದ್ದೂರಿನಲ್ಲಿ ಏನು ಮಾಡಿದೆ ಎನ್ನುವುದನ್ನು ಜನತೆಗೆ ತೋರಿಸಿ ಎಂದು ಸವಾಲೆಸೆದರು. ಹಲವು ವರ್ಷಗಳಿಂದ ಬಾಕಿ ಉಳಿದಿದ್ದ ಮಂಡ್ಯ ಸಕ್ಕರೆ ಕಾರ್ಖಾನೆಯ ವಿದ್ಯುತ್ ಬಿಲ್ ಚುಕ್ತಾ ಮಾಡಿದ್ದು ನಾವು, ಕಾರ್ಖಾನೆಯ ಪುನಶ್ಚೇತನಕ್ಕೆ 52 ಕೋಟಿ ರೂಪಾಯಿ ಕೊಟ್ಟಿದ್ದು ನಾವು. ಹಾಲು ಉತ್ಪಾದಕರ ಸಂಘದ ಮನವಿಗೆ ಸ್ಪಂದಿಸಿ ಹಾಲು ಉತ್ಪಾದಕರಿಗೆ ಲೀಟರ್‌ಗೆ 5 ರೂ. ಸಹಾಯಧನ ಒದಗಿಸಿದ್ದು ನಾವು. ಈಗ ಮತ್ತೆ ಮಂಡ್ಯ ಸಕ್ಕರೆ ಕಾರ್ಖಾನೆಗೆ 10 ಕೋಟಿ ರೂ. ಕೊಟ್ಟಿರುವುದು ನಮ್ಮ ಸರ್ಕಾರ. ಮಂಡ್ಯ ಕೃಷಿ ವಿವಿ ಆರಂಭಿಸಿ, ಅಗತ್ಯ ಅನುದಾನ ಕೊಟ್ಟಿರುವುದು ನಾವು. ಇದು ಕಾಂಗ್ರೆಸ್ ಪಕ್ಷ ಮತ್ತು ಕಾಂಗ್ರೆಸ್ ಸರ್ಕಾರದ ಬದ್ಧತೆ, ಎಂದು ವಿವರಿಸಿದರು. ನಾವು ಜಾರಿ ಮಾಡಿದ ಐದು ಗ್ಯಾರಂಟಿಗಳಿಂದಾಗಿ ರಾಜ್ಯದ ಜನರ ಕೊಳ್ಳುವ ಹೆಚ್ಚಾಗಿ, ರಾಜ್ಯದ ಆರ್ಥಿಕತೆಗೆ ಶಕ್ತಿ ಬಂದಿದೆ. ಪರಿಣಾಮ ಇಡೀ ದೇಶದಲ್ಲಿ ರಾಜ್ಯದ ತಲಾ ಆದಾಯ ನಂಬರ್ ಒನ್ ಆಗಿದೆ ಎಂದು ಮೆಚ್ಚುಗೆ ಸೂಚಿಸಿದರು.

ಮಂಡ್ಯ ನಗರದಲ್ಲಿ 100 ಅಡಿ ರಸ್ತೆ ಮಾಡಲು ಶಾಸಕ ಉದಯ್ ಅವರ ಬೇಡಿಕೆಗೆ ಸರ್ಕಾರ ಒಪ್ಪಿಗೆ ಸೂಚಿಸಿದೆ ಎಂದು ಘೋಷಿಸಿದ ಮುಖ್ಯಮಂತ್ರಿಗಳು, ಶಾಸಕ ಉದಯ್ ಅವರದ್ದು ಕಡಿಮೆ ಮಾತು, ಹೆಚ್ಚು ಕೆಲಸ ಮಾಡುತ್ತಾರೆ ಎಂದು ಪ್ರಶಂಶಿಸಿದರು.

ಕಾರ್ಯಕ್ರಮದಲ್ಲಿ ಡಿಸಿಎಂ ಡಿ.ಕೆ. ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ಚಲುವರಾಯಸ್ವಾಮಿ, ಸಚಿವರುಗಳಾದ ಎಚ್.ಸಿ. ಮಹದೇವಪ್ಪ, ಪಿರಿಯಾಪಟ್ಟಣ ವೆಂಕಟೇಶ್, ಕೃಷ್ಣಬೈರೇಗೌಡ, ದಿನೇಶ್ ಗುಂಡೂರಾವ್, ರಹೀಂ ಖಾನ್, ಶಾಸಕರುಗಳಾದ ರವಿ ಗಣಿಗ, ದಿನೇಶ್ ಗೂಳೀಗೌಡ ಸೇರಿ ಹಲವು ಪ್ರಮುಖರು ಉಪಸ್ಥಿತರಿದ್ದರು. ಶಾಸಕ ಉದಯ್ ಅಧ್ಯಕ್ಷತೆ ವಹಿಸಿದ್ದರು.

### ಮಂಡ್ಯದವರು ಉಪಕಾರ ಸ್ಮರಣೆಯ ಜನ

# ಬಿಜೆಪಿಗರು ಮುಷ್ಕರ ಮಾಡುವ ನೈತಿಕತೆ ಕಳೆದುಕೊಂಡು ಬಹುಕಾಲವಾಗಿದೆ

● ಗ್ಯಾರಂಟಿ ಹಣ ಹೊಂದಿಸಲು ಬೇರೆ ಇಲಾಖೆಯ ಹಣ ಬಳಕೆ ● ಕರ್ನಾಟಕ ದೇಶದಲ್ಲೇ ತಲಾ ಆದಾಯದಲ್ಲಿ ಮೊದಲ ಸ್ಥಾನ

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ನಂತರ, ಘೋಷಿಸಲಾಗಿರುವ ಪಂಚ ಗ್ಯಾರಂಟಿ ಯೋಜನೆಗಳಿಂದಾಗಿ, ಸರ್ಕಾರದ ಬೊಕ್ಕಸದಲ್ಲಿ ದುಡ್ಡಿಲ್ಲ. ಅದಕ್ಕಾಗಿ, ಬೇರೆ ಇಲಾಖೆಯ ಹಣವನ್ನು ಬಳಸಿಕೊಳ್ಳಲಾಗುತ್ತಿದೆ ಎಂದು ಆರೋಪಿಸಿ, ಬಿಜೆಪಿ ಪ್ರತಿಭಟನೆ ನಡೆಸಲು ಮುಂದಾಗಿದೆ. ಈ ಸಂಬಂಧ, ಬಿಜೆಪಿಯ ಕರ್ನಾಟಕ ಘಟಕ ಸಾಲುಸಾಲು ಟ್ವೀಟ್ ಮಾಡಿತ್ತು. ಕಾಯ್ದೆಯ ನಿಯಮಾವಳಿಗೆ ಅನುಗುಣವಾಗಿ ಕಾಂಗ್ರೆಸ್ ಸರ್ಕಾರವು ಪರಿಶಿಷ್ಟ ಸಮುದಾಯದ ಜನರ ಕನಿಷ್ಟ ಬದುಕಿನ ಭದ್ರತೆಗಾಗಿ ಪಂಚ ಗ್ಯಾರಂಟಿ ಯೋಜನೆಗಳ ಅಡಿಯಲ್ಲಿ ಅವರಿಗೆ ಭರವಸೆಯನ್ನು ಕಲ್ಪಿಸುವ ಕೆಲಸ ಮಾಡಿದೆ. ಸರ್ಕಾರದ ಈ ದೂರದೃಷ್ಟಿಯ ಫಲವಾಗಿಯೇ ಇಂದು ತಲಾದಾಯದಲ್ಲಿ ಕರ್ನಾಟಕವು ದೇಶದಲ್ಲೇ ಮೊದಲ ಸ್ಥಾನವನ್ನು ಪಡೆದುಕೊಂಡಿದೆ ಎಂದು ಸಚಿವ ಡಾ. ಮಹದೇವಪ್ಪ ಹೇಳಿದ್ದಾರೆ.

ಕೆಲವು ಸಾಮಾಜಿಕ ತಜ್ಞರ ಅಭಿಪ್ರಾಯದಂತೆ ಸದಾ



ಶೋಷಣೆಗಾಗಿ ಒಳಗಾಗಿ ತೊಂದರೆ ಅನುಭವಿಸುತ್ತಿದ್ದ ಪರಿಶಿಷ್ಟ ಸಮುದಾಯಗಳ ಪ್ರಾಥಮಿಕ ಬದುಕಿನಲ್ಲೂ ಕೂಡಾ ಸಾಕಷ್ಟು ಸುಧಾರಣೆಗಳು ಆಗಿದೆ. ಹೀಗಿರುವಾಗ ನಿಯಮಾವಳಿಗಳ ಅನುಸಾರ ಪರಿಶಿಷ್ಟ ಸಮುದಾಯಗಳ ಬದುಕು ಹಸನಾಗುವ ಉದ್ದೇಶದಿಂದ ಹಣ ಖರ್ಚು ಮಾಡಿದರೆ ಅದಕ್ಕೂ ಅಪಸ್ವರ ತೆಗೆಯುವ ಬಿಜೆಪಿಗರು ನೈತಿಕವಾಗಿ ಎಷ್ಟು ದಿವಾಳಿ ಆಗಿದ್ದಾರೆ ಮತ್ತು ಎಷ್ಟೊಂದು ಅಮಾನವೀಯತೆಯಿಂದ ನಡೆದುಕೊಳ್ಳುತ್ತಿದ್ದಾರೆ ಎಂಬುದಕ್ಕೆ ಅವರ ಈ ನಡವಳಿಕೆಯೇ ಸಾಕ್ಷಿ. ಈ ಹಿಂದಿನ ಅವಧಿಯಲ್ಲಿ ಕೇಂದ್ರ ಮತ್ತು ರಾಜ್ಯದಲ್ಲಿ ಅಧಿಕಾರದಲ್ಲಿದ್ದ ಬಿಜೆಪಿಗರು ಪರಿಶಿಷ್ಟ ಸಮುದಾಯಗಳ ವಿರೋಧಿಯಾದ ನಡವಳಿಕೆಯನ್ನೇ ತೋರಿದರು.

ಕಾಯ್ದೆಯ ಪರಿಮಿತಿಯಿಂದ ಆಚೆಗೆ ನಿಯಮಕ್ಕೆ ವಿರುದ್ಧವಾಗಿ ಯೋಜನೆಯನ್ನು ಬಳಸಿದ್ದ ಬಿಜೆಪಿಯವರು, ಒಳ ಮೀಸಲಾತಿಯ ಪ್ರಸ್ತಾಪವನ್ನು ಅಪ್ಪಿ ತಪ್ಪಿಯೂ ಸದನದಲ್ಲಿ ಮಾತನಾಡಲಿಲ್ಲ.

ಈಗ ದೊಡ್ಡದಾಗಿ ಭಾಷಣ ಮಾಡುತ್ತಿರುವ ಬಿಜೆಪಿಯ ಸಂಸದ ಎ.ನಾರಾಯಣಸ್ವಾಮಿ ಅವರು ಸಂಸತ್‌ನಲ್ಲೇ ಒಳ ಮೀಸಲಾತಿ ಜಾರಿಗೊಳಿಸಲು ಬರುವುದಿಲ್ಲ ಎಂದಿದ್ದರು. ಇನ್ನು ಮಾಜಿ ಸಚಿವ ಗೋವಿಂದ ಕಾರಜೋಳ ಅವರು ಸದಾಶಿವ ಆಯೋಗದ ವರದಿ ಒಂದು ಮುಗಿದ ಅಧ್ಯಾಯ ಎಂದಿದ್ದರು.

ಅಧಿಕಾರ ಇದ್ದಾಗ ಇಂತಹ ಬೇಜವಾಬ್ದಾರಿ ಮಾತುಗಳನ್ನು ಆಡಿ ಈಗ ವರದಿಯ ಆಧಾರದ ಮೇಲೆ ಒಳ ಮೀಸಲಾತಿ ಜಾರಿ ಮಾಡುವ ಬದ್ಧತೆಯನ್ನು ತೋರಿಸುತ್ತಿರುವ ನಮ್ಮ ಸರ್ಕಾರದ ವಿರುದ್ಧ ಬಿಜೆಪಿಗರು ಮಾಡುತ್ತಿರುವ ಟೀಕೆಯು ಬೇಜವಾಬ್ದಾರಿತನದ ಸಂಕೇತವಾಗಿದೆ.

### ನ್ಯಾಯದ ಸಾಕಾರಕ್ಕಾಗಿ ಕೆಲಸ ಮಾಡುತ್ತಿರುವ ನಮ್ಮ ಸರ್ಕಾರ

ಇನ್ನು ಕೇಂದ್ರ ಸರ್ಕಾರದ ಭಾಗವಾಗಿರುವ ಎ.ನಾರಾಯಣಸ್ವಾಮಿ ಮತ್ತು ಕಾರಜೋಳ ಅವರು ಆಡಿದ ಮಾತುಗಳು ಕೇವಲ ಅವರ ಮಾತಾಗಿರದೇ ಅದು ಬಿಜೆಪಿಯ ಮಾತಿನ ಕನ್ನಡಿಯಾಗಿತ್ತು. ಹೀಗಿರುವಾಗ ಮೂಲತಃ ಬಡವರ ವಿರೋಧಿಗಳು ಮತ್ತು ಶೋಷಿತ ಸಮುದಾಯಗಳ ವಿರೋಧಿಗಳಾದ ಬಿಜೆಪಿಗರು ತಮ್ಮ ಜನ ವಿರೋಧಿ ಮನಸ್ಥಿಗಾಗಿ ಜನ ಸಾಮಾನ್ಯರಲ್ಲಿ ಎಷ್ಟು ಬಾರಿ ಕ್ಷಮೆ ಕೇಳಿದರೂ ಸಾಲದು ಎಂಬುದು ನನ್ನ ಅಭಿಪ್ರಾಯವಾಗಿದೆ. ನ್ಯಾಯದ ಸಾಕಾರಕ್ಕಾಗಿ ಕೆಲಸ ಮಾಡುತ್ತಿರುವ ನಮ್ಮ ಸರ್ಕಾರದ ಬದ್ಧತೆಯು ಹೆಚ್ಚು ಸ್ಪಷ್ಟತೆಯಿಂದ ಕೂಡಿದ್ದು ಬಡವರು ಮತ್ತು ಶೋಷಿತರ ಪರವಾದ ನಿರ್ಧಾರಗಳಲ್ಲಿ ಯಾವುದೇ ರಾಜಿಯಿಲ್ಲದೇ ಕೆಲಸ ಮಾಡುತ್ತದೆ ಎಂದು ಈ ಸಂದರ್ಭದಲ್ಲಿ ಗರ್ವದಿಂದ ಹೇಳಲು ಬಯಸುತ್ತೇನೆ ಎಂದು ಸಚಿವ ಡಾ. ಮಹದೇವಪ್ಪ ಹೇಳಿದ್ದಾರೆ.

### ಬಿಜೆಪಿಗರು ಟೀಕೆಯು ಬೇಜವಾಬ್ದಾರಿ ಸಂಕೇತ

## ದರ್ಶನ್ ಫ್ಯಾನ್ಸ್ ಜೊತೆ ರಮ್ಯಾ ವಾರ್: ಗೃಹ ಸಚಿವ ಪರಮೇಶ್ವರ್ ರಿಯಾಕ್ಷನ್!

• ಉದಯವಾಹಿನಿ, ಬೆಂಗಳೂರು

ರೇಣುಕಾಸ್ವಾಮಿ ಕೊಲೆ ಕೇಸ್‌ನಲ್ಲಿ ಮೃತನ ಕುಟುಂಬಕ್ಕೆ ನ್ಯಾಯಸಿಗಬೇಕು ಎಂದ ನಟಿ ರಮ್ಯಾ ವಿರುದ್ಧ ನಟ ದರ್ಶನ್ ಫ್ಯಾನ್ಸ್ ಸಿಡಿದೆದಿದ್ದಾರೆ. ಸೋಶಿಯಲ್ ಮೀಡಿಯಾದಲ್ಲಿ ದರ್ಶನ್ ಫ್ಯಾನ್ಸ್ ಆ್ಯಂಡ್ ನಟಿ ರಮ್ಯಾ ವಾರ್ ಜೋರಾಗಿದೆ. ಮೃತನ ಫ್ಯಾಮಿಲಿ ಪರ ನಿಂತ ನನಗೆ ದರ್ಶನ್ ಫ್ಯಾನ್ಸ್ ಅಶ್ಲೀಲ ಮೆಸೇಜ್‌ಗಳನ್ನ ಕಳಿಸುತ್ತಿದ್ದಾರೆ ಎಂದು ನಟಿ ರಮ್ಯಾ ಆರೋಪ ಮಾಡಿದ್ದಾರೆ. ಅಲ್ಲದೇ ದರ್ಶನ್ ಅಭಿಮಾನಿಗಳು ಈ ಮಟ್ಟಕ್ಕೆ ಇಳಿಯಬಾರದು ಎಂದು ರಮ್ಯಾ ಕಿಡಿಕಾರಿದ್ದು, ದೂರು ಕೊಡಲು ರೆಡಿಯಾಗಿದ್ದಾರೆ. ಇತ್ತ ದರ್ಶನ್ ಫ್ಯಾನ್ಸ್ ಹಾಗೂ ರಮ್ಯಾ ನಡುವಿನ ವಾರ್ ಬಗ್ಗೆ ಗೃಹ ಸಚಿವ ಪರಮೇಶ್ವರ್ ಕೂಡ ಪ್ರತಿಕ್ರಿಯಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಗೃಹ ಸಚಿವ ಜಿ ಪರಮೇಶ್ವರ್, ನಟ ದರ್ಶನ್ ಫ್ಯಾನ್ಸ್ ಕಮೆಂಟ್ ಬಗ್ಗೆ ನಟಿ ರಮ್ಯಾ ಅವರು ಮೊದಲು ದೂರು ನೀಡಲಿ ಬಳಿಕ ಪೊಲೀಸರು ಏನು ಕ್ರಮ ತೆಗೆದುಕೊಳ್ಳಬೇಕು ತೆಗೆದುಕೊಳ್ಳುತ್ತಾರೆ. ಸೈಬರ್ ಕ್ರೈಂ ಅವರು ಯಾವುದು ಸೆನ್ಸಿಟೀವ್ ಇರುತ್ತೆ ಅಂತವರನ್ನ ಬ್ಲಾಕ್ ಮಾಡ್ತಾರೆ. ಇಲ್ಲವೇ ದೂರು ಕೊಟ್ಟರೆ ಕ್ರಮ ಕೈಗೊಳ್ಳುತ್ತಾರೆ ಎಂದು ಪರಮೇಶ್ವರ್ ಹೇಳಿದ್ದಾರೆ.

## ಬೆಸ್ಕಾಂ ಭೂಗತ ಕೇಬಲ್ ಅಳವಡಿಕೆಯಿಂದ ಗಣನೀಯವಾಗಿ ತಗ್ಗಿದ ವಿದ್ಯುತ್ ನಷ್ಟ

• ಉದಯವಾಹಿನಿ, ಬೆಂಗಳೂರು

ವಿದ್ಯುತ್ ಸರಬರಾಜು ಕಂಪನಿ (ಬೆಸ್ಕಾಂ) ಎತ್ತರಿಸಿದ ಕೇಬಲ್‌ಗಳನ್ನು ಭೂಗತ ಕೇಬಲ್‌ಗಳಾಗಿ ಯುಜಿ ಪರಿವರ್ತಿಸಲು ಆರಂಭಿಸಿದ ಬಳಿಕ ವಿದ್ಯುತ್ ವಿತರಣೆಯಲ್ಲಿನ ನಷ್ಟದ ಪ್ರಮಾಣ ತಗ್ಗಿದೆ. ಕಳೆದ ಐದು ವರ್ಷಗಳಲ್ಲಿ ವಿದ್ಯುತ್ ವಿತರಣೆಯಲ್ಲಿನ ನಷ್ಟದ ಪ್ರಮಾಣ ಶೇಕಡ 30ರಷ್ಟು ಕಡಿಮೆಯಾಗಿದೆ. 2024–25ನೇ ಸಾಲಿನಲ್ಲಿ ವಿದ್ಯುತ್ ವಿತರಣೆಯಲ್ಲಿನ ನಷ್ಟದ ಪ್ರಮಾಣ ಶೇ 8.44ಕ್ಕೆ ಇಳಿದಿದೆ. ಇದು ಬೆಸ್ಕಾಂನ ದಕ್ಷತೆಯನ್ನು ಸುಧಾರಿಸುವ ಜೊತೆಗೆ, ವಿದ್ಯುತ್ ಖರೀದಿ ವೆಚ್ಚವನ್ನೂ ಕಡಿಮೆ ಮಾಡಲು ನೆರವಾಗುತ್ತಿದೆ. ಬೆಂಗಳೂರು ನಗರದಲ್ಲಿ 2019–20ರಲ್ಲಿ ಓವರ್ ಹೆಡ್ ಕೇಬಲ್‌ಗಳನ್ನು ಯುಜಿ ಕೇಬಲ್‌ಗಳನ್ನಾಗಿ ಪರಿವರ್ತಿಸುವ ಯೋಜನೆ ಆರಂಭವಾಯಿತು. ನಗರದಲ್ಲಿ ದೊಡ್ಡ ಪ್ರಮಾಣದಲ್ಲಿ ಯುಜಿ ಕೇಬಲ್‌ಗಳನ್ನಾಗಿ ಪರಿವರ್ತಿಸುವ ಕಾರ್ಯ ಪೂರ್ಣಗೊಂಡಿದೆ. ಪರಿಣಾಮವಾಗಿ ವಿದ್ಯುತ್ ನಷ್ಟ ಗಣನೀಯವಾಗಿ ಕಡಿಮೆಯಾಗುತ್ತಿದೆ ಎಂದು ಬೆಸ್ಕಾಂ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಈವರೆಗೆ 7,030.33 ಕಿ.ಮೀ. ಉದ್ದದ 11 ಕೆ.ವಿ. ಸಾಮರ್ಥ್ಯದ ತಂತಿಗಳನ್ನು ಭೂಗತ ಕೇಬಲ್‌ಗಳಾಗಿ ಪರಿವರ್ತಿಸಲಾಗಿದೆ. 5,818.55 ಕಿ.ಮೀ. ಎಲ್ (ಕಡಿಮೆ ಒತ್ತಡ) ತಂತಿಗಳನ್ನು ಭೂಗತ ಕೇಬಲ್‌ಗಳಾಗಿ ಪರಿವರ್ತಿಸಲಾಗಿದೆ. ಇದಕ್ಕೆ ತಗುಲಿರುವ ಒಟ್ಟು ವೆಚ್ಚ 5,031.65 ಕೋಟಿ. ಭೂಗತ ಕೇಬಲ್‌ಗಳಾಗಿ ಪರಿವರ್ತಿಸಲು ಆರಂಭಿಸಿದ ನಂತರ, ವಿದ್ಯುತ್ ಸೋರಿಕೆ ಪ್ರಮಾಣ ಕಡಿಮೆಯಾಗಿದೆ ಎಂದು ಬೆಸ್ಕಾಂನ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

## ಹೊರ ವರ್ತುಲ ರಸ್ತೆಯಲ್ಲಿ ಸಂಚಾರ ದಟ್ಟಣೆ: ಹಲವು ಮಾರ್ಪಾಡು

• ಉದಯವಾಹಿನಿ, ಬೆಂಗಳೂರು

ಎಚ್‌ಎಎಲ್ ಏರ್‌ಪೋರ್ಟ್ ಸಂಚಾರ ಪೊಲೀಸ್ ಠಾಣಾ ವ್ಯಾಪ್ತಿಯ ಕಾರ್ತಿಕ್ ನಗರ ಜಂಕ್ಷನ್‌ನಿಂದ ಕಲಾಮಂದಿರದವರೆಗೆ ಹೊರ ವರ್ತುಲ ರಸ್ತೆಯಲ್ಲಿನ ಸಂಚಾರ ದಟ್ಟಣೆ ನಿಯಂತ್ರಿಸಲು ಕೆಲ ಮಾರ್ಪಾಡು ಮಾಡಲಾಗಿದೆ. ಜೀವಿಕಾ ಆಸ್ಪತ್ರೆ ಸಮೀಪ ಮಾರತ್ತಹಳ್ಳಿ ಕಡೆಯ ಸರ್ವೀಸ್ ರಸ್ತೆಯಲ್ಲಿ ಕಲಾಮಂದಿರದ ಕಡೆಯಿಂದ ಹೊರ ವರ್ತುಲ ರಸ್ತೆಗೆ ಪ್ರವೇಶಿಸುವ ಹಾಗೂ ಯಮಹಾ ಶೋ ರೂಂ ಬಳಿ ಹೊರ ವರ್ತುಲ ರಸ್ತೆಯಿಂದ ಸರ್ವೀಸ್ ರಸ್ತೆ ಪ್ರವೇಶಿಸುವ ಮಾರ್ಗ ನಿರ್ಬಂಧಿಸಲಾಗಿದೆ.

**ಪರ್ಯಾಯ ಮಾರ್ಗ:** ಚಿನ್ನಪ್ಪನಹಳ್ಳಿ ರೈಲ್ವೆ ಗೇಟ್ ಕಡೆಯಿಂದ ಕಾಡುಬೀಸನಹಳ್ಳಿ ದೇವರಬೀಸನಹಳ್ಳಿ ಕಡೆಗೆ ಸಂಚರಿಸುವ ವಾಹನಗಳು ಜೀವಿಕಾ ಆಸ್ಪತ್ರೆಯ ಸರ್ವೀಸ್ ರಸ್ತೆ ಮೂಲಕ ಸಂಚರಿಸಿ, ಕಡ್ಡಾಯವಾಗಿ ಯಮಹಾ ಶೋ ರೂಂ ಬಳಿ ಹೊರ ವರ್ತುಲ ರಸ್ತೆ ಪ್ರವೇಶಿಸಬೇಕು. ಮಹದೇವಪುರ, ಕಾರ್ತಿಕ್ ನಗರ ಹೊರ ವರ್ತುಲ ರಸ್ತೆ ಕಡೆಯಿಂದ ವೈಟ್‌ಫೀಲ್ಡ್, ವರ್ತೂರು ಕಡೆಗೆ ಸಂಚರಿಸುವ ವಾಹನಗಳು ಕಲಾಮಂದಿರ ಜಂಕ್ಷನ್‌ನಲ್ಲಿ ಸರ್ವೀಸ್ ರಸ್ತೆಯನ್ನು ಪ್ರವೇಶಿಸಿ, ಕುಂದಲಹಳ್ಳಿ, ವರ್ತೂರು ಕಡೆಗೆ ಸಂಚರಿಸಬಹುದು ಎಂದು ಪೂರ್ವ ಸಂಚಾರ ವಿಭಾಗದ ಡಿಸಿಪಿ ಸಾಹಿಲ್ ಬಾಗ್ಲಾ ತಿಳಿಸಿದ್ದಾರೆ.

## ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಪುತ್ರ ಮಿಲಿಂದ್ ಆರೋಗ್ಯ ಸ್ಥಿತಿ ಗಂಭೀರ

• ಉದಯವಾಹಿನಿ, ಬೆಂಗಳೂರು

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಪುತ್ರ, ಮಿಲಿಂದ್ ಖರ್ಗೆ ಆರೋಗ್ಯ ಸ್ಥಿತಿ ಗಂಭೀರವಾಗಿದೆ. ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಮುಂದುವರೆದಿದೆ. ಕ್ಯಾನ್ಸರ್‌ನಿಂದ ಬಳಲುತ್ತಿರುವ ಅವರನ್ನು ಬೆಂಗಳೂರಿನ



ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ. ಅಲ್ಲಿ ಅವರಿಗೆ ಚಿಕಿತ್ಸೆ ನೀಡಲಾಗುತ್ತಿದೆ. ಅನಾರೋಗ್ಯದಿಂದ ಬಳಲುತ್ತಿದ್ದ ಮಿಲಿಂದ್ ಕಳೆದ ಕೆಲ ದಿನಗಳಿಂದ ಬೆಂಗಳೂರಿನ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದರು. ಸಂಜೆ ಬಳಿಕ ಆರೋಗ್ಯ ಸ್ಥಿತಿ ಮತ್ತಷ್ಟು ಗಂಭೀರವಾಗಿದೆ ಎಂದು ವೈದ್ಯಕೀಯ ಮೂಲಗಳು ತಿಳಿಸಿವೆ. ಮಲ್ಲಿಕಾರ್ಜುನ ಖರ್ಗೆ ಅವರಿಗೆ ಇಬ್ಬರು ಹೆಣ್ಣು ಮಕ್ಕಳು ಮತ್ತು ಮೂವರು ಗಂಡು ಮಕ್ಕಳಿದ್ದಾರೆ. ಮಿಲಿಂದ್ ಯುನಿವರ್ಸಿಟಿ ಆಫ್ ಪೆನ್ಸಿಲ್ವೇನಿಯಾದ ವಾರ್ಟನ್ ಸ್ಕೂಲ್‌ನಲ್ಲಿ ಎಂಬಿಎ ಪದವಿ ಪಡೆದಿದ್ದಾರೆ. ಅವರು ಖಾಸಗಿ ಕಂಪನಿಯಲ್ಲಿ ಕೆಲಸ ಮಾಡುತ್ತಿದ್ದರು. ಮಿಲಿಂದ್ ಸಾರ್ವಜನಿಕವಾಗಿ ಹೆಚ್ಚಾಗಿ ಕಾಣಿಸಿಕೊಂಡಿಲ್ಲ. ಹಿರಿಯ ಸಹೋದರ ಪ್ರಿಯಾಂಕ್ ಖರ್ಗೆ ಹೊರತುಪಡಿಸಿದರೆ ಕಿರಿಯ ಸಹೋದರರು ರಾಜಕೀಯದಲ್ಲಾಗಲಿ, ಸಾರ್ವಜನಿಕವಾಗಿ ಎಲ್ಲೂ ಕಾಣಿಸಿಕೊಂಡವರಲ್ಲ.

# 270 ಕೋಟಿ ರೂ. ವೆಚ್ಚದ ಯೋಜನೆಗೆ ರೈಲ್ವೆ ಮಂಡಳಿ ಅನುಮತಿ

### ರೈಲ್ವೆ ಇಲಾಖೆಯು ದೇವನಹಳ್ಳಿ ಬಳಿಯ ಮೆಗಾ ಕೋಚಿಂಗ್ ಟರ್ಮಿನಲ್ ನಿರ್ಮಾಣ ಪ್ರಕ್ರಿಯೆ ಆರಂಭ

• ಉದಯವಾಹಿನಿ, ಬೆಂಗಳೂರು

ರಾಜಧಾನಿಯಲ್ಲಿ ಈಗಾಗಲೇ 2 ರೈಲ್ವೆ ಟರ್ಮಿನಲ್ ನಿರ್ಮಾಣಕ್ಕೆ ಸಿದ್ಧತೆ ನಡೆಸಿರುವ ರೈಲ್ವೆ ಇಲಾಖೆ, ಥಣಿಸಂದ್ರದಲ್ಲಿ ವಂದೇ ಭಾರತ್ ಸ್ಲೀಪರ್ ಕೋಚ್ ಡಿಪೊ ನಿರ್ಮಿಸಲು ಮುಂದಾಗಿದೆ.

ನೈಋತ್ಯ ರೈಲ್ವೆಯ ಬೆಂಗಳೂರು ವಿಭಾಗಕ್ಕೆ ನಗರದ ಥಣಿಸಂದ್ರದ ರೈಲು ನಿಲ್ದಾಣದ ಬಳಿ 270 ಕೋಟಿ ರೂ. ವೆಚ್ಚದಲ್ಲಿ ಹೊಸ ಡಿಪೊ–ಕಮ್–ವರ್ಕ್‌ಶಾಪ್ ನಿರ್ಮಾಣಕ್ಕೆ ಮಂಡಳಿ ಅನುಮೋದನೆ ನೀಡಿದ್ದು, 2026ರ ಆರಂಭದಲ್ಲಿ ಪೂರ್ಣಗೊಳ್ಳುವ ನಿರೀಕ್ಷೆ ಇದೆ.

ಈ ಡಿಪೊ ನಿರ್ಮಾಣದಿಂದ ರಾಜ್ಯದ ವಂದೇ ಭಾರತ್ ರೈಲು ಯೋಜನೆಗೆ ಇನ್ನಷ್ಟು ಬಲ ಬಂದಂತಾಗಲಿದೆ. ವಂದೇ ಭಾರತ್ ಸ್ಲೀಪರ್ ಕೋಚ್‌ಗಳನ್ನು ಇಂಟಿಗ್ರಲ್ ಕೋಚ್ ಫ್ಯಾಕ್ಟರಿ ಐಸಿಎಫ್, ಭಾರತ್ ಅರ್ಥ್ ಮೂವರ್ಸ್ ಲಿಮಿಟೆಡ್ ಬಿಇಎಂಎಲ್ ಜಂಟಿಯಾಗಿ ಬೆಂಗಳೂರಿನಲ್ಲಿ ನಿರ್ಮಾಣ ಮಾಡುತ್ತಿವೆ. 16 ಬೋಗಿಗಳ 10 ರೈಲುಗಳು ಇಲ್ಲಿ ನಿರ್ಮಾಣವಾಗಲಿವೆ. ಆನಂತರ ಈ ಡಿಪೊದಲ್ಲಿ ಅವುಗಳ ಪರಿಶೀಲನೆ ನಡೆಸಲಾಗುತ್ತದೆಯಲ್ಲದೆ, ದುರಸ್ತಿ ಕಾರ್ಯವೂ ನಡೆಯಲಿದೆ.



ಸದ್ಯ ಬೆಂಗಳೂರಿನಿಂದ ಆರು ವಂದೇ ಭಾರತ್ ಚೇರ್ ಕಾರ್ ರೈಲುಗಳು ಸಂಚರಿಸುತ್ತಿವೆ. ಮುಂದಿನ ದಿನಗಳಲ್ಲಿ ರಾತ್ರಿ ವೇಳೆ ಸಂಚರಿಸುವ ವಂದೇ ಭಾರತ್ ರೈಲುಗಳನ್ನು ಸ್ಲೀಪರ್ ಕೋಚ್ ಆಗಿ ಪರಿವರ್ತನೆ ಮಾಡಲಾಗುತ್ತದೆ. ಡಿಪೊ ನಿರ್ಮಾಣ ಪೂರ್ಣಗೊಂಡ ನಂತರ ಈ ರೈಲುಗಳ ಸಂಖ್ಯೆ ಇನ್ನಷ್ಟು ಹೆಚ್ಚಾಗುವ ನಿರೀಕ್ಷೆ ಇದೆ.

**ರೈಲ್ವೆ ಇಲಾಖೆಯು ದೇವನಹಳ್ಳಿ ಬಳಿಯ ಮೆಗಾ ಕೋಚಿಂಗ್ ಟರ್ಮಿನಲ್ ನಿರ್ಮಾಣ ಪ್ರಕ್ರಿಯೆ ಆರಂಭಿಸಿದೆ. ಟರ್ಮಿನಲ್ ನಿರ್ಮಾಣಕ್ಕಾಗಿ 400 ಎಕರೆ ಪಡೆಯಲಾಗುತ್ತಿದೆ. ಈ ಹಿಂದೆ ವೈಟ್‌ಫೀಲ್ಡ್‌ನಲ್ಲಿ ನಿರ್ಮಿಸಲು ಉದ್ದೇಶಿಸಲಾಗಿತ್ತು. ಆದರೆ, ಅಲ್ಲಿ ಜಾಗ ಲಭ್ಯವಿಲ್ಲ. ಹೀಗಾಗಿ, ದೇವನಹಳ್ಳಿ ಆಯ್ಕೆ ಮಾಡಲಾಗಿದೆ. ಇದೇ ವೇಳೆ ನೆಲಮಂಗಲದಲ್ಲಿ ಕೂಡ ಇನ್ನೊಂದು ರೈಲ್ವೆ ಟರ್ಮಿನಲ್ ನಿರ್ಮಿಸುವುದಕ್ಕೆ ಅಧಿಕಾರಿಗಳು ಸಾಧ್ಯತಾ ಅಧ್ಯಯನ ನಡೆಸುತ್ತಿದ್ದಾರೆ.**

ದೇವನಹಳ್ಳಿ ಟರ್ಮಿನಲ್ ಅನ್ನು ಬುಲ್ಲಹಳ್ಳಿ ಮತ್ತು ಹೊಸೂರು ಗ್ರಾಮಗಳ ನಡುವೆ ವೆಂಕಟಗಿರಿ ಕೋಟೆ ಹಾಲ್ಟ್ ನಿಲ್ದಾಣದ ಬಳಿ ನಿರ್ಮಿಸಲು ಉದ್ದೇಶಿಸಲಾಗಿದೆ. ಇದು 16 ಪ್ಲಾಟ್‌ಫಾರ್ಮ್‌ಗಳು, 20 ಸ್ಟೇಬ್ಲಿಂಗ್ ಮತ್ತು 10 ಪಿಟ್ ಲೈನ್‌ಗಳನ್ನು ಹೊಂದಿರುತ್ತದೆ.

**ಥಣಿಸಂದ್ರ ರೈಲ್ವೆ ನಿಲ್ದಾಣ ಪುನರಾರಂಭ ಆಗುವುದೇ?:** ಚನ್ನಸಂದ್ರ–ಯಲಹಂಕ ಮಧ್ಯದಲ್ಲಿರುವ ಥಣಿಸಂದ್ರ ರೈಲ್ವೆ ನಿಲ್ದಾಣ ಮುಚ್ಚಿ ಒಂದು ದಶಕಕ್ಕೂ ಹೆಚ್ಚು ಕಾಲವಾಗಿದೆ. ಇದನ್ನು ಪುನರಾರಂಭ ಆಗಬೇಕೆಂದು 2020ರಿಂದಲೂ ಸ್ಥಳೀಯರು ಹೋರಾಟ ನಡೆಸುತ್ತಿದ್ದಾರೆ. ಮಾನ್ಯತಾ ಟೆಕ್ ಪಾರ್ಕ್‌ನಿಂದ ಸುಮಾರು 2 ಕಿ.ಮೀ. ದೂರ ಮತ್ತು ಹೊರ ವರ್ತುಲ ರಸ್ತೆಯ ಟೆಕ್ ಕಾರಿಡಾರ್‌ಗಳ ಬಳಿ ನಿಲ್ದಾಣವಿದ್ದರೂ ಇಲ್ಲಿ ರೈಲು ನಿಲ್ದಾಣ ಪುನರಾರಂಭಿಸಿಲ್ಲ. ಸದ್ಯ ಸಿಗ್ನಲ್ ನಿಯಂತ್ರಣ ಕೊಠಡಿಯ ನಿರ್ಮಾಣ ಕಾರ್ಯ ನಡೆಯುತ್ತಿದೆ.

#### ಥಣಿಸಂದ್ರದ ರೈಲ್ವೆ ಹಬ್


**ಸದ್ಯ ಥಣಿಸಂದ್ರದಲ್ಲಿ ವಂದೇ ಭಾರತ್ ಡಿಪೊ ನಿರ್ಮಾಣದ ಜತೆಗೆ, ಬೆಂಗಳೂರು ಉಪನಗರ ರೈಲು ಯೋಜನೆ ಕಾರಿಡಾರ್–4 (ಹೀಲಲಿಗೆ–ರಾಜಾನುಕುಂಟೆ)ನ 38 ಕಿ.ಮೀ ಮಾರ್ಗ ಕೂಡ ಈ ಮೂಲಕ ಹಾದುಹೋಗಲಿದೆ. ಈ ಮಾರ್ಗದಲ್ಲಿ ಒಟ್ಟು 19 ನಿಲ್ದಾಣಗಳಿದ್ದು, ಥಣಿಸಂದ್ರದಲ್ಲೂ ನಿಲ್ದಾಣ ನಿರ್ಮಾಣವಾಗಲಿದೆ. ಈ ಮಾರ್ಗದ ಕಾಮಗಾರಿ ಕೂಡ ಈಗಾಗಲೇ ಆರಂಭವಾಗಿದೆ.**

## ನಗರದಲ್ಲಿ ಡೆಂಗ್ಯೂ ಪ್ರಕರಣ ಶೇ.75ರಷ್ಟು ಇಳಿಕೆ

• ಉದಯವಾಹಿನಿ, ಬೆಂಗಳೂರು

ಡೆಂಗ್ಯೂ ನಿಯಂತ್ರಣಕ್ಕೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ಬಿಬಿಎಂಪಿ) ನಡೆಸಿದ ನಿರಂತರ ಪ್ರಯತ್ನಗಳು ಫಲ ನೀಡಿವೆ, ಜನವರಿ 1 ರಿಂದ ಜುಲೈ 23 ರವರೆಗೆ ನಗರದಲ್ಲಿ ಕೇವಲ 1,676 ಪಾಸಿಟಿವ್ ಪ್ರಕರಣಗಳು ವರದಿಯಾಗಿವೆ. ಕಳೆದ ವರ್ಷ ಇದೇ ಅವಧಿಯಲ್ಲಿ ಬಿಬಿಎಂಪಿ ವ್ಯಾಪ್ತಿಯಲ್ಲಿ 7,280 ಡೆಂಗ್ಯೂ ಪಾಸಿಟಿವ್ ಪ್ರಕರಣಗಳು ವರದಿಯಾಗಿದ್ದವು.

ಡೆಂಗ್ಯೂ ಪ್ರಕರಣಗಳ ಸಂಖ್ಯೆಯನ್ನು ನಿಗ್ರಹಿಸಲು ಆರೋಗ್ಯ ಅಧಿಕಾರಿಗಳು ಹೆಚ್ಚಿನ ಜಾಗರೂಕತೆ ವಹಿಸಿದ್ದು, ಇದರಿಂದ ಪಾಲಿಕೆ ವ್ಯಾಪ್ತಿಯಲ್ಲಿ ಪಾಸಿಟಿವ್ ಪ್ರಕರಣಗಳಲ್ಲಿ ಶೇಕಡಾ 75ರಷ್ಟು ಇಳಿಕೆ ಕಂಡುಬಂದಿದೆ. ಇದಲ್ಲದೆ, ಡೆಂಗ್ಯೂವಿನಿಂದಾಗಿ ಯಾವುದೇ ಸಾವುಗಳೂ ವರದಿಯಾಗಿಲ್ಲ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಂಕಿಅಂಶಗಳಿಂದ ತಿಳಿದುಬಂದಿದೆ. ಅಂಕಿ ಅಂಶಗಳ ಪ್ರಕಾರ, 2022 ರಲ್ಲಿ 2,313 ಡೆಂಗ್ಯೂ ಪ್ರಕರಣಗಳು ಪತ್ತೆಯಾಗಿದ್ದಾರೆ. 2023 ರಲ್ಲಿ ನಾಲ್ಕು ಸಾವುಗಳೊಂದಿಗೆ 8,609 ಡೆಂಗ್ಯೂ ಪ್ರಕರಣಗಳು ಪತ್ತೆಯಾಗಿದ್ದವು. 2024 ರಲ್ಲಿ (ಡಿಸೆಂಬರ್ ಮೊದಲ ವಾರದವರೆಗೆ), ಸಕಾರಾತ್ಮಕ



ಉದಯವಾಹಿನಿ ಚಿತ್ರ

ಪ್ರಕರಣಗಳು ಬಹುತೇಕ ದ್ವಿಗುಣಗೊಂಡಿದ್ದವು. ಇದಲ್ಲದೆ, ಮೂರು ಸಾವುಗಳೊಂದಿಗೆ 14,950 ಪ್ರಕರಣಗಳು ಪತ್ತೆಯಾಗಿದ್ದವು.

ಬಳಿಕ ಪ್ರಕರಣಗಳನ್ನು ಕಡಿಮೆ ಮಾಡಲು ಬಿಬಿಎಂಪಿ ಸಾಕಷ್ಟು ಕ್ರಮಗಳನ್ನು ಕೈಗೊಂಡಿತ್ತು. ಈ ಕುರಿತು ವಿವರಗಳನ್ನು ಹಂಚಿಕೊಂಡ ಬಿಬಿಎಂಪಿ ಮುಖ್ಯ ಆಯುಕ್ತ ಮಹೇಶ್ವರ ರಾವ್ ಅವರು, ಈ ವರ್ಷ ಡೆಂಗ್ಯೂ ಹೆಚ್ಚಳವನ್ನು ನಿಯಂತ್ರಿಸಲು ಪಾಲಿಕೆಯು ಹಲವಾರು ಕ್ರಮಗಳನ್ನು ತೆಗೆದುಕೊಂಡಿದೆ. ನಮ್ಮಲ್ಲಿ ಡೆಂಗ್ಯೂ ಪ್ರಕರಣಗಳಿದ್ದರೂ ಪರಿಸ್ಥಿತಿ ಕಳೆದ ವರ್ಷಕ್ಕಿಂತ ಉತ್ತಮವಾಗಿದೆ. ಡೆಂಗ್ಯೂ ವಿರುದ್ಧದ ನಮ್ಮ ಕಾರ್ಯಾಚರಣೆ ಮುಂದುವರೆಯಲಿದೆ. ನಮ್ಮ ಆರೋಗ್ಯ ಅಧಿಕಾರಿಗಳನ್ನು ಜಾಗೃತಿ ವಹಿಸಿದ್ದು, ಅಗತ್ಯವಿರುವ

**ಜಾಗೃತಿ ಅಭಿಯಾನಗಳ ಜೊತೆಗೆ, ಬಿಬಿಎಂಪಿ ನೀರು ಸಂಗ್ರಹವಾಗುವ ಎಲ್ಲಾ ಪ್ರದೇಶಗಳನ್ನು ಗುರುತಿಸಲು ಕ್ರಮಗಳನ್ನು ಕೈಗೊಂಡಿದೆ. ಡೆಂಗ್ಯೂ ಸಂತಾನೋತ್ಪತ್ತಿಗೆ ಉತ್ತಮ ಸ್ಥಳವಾಗಿರುವ ತಗ್ಗು ಪ್ರದೇಶಗಳ ಮೇಲೆ ವಿಶೇಷ ನಿಗಾವಹಿಸಲಾಗಿದೆ. ಅಂತಹ ಪ್ರದೇಶಗಳಲ್ಲಿ ಸಿಂಪಡಣೆಯನ್ನು ತೀವ್ರಗೊಳಿಸಲಾಗಿದೆ. ಸೊಳ್ಳೆಗಳ ಸಂಖ್ಯೆಯನ್ನು ನಿಯಂತ್ರಿಸುವ ಸಿಂಪಡಣೆ ಮಾತ್ರವಲ್ಲದೆ, ನೀರು ನಿಲ್ಲದಂತೆ ನೋಡಿಕೊಳ್ಳುವ ಮೂಲಕ ಡೆಂಗ್ಯೂ ಲಾರ್ವಾ ಮೂಲದ ಕಡಿತದ ಬಗ್ಗೆ ವಿದ್ಯಾರ್ಥಿಗಳು ಮತ್ತು ಜನರಿಗೆ ಶಿಕ್ಷಣ ನೀಡುತ್ತಿದ್ದೇವೆಂದು ತಿಳಿಸಿದ್ದಾರೆ.**

ಎಲ್ಲಾ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳುತ್ತಿದ್ದಾರೆ. ಸೋಂಕು ಹರಡುವಿಕೆಯನ್ನು ತಡೆಯಲು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಲು ಅವರಿಗೆ ಅಧಿಕಾರ ನೀಡಲಾಗಿದೆ ಎಂದು ಹೇಳಿದ್ದಾರೆ.

## ರೌಡಿಶೀಟರ್ ಬಿಕ್ಲು ಶಿವ ಕೊಲೆ ಪ್ರಕರಣದ ತನಿಖೆ: ಘಟನಾ ಸ್ಥಳ ಪರಿಶೀಲಿಸಿದ ಸಿಐಡಿ

• ಉದಯವಾಹಿನಿ, ಬೆಂಗಳೂರು

ರೌಡಿಶೀಟರ್ ಶಿವಪ್ರಕಾಶ್ ಅಲಿಯಾಸ್ ಬಿಕ್ಲು ಶಿವ ಕೊಲೆ ಪ್ರಕರಣದ ತನಿಖೆ ನಡೆಸುತ್ತಿರುವ ಸಿಐಡಿ ಅಧಿಕಾರಿಗಳು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪ್ರಕರಣವನ್ನು ಸಿಐಡಿಗೆ ವರ್ಗಾವಣೆ ಮಾಡಿದ ಬೆನ್ನಲ್ಲೇ ಭಾರತಿನಗರ ಠಾಣೆ ಪೊಲೀಸರು ಸಂಬಂಧಿಸಿದ ದಾಖಲೆಗಳು ಕಡತಗಳನ್ನು ತನಿಖಾಧಿಕಾರಿಗೆ ವರ್ಗಾಯಿಸಿದ್ದರು. ಸಿಐಡಿ ಎಡಿಜಿಪಿ ಬಿ.ಕೆ. ಸಿಂಗ್ ನೇತೃತ್ವದಲ್ಲಿ ಎಸ್.ಪಿ. ವೆಂಕಟೇಶ್, ಡಿವೈಎಸ್ಪಿ ಉಮೇಶ್ ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಹಿಂದಿನ ತನಿಖಾಧಿಕಾರಿ ಎಸಿಪಿ ಪ್ರಕಾಶ್ ರಾಥೋಡ್ ಸ್ಥಳದಲ್ಲಿ ಹಾಜರಿದ್ದು, ಘಟನೆ ಕುರಿತು ಅಧಿಕಾರಿಗಳಿಗೆ ಮಾಹಿತಿ ನೀಡಿದರು. ಭಾರತಿನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಜುಲೈ 15ರಂದು ರೌಡಿ ಶೀಟರ್ ಶಿವಪ್ರಕಾಶ್‌ನನ್ನು ದುಷ್ಕರ್ಮಿಗಳು ಮಾರಕಾಸ್ತ್ರಗಳಿಂದ ಕೊಚ್ಚಿ ಕೊಲೆಗೈದಿದ್ದರು. ಪೊಲೀಸರು 16 ಮಂದಿ ಆರೋಪಿಗಳನ್ನು ಬಂಧಿಸಿದ್ದರು. ಬಿಜೆಪಿ ಶಾಸಕ ಬೈರತಿ ಬಸವರಾಜ 5ನೇ ಆರೋಪಿಯಾಗಿದ್ದು, ಎರಡು ಬಾರಿ ವಿಚಾರಣೆ ನಡೆಸಿ, ಹೇಳಿಕೆ ದಾಖಲಿಸಿಕೊಂಡಿದ್ದಾರೆ. ಪ್ರಕರಣದ ಪ್ರಮುಖ ಆರೋಪಿ ಜಗದೀಶ್ ಅಲಿಯಾಸ್ ಜಗ್ಗ ತಲೆಮರೆಸಿಕೊಂಡಿದ್ದು, ಆತನ ಪತ್ತೆಗೆ ಲುಕ್‌ಔಟ್ ನೋಟಿಸ್ ಜಾರಿಗೊಳಿಸಲಾಗಿದೆ.

ಸದ್ಯ, ಆರೋಪಿಗಳು ನ್ಯಾಯಾಂಗ ಬಂಧನದಲ್ಲಿದ್ದು, ಶೀಘ್ರದಲ್ಲೇ ಸಿಐಡಿ ಅಧಿಕಾರಿಗಳು ಬಾಡಿ ವಾರಂಟ್ ಮೇಲೆ ಆರೋಪಿಗಳನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಲು ಸಿದ್ಧತೆ ನಡೆಸಿದ್ದಾರೆ.

## ಪಿಒಪಿ ಗಣೇಶ ಮೂರ್ತಿಗಳ ಮಾರಾಟ ಅಬಾಧಿತ!

• ಉದಯವಾಹಿನಿ, ಬೆಂಗಳೂರು

ಪರಿಸರಕ್ಕೆ ಮಾರಕವಾಗಿರುವ ಪಿಒಪಿ ಗಣೇಶ ಮೂರ್ತಿಗಳ ಮಾರಾಟಕ್ಕೆ ನಿಷೇಧವಿದ್ದರೂ, ರಾಜ್ಯದ ಹಲವೆಡೆ ಇನ್ನೂ ತರಹೇವಾರಿ ಪಿಒಪಿ ಗಣಪತಿ ಮೂರ್ತಿಗಳು ಮಾರಾಟವಾಗುತ್ತಿರುವುದು ಕಂಡು ಬರುತ್ತಿದೆ. ಇಲ್ಲಿಯವರೆಗೆ, ಬೆಂಗಳೂರಿನ ದಾಸರಹಳ್ಳಿ ವಲಯ ಮತ್ತು ಹುಬ್ಬಳ್ಳಿ ಎಂಬ ಎರಡು ಸ್ಥಳಗಳಲ್ಲಿ ಮಾತ್ರ ಅಧಿಕಾರಿಗಳು ದಾಳಿ ನಡೆಸಿದ್ದು, 1,000 ಮತ್ತು 180 ಪಿಒಪಿ ವಿಗ್ರಹಗಳನ್ನು ವಶಪಡಿಸಿಕೊಂಡಿದ್ದಾರೆ. ಸರ್ಕಾರ ಪಿಒಪಿ ಮೂರ್ತಿಗಳನ್ನು ನಿಷೇಧಿಸಿ ಆದೇಶ ಹೊರಡಿಸಿ ಒಂದು ವರ್ಷವಾಗಿದೆ. ಆದರೂ ಮಾರಾಟಗಾರರು ಮಾತ್ರ ಪಿಒಪಿ ಗಣಪತಿ ಮೂರ್ತಿಗಳ ಮಾರಾಟವನ್ನು ಮಾತ್ರ ನಿಲ್ಲಿಸಿಲ್ಲ.

ಕಳೆದ ಹಬ್ಬದ ಸಂದರ್ಭದಲ್ಲಿ ಅಧಿಕಾರಿಗಳು ಎಲ್ಲಾ ವಿಗ್ರಹಗಳನ್ನು ವಶಪಡಿಸಿಕೊಂಡು ವೈಜ್ಞಾನಿಕವಾಗಿ ನಾಶಪಡಿಸಬೇಕಾಗಿತ್ತು. ಆದರೆ, ಅದು ಆಗಿರಲಿಲ್ಲ. ಇದೀಗ ಹಬ್ಬಕ್ಕೆ ಕೇವಲ ಒಂದು ತಿಂಗಳು ಬಾಕಿ ಇರುವಾಗ ಅತ್ಯಲ್ಪ ತಪಾಸಣೆಗಳು ಪ್ರಾರಂಭವಾಗಿವೆ ಎಂದು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ (ಕೆಎಸ್‌ಪಿಸಿಬಿ)ಯಲ್ಲಿ ಕೆಲಸ ಮಾಡುತ್ತಿರುವ ಪರಿಸರ ತಜ್ಞರೊಬ್ಬರು ಹೇಳಿದ್ದಾರೆ.

ಕಳೆದ ಗುರುವಾರ, ಅರಣ್ಯ ಸಚಿವ ಈಶ್ವರ್ ಬಿ ಖಂಡ್ರೆ ಅವರು

ಉದಯವಾಹಿನಿ ಚಿತ್ರ



ರಾಜ್ಯ ಸರ್ಕಾರದ 2023 ರ ನಿಷೇಧವನ್ನು ಪುನರುಚ್ಚರಿಸಿದ್ದರು. ಪಿಒಪಿ ವಿಗ್ರಹಗಳ ಪರಿಶೀಲನೆ ನಡೆಸಿ ನಿಷೇಧವನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು ನಿರ್ದೇಶನ ನೀಡಿದ್ದರು. ಆದಾಗ್ಯೂ, ಮಾರಾಟಗಾರರು ಪಿಒಪಿ ಗಣೇಶ ಮೂರ್ತಿಗಳ ಮಾರಾಟವನ್ನು ಮುಂದುವರೆಸಿದ್ದಾರೆ.


ನಮ್ಮ ಬಳಿ ಹಳೆಯ ಸ್ಟಾಕ್‌ಗಳಿದ್ದು, ಅವುಗಳ ಮೇಲೆ ಹೂಡಿಕೆ ಮಾಡಲಾಗಿದೆ, ಅವುಗಳನ್ನು ಮಾರಾಟ ಮಾಡಲೇಬೇಕಿದೆ ಎಂದು ಮಾರಾಟಗಾರರು ಹೇಳಿದ್ದಾರೆ.

## ಬೆಂಗಳೂರು ನಗರ ವಿಶ್ವವಿದ್ಯಾನಿಲಯ ಕ್ಷಯರೋಗ ಮುಕ್ತ ಭಾರತ ಅಭಿಯಾನ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ನಗರ ವಿಶ್ವವಿದ್ಯಾನಿಲಯದ ಸಮಾಜ ಕಾರ್ಯ ವಿಭಾಗದ ಆಶ್ರಯದಲ್ಲಿ ಸೆಂಟ್ರಲ್ ಕಾಲೇಜಿನ ಆವರಣದಲ್ಲಿರುವ ಜ್ಞಾನಜ್ಯೋತಿ ಸಭಾಂಗಣದಲ್ಲಿ ಪ್ರಧಾನ ಮಂತ್ರಿ ಟಿಬಿ ಮುಕ್ತ ಭಾರತ ಅಭಿಯಾನದ ಅಂಗವಾಗಿ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಪ್ರಭಾರ ಕುಲಪತಿಗಳಾದ ಪ್ರೊ. ಕೆ.ಆರ್.ಜಲಜಾರವರು ಇದೀಗ ಕ್ಷಯ ರೋಗ ನಿವಾರಣೆಗೆ ಉಚಿತ ಚಿಕಿತ್ಸೆ ಮತ್ತು ಔಷಧಿ ಲಭ್ಯವಿದ್ದು ಸಾಂಕ್ರಾಮಿಕದ ಸಂಪೂರ್ಣ ನಿರ್ಮೂಲನೆಗೆ ಸಕಲರೂ ಶ್ರಮಿಸಬೇಕೆಂದು ವಿನಂತಿಸಿದರು.

ಹಿಂದಿನ ಕಾಲದ ರೀತಿಯ ಆತಂಕ ಈಗ ಅನಗತ್ಯವಾಗಿದ್ದು ಸೂಕ್ತ ಮುನ್ನೆಚ್ಚರಿಕೆ ಕ್ರಮಗಳು ಸಕಾಲಿಕ ಚಿಕಿತ್ಸೆಯ ಮೂಲಕ ಶೂನ್ಯ ಪ್ರಮಾಣದ ಸೋಂಕಿನ ಗುರಿ ಸಾಧಿಸಬಹುದಾಗಿದೆ ಎಂದು ಅವರು ವಿವರಿಸಿದರು.


ಉದಯವಾಹಿನಿ ಚಿತ್ರ

ಬಿಸಿಯು ಕುಲಸಚಿವರಾದ ಪ್ರೊ. ಬಿ.ರಮೇಶ್ ಹಾಗೂ ಸಮಾಜ ಕಾರ್ಯ ವಿಭಾಗದ ಮುಖ್ಯಸ್ಥರಾದ ಪ್ರೊ.ರಿತಿಕಾ ಸಿನ್ಹಾ ವೇದಿಕೆಯಲ್ಲಿ ಉಪಸ್ಥಿತರಿದ್ದರು. ವಿಶ್ವ ಆರೋಗ್ಯ ಸಂಸ್ಥೆಯ ವೈದ್ಯಕೀಯ ಸಮಾಲೋಚಕರಾದ ಡಾ.ಶಾಜಿಯಾ ಅಂಜುಂ ಹಾಗೂ ಬಿಬಿಎಂಪಿ ಜಿಲ್ಲಾ ಟಿ.ಬಿ. ಅಧಿಕಾರಿ ಡಾ.ರಾಮು ಕ್ಷಯರೋಗ ನಿಯಂತ್ರಣ ಮಾರ್ಗಸೂಚಿಗಳ ಬಗ್ಗೆ ಮಾಹಿತಿ ಒದಗಿಸಿದರು.

## ಬಿಜೆಪಿಯವರಿಗೆ ಧಮ್ಮು–ತಾಕತಿದ್ರೆ ಕೇಂದ್ರದಿಂದ ಯೂರಿಯಾ ಕೊಡಿಸಲಿ: ಚಲುವರಾಯಸ್ವಾಮಿ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಯೂರಿಯಾ ಕೊರತೆ ಆಗದಂತೆ ಸರ್ಕಾರ ಕ್ರಮ ತೆಗೆದುಕೊಳ್ಳುತ್ತಿದೆ. ಬಿಜೆಪಿಯವರು ರಾಜಕೀಯ ಮಾಡೋದು ಬಿಟ್ಟು ಧೈರ್ಯವಿದ್ದರೆ ಕೇಂದ್ರ ಸರ್ಕಾರದಿಂದ ಯೂರಿಯಾ ಕೊಡಿಸಲಿ ಎಂದು ಬಿಜೆಪಿ ನಾಯಕರ ವಿರುದ್ಧ ಕೃಷಿ ಸಚಿವ ಚಲುವರಾಯಸ್ವಾಮಿ ವಾಗ್ದಾಳಿ ನಡೆಸಿದರು.

ರಾಜ್ಯದಲ್ಲಿ ಯೂರಿಯಾ ಕೊರತೆ ಅಂತ ಬಿಜೆಪಿ ಪ್ರತಿಭಟನೆ ಮಾಡ್ತಿರೋ ವಿಚಾರಕ್ಕೆ ಪ್ರತಿಕ್ರಿಯೆ ನೀಡಿದ ಅವರು, ಈಗಾಗಲೇ ಬಹಳ ಸ್ಪಷ್ಟವಾಗಿ ಎಲ್ಲೆಲ್ಲಿ ಯೂರಿಯಾ ಸರಬರಾಜು ಆಗಿದೆ ಎಂದು ಹೇಳಿದ್ದೇನೆ. ಡಿಸಿ, ಸೆಕ್ರೆಟರಿ ಜೊತೆಗೆ ನಿರಂತರ ಸಂಪರ್ಕದಲ್ಲಿದ್ದೇವೆ. ಬಿಜೆಪಿಯವರಿಗೆ ಮಾತಡೋಕೆ ಬೇರೆ ವಿಷಯ ಇಲ್ಲ ಅದಕ್ಕೆ



ಪ್ರತಿಭಟನೆ ಅಂತಿದ್ದಾರೆ. ಇವರಿಗೆ ಕೇಂದ್ರಕ್ಕೆ ಹೋಗಿ ಹೇಳೋ ಧಮ್ ಇಲ್ಲ. ನಾನು ಎಲ್ಲಾ ಎಂಪಿಗಳಿಗೆ ಹಾಗೂ ಕೇಂದ್ರ ಮಂತ್ರಿಗಳಿಗೆ ಪತ್ರ ಬರೆದು ಮನವಿ ಮಾಡಿದ್ದೇನೆ. ಸಿಎಂ ಅವರು ಕೂಡ ಪತ್ರ ಬರೆದಿದ್ದಾರೆ. ಇನ್ನೂ ಏನು ಮಾಡಬೇಕಂತೆ ವಿಜಯೇಂದ್ರ, ಅಶೋಕ್‌ಗೆ ತಿರುಗೇಟು ನೀಡಿದರು.

ಕೇಂದ್ರವೇ ನಮಗೆ ಯೂರಿಯಾ ಒದಗಿಸುತ್ತದೆ. ಹೀಗಾಗಿ ನಾವು ಇದರಲ್ಲಿ ರಾಜಕೀಯ ಮಾಡಲು ಹೋಗಿರಲಿಲ್ಲ. ಇವರು ರಾಜಕೀಯವಾಗಿ ಮಾತಾಡಿದ್ರೆ, ನಾವೇನು ಮಾಡೋಕೆ ಆಗಲ್ಲ.

ರಾಜ್ಯದ ಒಬ್ಬ ಮಂತ್ರಿಗಾದರೂ ಕೇಂದ್ರಕ್ಕೆ ಪತ್ರ ಬರೆಯುವ ಧಮ್ ಇದ್ಯಾ. ರಾಜ್ಯದ ರೈತರಿಗೆ ರಸಗೊಬ್ಬರ ಕೊಡುತ್ತಿದ್ದೇವೆ. ಕೊಪ್ಪಳದ ಸಮಸ್ಯೆಗಳ ಬಗ್ಗೆ ಅಧಿಕಾರಿಗಳ ಜೊತೆಗೆ ಮಾತಾಡಿದ್ದೇನೆ. ಸಮಸ್ಯೆಗಳ ಬಗ್ಗೆ ಅಧಿಕಾರಿಗಳು ನೋಡಿಕೊಳ್ಳುತ್ತಿದ್ದಾರೆ. ರೈತರ ಸಮಸ್ಯೆಗಳ ಮೇಲೆಯೂ ರಾಜಕಾರಣ ಮಾಡ್ತಿದ್ದಾರೆ. ಇದಕ್ಕೆ ಏನೂ ಮಾಡಲು ಆಗಲ್ಲ. ರೈತರ ಪರ ನಾವಿದ್ದೇವೆ. ಕೇಂದ್ರದಿಂದ

**ಕಾಳಸಂತೆಯಲ್ಲಿ ರಸಗೊಬ್ಬರ ಮಾರಾಟ ಆಗ್ತಿದೆ ಎಂಬ ಬಿಜೆಪಿ ಆರೋಪಕ್ಕೆ ತಿರುಗೇಟು ಕೊಟ್ಟ ಅವರು, ಇಲ್ಲದೆ ಇರೋದನ್ನ ಹೇಳಿದ್ರೆ ನಾವು ಏನು ಮಾಡೋಕೆ ಆಗಲ್ಲ. ವಿಜಿಲೆನ್ಸ್ ಇದೆ, ಸಾವಿರಾರು ರೀಟೈಲ್ ಸೆಂಟರ್ ಇವೆ. ಇಂತಹದ್ದು ಕಂಡು ಬಂದ್ರೆ ಬ್ಲಾಕ್ ಲಿಸ್ಟ್‌ಗೆ ಸೇರಿಸಿ ಕ್ರಮ ತೆಗೆದುಕೊಳ್ಳುತ್ತೇವೆ ಎಂದು ತಿಳಿಸಿದರು.**

ಬರಬೇಕಾದ ಬಾಕಿ ಯೂರಿಯಾ ಬರಲು ಎಲ್ಲಾ ಪ್ರಯತ್ನ ಮಾಡ್ತಿದ್ದೇವೆ. ಬಿಜೆಪಿಯವರಿಗೆ ಧಮ್ಮು, ತಾಕತ್ತಿದ್ರೆ, ಕೇಂದ್ರದ ಮೇಲೆ ಒತ್ತಡ ಹಾಕಲಿ ಅಂತ ಕಿಡಿಕಾರಿದರು.

# ಮಕ್ಕಳ ಆರೋಗ್ಯ ಸಂಸ್ಥೆಯಲ್ಲಿ ಸಹಾಯಕರಿಗೆ ಡಾರ್ಮೆಟರಿ ನಿರ್ಮಾಣ

### ಸದ್ಯ ಎರಡು ಮಹಡಿಗಳನ್ನು ಒಳಗೊಂಡ ಕಟ್ಟಡವನ್ನು ನಿರ್ಮಿಸಲು ಸಂಸ್ಥೆ ಕಾರ್ಯಯೋಜನೆ ರೂಪಿಸಿದೆ, ಈ ಸಂಬಂಧ ಟೆಂಡರ್ ಪ್ರಕ್ರಿಯೆ ನಡೆಯುತ್ತಿದೆ

• ಉದಯವಾಹಿನಿ, ಬೆಂಗಳೂರು

ಇಲ್ಲಿನ ಇಂದಿರಾ ಗಾಂಧಿ ಮಕ್ಕಳ ಆರೋಗ್ಯ ಸಂಸ್ಥೆಯು ಐಜಿಐಸಿಎಚ್ ಅನಾರೋಗ್ಯ ಸಮಸ್ಯೆ ಸಂಬಂಧ ದಾಖಲಾಗುವ ಮಕ್ಕಳ ಪಾಲಕರು ಹಾಗೂ ಸಹಾಯಕರಿಗೆ ಡಾರ್ಮೆಟರಿ ನಿರ್ಮಿಸಲು ಮುಂದಾಗಿದ್ದು, ಇದು ಮಕ್ಕಳ ಚಿಕಿತ್ಸಾ ಅವಧಿಯಲ್ಲಿ ಆಶ್ರಯ ಒದಗಿಸಲಿದೆ. ಸೂಪರ್ ಸ್ಪೆಷಾಲಿಟಿ ವೈದ್ಯಕೀಯ ಸೇವೆ ಒದಗಿಸುತ್ತಿರುವ ಸಂಸ್ಥೆಯು ಮಕ್ಕಳ ಚಿಕಿತ್ಸೆಗೆ ಹೆಸರಾಗಿದೆ. ಅದ್ದರಿಂದ ರಾಜ್ಯದ ವಿವಿಧೆಡೆಯಿಂದ ಚಿಕಿತ್ಸೆಗಾಗಿ ಮಕ್ಕಳನ್ನು ಪಾಲಕರು ಇಲ್ಲಿಗೆ ಕರೆತರುತ್ತಾರೆ. ಇದರಿಂದಾಗಿ ಇಲ್ಲಿಗೆ ಚಿಕಿತ್ಸೆಗೆ ಬರುವ ಮಕ್ಕಳ ಜತೆಗೆ ಅವರ ಸಹಾಯಕರ ಸಂಖ್ಯೆಯೂ ವರ್ಷದಿಂದ ವರ್ಷಕ್ಕೆ ಹೆಚ್ಚುತ್ತಿದೆ. ಮಕ್ಕಳ ಚಿಕಿತ್ಸಾ ಅವಧಿಯಲ್ಲಿ ಸಹಾಯಕರಿಗೆ ಹಾಲಿ ವ್ಯವಸ್ಥೆಯಡಿ ಆಶ್ರಯ ಒದಗಿಸುವುದು ಸವಾಲಾಗಿದೆ. ಆದ್ದರಿಂದ ಸಂಸ್ಥೆಯ ಆವರಣದಲ್ಲಿಯೇ ಪ್ರತ್ಯೇಕ ವಿಶ್ರಾಂತಿ ಧಾಮ ನಿರ್ಮಿಸಲಾಗುತ್ತಿದೆ.

ಸಂಸ್ಥೆಯ ಆವರಣದಲ್ಲಿ ಈಗಾಗಲೇ ಸೂಪರ್ ಸ್ಪೆಷಾಲಿಟಿ ಚಿಕಿತ್ಸಾ ಘಟಕ ತಲೆಯೆತ್ತಿದ್ದು, ಕಾರ್ಯಾರಂಭದ ಬಳಿಕ ಅಲ್ಲಿ 450 ಹಾಸಿಗೆಗಳು ಲಭ್ಯವಾಗಲಿವೆ. ಒಟ್ಟು ಹಾಸಿಗೆಗಳ ಸಂಖ್ಯೆ 900ಕ್ಕೆ




ಏರಿಕೆಯಾಗಲಿದೆ. ಇದರಿಂದಾಗಿ ಚಿಕಿತ್ಸೆಗೆ ದಾಖಲಾಗುವ ಮಕ್ಕಳ ಜತೆಗೆ ಅವರ ಸಹಾಯಕರ ಸಂಖ್ಯೆಯೂ ಹೆಚ್ಚಳವಾಗುತ್ತದೆ. ಇಲ್ಲಿಗೆ ಚಿಕಿತ್ಸೆಗೆ ಬರುವವರಲ್ಲಿ ಬಹುತೇಕರು ಬಡ ಮತ್ತು ಮಧ್ಯಮ ವರ್ಗದವರಾಗಿದ್ದು, ಚಿಕಿತ್ಸಾ ಅವಧಿಯಲ್ಲಿ ಹೆಚ್ಚುವರಿ ಸಹಾಯಕರಿಗೆ ಆಶ್ರಯ ಒದಗಿಸುವುದು ಸಮಸ್ಯೆಯಾಗಲಿದೆ. ಈಗಾಗಲೇ

**ಮಕ್ಕಳ ಸಹಾಯಕರ ಸಮಸ್ಯೆ ಮನಗಂಡು ಅವರಿಗಾಗಿ ಪ್ರತ್ಯೇಕ ಕಟ್ಟಡ ನಿರ್ಮಿಸಲು ಮುಂದಾಗಿದ್ದೇವೆ. ಸಂಪನ್ಮೂಲದ ಲಭ್ಯತೆ ಅನುಸಾರ ಕಟ್ಟಡದ ಸಾಮರ್ಥ್ಯ ಹೆಚ್ಚಿಸುತ್ತೇವೆ –ಡಾ. ಸಂಜಯ್ ಕೆ.ಎಸ್. ಐಜಿಐಸಿಎಚ್ ನಿರ್ದೇಶಕ**

ಕೆಲವರು ಆಸ್ಪತ್ರೆಯ ಆವರಣದಲ್ಲಿ, ಖಾಲಿ ಸ್ಥಳಾವಕಾಶದಲ್ಲಿ ವಿಶ್ರಾಂತಿ ಪಡೆಯುತ್ತಿದ್ದಾರೆ. ಹೀಗಾಗಿ, ಸಂಸ್ಥೆಯು ಅಂತರಿಕ ಸಂಪನ್ಮೂಲದಿಂದ ಸಹಾಯಕರಿಗೆ ಪ್ರತ್ಯೇಕ ಕಟ್ಟಡ ನಿರ್ಮಿಸುತ್ತಿದೆ.

**2 ಮಹಡಿ ಕಟ್ಟಡ:** ಸದ್ಯ ಎರಡು ಮಹಡಿಗಳನ್ನು ಒಳಗೊಂಡ ಕಟ್ಟಡವನ್ನು ನಿರ್ಮಿಸಲು ಸಂಸ್ಥೆ ಕಾರ್ಯಯೋಜನೆ ರೂಪಿಸಿದೆ. ಈ ಸಂಬಂಧ ಟೆಂಡರ್ ಪ್ರಕ್ರಿಯೆ ನಡೆಯುತ್ತಿದೆ.

ಆರು ತಿಂಗಳಲ್ಲಿ ಕಟ್ಟಡ ನಿರ್ಮಾಣ ಕಾಮಗಾರಿ ಪೂರ್ಣಗೊಳಿಸಲು ಗುರಿ ಹಾಕಿಕೊಳ್ಳಲಾಗಿದೆ. ಈ ಕಟ್ಟಡವನ್ನು ರೂ.3.6 ಕೋಟಿ ವೆಚ್ಚದಲ್ಲಿ ನಿರ್ಮಿಸಲಾಗುತ್ತಿದೆ. ಒಂದು ಮಹಡಿಯನ್ನು ಮಹಿಳೆಯರಿಗೆ, ಇನ್ನೊಂದು ಮಹಡಿಯನ್ನು ಪುರುಷರಿಗೆ ಮೀಸಲಿಡಲಾಗುತ್ತದೆ. ಪ್ರತಿ ಮಹಡಿಯಲ್ಲಿ 50 ಹಾಗೂ ಅದಕ್ಕಿಂತ ಹೆಚ್ಚಿನ ಸಹಾಯಕರು ಆಶ್ರಯ ಪಡೆಯಬಹುದಾಗಿದೆ. ಅಡುಗೆ ಮನೆ, ಶುದ್ಧ ಕುಡಿಯುವ ನೀರು, ಬಟ್ಟೆ ತೊಳೆಯುವ ಯಂತ್ರ, ಲಾಕರ್, ಶೌಚಾಲಯ, ಟಿ.ವಿ. ಸೇರಿ ಅಗತ್ಯ ಸೌಕರ್ಯವನ್ನು ಎರಡೂ ಮಹಡಿಯಲ್ಲಿ ಒದಗಿಸಲಾಗುತ್ತದೆ.

ವಿಶ್ರಾಂತಿ ಧಾಮ ನಿರ್ಮಾಣ ಯೋಜನೆಯು ಆರು ಮಹಡಿಗಳನ್ನು ಒಳಗೊಂಡಿದೆ. ಸದ್ಯ ಎರಡು ಮಹಡಿಗಳನ್ನು ನಿರ್ಮಾಣ ಮಾಡಲಾಗುತ್ತಿದೆ. ಮುಂದಿನ ದಿನಗಳಲ್ಲಿ ಮತ್ತೆ ನಾಲ್ಕು ಮಹಡಿಗಳನ್ನು ಸೇರ್ಪಡೆ ಮಾಡಲಾಗುತ್ತದೆ. ಅಲ್ಲಿ ಪ್ರತಿ ಮಹಡಿಯಲ್ಲಿ 14 ಕೊಠಡಿಗಳು ಬರಲಿವೆ. ಸಂಸ್ಥೆಯು ಆಂತರಿಕ ಸಂಪನ್ಮೂಲದಿಂದ ನಿರ್ಮಿಸುತ್ತಿರುವುದರಿಂದ ಕಾಮಗಾರಿ ನಿಗದಿತ ಅವಧಿಯಲ್ಲಿ ಪೂರ್ಣಗೊಳ್ಳಲಿದೆ' ಎಂದು ಸಂಸ್ಥೆಯ ಎಂಜಿನಿಯರ್ ತಿಳಿಸಿದರು.

#### ಹಾಲಿ ಕಟ್ಟಡ ಡೇ ಕೇರ್ ಸೆಂಟರ್

**ಸದ್ಯ ಸಂಸ್ಥೆಯ ಪಕ್ಕದಲ್ಲಿರುವ ಕಟ್ಟಡವೊಂದರಲ್ಲಿ ಪುರುಷ ಸಹಾಯಕರು ಹಾಗೂ ವೈದ್ಯಕೀಯ ವಿದ್ಯಾರ್ಥಿನಿಯರ ವಸತಿನಿಲಯದಲ್ಲಿ ಮಹಿಳಾ ಸಹಾಯಕರಿಗೆ ವಿಶ್ರಾಂತಿಗೆ ವ್ಯವಸ್ಥೆ ಮಾಡಲಾಗಿದೆ.**

**ವಾರ್ಡ್‌ಗಳಲ್ಲಿ ಚಿಕಿತ್ಸೆ ಪಡೆಯುತ್ತಿರುವ ಮಗುವಿನ ಜತೆಗೆ ಒಬ್ಬ ಸಹಾಯಕರಿಗೆ ಇರಲು ಅವಕಾಶವಿದೆ. ಹಾಗಾಗಿ ಉಳಿದ ಸಹಾಯಕರು ತೀವ್ರ ನಿಗಾ ಘಟಕದಲ್ಲಿ ಇರುವ ಮಕ್ಕಳ ಪಾಲಕರು ಈ ಕಟ್ಟಡಗಳಲ್ಲಿ ಚಿಕಿತ್ಸಾ ಅವಧಿಯಲ್ಲಿ ಆಶ್ರಯ ಪಡೆಯುತ್ತಿದ್ದಾರೆ. ನೂತನ ವಿಶ್ರಾಂತಿ ಧಾಮ ನಿರ್ಮಾಣವಾದ ಬಳಿಕ ಸಂಸ್ಥೆಯ ಪಕ್ಕದಲ್ಲಿರುವ ವಿಶ್ರಾಂತಿ ಕಟ್ಟಡವು 'ಡೇ ಕೇರ್ ಸೆಂಟರ್' ಆಗಿ ಪರಿವರ್ತನೆಯಾಗಲಿದೆ. ಸದ್ಯ ಇರುವ ಕಟ್ಟಡದಲ್ಲಿ 70ರಿಂದ 80 ಮಂದಿ ಆಶ್ರಯ ಪಡೆದರೆ ವೈದ್ಯಕೀಯ ವಿದ್ಯಾರ್ಥಿನಿಯರ ವಸತಿ ನಿಲಯದ ನೆಲಮಹಡಿಯಲ್ಲಿ ರಾತ್ರಿ ವೇಳೆ ತಂಗಲು 60 ಮಹಿಳಾ ಸಹಾಯಕರಿಗೆ ಅವಕಾಶ ನೀಡಲಾಗುತ್ತಿದೆ.**

# 193 ಕೋಟಿ ರೂ. ವೆಚ್ಚದಲ್ಲಿ ಏಕತಾ ಮಾಲ್ ನಿರ್ಮಾಣ

## ಜಿಲ್ಲೆಗಳ ಉತ್ಪನ್ನಗಳನ್ನು ಮಾರಾಟ ಮಾಡಲು ಅವಕಾಶ ನೀಡುತ್ತೇವೆ ಎಂದು ಸಂಸದ ಯದುವೀರ್ ಒಡೆಯರ್ ಹೇಳಿಕೆ

• **ಉದಯವಾಹಿನಿ, ಮೈಸೂರು**

ಸಾಂಸ್ಕೃತಿಕ ನಗರಿ ಮೈಸೂರಿನಲ್ಲಿ ಏಕತಾ ಮಾಲ್ ತಲೆ ಎತ್ತಲಿದೆ. ನಗರದ ವಸ್ತು ಪ್ರದರ್ಶನ ಆವರಣದಲ್ಲಿ ಏಕತಾ ಮಾಲ್ ನಿರ್ಮಾಣವಾಗಲಿದೆ. 193 ಕೋಟಿ ರೂ. ವೆಚ್ಚದಲ್ಲಿ ಏಕತಾ ಮಾಲ್ ನಿರ್ಮಾಣವಾಗುತ್ತಿದ್ದು, ಸಂಸದ ಯದುವೀರ್ ಅವರು ಕಾಮಗಾರಿ ವೀಕ್ಷಿಸಿದರು.

**ಪ್ರತಿ ಜಿಲ್ಲೆಯ ವಿಶೇಷ ಉತ್ಪನ್ನಗಳಿಗೆ ಅವಕಾಶ:** ಬಳಿಕ ಸಂಸದ ಯದುವೀರ್ ಒಡೆಯರ್‌ರವರು ಮಾಧ್ಯಮದವರ ಜೊತೆ ಮಾತನಾಡಿದರು. ಕೆಎಸ್‌ಐಡಿಸಿ ವತಿಯಿಂದ ಏಕತಾ ಮಾಲ್ ನಿರ್ಮಾಣವಾಗುತ್ತಿದೆ. ಮೈಸೂರು ಸ್ಥಳೀಯ ಉತ್ಪನ್ನಗಳಿಗೆ ಪ್ರೋತ್ಸಾಹ ನೀಡುತ್ತಾ ಬಂದಿದೆ. ಮೈಸೂರು ಸ್ಯಾಂಡಲ್, ವೀಳ್ಯದೆಲೆ ಸೇರಿದಂತೆ ಅನೇಕ ವಸ್ತುಗಳು ಜಿಐ ಟ್ಯಾಗ್ ಪಡೆದುಕೊಂಡಿವೆ. ಸ್ಥಳೀಯ ವ್ಯಾಪಾರಸ್ಥರಿಗೆ ಅವಕಾಶ ನೀಡಲಾಗುತ್ತಿದೆ. ರಾಷ್ಟ್ರೀಯತೆಯನ್ನು ಬೆಳೆಸುವ ದೃಷ್ಟಿಯಿಂದ ಯೋಜನೆ ರೂಪಿಸಲಾಗಿದೆ. ಮೇಕ್ ಇನ್ ಇಂಡಿಯಾ ಯಶಸ್ವಿಯಾಗಿ ನಡೆಯುತ್ತಿದೆ. ಪ್ರತಿಯೊಂದು ಜಿಲ್ಲೆಯ ವಿಶೇಷ ಉತ್ಪನ್ನಗಳಿಗೆ ಅವಕಾಶ ಮಾಡಿಕೊಡುತ್ತೇವೆ.

ಉದ್ಯೋಗ ಸೃಷ್ಟಿ ಸಹ ಇದರಿಂದ ಆಗುತ್ತದೆ. ಪ್ರತಿಯೊಂದು ರಾಜ್ಯದಲ್ಲಿ ಏಕತಾ ಮಾಲ್ ನಿರ್ಮಾಣವಾಗುತ್ತಿದೆ. ಅಂತರಾಷ್ಟ್ರೀಯ ಮಾದರಿಯಲ್ಲಿ ಕಾಂಪ್ಲೆಕ್ಸ್ ನಿರ್ಮಾಣವಾಗುತ್ತದೆ. ಮೈಸೂರು ಜಿಲ್ಲೆಯ ಇತಿಹಾಸ ಹಾಗೂ ಮೈಸೂರು ಜಿಲ್ಲೆಯಲ್ಲಿನ ಉತ್ಪನ್ನದ ಬಗ್ಗೆ ಮಾಹಿತಿ ತಿಳಿಸುವ ಕೆಲಸವಾಗಲಿದೆ ಎಂದರು.

ಮೈಸೂರಿನ ವಸ್ತುಪ್ರದೇಶದ ಆವರಣದಲ್ಲಿ ಮಾಲ್ ನಲ್ಲಿ 99 ಮಳಿಗೆಗಳು ಇರತ್ತೆ. ಮೈಸೂರಿನ ಪರಂಪರೆ ಸಾರುವ ನಿಟ್ಟಿನಲ್ಲಿ ಕಟ್ಟಡ ನಿರ್ಮಾಣ ಮಾಡಲಾಗುತ್ತಿದೆ. ಮೈಸೂರಿನ ವಸ್ತುಗಳನ್ನು ಮಾರಾಟ ಮಾಡುವ ಮಳಿಗೆಗಳನ್ನು ನಿರ್ಮಾಣ ಮಾಡುತ್ತಿದ್ದೇವೆ. ಎಲ್ಲಾ ರೀತಿಯ ಅಂಗಡಿಗಳನ್ನು ಕೂಡ ಇಲ್ಲಿ ತೆರೆಯಲು ನಿರ್ಧಾರ ಮಾಡಲಾಗಿದೆ. ಲೋಕಲ್ ಪ್ರಾಡಕ್ಟ್‌ಗಳಿಗೆ ಮೊದಲ ಆದ್ಯತೆ ನೀಡುತ್ತೇವೆ. ಇದಕ್ಕೆ ರಾಜ್ಯ ಸರ್ಕಾರ ಜಾಗ ನೀಡಿದೆ. ಕೇಂದ್ರ ಸರ್ಕಾರ ಸಂಪೂರ್ಣ ಹಣ ನೀಡುತ್ತೆ. ಆರೂವರೆ ಎಕರೆ ಜಾಗದಲ್ಲಿ ಈ ಮಾಲ್ ನಿರ್ಮಾಣ ಆಗತ್ತೆ. ಪಾರ್ಕಿಂಗ್ ಸೇರಿ ಎಲ್ಲವೂ ಕೂಡ ಇಲ್ಲೆ ಆಗತ್ತೆ ಎಂದರು.

ಪ್ರವಾಸೋದ್ಯಮಕ್ಕೆ ಒತ್ತು ನೀಡುವ ಸಲುವಾಗಿ ಮಾಲ್ ನಿರ್ಮಾಣ ಮಾಡುತ್ತಿದ್ದೇವೆ. ಹೆಚ್ಚಿನ ಜನ ಮುಂದಿನ ದಿನಗಳಲ್ಲಿ ಇಲ್ಲಿ ಬರ್ತಾರೆ. ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಕೂಡ ಇಲ್ಲಿ ಆಯೋಜಿಸುವ ನಿಟ್ಟಿನಲ್ಲಿ ಯೋಜನೆ ಸಿದ್ಧಪಡಿಸುತ್ತೇವೆ. ವಾರಾಂತ್ಯದಲ್ಲಿ ಸಂತೆಗಳನ್ನು ಕೂಡ ಆಯೋಜಿಸುವ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲಿ ತೀರ್ಮಾನ ಮಾಡ್ತೇವಿ ಎಂದರು.

### ಪಾರಂಪರಿಕ ಕಟ್ಟಡಗಳ ಮಾದರಿಯಲ್ಲಿ ಮಾಲ್

**ಹಳೆಯ ಮರಗಳನ್ನು ಉಳಿಸಿಕೊಂಡು ವಾಣಿಜ್ಯ ಕಟ್ಟಡ ನಿರ್ಮಾಣ ಮಾಡಲಾಗುತ್ತದೆ. ಪಾರಂಪರಿಕ ಕಟ್ಟಡಗಳ ಮಾದರಿಯಲ್ಲಿ ಏಕತಾ ಮಾಲ್ ನಿರ್ಮಾಣವಾಗುತ್ತದೆ. 90 ಮಳಿಗೆಗಳು ಇರುತ್ತವೆ. ಕರ್ನಾಟಕದ ಪ್ರತಿಯೊಂದು ಜಿಲ್ಲೆಗಳ ಉತ್ಪನ್ನಗಳನ್ನು ಮಾರಾಟ ಮಾಡಲು ಅವಕಾಶ ನೀಡಲಾಗುವುದು. ಜಿಐ ಟ್ಯಾಗ್ ಹೊಂದಿರುವ ವಸ್ತುಗಳಿಗೆ ಮೊದಲ ಆದ್ಯತೆ ನೀಡಲಾಗುತ್ತದೆ ಎಂದು ಸಂಸದ ಯದುವೀರ್ ಒಡೆಯರ್ ಮೈಸೂರಿನಲ್ಲಿ ಹೇಳಿಕೆ ನೀಡಿದರು.**



### ಡ್ರಗ್ಸ್ ಜಾಲ ಪತ್ತೆ ಹಿನ್ನಲೆ

**ಇದೊಂದು ಒಳ್ಳೆಯ ಕಾರ್ಯಾಚರಣೆ. ಡ್ರಗ್ಸ್ ಅನ್ನು ಸಂಪೂರ್ಣ ನಿರ್ಮೂಲನೆ ಮಾಡಬೇಕು. ಇದನ್ನು ಗಂಭೀರವಾಗಿ ಪರಿಗಣಿಸಬೇಕು. ಈ ಬಗ್ಗೆ ಪೊಲೀಸ್ ಇಲಾಖೆಗೆ ಸೂಚನೆ ನೀಡಿದ್ದೇವೆ. ಪೊಲೀಸರು ಕೂಡ ಇನ್ನೂ ಹೆಚ್ಚಿನದಾಗಿ ಕೆಲಸ ಮಾಡಬೇಕು. ಡ್ರಗ್ಸ್ ತಡೆಯುವ ನಿಟ್ಟಿನಲ್ಲಿ ಎಲ್ಲರೂ ಒಗ್ಗಟ್ಟಾಗಿ ಕೆಲಸ ಮಾಡಬೇಕು ಎಂದರು. ನರಸಿಂಹ ರಾಜ ಕ್ಷೇತ್ರದಲ್ಲಿ ಇಂತಹ ಅನೇಕ ದೂರುಗಳು ದಿನನಿತ್ಯ ಬರತ್ತೆ. ಡ್ರಗ್ಸ್ ಮಾರಾಟ ಎಲ್ಲಾ ಕಡೆ ಆಗ್ತಿದೆ ಅನ್ನುವ ಆರೋಪ ಕೇಳಿ ಬಂದಿದೆ. ನರಸಿಂಹರಾಜ ಕ್ಷೇತ್ರದ ಜನಪ್ರತಿನಿಧಿಗಳು ಅಲ್ಲಿನ ಅಧಿಕಾರಿಗಳು ಸಮಸ್ಯೆಯನ್ನು ಗಂಬೀರವಾಗಿ ಪರಿಗಣಿಸಬೇಕು. ಇದನ್ನು ಸವಾಲಾಗಿ ಸ್ವೀಕರಿಸಿ ಜನರ ನಂಬಿಕೆ ಉಳಿಸಿಕೊಳ್ಳಬೇಕು ಎಂದರು.**

# ಕಾಯಕಲ್ಪಕ್ಕೆ ಕಾದಿದೆ ಪಾವಗಡ ಬೆಟ್ಟ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಪಾವಗಡ**

ಹಾವಿನ ಆಕಾರದಲ್ಲಿರುವ ಬೆಟ್ಟ, ತಾಲ್ಲೂಕಿನ ಜನರ ಭಾವನೆಗಳ ಕೋಟೆ, ಐತಿಹಾಸಿಕ, ಪೌರಾಣಿಕ ಪ್ರತೀತಿ ಹೊಂದಿರುವ ಪಾವಗಡ ಬೆಟ್ಟಕ್ಕೆ ಕಾಯಕಲ್ಪ ಬೇಕಿದೆ. ಈ ಪ್ರದೇಶ ಗೋಂಡಾರಣ್ಯಕ್ಕೆ ಸೇರಿತ್ತೆಂದು ಪುರಾಣದಲ್ಲಿ ಉಲ್ಲೇಖವಿದೆ. ಪಾವಗಡ ಹೆಸರು ಬರಲು ಇಲ್ಲಿನ ಬೆಟ್ಟವು ಹಾವಿನ ಆಕಾರದಲ್ಲಿ ಇರುವುದೇ ಕಾರಣ. ಹಿಂದೆ ಇದಕ್ಕೆ ಪಾಮುಕೊಂಡ' ಎಂದು ಹೆಸರಿದ್ದು, ನಂತರ ಪಾವುಕೊಂಡ, ಪಾವುಕೊಡವಾಗಿ ಈಗ ಪಾವಗಡ ಆಗಿದೆ. ಮರಾಠರ ದಾಳಿಗೆ ಒಳಗಾಗಿದ್ದ ಕಾಲಘಟ್ಟದಲ್ಲಿ ಪಾವಗಡ ಆಗಿದೆ ಎನ್ನುವುದು ಇತಿಹಾಸ. ತುಮಕೂರು ಚಳ್ಳಕೆರೆ, ಬಳ್ಳಾರಿ, ಶಿರಾ ರಸ್ತೆಗಳಿಂದ ಬರುವವರಿಗೆ ಸುಮಾರು 2ರಿಂದ 3 ಕಿ.ಮೀ ದೂರದಿಂದಲೇ ದರ್ಶನ ನೀಡುವ ಬೆಟ್ಟ ನೋಡಿದ ಕೂಡಲೇ ಸಂತಸ, ಆತ್ಮವಿಶ್ವಾಸ ಮೂಡುತ್ತದೆ.

ಮೊದಲ ಬಾರಿಗೆ ಪಾವಗಡಕ್ಕೆ ಬರುವವರಿಗೆ ಬೆಟ್ಟದ ಮೇಲೇನಿದೆ ಒಮ್ಮೆಯಾದರೂ ಬೆಟ್ಟ ಏರಬೇಕು ಎಂಬ ಕುತೂಹಲ ಮೂಡಿಸುತ್ತದೆ. ಶ್ರಾವಣ ಮಾಸದಲ್ಲಿ, ವಿಶೇಷ ದಿನಗಳಂದು ಪಟ್ಟಣದ ಶನೈಶ್ಚರ ದೇಗುಲಕ್ಕೆ ಬರುವ ಬಹುತೇಕ ಮಂದಿ ಬೆಟ್ಟ ಏರುತ್ತಾರೆ. ಪಾವಗಡ ಬೆಟ್ಟ ಪಟ್ಟಣದಿಂದ ಕೂಗಳತೆ ದೂರದಲ್ಲಿದೆ.

ಸ್ವಚ್ಛಗಾಳಿ, ಸುಂದರ ವಾತಾವರಣ, ಪ್ರಶಾಂತ ಅನುಭವದ ಮಧ್ಯೆ ಹಕ್ಕಿಗಳ ಕಲರವ, ದುಂಬಿಗಳ ಝೇಂಕಾರ, ಮಳೆಗಾಲದಲ್ಲಿ ನೀರಿನ ಜುಳು ಜುಳು ನಾದ ಇವೆಲ್ಲವೂ ನಿಸರ್ಗಪ್ರೇಮಿಗಳನ್ನು ಕೈಬೀಸಿ ಕರೆಯುತ್ತವೆ.

ಬೆಟ್ಟವು ಚಾರಣಿಗರಿಗೆ, ಸಾಹಸ ಪ್ರಿಯರಿಗೆ, ಸವಾಲೆಸೆದರೆ, ಇತಿಹಾಸಕಾರರಿಗೆ, ಸಂಶೋಧಕರಿಗೆ ಮೊಗೆದಷ್ಟು ಐತಿಹಾಸಿಕ ವಿಚಾರಗಳನ್ನು ನೀಡುವ ಮಾಹಿತಿ ಗಣಿಯಂತಿದೆ. ಬೆಟ್ಟಕ್ಕೆ ಹತ್ತು ಹೆಬ್ಬಾಗಿಲುಗಳಿವೆ. ಇವುಗಳ ಮೂಲಕ ಬೆಟ್ಟದ ಮೇಲೇರಬಹುದು. ಬೆಟ್ಟವನ್ನೇರಲು ಮೆಟ್ಟಿಲುಗಳ ವ್ಯವಸ್ಥೆ ಸಹ ಇದೆ. ಬೆಟ್ಟದ ತಪ್ಪಲಲ್ಲಿ ಕಮ್ಮಾರ ಮಂಟಪವಿದೆ. ಇಲ್ಲಿ ಆಯುಧ, ಯುದ್ಧ ಶಸ್ತ್ರಾಸ್ತ್ರಗಳ ತಯಾರಿ, ಹದಗೊಳಿಸುವಿಕೆ ನಡೆಯುತ್ತಿತ್ತು ಎಂದು ಹೇಳಲಾಗುತ್ತದೆ. ಕುಲುಮೆಗಳು ಇಲ್ಲಿ ಇದ್ದವೆಂದು ಹಿರಿಯರು ಹೇಳುತ್ತಾರೆ. ಈ ಹಿಂದೆ ಸೂರ್ಯ ದೇವಾಲಯವು ಬೆಟ್ಟದ ಮೇಲಿತ್ತು ಎಂಬುದು ತಿಳಿದುಬರುತ್ತದೆ.

### ಬೆಟ್ಟದ ಮೇಲೇನಿದೆ

**ಬೆಟ್ಟ ಚಾರಣಿಗರ ನೆಚ್ಚಿನ ತಾಣ. ಬೆಟ್ಟದ ಮಧ್ಯ ಭಾಗದಲ್ಲಿ ಬಯಲಿನಲ್ಲಿಯೇ ಇರುವ ಬೃಹತ್ ಬಂಡೆಯಲ್ಲಿ ಕೆತ್ತಿರುವ ಆಂಜನೇಯ ವಿಗ್ರಹ, ತುತ್ತ ತುದಿಯಲ್ಲಿ ಬಂಧಿಖಾನೆ, ಕಣಜ, ಮಸೀದಿ, ಭೀಮನ ದೊಣೆ, ಸುರಂಗ, ತಪ್ಪಿತಸ್ಥರನ್ನು ಬೆಟ್ಟದ ಮೇಲಿಂದ ಕೆಳಕ್ಕೆ ದೂಡುತ್ತಿದ್ದ ತಾಣ ಕಾಣಸಿಗುತ್ತವೆ. ಇವು ಪಾಳೆಗಾರರು, ರಾಜಮನೆತನಗಳ ಆಳ್ವಿಕೆಯ ಚರಿತ್ರೆ ಸಾರುತ್ತಿವೆ.**

# ನೊಣವಿನಕೆರೆಯಿಂದ ತಿಪಟೂರಿಗೆ ನೀರು: ಡಿಪಿಆರ್ ಸಿದ್ಧ

• **ಉದಯವಾಹಿನಿ, ತಿಪಟೂರು**

ನಗರದ ಜನತೆಗೆ ದಿನದ 24 ಗಂಟೆ ಕುಡಿಯುವ ನೀರು ಒದಗಿಸಲು ನೊಣವಿನಕೆರೆ ಕೆರೆಯಿಂದ ನೀರು ತರುವ ಯೋಜನೆಗೆ ವಿಸ್ತೃತ ಯೋಜನಾ ವರದಿ (ಡಿಪಿಆರ್) ಸಿದ್ಧವಾಗಿದೆ. ಶೀಘ್ರ ಕಾಮಗಾರಿ ಪ್ರಾರಂಭಿಸಿ ವರ್ಷದೊಳಗೆ ಕಾಮಗಾರಿ ಪೂರ್ಣಗೊಳಿಸಲಾಗುವುದು ಎಂದು ಶಾಸಕ ಕೆ.ಷಡಕ್ಷರಿ ಭರವಸೆ ನೀಡಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನೊಣವಿನಕೆರೆ ಕೆರೆ ಅಚ್ಚುಕಟ್ಟು ಪ್ರದೇಶದ ರೈತರಿಗೆ ಬೆಳೆ ಬೆಳೆಯಲು ನೀರು ಕೊಟ್ಟು, ಹೆಚ್ಚುವರಿ ನೀರನ್ನು ನಗರಕ್ಕೆ ಬಳಸಿಕೊಳ್ಳಲಾಗುತ್ತದೆ. ನೊಣವಿನಕೆರೆ ಕೆರೆ ಜೊತೆಗೆ ಈಚನೂರು ಕೆರೆ ನೀರನ್ನೂ ಯೋಜನೆಗೆ ಬಳಸಿಕೊಳ್ಳಲಾಗುವುದು. ನಗರಕ್ಕೆ ಎರಡನೇ ಹಂತದ ಕುಡಿಯುವ ನೀರಿನ ಯೋಜನೆಗೆ ಸರ್ಕಾರದ ತಾಂತ್ರಿಕ ತಜ್ಞರ ವರದಿಯಂತೆ ಪರಿಶೀಲನೆ ನಡೆಸಿ ನೀರು ತರಲು ಸಿದ್ಧತೆ ನಡೆಸಲಾಗಿದೆ ಎಂದರು.

'ತಿಪಟೂರು ಕೆರೆಗೆ ನೀರು ಹಾಯಿಸಲೇಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದರೆ ನೀರು ಹಾಯಿಸಲು ಸಿದ್ದ. ಆದರೆ ಯಾವುದಾದರೂ ಹಾನಿಯಾದರೆ ಪೂರ್ಣ ನಾವೇ ಜವಾಬ್ದಾರರು ಎಂದು ಜನರು ಬರವಣಿಗೆ ನೀಡಿದರೆ ನಮ್ಮ ಅಭ್ಯಂತರವಿಲ್ಲ' ಎಂದರು.


ಉದಯವಾಹಿನಿ ಚಿತ್ರ

ತಿಪಟೂರು ಕೆರೆಗೆ ನೀರು ಹರಿಸುವ ಪೈಪ್‌ಲೈನ್ ಬದಲಾವಣೆ ಮಾಡಿ ನಗರದ ಜನರಿಗೆ ಸದ್ಯ ಹೇಮಾವತಿ ನಾಲೆಯಿಂದ ನೇರವಾಗಿ ಜಾಕ್‌ವೆಲ್ ಮೂಲಕ ನೀರು ನೀಡಲಾಗುತ್ತಿದೆ. ಯಾವುದೇ ಕಾರಣಕ್ಕೂ ಈಚನೂರು ಕೆರೆಯ ಕಲುಷಿತ ನೀರನ್ನು ನೀಡುತ್ತಿಲ್ಲ. ನಾಲೆಯಿಂದ ಈಚನೂರು ಕೆರೆಗೆ ನೀರು ಹರಿಸಲಾಗುತ್ತಿದೆ ಎಂದರು.

**ನಗರವು ಈಗಾಗಲೇ ಒಂದು ಲಕ್ಷಕ್ಕೂ ಹೆಚ್ಚು ಜನರಿಂದ ಕೂಡಿದ್ದು ನಿತ್ಯ ನಗರಕ್ಕೆ 140ರಿಂದ 160 ಎಂಸಿಎಫ್‌ಟಿ ನೀರು ಬೇಕಾಗಿದೆ. ಈಚನೂರು ಕೆರೆಗೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಂಡರೂ ನಗರದ ತ್ಯಾಜ್ಯವು ಅತಿವೃಷ್ಟಿಯಿಂದ ರಾಜಕಾಲುವೆಗಳ ಮೂಲಕ ಹರಿದು ಕೆರೆಗೆ ಮಿಶ್ರಣಗೊಂಡು ನೀರು ಕಲುಷಿತಗೊಂಡು,ಬಳಕೆಗೆ ಯೋಗ್ಯವಲ್ಲ ಎಂದು ವರದಿ ಬಂದ ನಂತರ ನೀರು ನಿಲ್ಲಿಸಲಾಗಿತ್ತು. ಡಿಸೆಂಬರ್‌ನಿಂದ 36 ಕೊಳವೆಬಾವಿಯಿಂದ 19 ಕಿಮೀ ಪೈಪ್‌ಲೈನ್ ಮೂಲಕ ನಗರದ ಜನತೆಗೆ ನೀರು ಒದಗಿಸಲಾಗಿದೆ ಎಂದು ಮಾಹಿತಿ ನೀಡಿದರು.**

**ಪೌರಾಯುಕ್ತ ವಿಶ್ವೇಶ್ವರಯ್ಯ ಬದರಗಡೆ**


ಸಣ್ಣ ನೀರಾವರಿ ಇಲಾಖೆ ಇಂಜಿನಿಯರ್ ದೊಡ್ಡಯ್ಯ, ನಗರಸಭೆ ಅಧ್ಯಕ್ಷೆ ಯಮುನಾ ಧರಣೇಶ್ ಹಾಜರಿದ್ದರು.

# ಮಳೆ ಕೊರತೆಯಿಂದ ರೈತ ಕಂಗಾಲು; 2 ತಿಂಗಳಲ್ಲಿ ಕೇವಲ ಶೇ 3ರಷ್ಟು ಬಿತ್ತನೆ!

• **ಉದಯವಾಹಿನಿ, ಕೋಲಾರ**

ಜಿಲ್ಲೆಯಲ್ಲಿ ಮುಂಗಾರು ಹಂಗಾಮು ಅವಧಿಯಲ್ಲಿ ಅಂದರೆ ಜೂನ್, ಜುಲೈನಲ್ಲಿ ಮಳೆ ಕೊರತೆ ಉಂಟಾಗಿದ್ದು ಬಿತ್ತನೆಗೆ ಭಾರಿ ಹಿನ್ನಡೆಯಾಗಿ ಪರಿಣಮಿಸಿದೆ. ಕರಾವಳಿ, ಮಲೆನಾಡು ಪ್ರದೇಶ ಸೇರಿದಂತೆ ವಿವಿಧೆಡೆ ಅಬ್ಬರಿಸುತ್ತಿರುವ ಮಳೆ ಬಯಲುಸೀಮೆ ಪ್ರದೇಶದತ್ತ ಮಾತ್ರ ಮುನಿಸಿಕೊಂಡಿದೆ.

ಆಗೊಮ್ಮೆ ಈಗೊಮ್ಮೆ ಬಂದು ಹೋಗುತ್ತಿರುವ ಮಳೆ ಸಾಕಾಗುತ್ತಿಲ್ಲ. ಜಿಲೆಯಲ್ಲಿ ಆರು ತಾಲ್ಲೂಕುಗಳಿಂದ ಸೇರಿ ಈ ಹಂಗಾಮಿನಲ್ಲಿ 72,900 ಹೆಕ್ಟೇರ್ ವಿಸ್ತೀರ್ಣದ ಕೃಷಿ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿದೆ. ಆದರೆ, ಈ ವರೆಗೆ ಕೇವಲ 2,363 ಹೆಕ್ಟೇರ್ (ಶೇ 3.24) ಪ್ರದೇಶದಲ್ಲಿ ಬಿತ್ತನೆಯಾಗಿದೆ. ಕೃಷಿಯನ್ನೇ ನಂಬಿ ಜೀವನ ಸಾಗಿಸುತ್ತಿರುವ ಅನ್ನದಾತರು ತಲೆಮೇಲೆ ಕೈಹೊತ್ತು ಕುಳಿತಿದ್ದಾರೆ.


ಉದಯವಾಹಿನಿ ಚಿತ್ರ

ಮುಂಗಾರು ಅವಧಿಯಲ್ಲಿ ಅಂದರೆ ಜೂನ್ 1ರಿಂದ ಜುಲೈ 25ರವರೆಗೆ 74 ಮಿ.ಮೀ. ಮಳೆ ಆಗಿದೆ. ಈ ಸಂದರ್ಭದಲ್ಲಿ ವಾಡಿಕೆ ಮಳೆ 127 ಮಿ.ಮೀ ಆಗಬೇಕಿತ್ತು. ಶೇ 42 ರಷ್ಟು ಕೊರತೆ ಆಗಿದೆ.

ಇಡೀ ರಾಜ್ಯದಲ್ಲಿ ಹೆಚ್ಚು ಮಳೆ ಕೊರತೆ ಉಂಟಾಗಿರುವ ಜಿಲ್ಲೆ ಕೂಡ. ಮಳೆ ಕೊರತೆಯಿಂದ ಬಿತ್ತನೆಯಲ್ಲಿ ಭಾರಿ ಕುಂಠಿತವಾಗಿದೆ. ಬಿತ್ತನೆಯ ಪ್ರಮುಖ ಹಂತದಲ್ಲಿ ಮಳೆ ಬರಲಿಲ್ಲ. ವಾರದಿಂದ ಬಿಟ್ಟು ಬಿಟ್ಟು ಮಳೆ ಬರುತ್ತಿದ್ದು, ಮುಂದಿನ ದಿನಗಳಲ್ಲಿ ಬಿತ್ತನೆ ಚಟುವಟಿಕೆ ವೇಗ ಪಡೆದುಕೊಳ್ಳುವ ವಿಶ್ವಾಸವಿದೆ. ಈ ವರ್ಷ ಬಿತ್ತನೆ ಪ್ರದೇಶದ ಗುರಿ ಕಡಿಮೆ ಆಗಿದೆ. ವಿವಿಧ ಕಾರಣಗಳಿಂದ ರೈತರು ತರಕಾರಿ ಹಾಗೂ ಹಣ್ಣಿನ ಬೆಳೆಗೆ ಮೊರೆ ಹೋಗುತ್ತಿದ್ದಾರೆ. ರಾಗಿ ಬೆಳೆ ಪ್ರದೇಶವೂ ಕಡಿಮೆ ಆಗಿದೆ' ಎಂದು ಕೃಷಿ ಜಂಟಿ ನಿರ್ದೇಶಕಿ ಎಂ.ಆರ್.ಸುಮಾ ತಿಳಿಸಿದರು.

# ಅರೆಬರೆ ಕಾಮಗಾರಿ; ಮೇಲೇಳದ ಗುರುಭವನ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಗುರುಭವನ ಕಾಮಗಾರಿ ಪೂರ್ಣಗೊಳಿಸಲು ಅನುದಾನ ದೊರಕಿಸಿಕೊಡಿ– ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ಸಂಸದರಿಗೆ ಜಿಲ್ಲೆಯ ಶಿಕ್ಷಕರ ಸಂಘದ ಪದಾಧಿಕಾರಿಗಳು ಮನವಿ ನೀಡುತ್ತಲೇ ಇದ್ದಾರೆ. ಆದರೆ ಅರೆಬರೆಯಾಗಿ ನಿಂತಿರುವ ಗುರುಭವನದ ಕಾಮಗಾರಿ ಮಾತ್ರ ಪೂರ್ಣವಾಗುತ್ತಿಲ್ಲ! ಶಂಕುಸ್ಥಾಪನೆ ನೆರವೇರಿಸಿ ನಾಲ್ಕು ವರ್ಷಗಳು ಸಮೀಪಿಸುತ್ತಿವೆ. ಆದರೂ ಕಾಮಗಾರಿ ಪೂರ್ಣವಾಗಿಲ್ಲ. ಜಿಲ್ಲಾ ಕನ್ನಡ ಭವನದ ಕಾಮಗಾರಿ ಪೂರ್ಣವಾಗಿದೆ. ಈಗ ಗುರುಭವನದ ಕಾಮಗಾರಿ ಪೂರ್ಣಗೊಳಿಸಿ ಎನ್ನುವ ಮನವಿ ಶಿಕ್ಷಕ ಸಮುದಾಯದ್ದಾಗಿದೆ. 2021ರಲ್ಲಿ ಜಿಲ್ಲಾ ಗುರುಭವನ ಶಂಕುಸ್ಥಾಪನೆ ನಡೆಯಿತು. ಅಂದಿನ ಜಿಲ್ಲಾ ಉಸ್ತುವಾರಿ ಸಚಿವ ಡಾ.ಕೆ.ಸುಧಾಕರ್ ಶಂಕುಸ್ಥಾಪನೆ ನೆರವೇರಿಸಿದರು. ನೆಲ ಮಹಡಿಯ ಕಾಮಗಾರಿ ಪೂರ್ಣವಾಗಿದೆ. ಮೊದಲ ಮಹಡಿ ನಿರ್ಮಾಣಕ್ಕೆ ಫಿಲ್ಲರ್‌ಗಳನ್ನು ಅಳವಡಿಸಲಾಗಿದೆ.

ಪೂರ್ಣ ಕಾಮಗಾರಿ ಮುಗಿದು ಬಳಕೆಗೆ ಮುಕ್ತವಾಗುವುದು ಯಾವಾಗ ಎನ್ನುವ ಪ್ರಶ್ನೆ ಶಿಕ್ಷಕರದ್ದಾಗಿದೆ. ಶಿಕ್ಷಕರ ದಿನಾಚರಣೆಯ ಕಾರ್ಯಕ್ರಮಗಳಲ್ಲಿ ಮುಂದಿನ ವರ್ಷದಲ್ಲಿ ಗುರುಭವನ ಕಾಮಗಾರಿ ಪೂರ್ಣಗೊಳಿಸಲು ಕ್ರಮವಹಿಸಲಾಗುವುದು ಎಂದು ಜನಪ್ರತಿನಿಧಿಗಳು ಭರವಸೆ ನೀಡುತ್ತಲೇ ಇದ್ದಾರೆ.


ಉದಯವಾಹಿನಿ ಚಿತ್ರ

ಆದರೆ ಐದು ವರ್ಷಗಳು ಕಳೆದರೂ ಭವನದ ಕಾಮಗಾರಿ ಮಾತ್ರ ಪೂರ್ಣವಾಗಿಲ್ಲ.

5 ಕೋಟಿ ವೆಚ್ಚದಲ್ಲಿ ಗುರುಭವನ ನಿರ್ಮಾಣಕ್ಕೆ ಯೋಜಿಸಲಾಗಿತ್ತು. ಶಿಕ್ಷಣ ಇಲಾಖೆಯಿಂದ 1 ಕೋಟಿ, ಜಿಲ್ಲಾಡಳಿತದಿಂದ 2 ಕೋಟಿ ಮಂಜೂರಾಗಿದೆ. ಉಳಿದ 2 ಕೋಟಿಯನ್ನು ಶಾಸಕರು, ಸಂಸದರು ಸೇರಿದಂತೆ ವಿವಿಧ ಅನುದಾನಗಳ ಮೂಲಕ ಭರಿಸಲು ಯೋಜಿಸಲಾಗಿತ್ತು. ಹಣವನ್ನು ಯಾವ ಮೂಲಗಳಿಂದ ತರಬಹುದು ಎಂದು ಶಿಕ್ಷಕರ ಸಂಘದ ಪದಾಧಿಕಾರಿಗಳು ಸಹ ರೂಪುರೇಷೆಗಳನ್ನು ಸಿದ್ಧ ಮಾಡಿಕೊಂಡಿದ್ದರು. ಈಗಾಗಲೇ ನಡೆದಿರುವ ಗುರುಭವನ ಕಾಮಗಾರಿಗೆ 2 ಕೋಟಿ ಬಿಡುಗಡೆಯಾಗಿದೆ.

**ಪ್ರಸಕ್ತ ವರ್ಷದ ಶಿಕ್ಷಕರ ದಿನಾಚರಣೆ ವೇಳೆಗಾದರೂ ಭವನದ ಕಾಮಗಾರಿ ಪೂರ್ಣಗೊಳಿಸಲು ಜಿಲ್ಲಾ ಉಸ್ತುವಾರಿ ಸಚಿವರು ಮತ್ತು ಶಾಸಕರು ಮನಸ್ಸು ಮಾಡಬೇಕು. ಜಿಲ್ಲೆಯಲ್ಲಿ 15 ಸಾವಿರ ಶಿಕ್ಷಕರು ಇದ್ದಾರೆ. ಈ ಎಲ್ಲರ ಆಸೆಯೂ ಈಡೇರಿದಂತೆ ಆಗುತ್ತದೆ' ಎಂದು ಶಿಕ್ಷಣ ಇಲಾಖೆ ಸಿಬ್ಬಂದಿಯೊಬ್ಬರು ತಿಳಿಸಿದರು.**

ಶಿಕ್ಷಣ ಇಲಾಖೆಯಿಂದ 50 ಲಕ್ಷ ಮತ್ತು ಜಿಲ್ಲಾಡಳಿತದಿಂದ 50 ಲಕ್ಷ ಬಿಡುಗಡೆಗೆ ಬಾಕಿ ಇದೆ. ಜೊತೆಗೆ ಮತ್ತಷ್ಟು ಅನುದಾನವೂ ಕಾಮಗಾರಿ ಪೂರ್ಣಕ್ಕೆ ಅಗತ್ಯವಿದೆ. ಶಂಕುಸ್ಥಾಪನೆಯ ವೇಳೆ ಇದ್ದ ಸಲಕರಣೆಗಳು, ಉತ್ಪನ್ನಗಳ ವೆಚ್ಚ ಮತ್ತು ಈಗಿನ ವೆಚ್ಚಕ್ಕೂ ವ್ಯತ್ಯಾಸವಿದೆ.

ಈ ಕಾರಣದಿಂದ ಕಾಮಗಾರಿ ಪೂರ್ಣಕ್ಕೆ ಮತ್ತಷ್ಟು ಹೆಚ್ಚುವರಿ ಹಣದ ಅಗತ್ಯವೂ ಇದೆ. ಆರಂಭದಲ್ಲಿ ರೂಪಿಸಿರುವ ಡಿಪಿಆರ್ ಮೊತ್ತಕ್ಕೂ ಈಗಿನ ಕಾಮಗಾರಿಗೂ ಬಹಳಷ್ಟು ವ್ಯತ್ಯಾಸಗಳು ಆಗಲಿವೆ. ಜಿಲ್ಲಾ ಕೇಂದ್ರದಲ್ಲಿ ಶಿಕ್ಷಕರ ವಿವಿಧ ತರಬೇತಿಗಳು, ಕಾರ್ಯಾಗಾರ, ಸಭೆ, ಸಂವಾದಗಳು, ಮಕ್ಕಳಿಗೆ ವಿವಿಧ ಸಾಂಸ್ಕೃತಿಕ, ಶೈಕ್ಷಣಿಕ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಬೇಕಾಗಿರುತ್ತದೆ.

# ಪ್ರತಿಭಾ ಪುರಸ್ಕಾರ, ವಿದ್ಯಾರ್ಥಿ ವೇತನ

• **ಉದಯವಾಹಿನಿ, ಶ್ರೀನಿವಾಸಪುರ**

ಗಾಂಡ್ಲಹಳ್ಳಿ ಗ್ರಾಮದಲ್ಲಿ ಚೌಡಮ್ಮ ಹಿರಣ್ಯಗೌಡ ಆರೋಗ್ಯ ಮತ್ತು ಶಿಕ್ಷಣ ಟ್ರಸ್ಟ್‌ನಿಂದ ಪ್ರತಿಭಾ ಪುರಸ್ಕಾರ ವಿದ್ಯಾರ್ಥಿ ವೇತನ ವಿತರಣಾ ಕಾರ್ಯಕ್ರಮ ನಡೆಯಿತು.

ಜಿಲ್ಲೆಯ ಎಸ್‌ಎಸ್‌ಎಲ್‌ಸಿ ಪಿಯುಸಿಯಲ್ಲಿ ಹೆಚ್ಚು ಅಂಕ ಗಳಿಸಿರುವ 50 ವಿದ್ಯಾರ್ಥಿಗಳನ್ನು ಸತ್ಕರಿಸಲಾಯಿತು. ಅತಿ ಹೆಚ್ಚು ಅಂಕಗಳಿಸಿರುವ ಪ್ರಥಮ ಪಿಯುಸಿ, ದ್ವಿತೀಯ ಪಿಯುಸಿಯ 10 ವಿದ್ಯಾರ್ಥಿಗಳಿಗೆ ಎರಡು ವರ್ಷ ಪ್ರತಿ ತಿಂಗಳು 1 ಸಾವಿರ ವಿದ್ಯಾರ್ಥಿವೇತನವನ್ನು ನೀಡಲಾಗುವುದು ಎಂದು ಸಂಘಟಕರು ಹೇಳಿದರು.

ಚೌಡಮ್ಮರವರು 20 ಲಕ್ಷ ವೆಚ್ಚದ ಶ್ರೀ ಚಂದ್ರಮೌಳೇಶ್ವರ ಸಭಾಭವನವನ್ನು ಉದ್ಘಾಟಿಸಿದರು. ಕಾರ್ಯಕ್ರಮಕ್ಕೆ ಟ್ರಸ್ಟಿ ಹಾಗೂ ಹಿರಿಯ ವಕೀಲ ಕೆ.ವಿ.ಶಂಕರಪ್ಪ ಚಾಲನೆ ನೀಡಿ ಮಾತನಾಡಿದರು. 'ವಿದ್ಯಾವಂತರಾಗಿ ಉನ್ನತ ಹುದ್ದೆ ಅಲಂಕರಿಸದ ಮೇಲೆ ಕೇವಲ ತಮ್ಮ ಕುಟುಂಬದ ನಿರ್ವಹಣೆ ಮಾಡುವುದಲ್ಲ ಉನ್ನತ ಸ್ಥಾನಕ್ಕೆ ಕಾರಣವಾದ ಸಮಾಜಕ್ಕೂ ಕೊಡುಗೆ ನೀಡಬೇಕು. ಸೇವೆಯ ಮೂಲಕ ಋಣ ತೀರಿಸಬೇಕಾಗಿದೆ ಎಂದು ಹೇಳಿದರು.



**ಗ್ರಾಮೀಣ ವಿದ್ಯಾರ್ಥಿಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಟ್ರಸ್ಟ್ ಕೆಲಸ ಮಾಡುತ್ತಿದೆ. ಹಿರಣ್ಯಗೌಡರ ಕುಟುಂಬದವರು ಸಾಧಕರ ಬೆನ್ನು ತಟ್ಟುವ ಸಲುವಾಗಿ 18 ವರ್ಷದಿಂದಲೂ ಪ್ರತಿಭಾ ಪುರಸ್ಕಾರವನ್ನು ಹಮ್ಮಿಕೊಂಡು ಬರುತ್ತಿದ್ದಾರೆ' ಎಂದು ತಿಳಿಸಿದರು.**

**ನಿವೃತ್ತ ಐಎಎಸ್ ಅಧಿಕಾರಿ ಕೆ.ಎಚ್.ಶ್ರೀನಿವಾಸ್**

ಐಎಎಸ್ ಅಧಿಕಾರಿ ಕೆ.ಎಚ್.ಗೋವಿಂದರಾಜು, ಜೀವನದಲ್ಲಿ ಯಶಸ್ಸು ಗಳಿಸಬೇಕಾದರೆ ಛಲ ಮುಖ್ಯ ಕಲಿಕಾ ಸಮಯದಲ್ಲಿ ಗುರಿ ಹೊಂದಬೇಕು ಎಂದರು.

# ಉನ್ನತ ರಾಜಕೀಯ ಸ್ಥಾನ ಮೇಲ್ವರ್ಗಕ್ಕಷ್ಟೇ ಸೀಮಿತ

## ವಿದ್ಯಾರ್ಥಿಗಳಿಗೆ ಜಿಲ್ಲಾಮಟ್ಟದ ಪ್ರತಿಭಾ ಪುರಸ್ಕಾರ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮ

• **ಉದಯವಾಹಿನಿ, ರಾಮನಗರ**

ಪ್ರಧಾನಿ, ಹುದ್ದೆ ಸೇರಿದಂತೆ ಉನ್ನತ ರಾಜಕೀಯ ಸ್ಥಾನಮಾನಗಳು ಇಂದಿಗೂ ಮೇಲ್ವರ್ಗಕ್ಕೆ ಮಾತ್ರ ಸೀಮಿತವಾಗಿವೆ. ದೇಶಕ್ಕೆ ಸ್ವಾತಂತ್ರ್ಯ ಬಂದು 78 ವರ್ಷಗಳಾದರೂ ದಲಿತರು ಮತ್ತು ಶೂದ್ರರಿಗೆ ಉನ್ನತ ಸ್ಥಾನಗಳು ಸಿಗುತ್ತಿಲ್ಲ' ಎಂದು ಅಖಿಲ ಭಾರತ ಬಹುಜನ ಸಮಾಜ ಪಕ್ಷದ ರಾಜ್ಯಾಧ್ಯಕ್ಷ ಮಾರಸಂದ್ರ ಮುನಿಯಪ್ಪ ಬೇಸರ ವ್ಯಕ್ತಪಡಿಸಿದರು. ನಗರದ ಅಂಬೇಡ್ಕರ್ ಭವನದಲ್ಲಿ ಕನಕಪುರದ ಮಾತೆ ಸಾವಿತ್ರಿ ಬಾಪುಲೆ ಚಾರಿಟೇಬಲ್ ಟ್ರಸ್ಟ್ ಹಮ್ಮಿಕೊಂಡಿದ್ದ ಚಿತ್ರದುರ್ಗದ ಮಾದರ ಚನ್ನಯ್ಯ ಗುರುಪೀಠದ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಅವರಿಗೆ ಗುರುವಂದನೆ, ವಿದ್ಯಾರ್ಥಿಗಳಿಗೆ ಜಿಲ್ಲಾಮಟ್ಟದ ಪ್ರತಿಭಾ ಪುರಸ್ಕಾರ. ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಜನಸಂಖ್ಯೆಯಲ್ಲಿ ಕಡಿಮೆ ಇದ್ದರೂ ಮೇಲ್ವರ್ಗದವರು ಉನ್ನತಾಧಿಕಾರ ಅನುಭವಿಸುತ್ತಿದ್ದಾರೆ. ಈ ದೇಶವನ್ನು ಬಹುಸಂಖ್ಯಾತರು ಆಳಬೇಕೆಂಬ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಕನಸು ಇಂದಿಗೂ ನನಸಾಗಿತ್ತು.

ದಲಿತರು ಇನ್ನಾದರೂ ಎಚ್ಚೆತ್ತುಕೊಳ್ಳಬೇಕು. ಸಂವಿಧಾನದ ಸಂಪೂರ್ಣ ಲಾಭ ಅನ್ಯರ ಪಾಲಾಗುವುದನ್ನು ತಪ್ಪಿಸಬೇಕು' ಎಂದರು.


ಉದಯವಾಹಿನಿ ಚಿತ್ರ

**ಶೋಷಿತ ಸಮುದಾಯಗಳ ಅಭಿವೃದ್ಧಿ**

ಶಾಸಕ ಎಚ್.ಎ. ಇಕ್ಬಾಲ್ ಹುಸೇನ್ ಮಾತನಾಡಿ, ಶೋಷಿತ ಸಮುದಾಯಗಳ ಅಭಿವೃದ್ಧಿಗೆ ಶಿಕ್ಷಣವೊಂದೇ ಅಸ್ತ್ರ. ಆ ನಿಟ್ಟಿನಲ್ಲಿ ನಾಗೇಶ್ ಅವರು ಬಡ ವಿದ್ಯಾರ್ಥಿಗಳನ್ನು ಗುರುತಿಸಿ ಪ್ರತಿಭಾ ಪುರಸ್ಕಾರ ನೀಡುತ್ತಿರುವ ಶ್ಲಾಘನೀಯ. ಸಮುದಾಯದವರು ತಮ್ಮ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಒತ್ತು ನೀಡಬೇಕು' ಎಂದು ಸಲಹೆ ನೀಡಿದರು.

ಪ್ರಾಸ್ತಾವಿಕ ಮಾತುಗಳನ್ನಾಡಿದ ಟ್ರಸ್ಟ್ ಅಧ್ಯಕ್ಷ ಎಂ. ನಾಗೇಶ್ ಮಾತನಾಡಿ, 'ಶೋಷಿತ ಸಮುದಾಯಗಳಿಗೆ ಮತ್ತು ಹೆಣ್ಣು ಮಕ್ಕಳಿಗೆ ಶಿಕ್ಷಣ ನೀಡುವ ಮೂಲಕ ಜ್ಯೋತಿ ಬಾಪುಲೆ ಮತ್ತು ಸಾವಿತ್ರಿ ಬಾಪುಲೆ ದಂಪತಿ ಶಿಕ್ಷಣ ಕ್ರಾಂತಿ ಮಾಡಿದರು. ಅವರ ಹೆಸರಿನ ನಮ್ಮ ಟ್ರಸ್ಟ್ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸೇರಿದಂತೆ ವಿವಿಧ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಾ ಬರುತ್ತಿದೆ' ಎಂದರು. ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಅವರಿಗೆ ಪುಷ್ಪವೃಷ್ಟಿ ಮೂಲಕ ಗುರುವಂದನೆ ಸಲ್ಲಿಸಲಾಯಿತು. ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ ಮಾಡಲಾಯಿತು.

ಆದಿಚುಂಚನಗಿರಿ ಮಹಾಸಂಸ್ಥಾನ ರಾಮನಗರ ಶಾಖಾ ಮಠದ ಅನ್ನದಾನೇಶ್ವರನಾಥ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಕೆಎಎಸ್ ಅಧಿಕಾರಿ ಎನ್. ವೆಂಕಟರಾಜು, ಎಐಬಿಎಸ್‌ಪಿ ರಾಜ್ಯ ಪ್ರಧಾನಕಾರ್ಯದರ್ಶಿ ಅಂದಾನಪ್ಪ, ರಮೇಶ್, ನರಸಿಂಹಯ್ಯ, ಪಾರ್ವತಮ್ಮ, ಮಹದೇವ್, ವಿ.ಸ್ವಾಮಿ, ಮುರುಗೇಶ್, ಬಳಗೆರೆ ಭೈರಾಜು, ನಮನ ಚಂದ್ರು, ಶ್ರೀನಿವಾಸ ರಾವ್, ನಾರಾಯಣಪ್ಪ, ಮೆಳೇಕೋಟೆ ಶಿವಣ್ಣ ಹಾಗೂ ಇತರರು ಇದ್ದರು.

**ಕಾಂಗ್ರೆಸ್ ಬಿಜೆಪಿ ಸೇರಿದಂತೆ ಯಾವ ಪಕ್ಷದ ಸರ್ಕಾರವೂ ಸಂವಿಧಾನದವನ್ನು ಸಮರ್ಪಕವಾಗಿ ಅನುಷ್ಠಾನಕ್ಕೆ ತರಲಿಲ್ಲ. ತುಳಿತಕ್ಕೆ ಒಳಗಾದ ದಲಿತರಿಗೆ ಸಂವಿಧಾನದ ಆಶಯದಂತೆ ಇಂದಿಗೂ ಸಾಮಾಜಿಕ ನ್ಯಾಯ ಸಿಕ್ಕಿಲ್ಲ**

**– ನಾರಾಯಣಸ್ವಾಮಿ, ಮಾಜಿ ಕೇಂದ್ರ ಸಚಿವ**

### ಸಂಘಟನೆಗಳು ಶಿಕ್ಷಣಕ್ಕೆ ಸ್ಫೂರ್ತಿ ತುಂಬಲಿ

**ಸಂಘಟನೆಗಳು ಸಮುದಾಯಕ್ಕೆ ಅನ್ಯಾಯವಾದಾಗ ದನಿ ಎತ್ತಿ ಹೋರಾಡುವ ಜೊತೆಗೆ ಸಮುದಾಯದ ಮಕ್ಕಳ ಶಿಕ್ಷಣಕ್ಕೆ ಸ್ಫೂರ್ತಿ ತುಂಬಬೇಕು. ವಿದ್ಯಾರ್ಥಿಗಳ ಉನ್ನತ ಶಿಕ್ಷಣಕ್ಕೆ ಸಹಕಾರ ನೀಡಬೇಕು. ಇಂತಹ ಪ್ರತಿಭಾ ಪುರಸ್ಕಾರ ಕಾರ್ಯಕ್ರಮಗಳ ಮೂಲಕ ಶೈಕ್ಷಣಿಕ ಸಾಧನೆಗೆ ಪ್ರೋತ್ಸಾಹಿಸಬೇಕು. ಶಿಕ್ಷಣದಲ್ಲಿ ಪ್ರಗತಿ ಸಾಧಿಸದ ಹೊರತು ಸಮುದಾಯದ ಪ್ರಗತಿ ಅಸಾಧ್ಯ. ಮಾತೆ ಸಾವಿತ್ರಿಬಾ ಫುಲೆ ಅವರು ಹಿಂದಿನ ಕಠಿಣ ಪರಿಸ್ಥಿತಿಯಲ್ಲಿ ಶಿಕ್ಷಣ ಪಡೆದು ಶೋಷಿತರಿಗೆ ಮತ್ತು ಹೆಣ್ಣು ಮಕ್ಕಳಿಗೆ ಶಿಕ್ಷಣ ನೀಡುವ ಮೂಲಕ ನಿಜ ಸರಸ್ವತಿಯಾದರು. ಅಂತಹವರ ಸ್ಫೂರ್ತಿಗಾಥೆಯನ್ನು ಮಕ್ಕಳಿಗೆ ತಿಳಿಸುವ ಕೆಲಸವಾಗಬೇಕು' ಎಂದು ಬಸವಮೂರ್ತಿ ಮಾದರ ಚನ್ನಯ್ಯ ಸ್ವಾಮೀಜಿ ಆಶೀರ್ವಚನ ನೀಡಿದರು.**

# ಮಿನಿ ನ್ಯೂಸ್

## ಕಾರ್ಗಿಲ್ ವಿಜಯೋತ್ಸವ

• **ಉದಯವಾಹಿನಿ, ಬಾಗೇಪಲ್ಲಿ**

ಪಟ್ಟಣದ ಡಿಸಿಸಿ ಬ್ಯಾಂಕ್ ಮುಂದೆ ಮಾಜಿ ಯೋಧರು, ಕಾರ್ಗಿಲ್ ಯೋಧ ದಿವಂಗತ ರಫೀಕ್‌ವುಲ್ಲಾ ಕುಟುಂಬಸ್ಥರು, ಸಾರ್ವಜನಿಕರು ಕಾರ್ಗಿಲ್ ವಿಜಯೋತ್ಸವ ಆಚರಿಸಿದರು. ಕಾರ್ಗಿಲ್ ಯುದ್ಧದಲ್ಲಿ ಹೋರಾಡಿ ತನ್ನ ಸಹ ಯೋಧರನ್ನು ರಕ್ಷಣೆ ಮಾಡಿದ ದಿ. ರಫೀಕ್‌ವುಲ್ಲಾ ಅವರ ಭಾವಚಿತ್ರಕ್ಕೆ ಗಣ್ಯರು ಪುಷ್ಪನಮನ ಸಲ್ಲಿಸಿದರು. ಕಾರ್ಗಿಲ್ ವಿಜಯ ದಿನದ ಅಂಗವಾಗಿ ಸಾರ್ವಜನಿಕರಿಗೆ ಸಿಹಿ ಹಂಚಿದರು. ಮಾಜಿ ಯೋಧರ ತಾಲ್ಲೂಕು ಸಂಘದ ಅಧ್ಯಕ್ಷ ಅಮರನಾಥಬಾಬು ಮಾತನಾಡಿ ಕಾರ್ಗಿಲ್ ವೀರ ಮರಣ ಹೊಂದಿದ ಯೋಧ ಬಿ.ಎ. ರಫೀವುಲ್ಲಾ ಅವರ ದೇಶ ಸೇವೆ ಸ್ಮರಣೀಯ. ಡಿಸಿಸಿ ಬ್ಯಾಂಕ್ ರಸ್ತೆಗೆ ಪುರಸಭೆಯವರು ದಿ. ಮಾಜಿ ಯೋಧ ರಫೀಕ್‌ವುಲ್ಲಾ ಅವರ ಸ್ಮರಣಾರ್ಥವಾಗಿ ರಫೀಕ್‌ವುಲ್ಲಾ ರಸ್ತೆ ಎಂದು ಅಧಿಕೃತವಾಗಿ ಹೆಸರು ನಾಮಕರಣ ಮಾಡಬೇಕು. ರಫೀಕ್‌ವುಲ್ಲಾ ಅವರ ಕುಟುಂಬಕ್ಕೆ ಉಚಿತವಾಗಿ ನಿವೇಶನ, ಮನೆ ನಿರ್ಮಿಸಬೇಕು ಎಂದು ಮನವಿ ಮಾಡಿದರು.

ಅಪ್ರತಿಮ ಶೌರ್ಯ, ದೇಶಭಕ್ತಿಯ ಸ್ಫೂರ್ತಿಯೊಂದಿಗೆ ದೇಶದ ಶತ್ರುಗಳನ್ನು ಸದೆಬಡಿದು, ಭಾರತಾಂಬೆಯ ಘನತೆ ಗೌರವವನ್ನು ಮುಗಿಲೆತ್ತರಕ್ಕೆ ಹಾರಿಸಿ ಅಮರರಾದ ಕಾರ್ಗಿಲ್ ಯುದ್ಧದ ವೀರ ಹುತಾತ್ಮ ಯೋಧರಿಗೆ ಕಾರ್ಗಿಲ್ ವಿಜಯ ದಿನದ ಅಂಗವಾಗಿ ಕಾರ್ಗಿಲ್ ವಿಜಯ ದಿನವನ್ನಾಗಿ ಆಚರಿಸಲಾಗಿದೆ ಎಂದು ಗಣ್ಯರು ತಿಳಿಸಿದರು.

## ನಾಮಫಲಕ ಮರು ಸ್ಥಾಪಿಸಲು ಆಗ್ರಹ

• **ಉದಯವಾಹಿನಿ, ಕೋಲಾರ**

ನಗರದ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಬಾಲಕರ ಸರ್ಕಾರಿ ಕಾಲೇಜು ಘನತೆ, ಗೌರವ ಹೆಚ್ಚಿಸಿದ ನಿವೃತ್ತ ಪ್ರಾಂಶುಪಾಲ ದಿವಂಗತ ರಾಮಕೃಷ್ಣ ಉಡುಪ ಅವರ ನಾಮಫಲಕವನ್ನು ಕಾಲೇಜಿನ ಮುಂಭಾಗದಲ್ಲಿ ಮರು ಅನಾವರಣಗೊಳಿಸಲು ಕಾಲೇಜಿನ ಹಳೆಯ ವಿದ್ಯಾರ್ಥಿಗಳು ಆಗ್ರಹಿಸಿದ್ದಾರೆ. ಈ ಸಂಬಂಧ ಹಳೆ ವಿದ್ಯಾರ್ಥಿ, ಮನ್ವಂತರ ಪ್ರಕಾಶನದ ಅಧ್ಯಕ್ಷ ಪಾ.ಶ್ರೀ.ಅನಂತರಾಮ ಜಿಲ್ಲಾಧಿಕಾರಿ, ನಗರಸಭೆಯ ಅಧ್ಯಕ್ಷೆ, ಪೌರಾಯುಕ್ತ ಕಾಲೇಜಿನ ಪ್ರಾಂಶುಪಾಲರಿಗೆ ಮನವಿ ಮಾಡಿದ್ದಾರೆ.

ಸರ್ಕಾರಿ ಕಾಲೇಜಿನಲ್ಲಿ 1964 ರಿಂದ 1974ರವರೆಗೆ 11 ವರ್ಷ ಪ್ರಾಂಶುಪಾಲರಾಗಿ ಕೆಲಸ ಮಾಡಿದ್ದರು. ಸಾವಿರಾರು ವಿದ್ಯಾರ್ಥಿಗಳ ಪ್ರಗತಿಗೆ, ಏಳಿಗೆಗೆ ಶ್ರಮಿಸಿ ವಿದ್ಯಾರ್ಥಿ ಸ್ನೇಹಿ ಪ್ರಾಂಶುಪಾಲರೆಂದು ಹೆಗ್ಗಳಿಕೆ ಹೊಂದಿದ್ದರು' ಎಂದಿದ್ದಾರೆ. ಅವರ ಸೇವೆ ಸ್ಮರಿಸಬೇಕೆಂಬ ಉದ್ದೇಶದಿಂದ ನಗರದ ಜನರು, ವಿದ್ಯಾರ್ಥಿಗಳು ಹಾಗೂ ಗಣ್ಯರ ಒತ್ತಾಸೆಯ ಮೇರೆಗೆ ಅಂದಿನ ಕೋಲಾರ ಸ್ಥಳೀಯ ಸಂಸ್ಥೆಯ ಆಡಳಿತ ವರ್ಗ 1974–75ನೇ ಸಾಲಿನಲ್ಲಿ ಕಾಲೇಜು ರಸ್ತೆಗೆ ರಾಮಕೃಷ್ಣ ಉಡುಪ ಹೆಸರಿಡಲು ನಿರ್ಣಯ ಕೈಗೊಂಡಿತ್ತು. ಕಲ್ಲಿನ ಮೇಲೆ ಉಡುಪ ರಸ್ತೆ ಎಂದು ಕೆತ್ತನೆ ಮಾಡಿಸಿ ಫಲಕವನ್ನು ಅನಾವರಣಗೊಳಿಸಿತ್ತು. ಆದರೆ, ಕಾಲೇಜಿನ ಮುಂಭಾಗದ ರಸ್ತೆ ವಿಸ್ತರಣೆ, ಪಾರಂಪರಿಕ ರಸ್ತೆಯಾಗಿ ಅಭಿವೃದ್ಧಿಪಡಿಸುವ ಉದ್ದೇಶದಿಂದ ಕಾಮಗಾರಿ ಕೈಗೊಂಡ ಸಂದರ್ಭದಲ್ಲಿ ಸಂಬಂಧಪಟ್ಟ ಇಲಾಖೆಯವರು ಅಥವಾ ಗುತ್ತಿಗೆದಾರು ಅವರ ಹೆಸರಿನ ಫಲಕವನ್ನು ತೆರವುಗೊಳಿಸಿದ್ದಾರೆ' ಎಂದು ಹೇಳಿದ್ದಾರೆ.

## ಪಟ್ಟಣದ ಮುಖ್ಯ ವೃತ್ತಗಳಲ್ಲಿ ಸಂಚಾರ ದೀಪದ ವ್ಯವಸ್ಥೆಯೇ ಇಲ್ಲ

• **ಉದಯವಾಹಿನಿ, ಮಾಲೂರು**

ಪಟ್ಟಣದಲ್ಲಿ ದಿನದಿಂದ ದಿನಕ್ಕೆ ಜನದಟ್ಟಣೆ ಹೆಚ್ಚುತ್ತಿದೆ. ಇದರೊಂದಿಗೆ ವಾಹನಗಳ ಸಂಖ್ಯೆ ಏರಿಕೆಯಾಗುತ್ತಿದೆ. ಪೊಲೀಸ್ ಇಲಾಖೆ ನಿರ್ಲಕ್ಷ್ಯದಿಂದ ಸುಗಮ ಸಂಚಾರಕ್ಕೆ ತೊಂದರೆ ಆಗಿದೆ. ಪಟ್ಟಣದ ಮುಖ್ಯ ವೃತ್ತಗಳಲ್ಲಿ ಸಂಚಾರ ದೀಪದ ವ್ಯವಸ್ಥೆ ಇಲ್ಲ. ಮಾರಿಕಾಂಬ ಸರ್ಕಲ್‌ನಲ್ಲಿರುವ ಏಕೈಕ ಸಂಚಾರ ವ್ಯವಸ್ಥೆ ಕೆಟ್ಟು ನಿಂತಿದೆ. ಸಂಚಾರ ನಿಯಮ ಪಾಲನೆ ಇಲ್ಲದೆ ಎಲ್ಲೆಂದರಲ್ಲಿ ವಾಹನಗಳನ್ನು ನಿಲುಗಡೆ ಮಾಡುವುದರಿಂದ ಪಾದಚಾರಿಗಳು ಪರದಾಡುವಂತಾಗಿದೆ. ಮಾರಿಕಾಂಬ ಸರ್ಕಲ್ ಬಳಿ ಖಾಸಗಿ ಕಂಪನಿಯಿಂದ ರೂ.10ಲಕ್ಷ ವೆಚ್ಚದಲ್ಲಿ ಸಂಚಾರ ದೀಪ ಅಳವಡಿಸಲಾಗಿದೆ. ಆದರೆ, ಕೆಲವು ದಿನಗಳು ಮಾತ್ರ ಕಾರ್ಯ ನಿರ್ವಹಿಸಿ ನಂತರ ಹಾಳಾಗಿದೆ.

**ವಾಹನ ನಿಲುಗಡೆ:** ಸೂಕ್ತ ಜಾಗದಲ್ಲಿ ವಾಹನ ನಿಲ್ಲಿಸಲು ವ್ಯವಸ್ಥೆ ಇಲ್ಲ. ಮುಖ್ಯ ರಸ್ತೆಗಳ ಪಕ್ಕ ತಿರುವುಗಳಲ್ಲಿ ವಾಹನಗಳನ್ನು ನಿಲ್ಲಿಸುತ್ತಿರುವುದರಿಂದ ಸಂಚಾರ ವ್ಯವಸ್ಥೆಗೆ ತೊಂದರೆ ಆಗಿದೆ. ಪಾದಚಾರಿ ಮಾರ್ಗದಲ್ಲಿ ಅಕ್ರಮವಾಗಿ ಹೋಟಲ್, ಅಂಗಡಿಗಳು ತಲೆ ಎತ್ತುತ್ತಿದ್ದರೂ ಪುರಸಭೆ ತಲೆ ಕೆಡಿಸಿಕೊಳ್ಳುತ್ತಿಲ್ಲ. ಒಂದು ಕಡೆ ರಸ್ತೆ ಒತ್ತುವರಿಯಾಗಿ ಅಂಗಡಿಗಳು ಆರಂಭವಾಗುತ್ತಿವೆ.

**ಅಪ್ರಾಪ್ತರ ವಾಹನ ಚಾಲನೆ:** ಪಟ್ಟಣದಲ್ಲಿ 18 ವರ್ಷಕ್ಕಿಂತ ಕೆಳಗಿನ ಅಪ್ರಾಪ್ತರು ವಾಹನ ಚಾಲನೆ ಮಾಡುತ್ತಿದ್ದಾರೆ. ಅತಿ ವೇಗದ ಚಾಲನೆ ಮಾಡುವವರ ಸಂಖ್ಯೆ ಹೆಚ್ಚಾಗಿದೆ.

**ಸಂಚಾರ ಠಾಣೆ ಆರಂಭಿಸಿ:** ಪಟ್ಟಣ ಪೊಲೀಸ್ ಠಾಣೆ ವ್ಯಾಪ್ತಿ ಹೆಚ್ಚಾಗಿದೆ. ಅಲ್ಲದೆ, ಸಿಬ್ಬಂದಿ ಕೊರತೆಯೂ ಇದೆ. ಕೈಗಾರಿಕಾ ಪ್ರಾಂಗಣ ಸಂಖ್ಯೆ ಏರುತ್ತಿದೆ. ಹೆಚ್ಚಿನ ಸಿಬ್ಬಂದಿ ಅಗತ್ಯವಿದ್ದು, ಪ್ರತ್ಯೇಕ ಸಂಚಾರ ಪೊಲೀಸ್ ಠಾಣೆ ಪ್ರಾರಂಭಿಸಬೇಕೆಂಬುದು ಜನರ ಒತ್ತಾಯ.

## ಹಳೆ ಹಂಪಾಪುರ ಗ್ರಾಮದ ಜಮೀನು ಜಲಾವೃತ

• **ಉದಯವಾಹಿನಿ, ಕೊಳ್ಳೇಗಾಲ**

ತಾಲ್ಲೂಕಿನ ಹಳೇ ಹಂಪಾಪುರ ಗ್ರಾಮದ ಜಮೀನುಗಳು ನೀರಿನಿಂದ ಜಲಾವೃತವಾಗಿವೆ. ಕಳೆದ ತಿಂಗಳಿನಿಂದ ಕಾವೇರಿ ಜಲಾನಯನ ಪ್ರದೇಶಗಳಲ್ಲಿ ನಿರಂತರ ಮಳೆಯಾಗುತ್ತಿದ್ದು, ಕಾವೇರಿ ನದಿ ಉಕ್ಕಿ ಹರಿಯುತ್ತಿರುವುದರಿಂದ ಜನರಲ್ಲಿ ಆತಂಕ ಮನೆ ಮಾಡಿದೆ.

ಸತತವಾಗಿ ಪ್ರವಾಹ ಭೀತಿ ಎದುರಿಸುತ್ತಿರುವ ಈ ಗ್ರಾಮಗಳ ಜನ ಈ ಬಾರಿಯು ಪ್ರವಾಹ ಭೀತಿ ಎದುರಿಸುವಂತಾಗಿದೆ. ಮಲೆನಾಡಿನ ಜಿಲ್ಲೆಗಳಲ್ಲಿ ವರುಣ ನಿರಂತರ ಅರ್ಭಟಿಸುತ್ತಿರುವುದರಿಂದ ಕೆಆರ್ ಎಸ್ ಜಲಾಶಯಕ್ಕೆ ನೀರು ನಿರಂತರ ಹರಿದು ಬರುತ್ತಿದೆ. ಕಬಿನಿ, ಕೆಆರ್‌ಎಸ್ ಅಣೆಕಟ್ಟೆಗಳಿಂದ 1.25 ಲಕ್ಷ ಕ್ಯುಸೆಕ್ ಅಧಿಕ ಪ್ರಮಾಣದಲ್ಲಿ ನದಿಗಳಿಗೆ ನೀರು ಹರಿದು ಬರುತ್ತಿದೆ. ಇದರಿಂದ ಕಾವೇರಿ ನದಿ ಉಕ್ಕಿ ಹರಿಯುತ್ತಿದೆ. ಮುಳ್ಳೂರು, ಹಳೇ ಹಂಪಾಪುರ, ದಾಸನಪುರ, ಹಳೇ ಅಣಗಳ್ಳಿ, ಹರಳೆ, ಯಡಕುರಿಯಾ ಗ್ರಾಮಗಳ ಜನ ಈ ಬಾರಿಯು ಮಳುಗಡೆಯ ಭೀತಿ ಎದುರಿಸುತ್ತಿದ್ದಾರೆ. ಕಬಿನಿ ಹಾಗೂ ಕಾವೇರಿ ನದಿಗಳು ಟಿ.ನರಸೀಪುರದ ಬಳಿ ಒಂದಾಗುತ್ತವೆ. ಇದರಿಂದ ಮುಂದೆ ಸಾಗುವ ಕಾವೇರಿ ನದಿ ಅಪಾಯದ ಮಟ್ಟ ಮೀರಿ ಹರಿಯುತ್ತದೆ. ಕೆಳಭಾಗದಲ್ಲಿರುವ ತಾಲ್ಲೂಕಿನ ಕೆಲವು ನದಿ ಪಾತ್ರದ ಜನ ಪ್ರತಿ ವರ್ಷ ಪ್ರವಾಹ ಭೀತಿ ಎದುರಿಸುವಂತಾಗಿದೆ. ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ನದಿಗಳಿಗೆ ನೀರನ್ನು ಹರಿ ಬಿಡುವ ಸಾಧ್ಯತೆ ಇರುವುದರಿಂದ, ನದಿಯಲ್ಲಿ ಪ್ರವಾಹ ಹೆಚ್ಚಳವಾಗಿ, ಯಾವುದೇ ಕ್ಷಣದಲ್ಲಾದರೂ ಅಪಾಯದ ಮಟ್ಟ ಮೀರಬಹುದು ಎಂದು ಜನ ಆತಂಕಕ್ಕೊಳಗಾಗಿದ್ದಾರೆ.

ಅಂತರಾಳದಿಂದ... EDITORIAL

# ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ: ಸುಪ್ರೀಂ ಮಾರ್ಗಸೂಚಿ ಸ್ವಾಗತಾರ್ಹ

ಶಿಕ್ಷಣ ಸಂಸ್ಥೆಗಳು ಹಾಗೂ ಕೋಚಿಂಗ್ ಸೆಂಟರ್‌ಗಳಲ್ಲಿ ವಿದ್ಯಾರ್ಥಿಗಳ ಆತ್ಮಹತ್ಯೆ ತಡೆಗಟ್ಟಲು ಅಗತ್ಯವಾದ ಸಮರ್ಪಕ ಕಾನೂನು ಮತ್ತು ನಿಯಂತ್ರಣ ವ್ಯವಸ್ಥೆ ಇಲ್ಲವೆಂದು ಸುಪ್ರೀಂ ಕೋರ್ಟ್ ಹೇಳಿದೆ. ಈ ಮೂಲಕ, ಸ್ಪರ್ಧಾತ್ಮಕ ಶಿಕ್ಷಣದ ಹೆಸರಿನಲ್ಲಿ ವಿದ್ಯಾರ್ಥಿಗಳ ಮೇಲೆ ಅತೀವ ಒತ್ತಡ ಹೇರಲಾಗುತ್ತಿದೆ ಎಂದು ಧ್ವನಿ ಎತ್ತುತ್ತಲೇ ಇರುವ ಪ್ರಜ್ಞಾವಂತರ ಅಭಿಪ್ರಾಯಕ್ಕೆ ಬಲ ಬಂದಂತಾಗಿದೆ. ವಿದ್ಯಾರ್ಥಿಗಳನ್ನು ಆತ್ಮಹತ್ಯೆ ನಿರ್ಧಾರಕ್ಕೆ ದೂಡುವಂತಹ ಮಾನಸಿಕ ಒತ್ತಡವನ್ನು ಗಂಭೀರವಾಗಿ ಪರಿಗಣಿಸಿರುವ ಸುಪ್ರೀಂ ಕೋರ್ಟ್, ದೇಶದ ಎಲ್ಲಾ ಭಾಗಗಳಿಗೆ ಅನ್ವಯವಾಗುವಂತೆ ಹದಿನೈದು ಅಂಶಗಳ ಮಾರ್ಗಸೂಚಿಯನ್ನು ಬಿಡುಗಡೆ ಮಾಡಿದೆ. ಈ ಎರಡೂ ಕಾರ್ಯಕ್ರಮಗಳ ಜೊತೆಗೆ ಆತ್ಮಹತ್ಯೆ ತಡೆ ರಾಷ್ಟ್ರೀಯ ಕಾರ್ಯತಂತ್ರದಲ್ಲಿ ಇರುವ ಅಂಶಗಳನ್ನೂ ಪರಿಗಣಿಸಿ, ಮಾನಸಿಕ ಆರೋಗ್ಯಕ್ಕೆ ಸಂಬಂಧಿಸಿದ ಏಕರೂಪದ ನೀತಿಯನ್ನು ಅಳವಡಿಸಿಕೊಳ್ಳುವಂತೆ ಶಿಕ್ಷಣ ಸಂಸ್ಥೆಗಳಿಗೆ ನ್ಯಾಯಪೀಠ ನಿರ್ದೇಶಿಸಿದೆ. ಪ್ರತಿವರ್ಷವೂ ಪರಿಷ್ಕಾರಗೊಳ್ಳಬೇಕಾದ ಈ ನೀತಿಯನ್ನು ಎಲ್ಲಾ ಶಿಕ್ಷಣ ಸಂಸ್ಥೆಗಳು ತಮ್ಮ ವೆಬ್‌ಸೈಟ್‌ಗಳಲ್ಲಿ ಸೂಚನಾ ಫಲಕಗಳಲ್ಲಿ ಸಾರ್ವಜನಿಕರಿಗೆ ಲಭ್ಯವಾಗುವಂತೆ ಪ್ರಕಟಿಸಬೇಕು ಎಂದೂ ಹೇಳಿದೆ. ಈ ಮಾರ್ಗಸೂಚಿಗಳ ಅನುಷ್ಠಾನಕ್ಕಾಗಿ ತೆಗೆದುಕೊಂಡಿರುವ ಕ್ರಮಗಳು ಮತ್ತು ಅದರ ಮೇಲ್ವಿಚಾರಣೆಗೆ ಮಾಡಿರುವ ವ್ಯವಸ್ಥೆಗಳಿಗೆ ಸಂಬಂಧಿಸಿದ ಪ್ರಮಾಣ ಪತ್ರವನ್ನು ತೊಂಬತ್ತು ದಿನಗಳ ಒಳಗೆ ಸಲ್ಲಿಸುವಂತೆಯೂ ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡಿದೆ.ನೂರು ಅಥವಾ ಅದಕ್ಕಿಂತ ಹೆಚ್ಚು ವಿದ್ಯಾರ್ಥಿಗಳಿರುವ ಎಲ್ಲಾ ಶಿಕ್ಷಣ ಸಂಸ್ಥೆಗಳು ಕನಿಷ್ಠ ಒಬ್ಬ ಮನಃಶಾಸ್ತ್ರಜ್ಞ, ಆಪ್ತ ಸಮಾಲೋಚಕ ಅಥವಾ ಮಕ್ಕಳ ಮತ್ತು ಹದಿಹರೆಯದವರ ಮಾನಸಿಕ ಆರೋಗ್ಯದ ಬಗ್ಗೆ ತಿಳಿವಳಿಕೆ ಹೊಂದಿರುವ ಸಮಾಜ ಸೇವಕನನ್ನು ಹೊಂದಿರಬೇಕು. ನೂರಕ್ಕೂ ಕಡಿಮೆ ವಿದ್ಯಾರ್ಥಿಗಳನ್ನು ಹೊಂದಿರುವ ಸಂಸ್ಥೆಗಳು ಮಾನಸಿಕ ಆರೋಗ್ಯ ವೃತ್ತಿಪರರೊಂದಿಗೆ ಸಂಪರ್ಕದಲ್ಲಿದ್ದು, ಅವರ ಸೇವೆ ಬಳಸಿಕೊಳ್ಳಬೇಕು. ಕೋಚಿಂಗ್ ಸೆಂಟರ್‌ಗಳು ಸೇರಿದಂತೆ ಎಲ್ಲಾ ಶಿಕ್ಷಣ ಸಂಸ್ಥೆಗಳು ಶೈಕ್ಷಣಿಕ ಸಾಧನೆ, ಅಂಕಗಳ ಆಧಾರದಲ್ಲಿ ವಿದ್ಯಾರ್ಥಿಗಳನ್ನು ತಂಡಗಳನ್ನಾಗಿ ವಿಂಗಡಿಸಿ, ಅವಮಾನಕ್ಕೆ ಗುರಿಪಡಿಸಬಾರದು. ಲೈಂಗಿಕ ದೌರ್ಜನ್ಯ, ಕಿರುಕುಳ, ರ್‍ಯಾಗಿಂಗ್ ಮತ್ತು ಜಾತಿ, ವರ್ಗ, ಲಿಂಗ, ಅಂಗವೈಕಲ್ಯ, ಧರ್ಮ ಅಥವಾ ಜನಾಂಗೀಯತೆಯ ಆಧಾರದ ಮೇಲೆ ನಡೆಯುವ ಶೋಷಣೆ, ತಾರತಮ್ಯವನ್ನು ತಡೆಗಟ್ಟಲು ಶಿಕ್ಷಣ ಸಂಸ್ಥೆಗಳು ದೃಢವಾದ, ಗೋಪ್ಯವಾದ ಮತ್ತು ಎಲ್ಲರಿಗೂ ಸುಲಭವಾಗಿ ಲಭ್ಯವಾಗುವ ಕಾರ್ಯವಿಧಾನಗಳನ್ನು ರೂಪಿಸಬೇಕು ಎನ್ನುವುದು ಸುಪ್ರೀಂ ಕೋರ್ಟ್ ಬಿಡುಗಡೆ ಮಾಡಿರುವ ಮಾರ್ಗಸೂಚಿಯಲ್ಲಿ ಸೇರಿವೆ. ಸಂಸ್ಥೆಯ ನಿರ್ಲಕ್ಷ್ಯದಿಂದ ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡರೆ, ಅದನ್ನು ಸಾಂಸ್ಥಿಕ ಅಪರಾಧವೆಂದು ಪರಿಗಣಿಸಲಾಗುತ್ತದೆ ಎಂದೂ ನ್ಯಾಯಪೀಠ ಎಚ್ಚರಿಸಿದೆ. ಮಕ್ಕಳನ್ನು ಮಾನಸಿಕವಾಗಿ ಸಬಲಗೊಳಿಸುವುದು ಹಾಗೂ ಮನೋವಿಕಾಸದೊಂದಿಗೆ ಸದೃಢ ವ್ಯಕ್ತಿತ್ವ ರೂಪಿಸುವುದು ಶಿಕ್ಷಣದ ಪ್ರಾಥಮಿಕ ಉದ್ದೇಶವಾಗಿದೆ. ಬದುಕಿನ ದುರ್ಬರ ಗಳಿಗೆಗಳನ್ನು ಎದುರಿಸಲು ಅಗತ್ಯವಾದ ಮನೋಬಲ ಶಾಲಾ- ಕಾಲೇಜುಗಳ ಮೂಲಕ ವಿದ್ಯಾರ್ಥಿಗಳಿಗೆ ದೊರೆಯಬೇಕು. ದುರದೃಷ್ಟವಶಾತ್, ಇದಕ್ಕೆ ವಿರುದ್ಧವಾದ ಘಟನೆಗಳು ದೇಶದ ವಿವಿಧ ಭಾಗಗಳಲ್ಲಿ ನಿರಂತರವಾಗಿ ವರದಿಯಾಗುತ್ತಿವೆ. ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳ ಜೊತೆಗೆ, ಎಂಜಿನಿಯರಿಂಗ್ ಮತ್ತು ವೈದ್ಯಕೀಯ ಕೋರ್ಸ್‌ಗಳಿಗೆ ಪ್ರವೇಶ ದೊರಕಿಸಿಕೊಡುವ ಸಿಇಟಿ- ನೀಟ್ ಪರೀಕ್ಷೆಗಳು ವಿದ್ಯಾರ್ಥಿಗಳ ಮೇಲೆ ಅಪಾರ ಒತ್ತಡ ಸೃಷ್ಟಿಸಿವೆ. ಕಾಲೇಜು ಹಾಗೂ ಕೋಚಿಂಗ್ ಕೇಂದ್ರಗಳ ನಡುವಿನ ವ್ಯತ್ಯಾಸ ತೆಳುವಾಗುತ್ತಿದೆ. ಕೋಚಿಂಗ್ ಕೇಂದ್ರಗಳ ಕಾರ್ಖಾನೆ ಎಂದೇ ಪ್ರಸಿದ್ಧವಾದ ರಾಜಸ್ಥಾನದ ಕೋಟಾ, ಇತ್ತೀಚಿನ ವರ್ಷಗಳಲ್ಲಿ ವಿದ್ಯಾರ್ಥಿಗಳ ಆತ್ಮಹತ್ಯೆಯ ಕಾರಣದಿಂದ ಆಗಾಗ ಸುದ್ದಿಯಲ್ಲಿರುತ್ತದೆ. ಶೈಕ್ಷಣಿಕ ಸಂಸ್ಥೆಗಳು ಹಾಗೂ ಕೋಚಿಂಗ್ ಕೇಂದ್ರಗಳಲ್ಲಿ, ವಿದ್ಯಾರ್ಥಿಗಳ ಜೀವಕ್ಕೆ ಗಾಸಿ ಆಗಬಹುದಾದ ಒತ್ತಡದ ಪರಿಸ್ಥಿತಿ ತಿಳಿಗೊಳ್ಳಲು ಸುಪ್ರೀಂ ಕೋರ್ಟ್ ನಿರ್ದೇಶನವು ಅವಕಾಶ ಕಲ್ಪಿಸಬೇಕು. ಮಾನಸಿಕ ಆರೋಗ್ಯವು ಬದುಕುವ ಹಕ್ಕಿನ ಅಂತರ್ಗತ ಭಾಗ ಎನ್ನುವ ಸುಪ್ರೀಂ ಕೋರ್ಟ್ ಮಾತಿಗೆ ವಿದ್ಯಾಸಂಸ್ಥೆಗಳು ಕಿವಿಗೊಡಬೇಕು.



**ಸಂಬಂಧಪಟ್ಟ ಪ್ರಾಧಿಕಾರವು ಸೂಕ್ತ ಕಾನೂನು ಮತ್ತು ನಿಯಂತ್ರಣ ಕ್ರಮಗಳನ್ನು ಜಾರಿಗೊಳಿಸುವವರೆಗೂ ತಾನು ಹೊರಡಿಸಿರುವ ಮಾರ್ಗಸೂಚಿಗಳು ಜಾರಿಯಲ್ಲಿರಲಿವೆ ಎಂದು ಸುಪ್ರೀಂ ಕೋರ್ಟ್‌ನ ವಿಭಾಗೀಯ ಪೀಠ ಹೇಳಿದೆ. ಕೋವಿಡ್-19ರ ಸಮಯದಲ್ಲಿ ಹಾಗೂ ಆ ಬಳಿಕ ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ ಮತ್ತು ಯೋಗಕ್ಷೇಮಕ್ಕಾಗಿ ಶಿಕ್ಷಣ ಸಚಿವಾಲಯವು 'ಮನೋದರ್ಪಣ' ಕಾರ್ಯಕ್ರಮ ಆರಂಭಿಸಿತ್ತು. ಶಾಲಾ ವಿದ್ಯಾರ್ಥಿಗಳ ಆತ್ಮಹತ್ಯೆಯನ್ನು ತಡೆಗಟ್ಟುವ ಉದ್ದೇಶದಿಂದ 2023ರಲ್ಲಿ 'ಉಮ್ಮಿದ್' ಕಾರ್ಯಕ್ರಮ ಜಾರಿಗೊಂಡಿತ್ತು.**

---




• ಹಿಂದಿನ ಸಂಚಿಕೆಯಿಂದ

## 106ನೆಯ ಅಧ್ಯಾಯ

ದಶರಥರಾಯನು ಕೊಟ್ಟ ಮಾತಿಗೆ ತಪ್ಪಬಾರದೆಂದು ಸತ್ಯಪಾಲನೆಗಾಗಿ ಎರಡು ವರಗಳನ್ನೂ ಕೊಟ್ಟು ನನ್ನನ್ನು ವನಕ್ಕೆ ಕಳುಹಿಸಲು ನಾನು ಸೀತಾಲಕ್ಷ್ಮಣ ಸಮೇತನಾಗಿ ವನಕ್ಕೆ ಬಂದೆನು. ನೀನು ನಮ್ಮ ತಂದೆಯ ಮಾತನ್ನು ಮೀರದೆ ರಾಜ್ಯಪರಿಪಾಲನವನ್ನು ಮಾಡು.

ನೀನು ಪಟ್ಟಾಭಿಷೇಕವನ್ನು ಮಾಡಿಕೊಂಡು ದಶರಥರಾಯನು ಕೈಕೇಯಾದೇವಿಗೆ ಕೊಟ್ಟ ಮಾತನ್ನು ಸಲ್ಲಿಸಿ ಆತನಿಗೆ ಕೀರ್ತಿಯನ್ನುಂಟುಮಾಡಿ ನಿನ್ನ ತಾಯಿಯಾದ ಕೈಕೇಯಾದೇವಿಗೂ ಸಂತೋಷವನ್ನುಂಟುಮಾಡು. ಲೋಕದಲ್ಲಿ ಸತ್ಪುತ್ರನಾದವನು ತಾಯಿತಂದೆಗಳ ಮಾತನ್ನು ಪರಿಪಾಲಿಸಿ ಅವರ ಋಣವನ್ನು ತೀರಿಸಿ ಅವರಿಗೆ ದೋಷವು ಬಾರದಂತೆ ರಕ್ಷಿಸಬೇಕೆಂದು ವೇದವಾಕ್ಯ ವುಂಟು. ಗಯಾಕ್ಷೇತ್ರಕ್ಕೆ ಹೋಗಿ ಪಿತೃಗಳಿಗೆ ಪಿಂಡವನ್ನಿಕ್ಕಿ ಅವರಿಗೆ ನರಕವಿಲ್ಲದಂತೆ ರಕ್ಷಿಸುವವನೇ ಸತ್ಪುತ್ರನೆಂದು ವೇದಗಳು ಸಾರುತ್ತಿವೆ. ಗುಣವಂತರಾದ ಬಹುಮಂದಿ ಮಕ್ಕಳನ್ನು ಪಡೆದರೆ ಅವರಲ್ಲಿ ಒಬ್ಬನಾದರೂ ಗಯಾಕ್ಷೇತ್ರಕ್ಕೆ ಹೋಗಿ ಪಿತೃಗಳ ಋಣವನ್ನು ತೀರಿಸುವನೆಂದು ರಾಜರ್ಷಿಗಳು ಅನೇಕ ಮಕ್ಕಳನ್ನು ಬಯಸುವರು. ಆದಕಾರಣ, ಭರತ್ನ ನಮ್ಮ ತಂದೆಯಾದ ದಶರಥರಾಯನಿಗೆ ನರಕವು ಪ್ರಾಪ್ತವಾಗದಂತೆ ಯತ್ನ ಮಾಡು. ಶೀಘ್ರದಲ್ಲಿ ಆಯೋಧ್ಯಾಪಟ್ಟಣಕ್ಕೆ ಹೋಗಿ ಶತ್ರುಘ್ನನನ್ನೂ ಬ್ರಾಹ್ಮಣರನ್ನೂ ಕೂಡಿಕೊಂಡು ನಿಖಿಲ ಪ್ರಜೆಗಳನ್ನೂ ಧರ್ಮದಿಂದ ರಕ್ಷಿಸು. ನಾನು ಸೀತಾಲಕ್ಷಣಸಮೇತನಾಗಿ ದಂಡಕಾರಣ್ಯಕ್ಕೆ ಹೋಗಿ ವನ್ಯಪ್ರಾಣಿಗಳಿಗೆ ಅಧಿಪತಿಯಾಗಿರುತ್ತೆನೆ. ಭರತ, ನೀನು ಅಯೋಧ್ಯಾಪಟ್ಟಣಕ್ಕೆ ಹೋಗಿ ಶ್ವೇತಚ್ಛತ್ರದ ನೆಳಲಿನಲ್ಲಿ ರಾಜ್ಯ ಪರಿಪಾಲನವನ್ನು ಮಾಡು. ನಾನು ವನದಲ್ಲಿ ಬೆಳೆಯುವ ಪುಣ್ಯವೃಕ್ಷಗಳ ನೆಳಲಲ್ಲಿದ್ದುಕೊಂಡು ಋಷಿಗಳ ಆಶ್ರಮಗಳನ್ನು ರಕ್ಷಿಸಿಕೊಂಡಿರುತ್ತೇನೆ. ನಿನಗೆ ಶತ್ರುಘ್ನನು ಸಹಾಯವಾಗಿರಲಿ. ನನಗೆ ಲಕ್ಷ್ಮಣನು ಸಹಾಯವಾಗಿರುವನು. ದಶರಥಮಹಾರಾಜನ ಕುಮಾರಕರಾದ ನಾವು ನಾಲ್ವರೂ ಆ ರಾಜನಿಗೆ ಸತ್ಯಸಂಧನೆಂಬ ಸತ್ಕೀರ್ತಿಯನ್ನುಂಟುಮಾಡೋಣ ! ಭರತ, ನೀನು ಕರೆದರೂ ನಾನು ಬರದೆ. ಹೋದೆನೆಂದು ಮನಸ್ಸಿನಲ್ಲಿ ದುಃಖಪಡಬೇಡ ಎಂದು ನುಡಿದನು.


### ಶ್ರೀರಾಮನಿಗೆ ಜಾಬಾಲಿಯು ಹೇಳಿದ ಚಾರ್ವಾಕನೀತಿ

ಈ ರೀತಿಯಲ್ಲಿ ಶ್ರೀರಾಮನು ಭರತನಿಗೆ ಸಮಾಧಾನವನ್ನು ಹೇಳುತ್ತಿರುವ ಸಮಯದಲ್ಲಿ ಜಾಬಾಲಿ ಎಂಬ ಮುನಿಶ್ರೇಷ್ಠನು ಸತ್ಯಸಂಧನಾದ ಶ್ರೀರಾಮನನ್ನು ಕುರಿತು ಅಧರ್ಮ ಪ್ರತಿಪಾದಕ ವಾದ ಮಾತುಗಳಿಂದ ಈ ಪ್ರಕಾರ ನುಡಿದನು: ಶ್ರೀರಾಮ, ಭರತನು ನಿನ್ನನ್ನು ರಾಜ್ಯಾಧಿಪತ್ಯಕ್ಕೆ ಕರೆದದ್ದು ಲೇಸಾಯಿತು. ನಿನಗೆ ವನವಾಸದಿಂದುಂಟಾಗುವ ಕಾಯಕ್ಲೇಶವು ಬೇಡ. ನೀನು ರಾಜ್ಯಾಧಿಪತ್ಯವನ್ನು ತಿರಸ್ಕರಿಸುವುದು ಉಚಿತವಲ್ಲ. ನೀನು ರೀತಿಯಲ್ಲಿ ಆಜ್ಞಾನಿಯ ರಾಜ್ಯಾಧಿಪತ್ಯವನ್ನು ಬಿಡುವುದು ಸರಿಯಲ್ಲ. ಲೋಕದಲ್ಲಿ ನನ್ನ ತಾಯಿ-ನನ್ನ ತಂದೆ ' ಎಂದು ವ್ಯಾಮೋಹಪಡುವ ಮನುಷ್ಯನು ಉನ್ಮತ್ತನೆಂದು ತಿಳಿಯಬೇಕು.

ಮುಂದುವರಿಯುವುದು...

---

# ಪುರಾಣ ಪ್ರಸಿದ್ಧ ಗಣೇಶ ದೇವಾಲಯಗಳು!



ವಿಶ್ವಾಸ್.ಡಿ.ಗೌಡ
ಉದಯವಾಹಿನಿ, ವಿಶೇಷ

**ಮುಂಬೈನಲ್ಲಿರುವ ಸಿದ್ಧಿವಿನಾಯಕ ದೇವಾಲಯ:** ಮುಂಬೈನಲ್ಲಿರುವ ಅತ್ಯಂತ ಪ್ರಸಿದ್ಧವಾದ ದೇವಾಲಯವೆಂದರೆ ಸಿದ್ಧಿವಿನಾಯಕ ದೇವಾಲಯ. ಇದು ಗಣೇಶನಿಗೆ ಅರ್ಪಿತವಾದ ಪೂಜ್ಯ ದೇವಾಲಯವಾಗಿದ್ದು, ಪ್ರಭಾದೇವಿ ನೆರೆಹೊರೆಯಲ್ಲಿದೆ. ಈ ಗಣೇಶನು ನಮ್ಮ ಇಷ್ಟಾರ್ಥಗಳನ್ನು ಪೂರೈಸುವನು ಎಂದು ಹೇಳಲಾಗುತ್ತದೆ.ಇಲ್ಲಿನ ಗಣಪತಿಯ ಪೂಜೆ ನೋಡುವುದಕ್ಕೆ ಬಲು ಚೆಂದ.ದೇವಸ್ಥಾನವು ಪ್ರತಿದಿನವೂ ಭಕ್ತರಿಂದ ತುಂಬಿರುತ್ತದೆ. ಮಂಗಳವಾರ ವಿಶೇಷ ಪೂಜೆ,ಉತ್ಸವಗಳು ಇರುತ್ತವೆ. ಪ್ರಮುಖ ರಾಜಕಾರಣಿಗಳು ಮತ್ತು ಸೆಲೆಬ್ರಿಟಿಗಳು ಆಗಾಗ್ಗೆ ಸಿದ್ಧಿವಿನಾಯಕ ದೇವಸ್ಥಾನಕ್ಕೆ ಭೇಟಿ ನೀಡುವುದು ಅದರ ಆಕರ್ಷಣೆಗೆ ಪ್ರಮುಖ ಕಾರಣವಾಗಿದೆ.

**ತಮಿಳುನಾಡಿನ ಆದಿ ವಿನಾಯಕ ದೇವಸ್ಥಾನ:** ತಿಲತರ್ಪಣಪುರಿಗೆ ಸಮೀಪದಲ್ಲಿರುವ ತಮಿಳುನಾಡಿನ ಮುಕ್ತೇಶ್ವರರ್ ದೇವಾಲಯದಲ್ಲಿ ಈ ದೇವಾಲಯವಿದೆ. ಈ ದೇವಾಲಯವನ್ನು ಆದಿ ವಿನಾಯಕ ಎಂದೂ ಕರೆಯಲಾಗುತ್ತದೆ.ಆದಿ ವಿನಾಯಕನಿಗೆ ನರಮುಖ ವಿನಾಯಕ ಎಂದೂ ಕರೆಯಯವರು.

ಏಕೆಂದರೆ ಈ ಗಣೇಶನ ಪ್ರತಿಮೆಯು ಗಜಾನನ ಅಥವಾ ಆನೆಯ ಮುಖದ ಬದಲು ಮನುಷ್ಯನ ಮುಖವನ್ನು ಹೋಲುತ್ತದೆ. ಗಣೇಶನ ಪ್ರತಿಮೆಯು ನಿಜವಾಗಿಯೂ ಆಕರ್ಷಕವಾಗಿದ್ದು, ಕೊಡಲಿ, ಹಗ್ಗ, ಮೋದಕ ಮತ್ತು ಕಮಲವನ್ನು ಹಿಡಿದಿದ್ದಾನೆ.

**ರಾಜಸ್ಥಾನದ ರಣಥಂಬೋರ್ ಗಣೇಶ ದೇವಾಲಯ:** ತ್ರಿನೇತ್ರ ಗಣೇಶ ದೇವಾಲಯವು ರಾಜಸ್ಥಾನದಲ್ಲಿರುವ ಗಣೇಶನ ಅತ್ಯಂತ ಪ್ರಸಿದ್ಧ, ಐತಿಹಾಸಿಕ ದೇವಾಲಯವಾಗಿದ್ದು, ಅವನ ಇಡೀ ಕುಟುಂಬವನ್ನು ಒಂದೇ ಸ್ಥಳದಲ್ಲಿ ನೋಡಬಹುದು. ಇದು ರಾಜಸ್ಥಾನ ರಾಜ್ಯದ ರಣಥಂಬೋರ್ ಕೋಟೆಯಲ್ಲಿದೆ. ಸವಾಯಿ ಮಾಧೋಪುರದಿಂದ ಸುಮಾರು 12 ಕಿಲೋಮೀಟರ್ ದೂರದಲ್ಲಿದೆ. ಪ್ರಪಂಚದಾದ್ಯಂತದ ಭಕ್ತರು ವರ್ಷವಿಡೀ ಈ ದೇವಾಲಯಕ್ಕೆ ಬರುತ್ತಾರೆ. ಮನೆಯನ್ನು ನಿರ್ಮಿಸುವ ಬಯಕೆಯಿರುವವರು ಇಲ್ಲಿಗೆ ಬಂದು ಗಣೇಶನ ಆಶೀರ್ವಾದ ಪಡೆಯುತ್ತಾರೆ.

**ಪುಣೆಯಲ್ಲಿರುವ ಶ್ರೀಮಂತ್ ದಗ್ದುಶೇತ್ ಹಲ್ವಾಯಿ ಗಣಪತಿ ದೇವಸ್ಥಾನ:** ಇದು ಮಹಾರಾಷ್ಟ್ರದ ಪುಣೆಯಲ್ಲಿದ್ದು ಹಾಗೂ ಧಾರ್ಮಿಕ ಆಚರಣೆಗಳಿಗೆ ಹೆಸರುವಾಸಿಯಾಗಿದೆ. ಏಳೂವರೆ ಅಡಿ ಎತ್ತರ ಮತ್ತು ನಾಲ್ಕು ಅಡಿ ಅಗಲವನ್ನು ಹೊಂದಿರುವ ಪ್ರತಿಮೆಗೆ ಸುಮಾರು ಎಂಟು ಕಿಲೋಗ್ರಾಂಗಳಷ್ಟು ಚಿನ್ನದ ಆಭರಣವನ್ನು ಹೊದಿಸಲಾಗಿದೆ. ದೇವಾಲಯವು ರೋಮಾಂಚಕ ದೀಪಗಳಿಂದ ಭವ್ಯವಾಗಿ ಅಲಂಕರಿಸಲ್ಪಟ್ಟಿದೆ.

**ಸಿಕ್ಕಿಂನ ಗಣೇಶ ಟೋಕ್ ದೇವಾಲಯ:** ಈ ದೇವಾಲಯವು ಒಂದು ಸಣ್ಣ ಗಣೇಶ ದೇವಸ್ಥಾನವಾಗಿದ್ದು, ದೇವಾಲಯದೊಳಗೆ ಒಮ್ಮೆ ಒಬ್ಬ ವ್ಯಕ್ತಿ ಮಾತ್ರ ಹೋಗಬಹುದು. ಇದು ಗ್ಯಾಂಗ್‌ಟಾಕ್‌ನಿಂದ 7 ಕಿಲೋಮೀಟರ್ ದೂರದಲ್ಲಿದ್ದು, ಇಲ್ಲಿಂದ ಭಕ್ತರು ಇಡೀ ಗ್ಯಾಂಗ್ಟಾಕ್ ಪಟ್ಟಣದ ವಿಹಂಗಮ ನೋಟವನ್ನು ಹಾಗೂ ರಾಜಭವನ ಸಂಕೀರ್ಣ ಮತ್ತು ಕಾಂಚನಜುಂಗಾ ಪರ್ವತವನ್ನು ನೋಡಬಹುದು.

6500 ಮೀಟರ್ ದೂರದಲ್ಲಿರುವ ಗಣೇಶ್ ಟೋಕ್ ವ್ಯೂಪಾಯಿಂಟ್ ಹಿಮದಿಂದ ಆವೃತವಾದ ಹಿಮಾಲಯದ ರುದ್ರರಮಣೀಯ ದೃಶ್ಯವನ್ನು ನೋಡಲು ಅನುವು ಮಾಡಿಕೊಡುತ್ತದೆ. ಈ ಪ್ರದೇಶವು ತುಂಬಾ ಜನದಟ್ಟಣೆಯಿಂದ ಕೂಡಿದೆ.

**ಇಂದೋರ್‌ನಲ್ಲಿರುವ ಖಜರಾನ ಗಣೇಶ ದೇವಸ್ಥಾನ:** ಇದು ಭಾರತದ ಅತ್ಯಂತ ಪ್ರಸಿದ್ಧ ಹಿಂದೂ ದೇವಾಲಯಗಳಲ್ಲಿ ಒಂದಾಗಿದೆ. ಗಣೇಶನ ಮುಖ್ಯ ವಿಗ್ರಹವನ್ನು ರಚಿಸಲು ಇಟ್ಟಿಗೆಗಳು,ಬೆಲ್ಲ, ಸುಣ್ಣದ ಕಲ್ಲು, ಮಣ್ಣು,ನೀರು ಮತ್ತು ಇತರ ವಸ್ತುಗಳನ್ನು ಬಳಸಲಾಗಿದೆ. ಇದರ ಧಾರ್ಮಿಕ ಪ್ರಾಮುಖ್ಯತೆ ಮತ್ತು ಸುದೀರ್ಘ ಇತಿಹಾಸದಿಂದಾಗಿ, ಈ ದೇವಾಲಯವು ಇಡೀ ನಗರದಲ್ಲಿ ಅತಿ ಹೆಚ್ಚು ಪ್ರವಾಸಿಗರನ್ನು ಸೆಳೆಯುತ್ತದೆ. ಈ ಸ್ಥಳಕ್ಕೆ ಭೇಟಿ ನೀಡುವಾಗ ಯಾರಾದರೂ ತಮ್ಮ ಆಸೆಗಳನ್ನು ಬೇಡಿಕೊಂಡರೆ ಅವರ ಕೋರಿಕೆ ಶೀಘ್ರದಲ್ಲೇ ಈಡೇರಲಿದೆ ಎಂಬ ನಂಬಿಕೆ ಭಕ್ತರಲ್ಲಿದೆ.

---

# ತಮಿಳುನಾಡು ಸ್ಪೆಷಲ್ ಫ್ರೈ ಇಡ್ಲಿ ಮಾಡಿ..!



10 ನಿಮಿಷದಲ್ಲಿ ತಮಿಳುನಾಡು ಸ್ಟ್ರೀಟ್ ಸ್ಟೈಲ್ ಫ್ರೈ ಇಡ್ಲಿ ವೆದರ್ ಕೂಲ್ ಇದ್ದಾಗ ತಿಂದ್ರೆ ಸ್ವರ್ಗವೇ ಸರಿ. ಮಳೆಗಾಲದಲ್ಲಿ ಇದನ್ನ ಮಿಸ್ ಮಾಡ್ಕೋಬೇಡಿ. ದೇಶದ ಪ್ರತಿಯೊಂದು ನಗರವೂ ತನ್ನದೇ ಆದ ವಿಶಿಷ್ಟ ಸ್ಟ್ರೀಟ್ ಫುಡ್‌ಗೆ ಹೆಸರುವಾಸಿ. ದಕ್ಷಿಣ ಭಾರತದ ಆಹಾರ ಎಂದಾಕ್ಷಣ ಮೊದಲು ನೆನಪಿಗೆ ಬರುವುದು ಇಡ್ಲಿ ದೋಸೆ. ಆದರೆ, ತಮಿಳುನಾಡಿನಲ್ಲಿ ಸಾಮಾನ್ಯ ಇಡ್ಲಿಗೂ ಒಂದು ವಿಶೇಷ ಟ್ವಿಸ್ಟ್ ಕೊಟ್ಟು, ಎಲ್ಲರ ಮನ ಗೆಲ್ಲುವ ಒಂದು ಅದ್ಭುತ ಖಾದ್ಯವನ್ನು ತಯಾರಿಸುತ್ತಾರೆ. ಅದೇ ಸ್ಟ್ರೀಟ್ ಸ್ಟೈಲ್ ಫ್ರೈ ಇಡ್ಲಿ ಇದನ್ನು ಮನೆಯಲ್ಲೇ ಸುಲಭವಾಗಿ ಹೇಗೆ ಮಾಡಬಹುದು ಎಂದು ತಿಳಿಯೋಣ ಬನ್ನಿ. ಇದು ಚೆನ್ನೈನಲ್ಲಿ ತುಂಬಾನೇ ಫೇಮಸ್. ಇದು ಕೇವಲ ಬ್ರೇಕ್‌ಫಾಸ್ಟ್ ಅಲ್ಲ, ಸಂಜೆಯ ಸ್ನ್ಯಾಕ್ಸ್‌ಗೂ ಸೂಕ್ತವಾದ ಒಂದು ಸ್ವಾದಿಷ್ಟ ತಿಂಡಿ. ಇದನ್ನು ಪುದೀನಾ ಚಟ್ನಿ ಅಥವಾ ಟೊಮೆಟೊ ಸಾಸ್‌ನೊಂದಿಗೆ ಸವಿಯಬಹುದು. ಉಳಿದ ಇಡ್ಲಿಗಳನ್ನು ಬಳಸಿ ಇಷ್ಟು ರುಚಿಯಾದ ತಿಂಡಿಯನ್ನು ತಯಾರಿಸಬಹುದು ಎಂದು ನೀವೇ ಆಶ್ಚರ್ಯಪಡುತ್ತೀರಿ. ಇದನ್ನು ಒಮ್ಮೆ ಮನೆಯಲ್ಲಿ ಟ್ರೈ ಮಾಡಿ, ಖಂಡಿತ ನಿಮ್ಮ ಕುಟುಂಬದವರು ಮೆಚ್ಚುತ್ತಾರೆ.

**ಫ್ರೈ ಇಡ್ಲಿ ಮಾಡಲು ಬೇಕಾಗುವ ಸಾಮಗ್ರಿಗಳು**

- ಇಡ್ಲಿ
- ಎಣ್ಣೆ
- ಈರುಳ್ಳಿ
- ಕ್ಯಾಪ್ಸಿಕಂ
- ಹಸಿ ಮೆಣಸಿನಕಾಯಿ
- ಶುಂಠಿ
- ಬೆಳ್ಳುಳ್ಳಿ ಪೇಸ್ಟ್
- ಕರಿಬೇವಿನ ಎಲೆಗಳು
- ಸಾಸಿವೆ
- ಉದ್ದಿನ ಬೇಳೆ
- ಕಡಲೆ ಬೇಳೆ
- ಅರಿಶಿನ ಪುಡಿ
- ಖಾರದ ಪುಡಿ
- ಗರಂ ಮಸಾಲಾ
- ಟೊಮೆಟೊ ಸಾಸ್
- ಸೋಯಾ ಸಾಸ್
- ನಿಂಬೆ ರಸ
- ಕೊತ್ತಂಬರಿ ಸೊಪ್ಪು
- ಉಪ್ಪು

**ಫ್ರೈ ಇಡ್ಲಿ ಮಾಡುವ ವಿಧಾನ :** ಮೊದಲಿಗೆ, ಉಳಿದಿರುವ ಇಡ್ಲಿಗಳನ್ನು ತೆಗೆದುಕೊಂಡು ಸಣ್ಣ ತುಂಡುಗಳಾಗಿ ಕತ್ತರಿಸಿಕೊಳ್ಳಿ. ಇಡ್ಲಿಗಳು ತುಂಬಾ ಮೃದುವಾಗಿದ್ದರೆ, ಗಟ್ಟಿಯಾಗಲು 10 ರಿಂದ 15 ನಿಮಿಷ ಫ್ರಿಡ್ಜ್‌ನಲ್ಲಿ ಇಡಬಹುದು. ಈಗ ಒಂದು ದಪ್ಪ ತಳದ ಬಾಣಲೆಯಲ್ಲಿ ಎಣ್ಣೆಯನ್ನು ಬಿಸಿ ಮಾಡಿ. ಎಣ್ಣೆ ಸಾಕಷ್ಟು ಬಿಸಿಯಾದಾಗ, ಕತ್ತರಿಸಿದ ಇಡ್ಲಿ ತುಂಡುಗಳನ್ನು ಮಧ್ಯಮ ಉರಿಯಲ್ಲಿ ಚಿನ್ನದ ಕಂದು ಬಣ್ಣ ಬರುವವರೆಗೆ, ಗರಿಗರಿಯಾಗುವವರೆಗೆ ಡೀಪ್ ಫ್ರೈ ಮಾಡಿ.

ಎಣ್ಣೆಯನ್ನು ಹೀರಿಕೊಳ್ಳಲು ಟಿಶ್ಯೂ ಪೇಪರ್ ಇರುವ ತಟ್ಟೆಗೆ ತೆಗೆದಿಡಿ. ಈಗ ಮಸಾಲಾ ತಯಾರಿಸಿ.

ಫ್ರೈ ಮಾಡಿದ ಇಡ್ಲಿಗಳನ್ನು ತೆಗೆದ ನಂತರ, ಅದೇ ಬಾಣಲೆಯಲ್ಲಿ ಹೆಚ್ಚುವರಿ ಎಣ್ಣೆಯನ್ನು ತೆಗೆದು, 2 ರಿಂದ 3 ಚಮಚ ಎಣ್ಣೆಯನ್ನು ಉಳಿಸಿಕೊಳ್ಳಿ. ಎಣ್ಣೆ ಬಿಸಿಯಾದಾಗ, ಸಾಸಿವೆ, ಉದ್ದಿನ ಬೇಳೆ ಮತ್ತು ಕಡಲೆ ಬೇಳೆ ಹಾಕಿ ಸಿಡಿಸಿ. ನಂತರ ಕರಿಬೇವಿನ ಎಲೆಗಳು ಮತ್ತು ಸೀಳಿದ ಹಸಿ ಮೆಣಸಿನಕಾಯಿಗಳನ್ನು ಸೇರಿಸಿ ಹುರಿಯಿರಿ. ಸಣ್ಣಗೆ ಹೆಚ್ಚಿದ ಈರುಳ್ಳಿಯನ್ನು ಸೇರಿಸಿ, ಗೋಲ್ಡನ್ ಬ್ರೌನ್ ಆಗುವವರೆಗೆ ಹುರಿಯಿರಿ. ಶುಂಠಿ ಬೆಳ್ಳುಳ್ಳಿ ಪೇಸ್ಟ್ ಸೇರಿಸಿ, ಹಸಿ ವಾಸನೆ ಹೋಗುವವರೆಗೆ ಹುರಿಯಿರಿ. ಈಗ ತರಕಾರಿಗಳು ಮತ್ತು ಮಸಾಲೆಗಳು ಸೇರಿಸಿ. ಈಗ ಹೆಚ್ಚಿದ ಕ್ಯಾಪ್ಸಿಕಂ ಸೇರಿಸಿ, ಅದು ಸ್ವಲ್ಪ ಮೆತ್ತಗಾಗುವವರೆಗೆ ಹುರಿಯಿರಿ. ಅರಿಶಿನ ಪುಡಿ, ಖಾರದ ಪುಡಿ, ಗರಂ ಮಸಾಲಾ ಸೇರಿಸಿ, ಹಸಿ ವಾಸನೆ ಹೋಗುವವರೆಗೆ ಹುರಿಯಿರಿ. ಟೊಮೆಟೊ ಸಾಸ್ ಮತ್ತು ಸೋಯಾ ಸಾಸ್ ಸೇರಿಸಿ ಚೆನ್ನಾಗಿ ಮಿಕ್ಸ್ ಮಾಡಿ.

**ವೆದರ್ ಕೂಲ್ ಇದ್ದಾಗ ತಿಂದ್ರೆ ಸ್ವರ್ಗವೇ! ಮಾಡೋದು ಹೇಗೆ**

ಈ ಸಾಸ್‌ಗಳು ವಿಶಿಷ್ಟವಾದ ಸ್ಟ್ರೀಟ್ ಫುಡ್ ರುಚಿಯನ್ನು ನೀಡುತ್ತವೆ.

ಈಗ ಫ್ರೈ ಮಾಡಿದ ಇಡ್ಲಿ ಸೇರಿಸಿ. ಈ ಮಸಾಲಾ ಮಿಶ್ರಣಕ್ಕೆ ಕರಿದಿಟ್ಟ ಇಡ್ಲಿ ತುಂಡುಗಳನ್ನು ಸೇರಿಸಿ. ಎಲ್ಲಾ ಇಡ್ಲಿ ತುಂಡುಗಳಿಗೆ ಮಸಾಲಾ ಚೆನ್ನಾಗಿ ಅಂಟಿಕೊಳ್ಳುವಂತೆ ನಿಧಾನವಾಗಿ ಮಿಕ್ಸ್ ಮಾಡಿ. ಉಪ್ಪು ರುಚಿಗೆ ತಕ್ಕಷ್ಟು ಸೇರಿಸಿ. ಕೊನೆಯದಾಗಿ, ನಿಂಬೆ ರಸ ಹಿಂಡಿ ಚೆನ್ನಾಗಿ ಮಿಕ್ಸ್ ಮಾಡಿ. ಇದು ಹುಳಿ ಮತ್ತು ಖಾರದ ರುಚಿಯನ್ನು ಸಮತೋಲನಗೊಳಿಸುತ್ತದೆ. ಬಳಿಕ ಸಣ್ಣಗೆ ಹೆಚ್ಚಿದ ಕೊತ್ತಂಬರಿ ಸೊಪ್ಪಿನಿಂದ ಅಲಂಕರಿಸಿ. ಇಷ್ಟು ಮಾಡಿದರೆ, ಬಿಸಿ ಬಿಸಿಯಾದ ಮತ್ತು ರುಚಿಕರವಾದ ಸ್ಟ್ರೀಟ್ ಸ್ಟೈಲ್ ಫ್ರೈ ಇಡ್ಲಿ ಸಿದ್ಧ.

---

# ಕನಿಷ್ಠ ಪಿಂಚಣಿ ಹಾಗೂ ಭತ್ಯೆಗೆ ನಿವೃತ್ತ ನೌಕರರ ಸಂಘದ ಆಗ್ರಹ

• ಉದಯವಾಹಿನಿ, ಬೆಂಗಳೂರು

ಕನಿಷ್ಠ ಪಿಂಚಣಿ ಹಾಗೂ ಭತ್ಯೆ, ವೈದ್ಯಕೀಯ ಸೌಲಭ್ಯ ನೀಡುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಭವಿಷ್ಯ ನಿಧಿ ಪ್ರಾದೇಶಿಕ ಆಯುಕ್ತರ ಕಚೇರಿ ಎದುರು ಸೋಮವಾರ ಇಪಿಎಸ್-95 ಬಿಎಂಟಿಸಿ, ಕೆಎಸ್‌ಆರ್‌ಟಿಸಿ ನಿವೃತ್ತ ನೌಕರರ ಸಂಘದ ವತಿಯಿಂದ ಪ್ರತಿಭಟನೆ ನಡೆಸಲಾಯಿತು.'ಇಪಿಎಸ್ ಕಾಯ್ದೆ ರಚನೆಯಾಗಿ 30 ವರ್ಷ ಕಳೆದಿವೆ. ಪ್ರತಿ ಹತ್ತು ವರ್ಷಗಳಿಗೊಮ್ಮೆ ಸವಲತ್ತುಗಳನ್ನು ಸೂಕ್ತ ಮಾರ್ಪಾಡು ಮಾಡಬೇಕು ಎಂದು ಉಲ್ಲೇಖಿಸಲಾಗಿದೆ. ಅದರಂತೆ ಕನಿಷ್ಠ ರೂ.7,500 ಪಿಂಚಣಿ ಹಾಗೂ ಭತ್ಯೆ, ವೈದ್ಯಕೀಯ ಸೌಲಭ್ಯ ನೀಡುವಂತೆ ಕೇಂದ್ರ ಸರ್ಕಾರಕ್ಕೆ ಹಲವು ಬಾರಿ ಮನವಿ ಸಲ್ಲಿಸಲಾಗಿದೆ. ಇಪಿಎಸ್ ವ್ಯಾಪ್ತಿಗೆ ಬಾರದ ಹಲವು ನಿವೃತ್ತ ನೌಕರರಿಗೆ ರೂ.5 ಸಾವಿರ ನೀಡಬೇಕು.

ಹತ್ತು ವರ್ಷಗಳಲ್ಲಿ ಲಕ್ಷಾಂತರ ಇಪಿಎಸ್ ನೌಕರರು ವಯೋಸಹಜವಾಗಿ ಹಾಗೂ ಅನಾರೋಗ್ಯದಿಂದ ಮೃತಪಟ್ಟಿದ್ದಾರೆ. ಈವರೆಗೂ ಬೇಡಿಕೆ ಈಡೇರಿಸಿಲ್ಲ' ಎಂದು ನೌಕರರ ಸಂಘದ ಅಧ್ಯಕ್ಷ ನಂಜುಂಡೇಗೌಡ ತಿಳಿಸಿದ್ದಾರೆ.

2022ರ ನವೆಂಬರ್ 4ರಂದು ಸುಪ್ರೀಂ ಕೋರ್ಟ್, ಸುನಿಲ್ ಕುಮಾರ್ ಪ್ರಕರಣದಲ್ಲಿ ಇಪಿಎಸ್ ನಿವೃತ್ತರಿಗೆ ಅಧಿಕ ಪಿಂಚಣಿ ನೀಡುವ ಕುರಿತು ತೀರ್ಪು ನೀಡಿದೆ. ಆದರೆ ಅಧಿಕಾರಿಗಳು, ವಿನಾಯ್ತಿ ಸಂಸ್ಥೆಗಳ ನಿವೃತ್ತ ಇಪಿಎಸ್ ನೌಕರರು ಅಧಿಕ ಪಿಂಚಣಿ ಪಡೆಯಲು ಅರ್ಹರಲ್ಲ ಎಂದು ತಿಳಿಸಿರುವುದು ಕೋರ್ಟ್ ತೀರ್ಪಿಗೆ ವ್ಯತಿರಿಕ್ತವಾಗಿದೆ. ಹಾಗಾಗಿ ನ್ಯಾಯಾಲಯದ ತೀರ್ಪಿಗೆ ಸಂಬಂಧಿಸಿದಂತೆ ಕಾನೂನು ತಜ್ಞರ ಅಭಿಪ್ರಾಯ ಪಡೆದು, ತೀರ್ಪನ್ನು ಪರಾಮರ್ಶಿಸಿ ನ್ಯಾಯ ದೊರಕಿಸಿಕೊಡಬೇಕು' ಎಂದು ಕಾರ್ಮಿಕ ಮತ್ತು ಉದ್ಯೋಗ ಸಚಿವ ಮನ್‌ಸುಖ್ ಮಾಂಡವೀಯಾ ಹಾಗೂ ರಾಜ್ಯ ಖಾತೆ ಸಚಿವೆ ಶೋಭಾ ಕರಂದ್ಲಾಜೆ ಅವರಿಗೆ ಮನವಿ ಮಾಡಲಾಗಿದೆ ಎಂದು ಹೇಳಿದರು. ಪ್ರತಿಭಟನೆಯಲ್ಲಿ ಸಂಘದ ಪ್ರಧಾನ ಕಾರ್ಯದರ್ಶಿ ಆರ್.ಸುಬ್ಬಣ್ಣ, ಕಾರ್ಯಾಧ್ಯಕ್ಷ ಶಂಕರ್ ಕುಮಾರ್ ಭಾಗವಹಿಸಿದ್ದರು.

**ನವದೆಹಲಿಯ ಜಂತರ್ ಮಂತರ್ ಮೈದಾನದಲ್ಲಿ ಆಗಸ್ಟ್ 4ರಿಂದ ಎರಡು ದಿನ ಇಪಿಎಸ್ ನಿವೃತ್ತರ ಆಂದೋಲನ ನಡೆಯಲಿದ್ದು, ಸಾವಿರಾರು ಮಂದಿ ಈ ಹೋರಾಟದಲ್ಲಿ ಭಾಗವಹಿಸಲಿದ್ದಾರೆ. ಸಂಸತ್‌ನ ಮುಂಗಾರು ಅಧಿವೇಶನದಲ್ಲಿ ಈ ಬಗ್ಗೆ ಚರ್ಚಿಸಿ, ಜುಲೈ 31ರೊಳಗೆ ಬೇಡಿಕೆಗಳನ್ನು ಈಡೇರಿಸದಿದ್ದರೆ ಹೋರಾಟ ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.**



---

# ಮುಖದ ಮೇಲೆ ಬ್ಲ್ಯಾಕ್ ಹೆಡ್ಸ್ ಸಮಸ್ಯೆಗೆ ಹಣ ಖರ್ಚು ಮಾಡಬೇಕಾಗಿಲ್ಲ!

ಕೆಲವೊಮ್ಮೆ ಹಾರ್ಮೋನುಗಳ ಬದಲಾವಣೆ, ಸೌಂದರ್ಯ ಉತ್ಪನ್ನಗಳ ಅತಿಯಾದ ಬಳಕೆ, ಸರಿಯಾದ ಚರ್ಮದ ಆರೈಕೆಯ ಕೊರತೆ, ಒತ್ತಡ ಮತ್ತು ಇತರ ಸಮಸ್ಯೆಗಳಿಂದ ಕಪ್ಪು ಚುಕ್ಕೆಗಳು ಉಂಟಾಗುತ್ತವೆ.ಅನೇಕ ಜನರು ಕಪ್ಪು ಚುಕ್ಕೆಗಳನ್ನು ತೆಗೆದುಹಾಕಲು ವಿವಿಧ ರೀತಿಯ ಕ್ರೀಮ್‌ಗಳನ್ನು ಬಳಸುತ್ತಾರೆ ಆದರೆ ಕೆಲವು ನೈಸರ್ಗಿಕ ವಿಧಾನಗಳನ್ನು ಈ ಸಮಸ್ಯೆಯನ್ನು ನಿವಾರಿಸಬಹುದು. ಬ್ಲ್ಯಾಕ್ ಹೆಡ್ಸ್ ಸಾಮಾನ್ಯ ಚರ್ಮದ ಸಮಸ್ಯೆಯಾಗಿದ್ದು, ಇದು ಒಂದಲ್ಲ ಒಂದು ಸಮಯದಲ್ಲಿ ಎಲ್ಲರನ್ನೂ ಕಾಡುತ್ತದೆ. ಸಾಮಾನ್ಯವಾಗಿ, ಎಣ್ಣೆಯುಕ್ತ ಚರ್ಮ ಹೊಂದಿರುವ ಜನರಲ್ಲಿ ಬ್ಲ್ಯಾಕ್ ಹೆಡ್ಸ್ ಹೆಚ್ಚಾಗಿ ಕಂಡುಬರುತ್ತವೆ. ವಾಸ್ತವವಾಗಿ, ರಂಧ್ರಗಳಿಂದ ಹೆಚ್ಚು ಎಣ್ಣೆ (ಮೇದೋಗ್ರಂಥಿಗಳ ಸ್ರಾವ) ಹೊರಬಂದಾಗ, ಕೊಳಕು ಸಂಗ್ರಹವಾಗಲು ಪ್ರಾರಂಭಿಸುತ್ತದೆ ಮತ್ತು ಸತ್ತ ಚರ್ಮವು ಕೂಡ ಸಂಗ್ರಹವಾಗುತ್ತದೆ, ಇದರಿಂದಾಗಿ ಮೂಗು ಮತ್ತು ಅದರ ಸುತ್ತಮುತ್ತಲಿನ ಪ್ರದೇಶಗಳು, ಗಲ್ಲ, ಹಣೆಯ ಮೇಲೆ ಸಣ್ಣ ಕಪ್ಪು ಚುಕ್ಕೆಗಳು ಕಾಣಿಸಿಕೊಳ್ಳಲು ಪ್ರಾರಂಭಿ ಸುತ್ತವೆ. ಏಕೆಂದರೆ ಈ ಸ್ಥಳಗಳ ಚರ್ಮವು ಹೆಚ್ಚು ಎಣ್ಣೆಯುಕ್ತವಾಗಿರುತ್ತದೆ.ಬಿಸಿ ಮತ್ತು ಆರ್ದ್ರ ವಾತಾವರಣದಲ್ಲಿ, ಹೆಚ್ಚಿನ ಮೇದೋಗ್ರಂಥಿಗಳ ಸ್ರಾವ ಮತ್ತು ಬೆವರುವಿಕೆ ಯಿಂದಾಗಿ ಕಪ್ಪು ಚುಕ್ಕೆಗಳ ಸಮಸ್ಯೆ ಹೆಚ್ಚಾಗುತ್ತದೆ.ಕೆಲವು ಸರಳ ಸಲಹೆಗಳನ್ನು ಅನುಸರಿಸುವ ಮೂಲಕ, ನೀವು ಮನೆಯಲ್ಲಿ ಬ್ಲ್ಯಾಕ್ ಹೆಡ್ಸ್ ಸಮಸ್ಯೆಯನ್ನು ನಿವಾರಣೆ ಮಾಡಿಕೊಳ್ಳಬಹುದು.ಇಂದಿನ ಲೇಖನದಲ್ಲಿ

ಬ್ಲ್ಯಾಕ್ ಹೆಡ್ಸ್ ಸಮಸ್ಯೆ ನಿವಾರಣೆಗೆ ಕೆಲವೊಂದು ನೈಸರ್ಗಿಕ ಮನೆಮದ್ದುಗಳ ಬಗ್ಗೆ ಮಾಹಿತಿಯನ್ನು ನೀಡಿದ್ದೇವೆ ಮುಂದೆ ಓದಿ

**ಅಡುಗೆ ಸೋಡಾ:** ಸಾಮಾನ್ಯವಾಗಿ ಅಡುಗೆ ಸೋಡಾ ಪ್ರತಿಯೊಬ್ಬರ ಅಡುಗೆಮನೆಯಲ್ಲೂ ಕೂಡ ಕಂಡು ಬರುತ್ತದೆ. ತನ್ನಲ್ಲಿ ಕ್ಷಾರೀಯ ಗುಣ ಹೊಂದಿರುವ ಬೇಕಿಂಗ್ ಸೋಡಾ ಅಥವಾ ಅಡುಗೆ ಸೋಡಾ ಮುಖದ ಮೇಲಿನ ಕಲೆಗಳನ್ನು ನಿವಾರಣೆ ಮಾಡುವಲ್ಲಿ ಪ್ರಮುಖ ಪಾತ್ರವಹಿಸುತ್ತದೆ. ಪ್ರಮುಖವಾಗಿ ಮುಖದ ಮೇಲಿನ ಮೊಡವೆ ಕಲೆಗಳನ್ನು ತೆಗೆದುಹಾಕುವುದರ ಜೊತೆಗೆ, ಕಪ್ಪು ಚುಕ್ಕೆಗಳನ್ನು ಅಂದರೆ ಬ್ಲ್ಯಾಕ್ ಹೆಡ್ಸ್ ಅನ್ನು ಕೂಡ ನಿವಾರಣೆ ಮಾಡಲು ಸಹಾಯ ಮಾಡುತ್ತದೆ.



ಒಂದು ಚಮಚ ಅಡುಗೆ ಸೋಡಾವನ್ನು 2 ಚಮಚ ನೀರಿನಲ್ಲಿ ಬೆರೆಸಿ. ಈ ಪೇಸ್ಟ್ ಅನ್ನು ಮುಖಕ್ಕೆ 15-20 ನಿಮಿಷಗಳ ಕಾಲ ಹಚ್ಚಿ ಮತ್ತು ಉಗುರು ಬೆಚ್ಚಗಿನ ನೀರಿನಿಂದ ತೊಳೆಯಿರಿ.

**ಗ್ರೀನ್ ಟೀ ಎಲೆಗಳು:** ಗ್ರೀನ್ ಟೀಯಲ್ಲಿರುವ ಆಂಟಿಆಕ್ಸಿಡೆಂಟ್‌ಗಳು ಡೆಡ್ ಸ್ಕಿನ್ ಅನ್ನು ತೆಗೆದು ಹಾಕುತ್ತವೆ ಮತ್ತು ಬ್ಲ್ಯಾಕ್ ಹೆಡ್ಸ್ ಅನ್ನು ತೆರವುಗೊಳಿಸುತ್ತವೆ. ಕೆಲವು ಒಣ ಗ್ರೀನ್ ಟೀಯ ಎಲೆಗಳನ್ನು ನೀರಿನಲ್ಲಿ ಸೇರಿಸಿ ಪೇಸ್ಟ್ ಮಾಡಿ ಕಪ್ಪು ಚುಕ್ಕೆಗಳ ಮೇಲೆ ಹಚ್ಚಿ. 15 ನಿಮಿಷಗಳ ನಂತರ ಮುಖ ತೊಳೆಯಿರಿ.

**ಟೊಮೆಟೊ:** ಟೊಮೆಟೊದಲ್ಲಿ ಬ್ಯಾಕ್ಟೀರಿಯಾ ವಿರೋಧಿ ಗುಣಗಳಿದ್ದು,ಚರ್ಮದಿಂದ ಕಪ್ಪು ಚುಕ್ಕೆಗಳನ್ನು ನಿವಾರಿಸುತ್ತದೆ. ಮಲಗುವ ಮುನ್ನ ಟೊಮೆಟೊ ತಿರುಳನ್ನು ಮುಖಕ್ಕೆ ಹಚ್ಚಿ ಬೆಳಗ್ಗೆ ಎದ್ದ ನಂತರ ಮುಖ ತೊಳೆಯಿರಿ. ಹೀಗೆ ಪ್ರತಿದಿನ ಮಾಡುವುದರಿಂದ ಬ್ಲ್ಯಾಕ್ ಹೆಡ್ಸ್ ನಿವಾರಣೆ ಆಗುವುದರ ಜೊತೆಗೆ ಮುಖದ ಅಂದವು ಕೂಡ ಹೆಚ್ಚಾಗುವುದು.

**ದಾಲ್ಚಿನ್ನಿ ಪುಡಿ:** ನಿಂಬೆ ರಸವನ್ನು 1 ಟೀಚಮಚ ದಾಲ್ಚಿನ್ನಿ ಪುಡಿಯೊಂದಿಗೆ ಬೆರೆಸಿ. ನೀವು ಅದಕ್ಕೆ ಸ್ವಲ್ಪ ಅರಿಶಿನವನ್ನು ಕೂಡ ಸೇರಿಸಬಹುದು. ಈ ಪೇಸ್ಟ್ ಅನ್ನು ಮುಖಕ್ಕೆ ಹಚ್ಚಿ 15 ನಿಮಿಷಗಳ ನಂತರ ಮುಖ ತೊಳೆಯಿರಿ.ಇದು ರಂಧ್ರಗಳನ್ನು ಬಿಗಿಗೊಳಿಸುತ್ತದೆ ಮತ್ತು ಡೆಡ್ ಸ್ಕಿನ್ ತೆಗೆದುಹಾಕುತ್ತದೆ.

**ಪ್ರತಿ ವಾರ ಸ್ಕಬ್ ಮಾಡುತ್ತಲೇ ಇರಿ**

ಕಪ್ಪು ಚುಕ್ಕೆಗಳನ್ನು ತಡೆಗಟ್ಟಲು, ರಂಧ್ರಗಳನ್ನು ಆಳವಾಗಿ ಸ್ವಚ್ಛಗೊಳಿ ಸುವುದು ಬಹಳ ಮುಖ್ಯ, ಆದ್ದರಿಂದ ಪ್ರತಿ ವಾರ ಮುಖವನ್ನು ಸ್ಕಬ್ ಮಾಡುವುದು ಅತ್ಯಗತ್ಯ. ಇದು ಸತ್ತ ಚರ್ಮದ ಕೋಶಗಳನ್ನು ತೆಗೆದುಹಾಕುತ್ತದೆ ಮತ್ತು ಚರ್ಮವನ್ನು ಹೊಳೆಯುವಂತೆ ಮಾಡುತ್ತದೆ. ನಿಮ್ಮ ಮುಖದ ಮೇಲೆ ಕಪ್ಪು ಚುಕ್ಕೆಗಳಿದ್ದರೆ, ಆಲೂಗಡ್ಡೆ ರಸ, ನಿಂಬೆ ರಸ, ಕಡಲೆ ಹಿಟ್ಟು, ಜೇನುತುಪ್ಪ ಮತ್ತು ಯಾವುದೇ ಸಿಪ್ಪೆ ತೆಗೆಯುವ ಪ್ಯಾಕ್ ಅನ್ನು

ಮಿಶ್ರಣ ಮಾಡಿ. ಅದನ್ನು ನಿಮ್ಮ ಮುಖಕ್ಕೆ ಹಚ್ಚಿ. ಅದು ಸಂಪೂರ್ಣವಾಗಿ ಒಣಗಿದ ನಂತರ, ಅದನ್ನು ಎಚ್ಚರಿಕೆಯಿಂದ ತೆಗೆದುಹಾಕಿ. ಇದು ಕಪ್ಪು ಚುಕ್ಕೆಗಳು ಬಿಳಿ ಚುಕ್ಕೆಗಳನ್ನು ತೆಗೆದುಹಾಕುತ್ತದೆ. ನೀವು 15 ದಿನಗಳಿಗೊಮ್ಮೆ ಈ ಪರಿಹಾರವನ್ನು ಅಳವಡಿಸಿ ಕೊಳ್ಳಬಹುದು.


**ಮೊಟ್ಟೆ: ಮೊಟ್ಟೆಯ ಬಿಳಿ ಭಾಗವು ಕಪ್ಪು ಚುಕ್ಕೆಗಳನ್ನು ತೆಗೆದುಹಾಕುವಲ್ಲಿ ತುಂಬಾ ಪರಿಣಾಮಕಾರಿಯಾಗಿದೆ. ಮೊಟ್ಟೆಯ ಬಿಳಿ ಭಾಗವನ್ನು ಒಂದು ಟೀಚಮಚ ಜೇನುತುಪ್ಪದೊಂದಿಗೆ ಬೆರೆಸಿ. ಮುಖಕ್ಕೆ ಹಚ್ಚಿ ಒಣಗಲು ಬಿಡಿ, ಮುಖ ತೊಳೆದು ಒಣಗಲು ಬಿಡಿ, ಸ್ವಲ್ಪ ಸಮಯದ ನಂತರ ಮುಖ ತೊಳೆಯಿರಿ. ಇದರಿಂದ ಬ್ಲ್ಯಾಕ್ ಹೆಡ್ಸ್ ದೂರವಾಗುವುದರ ಜೊತೆಗೆ, ಮುಖದ ಅಂದವು ಕೂಡ ಹೆಚ್ಚಾಗುತ್ತದೆ.**




# ಅಜ್ಜಿಯ ಬಾಳಲ್ಲಿ ಬೇಕಾಗಿದೆ ಚಿಕ್ಕ ಸೂರಿನ ಬೆಳಕು...

## ಮಳೆಗಾಲದಾಗ ರಾಜಕಾರಣಿಗಳಿಗೆ ಹಾಗೂ ಅಧಿಕಾರಿಗಳಿಗೆ ಒಂದ ದಿವಸ ಗುಡಿಸಲದಾಗ ಬಂದ ಇರಕ ಹೇಳಪ್ಪ

• ಇಲ್ಯಾಸ್ ಪಟೇಲ್. ಬಳಗಾನೂರ





ಉದಯವಾಹಿನಿ ಚಿತ್ರ

ಯಾದಗಿರಿ: ನೋಡಪ್ಪ ನಮಗ ಇರದಕ ಒಂದ ಮನೆಯಿಲ್ಲಪ್ಪ, ಗುಡಿಸಿಲು ಬಿಟ್ಟರೆ ಬೇರೆ ಆಶ್ರಯವೇ ಇಲ್ಲಪ್ಪಾ, ಮಳೆ ಬಂದಾಗ ಗುಡಿಸಿಲೊಳಗೆ ನೀರು ಹರಿದು ಬಂದ್ರೆ, ನಾವು ಎಲ್ಲಿದ್ದೇವೋ ಅಂತ ಕೇಳೋಕಾಗ್ತದೆ! ನೆಲದ ಮೇಲೆ ಹಾಸಿ ಮಲಗಿದ ಹಾಸಿಗೆ ತೊಯ್ದು ಹೋಗ್ತದೆ, ಸರಕಾರದವರು 'ಎಲ್ಲರಿಗೂ ಮನೆ' ಅಂತ ಹೇಳ್ತಾರೆ. ಆದ್ರೆ ಅವರ ಮಾತು ಮಳೆಗಾಲದ ಮಿಂಚಿನ ಹಾಗೆ ಹೋಳೀತು, ಮಾತು ಕೊಟ್ಟು ಮಾಯವಾಗ್ತಾರೆ! ನಮ್ಮಂಥ ಬಡವರ ಪಾಲಿಗೆ ಬರೋದು ಕಲ್ಲು ಮಳೆ ಮಾತ್ರ. ನಮ್ಮ ಬ್ಯಾನಿ ಇವರಿಗೆ ಎನ್ ಗೊತ್ತಪ್ಪ, ಇಂತಹ ಮಳೆಗಾಲದಾಗ ರಾಜಕಾರಣಿಗಳಿಗೆ ಹಾಗೂ ಅಧಿಕಾರಿಗಳಿಗೆ ಒಂದ ದಿವಸ ಗುಡಿಸಲದಾಗ ಬಂದ ಇರಕ ಹೇಳಪ್ಪ ಅವಾಗ್ ನಾವ್ ಎಂತಹಾ ಸಂಕಷ್ಟ ಅನುಭವಿಸಲಾಕತಿವೇ ಅಂತ ಗೊತ್ ಆಗತಾದಪ್ಪ.. ಆಯೋ ರಾಮ್... ಆಯೋ ದೇವರೇ ನೀನೇ ನಮಗ್ ಕರುಣೆ ತೂರಿಸಪ್ಪ ಅಂತ ಗಳಗಳ ಅತ್ತ ಅಜ್ಜಿಯ ನೋವಿನ ಮಾತುಗಳು. ಹೌದು, ಬಡವರಿಗೆ ಸರ್ಕಾರ ಅನೇಕ ವಸತಿ ಯೋಜನೆಗಳನ್ನು ಕೋಟ್ಯಂತರ ರೂ. ಖರ್ಚು ಮಾಡಿ ಹಲವಾರು ಯೋಜನೆಗಳು ಜಾರಿಗೆ ತರುತ್ತದೆ. ಆದರೆ ಸರಕಾರ ಯೋಜನೆ ಮಾತ್ರ ದುಡ್ಡು ಕೊಟ್ಟವರಿಗೆ ಮಾತ್ರ ಸಿಗುತ್ತದೆ ಎಂಬ ಹಾಗೇ ಆಗಿದೆ, ನಿಜವಾದ ಪಲಾನುಭವಿಗಳಿಗೆ ಸಿಗಬೇಕಿದ್ದ ವಸತಿ ಯೋಜನೆಗಳು ಮಾತ್ರ ಪ್ರಭಾವಿ ವ್ಯಕ್ತಿಗಳಿಗೆ ಮಾತ್ರ ಸೀಮಿತವಾಗಿದೆ.



ಯಾದಗಿರಿ ಜಿಲ್ಲೆಯ ಚಟ್ನಳ್ಳಿ ಗ್ರಾಮದಲ್ಲಿ ಅಧಿಕಾರಿಗಳ ನಿರ್ಲಕ್ಷ್ಯದಿಂದ ಪರಿಶಿಷ್ಟ ಸಮುದಾಯದ ಕೇಲ ಬಡ ಕುಟುಂಬಗಳು ಗುಡಿಸಲಿನಲ್ಲಿಯೇ ಬದುಕು ಸಾಗಿಸುತ್ತಿವೆ. ಚಟ್ನಳ್ಳಿ ಗ್ರಾಮ ಪಂಚಾಯಿತಿ 19 ಸದಸ್ಯರನ್ನು ಹೊಂದಿದೆ. ಪಂಚಾಯಿತಿ ವ್ಯಾಪ್ತಿಯಲ್ಲಿ ಸುಮಾರು 2000ಕ್ಕೂ ಹೆಚ್ಚು ಮನೆಗಳಿವೆ. ಈ ಗ್ರಾಮದಲ್ಲಿ 100ಕ್ಕೂ ಹೆಚ್ಚು ಪರಿಶಿಷ್ಟ ಜಾತಿಯ ಕುಟುಂಬಗಳಿವೆ. ಆದರೆ, ಇಲ್ಲಿ ಇನ್ನೂ ಕೆಲ ಕುಟುಂಬಗಳಿಗೆ ವಸತಿ ಭಾಗ್ಯ ಸಿಗದಿರುವುದರಿಂದ ಈ ಕುಟುಂಬದವರ ಬದುಕು ಗುಡಿಸಲಿನಲ್ಲೇ ಕಮರುತ್ತಿವೆ. ತಾಯಿ ತಾಯಮ್ಮ ಹಳ್ಳಿ ಹಾಗೂ ಮಗಳು ಬಸಮ್ಮ, ಅಳಿಯ ಭಾಗಪ್ಪ, ಮೊಮ್ಮಗ ಮರಿಲಿಂಗಪ್ಪ, ಮೊಮ್ಮಗ ಪರಶುರಾಮ್ ಅವರ ಕುಟುಂಬದವರು 3 ವರ್ಷಗಳಿಂದ ಗುಡಿಸಲಿನಲ್ಲಿ ವಾಸಿಸುತ್ತಿದ್ದೆವೆ. ಮಗಳು, ಅಳಿಯ ಮೊಮ್ಮಗ ಬೆಂಗಳೂರಿಗೆ ದುಡಿಯೋಕೆ ಹೋಗಿದ್ದಾರೆ, ನಾನು ನನ್ನ ಮೊಮ್ಮಗ ಕೂಲಿ ಕೆಲಸ ಮಾಡಿ ಬಂದ ಹಣದಲ್ಲಿ ಹೇಗೋ ಜೀವನ ನಿರ್ವಹಣೆ ಮಾಡುತ್ತಿದ್ದಾರೆ.

**ನಮ್ಮ ಕುಟುಂಬದಲ್ಲಿ ಒಟ್ಟು ಐದು ಜನರಿದ್ದೇವೆ:** 3 ವರ್ಷದಿಂದ ಗುಡಿಸಲಿನಲ್ಲಿಯೇ ವಾಸಿಸುತ್ತಿದ್ದೇವೆ.ಚಟ್ನಳ್ಳಿ ಗ್ರಾಮ ಪಂಚಾಯತ್ ಪಿಡಿಓ ಮತ್ತು ಅಧ್ಯಕ್ಷರು 25000,30000 ಸಾವಿರ ರೂಪಾಯಿ ಲಂಚ ಕೊಟ್ಟರೆ ಸರಕಾರಿ ಮನೆ ಮಾಡುತ್ತೇವೆ ಎಂದು ಹೇಳುತ್ತಾರೆ ನಾವು ಗ್ರಾಮ ಪಂಚಾಯಿತಿಗೆ ಅಲೆದಾಡಿ ಸುಸ್ತಾಗಿದ್ದೇವೆ. ಎಷ್ಟೋ ವರ್ಷಗಳಿಂದ ಅರ್ಜಿ ಸಲ್ಲಿಸಿದ್ದರು. ಅದರ ಸ್ಥಿತಿ ಏನಾಯಿತು ಎನ್ನುವ ಮಾಹಿತಿ ಇನ್ನೂ ತಿಳಿದಿಲ್ಲ ಎಂದು ತಾಯಮ್ಮ ಬೇಸರ ವ್ಯಕ್ತಪಡಿಸಿದರು.

**ಉದಯ ವಾಹಿನಿ ಕಳಕಳಿಗೆ ಸ್ಪಂದಿಸುತ್ತಾರಾ ರಾಜಕೀಯ ನಾಯಕರು**

ಗ್ರಾಮದಲ್ಲಿ ಇನ್ನೂ ಇಂಥ ಅನೇಕ ಬಡ ಕುಟುಂಬಗಳಿವೆ. ಸರ್ವೆ ಮಾಡಿ ಡಾ.ಬಿ.ಆರ್.ಅಂಬೇಡ್ಕರ್ ಹಾಗೂ ಇತರ ವಸತಿ ಯೋಜನೆ ಅಡಿಯಲ್ಲಿ ಮನೆಗಳು ಕಲ್ಪಿಸಲು ಅಧಿಕಾರಿಗಳು ಹಾಗೂ ರಾಜಕಾರಣಿಗಳು ಪ್ರಾಮಾಣಿಕವಾಗಿ ಪ್ರಯತ್ನ ಮಾಡಿ ಸರ್ಕಾರ ವಸತಿ ಯೋಜನೆಯಡಿ ಮನೆಗಳು ಮಂಜೂರು ಮಾಡಬೇಕೆಂಬುದು ಉದಯ ವಾಹಿನಿ ಪತ್ರಿಕೆಯ ಕಳಕಳಿಯಾಗಿದೆ.

**ನಮ್ಮ ಗ್ರಾಮದ ವಾರ್ಡ್ 02 ರಲ್ಲಿ ಪೂರ್ವಜರ ಮೊದಲು ಮಣ್ಣಿನ ಮನೆ ಇದ್ದು, ಅದು ಕೂಡ ಬಿದ್ದಿದ್ದು, ಆ ಸ್ಥಳದಲ್ಲಿ ಜೋಪಡಿ ಹಾಕಿಕೊಂಡು 2 ವರ್ಷ ಮೇಲಾಗಿದೆ ಇದರಲ್ಲಿ 5 ಜನ ವಾಸವಾಗಿದ್ದರೆ ಈ ವಿಷಯದ ಬಗ್ಗೆ ಇವರು ಗ್ರಾಮ ಪಂಚಾಯತ್ ಸದಸ್ಯರಿಗೆ ಮತ್ತು ಅಧ್ಯಕ್ಷರಿಗೆ ಹಾಗೂ PDO ಅವರಿಗೆ ಮನೆ ಇಲ್ಲ ಅಂತ ಕೇಳಿ ಡಾಕ್ಯುಮೆಂಟ್ಸ್ ಕೊಟ್ಟರು ಸಹ ಒಂದು ಮನೆಯು ನಮಗೆ ಹಾಕಿಲ್ಲ, ಮನೆ ಇದ್ದವರಿಗೆ ಮತ್ತೆ ಅನುಕೂಲಸ್ತರಿಗೆ ಮನೆಯನ್ನು ಹಾಕಿದ್ದಾರೆ.**


**-ವಾಸುದೇವ ತಂದೆ ಸುರೇಶ ಕೊಂಬಿನೋರ್**
**ಗ್ರಾಮದ ನಿವಾಸಿ**

**ಯಾದಗಿರಿ ಜಿಲ್ಲೆಯ ಶಹಪುರ ತಾಲ್ಲೂಕ ಚಟ್ನಳ್ಳಿ ಗ್ರಾಮ ಪಂಚಾಯತಿಯಲ್ಲಿ 250 ಮನೆಗಳನ್ನು ಬಂದರೂ ಸಹ ಅಧ್ಯಕ್ಷರು ಮತ್ತು ಸದಸ್ಯರು ಹಾಗೂ ಪಿಡಿಒ ಸೇರಿಕೊಂಡು ಮನೆ ಇದ್ದವರಿಗೆ ಮನೆ ಹಾಕಿದ್ದಾರೆ.. ಮರಿಲಿಂಗಪ್ಪ ತಂದೆ ಬಾಗಪ್ಪ ನಾನು ನನಗೆ ಮನೆ ಹಾಕ್ರಿ ಅಂತ ಕಾಗದ ಪತ್ರ ಕೊಟ್ಟಿದ್ದೇನೆ ನಾವು ಗುಡಿಸಿಲದಲ್ಲಿ ಇದ್ದು 2 ವರ್ಷ ಆಯ್ತು ಸರ್ ಅಂತ ಹೇಳಿದ್ದೇನೆ ಆಯ್ತಪ್ಪ ಆಯ್ತು ಮನೆ ಆಗ್ತಿವಿ ಅಂತ PDO, ಅಧ್ಯಕ್ಷ ಮತ್ತು ಸದಸ್ಯರು ಹೇಳಿದರು ನನಗೆ ಆಯಿತು ಸರ್ ಅಂತ ನಾನು ಸುಮ್ಮನೆ ಇದ್ದೆ ಆಮೇಲೆ ನನ್ನ ಕರೆದು 30.000 ಕೊಡು ಅಂತ ಅಧ್ಯಕ್ಷ ಮತ್ತು ಸದಸ್ಯ ನನಗೆ ಕೇಳಿದರು ನನ್ನತ್ರ ಅಷ್ಟು ದುಡ್ಡು ಇಲ್ಲ ಅಂತ ಹೇಳಿದೆ ಹಾಗಾದ್ರೆ ನಿನಗೆ ಮನೆ ಹಾಕಲ್ಲ ಅಂತ ಹೇಳಿದರು.. ನಾವು ಗುಡಿಸಿಲದಲ್ಲಿ ನಾಲಕ್ಕ ಜನ ವಾಸವಾಗಿದ್ದೇವೆ ಸರ್.**

**-ಮರಿಲಿಂಗಪ್ಪ ಹಳ್ಳಿ (ತಾಯಮ್ಮ ಮೊಮ್ಮಗ)**

## ಕಾನಿಪ ಧ್ವನಿ ಸಂಘದಿಂದ ಅಗ್ನಿಶಾಮಕ ಸಿಬ್ಬಂದಿಗೆ ಆರೋಗ್ಯ ತಪಾಸಣೆ ಶಿಬಿರ

• ಉದಯವಾಹಿನಿ, ಮುದ್ದೇಬಿಹಾಳ



ಉದಯವಾಹಿನಿ ಚಿತ್ರ

ಜು. 30ರಂದು ಪತ್ರಿಕಾ ದಿನಾಚರಣೆಯ ಅಂಗವಾಗಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯಿಂದ ಫಕೀರೇಶ್ವರ ಡೈಗ್ನೋಸ್ಟಿಕ್ ಸೆಂಟರ್ ಸಹಯೋಗದಲ್ಲಿ ಅಗ್ನಿಶಾಮಕ ಸಿಬ್ಬಂದಿಗೆ ವಿಶೇಷ ಆರೋಗ್ಯ ತಪಾಸಣೆ ಶಿಬಿರ, ಉಚಿತ ಇಸಿಜಿ ಹಾಗೂ ಆರ್.ಬಿ.ಎಸ್. ಪರೀಕ್ಷೆ ಹಾಗೂ ಹೃದಯ ರೋಗದ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಈ ಶಿಬಿರದ ಬೆಳಿಗ್ಗೆ 9.30 ಗಂಟೆಗೆ ಫಕೀರೇಶ್ವರ ಡೈಗ್ನೋಸ್ಟಿಕ್ ಸೆಂಟರ್‌ನಲ್ಲಿ ಆರಂಭವಾಗಲಿದೆ. ನಂತರ ಸಂಜೆ 4 ಗಂಟೆಗೆ ಪಟ್ಟಣದ ಅಂಬೇಡ್ಕರ್ ಸಮುದಾಯ ಭವನದ ಪಕ್ಕದಲ್ಲಿರುವ ಅಗ್ನಿಶಾಮಕ ಠಾಣೆಯ ಸಭಾಭವನದಲ್ಲಿ ಉಪನ್ಯಾಸ ಹಾಗೂ ಸನ್ಮಾನ ಕಾರ್ಯಕ್ರಮ ಜರುಗಲಿದೆ. ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಖಾಸ್ಗತೇಶ್ವರ ಮಠದ ಶರಣೆ ನೀಲಮ್ಮ ವಿರಕ್ತಮಠ ವಹಿಸಲಿದ್ದಾರೆ. ವಿಜಯಪುರ ಅಗ್ನಿಶಾಮಕ ಇಲಾಖೆಯ ಜಿಲ್ಲಾ ಅಧಿಕಾರಿ ಶಶಿಧರ ನೀಲಗಾರ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ಕಾರ್ಯನಿರತ ಪತ್ರಕರ್ತರ ಧ್ವನಿ ಸಂಘಟನೆಯ ಜಿಲ್ಲಾಧ್ಯಕ್ಷ ಯೂಸೂಫ್ ನೇವಾರ ಅಧ್ಯಕ್ಷತೆ ವಹಿಸಲಿದ್ದಾರೆ. ಸಾಧಕರನ್ನು ಗೌರವಿಸುವ ಕಾರ್ಯವನ್ನು ಅಹಿಲ್ಯಾದೇವಿ ಹೋಳ್ಕರ್ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ಎಂ.ಎನ್.ಮದರಿ, ಅಸ್ಕಿ ಫೌಂಡೇಶನ್ ಅಧ್ಯಕ್ಷ ಸಿ.ಬಿ.ಅಸ್ಕಿ ನೆರವೇರಿಸಲಿದ್ದಾರೆ.

ಕಾರ್ಯಕ್ರಮದ ಹಿನ್ನೆಲೆಯಲ್ಲಿ ಮುದ್ದೇಬಿಹಾಳದ ಕರೇಕಲ್ ಪಾಟೀಲ್ ಮಲ್ಟಿಸ್ಪೆಶಾಲಿಟಿ ಆಸ್ಪತ್ರೆಯ ಮುಖ್ಯಸ್ಥ ಡಾ. ಬಸನಗೌಡ ಕರೇಕಲ್ ಪಾಟೀಲ್ ಅವರು ಹೃದಯ ರೋಗ: ಕಾರಣ ಮತ್ತು ಪರಿಹಾರ ವಿಷಯದ ಕುರಿತು ಉಪನ್ಯಾಸ ನೀಡಲಿದ್ದಾರೆ. ಪತ್ರಕರ್ತರಾದ ಹಣಮಂತ ನಲವಡೆ ಮತ್ತು ರವಿ ತೇಲಂಗಿ ಅವರನ್ನು ಈ ಸಂದರ್ಭದಲ್ಲಿ ಸನ್ಮಾನಿಸಲಾಗುವುದು. ಮುಖ್ಯ ಅತಿಥಿಗಳಾಗಿ ಪುರಸಭೆ ಅಧ್ಯಕ್ಷ ಮಹೆಬೂಬ ಗೊಳಸಂಗಿ, ಪ್ರಭಾರ ತಹಸೀಲ್ದಾರ್ ಎ.ಡಿ. ಅಮರವಾದಗಿ, ಸಿಪಿಐ ಮೊಹ್ಮದ್ ಫಸಿವುದ್ದೀನ್, ಐಎನ್‌ಬಿಸಿಡಬ್ಲ್ಯೂ ರಾಜ್ಯ ಮಹಿಳಾ ಘಟಕದ ಅಧ್ಯಕ್ಷೆ ಸಂಗೀತಾ ನಾಡಗೌಡ, ವೀರಶೈವ ಲಿಂಗಾಯತ ವೇದಿಕೆ ಉತ್ತರ ಕರ್ನಾಟಕ ವಿಭಾಗದ ಅಧ್ಯಕ್ಷೆ ಕಾಶೀಬಾಯಿ ರಾಂಪೂರ, ಡಾ. ಸಿ.ಕೆ. ಶಿವಯೋಗಿಮಠ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ, ಕಸಾಪ ಅಧ್ಯಕ್ಷ ಕಾಮರಾಜ ಬಿರಾದಾರ, ಕಾನಿಪ ಧ್ವನಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಿನಾಯಕ ಸೊಂಡೂರ ಪಾಲ್ಗೊಳ್ಳಲಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಸಂಘದ ಅಧ್ಯಕ್ಷ ಶಂಕರ ಹೆಬ್ಬಾಳ, ಕಾರ್ಯದರ್ಶಿ ಗುಲಾಮ ದಫೇದಾರ, ಸದಸ್ಯರಾದ ಹಣಮಂತ ನಲವಡೆ, ಮಾರುತಿ ಹಿಪ್ಪರಗಿ, ಬಸವರಾಜ ಕುಂಟೋಜಿ, ಬಸವರಾಜ ಹೂಗಾರ, ಮುತ್ತು ಕನ್ನೂರ, ವಿನಯ ಕಡ್ಲಿಮಟ್ಟಿ, ಹಣಮಂತ ಚವ್ಹಾಣ ಭಾಗವಹಿಸಿದ್ದರು.

## ಪ್ಲಾಸ್ಟಿಕ್ ರಾಷ್ಟ್ರಧ್ವಜಗಳನ್ನು ಮಾರಾಟ ಮಾಡಬೇಡಿ: ತಹಶೀಲ್ದಾರ್ ವಿನೋದ

• ಉದಯವಾಹಿನಿ, ಬೀಳಗಿ




ಪ್ಲಾಸ್ಟಿಕ್ ರಾಷ್ಟ್ರಧ್ವಜಗಳನ್ನು ಮಾರಾಟ ಮಾಡಬೇಡಿ ಎಂದು ತಾಲ್ಲೂಕಿನ ವ್ಯಾಪಾರಸ್ಥರಿಗೆ ತಹಶೀಲ್ದಾರ್ ವಿನೋದ ಹತ್ತಳ್ಳಿ ಸೂಚಿಸಿದರು. ತಹಶೀಲ್ದಾರ್ ಕಚೇರಿ ಸಭಾಂಗಣದಲ್ಲಿ ಜರುಗಿದ ಸ್ವಾತಂತ್ರ್ಯ ದಿನಾಚರಣೆ ಕುರಿತ ಪೂರ್ವಸಿದ್ಧತಾ ಸಭೆಯಲ್ಲಿ ಮಾತನಾಡಿದ ಅವರು, ವ್ಯಾಪಾರಸ್ಥರು ಪ್ಲಾಸ್ಟಿಕ್ ಧ್ವಜವನ್ನು ಮಾರುವುದಾಗಲಿ, ಸಾರ್ವಜನಿಕರು ಅವುಗಳನ್ನು ಬಳಕೆ ಮಾಡುವುದಾಗಲಿ ಕಂಡುಬಂದಲ್ಲಿ ನಿರ್ದಾಕ್ಷಿಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು. ಯಾವುದೇ ಬಗೆಯ ಲೋಪವಾಗದಂತೆ ಸಿದ್ಧತೆ ಮಾಡಿಕೊಳ್ಳಬೇಕು ಎಂದರು. ಸ್ವಾತಂತ್ರ್ಯ ದಿನಾಚರಣೆ ಸಂಬಂಧ ರಚಿಸಲಾದ ವಿವಿಧ ಸಮಿತಿಗಳ ಸಿದ್ದತೆ ಕುರಿತು ಚರ್ಚಿಸಿದರು. ಆಗಸ್ಟ್ 15ರಂದು ಬೆಳಿಗ್ಗೆ 8.15 ಕ್ಕೆ ಗ್ರಾಮ ಚಾವಡಿ ಬಳಿ 9ಕ್ಕೆ ತಹಶೀಲ್ದಾರ್ ಕಾರ್ಯಾಲಯದಲ್ಲಿ ಶಾಸಕ ಜೆ.ಟಿ.ಪಾಟೀಲ ಧ್ವಜಾರೋಹಣ ಮಾಡಲಿದ್ದಾರೆ. ತಾಲ್ಲೂಕಿನ ಎಲ್ಲಾ ಇಲಾಖೆಯ ಅಧಿಕಾರಿಗಳು, ಶಾಲಾ ವಿದ್ಯಾರ್ಥಿಗಳು ಸಮಯಕ್ಕೆ ಮುಂಚಿತವಾಗಿ ಹಾಜರಿರಲು ತಿಳಿಸಿದರು.

ಮಾಜಿ ಸೈನಿಕರೂ ಸೇರಿ ವಿವಿಧ ಕ್ಷೇತ್ರಗಳಲ್ಲಿ ಉತ್ತಮ ಸೇವೆ ಸಲ್ಲಿಸಿದವರಿಗೆ ಸನ್ಮಾನ ಮಾಡಲಾಗುತ್ತಿದೆ. ನಂತರ ಸಾಂಸ್ಕೃತಿಕ, ದೇಶಭಕ್ತಿ ಗೀತೆಗಳ ಗಾಯನ ಕಾರ್ಯಕ್ರಮ ನಡೆಯಲಿದೆ ಎಂದರು.

## ನಗರಸಭೆ ಉಪಾಧ್ಯಕ್ಷೆ ಸ್ಥಾನಕ್ಕೆ ಶಕೀಲಾಬಾನು ಆಯ್ಕೆ

• ಉದಯವಾಹಿನಿ, ಚಿತ್ರದುರ್ಗ



ಉದಯವಾಹಿನಿ ಚಿತ್ರ

ಚಿತ್ರದುರ್ಗ ನಗರಸಭೆಯ ಉಪಾಧ್ಯಕ್ಷೆಯಾಗಿ 12ನೇ ವಾರ್ಡ್ ಸದಸ್ಯೆ ಶಕೀಲಾಬಾನು ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಶ್ರೀದೇವಿ ಜಿ.ಎಸ್ ಅವರ ರಾಜೀನಾಮೆಯಿಂದ ತೆರವಾದ ನಗರಸಭೆ ಉಪಾಧ್ಯಕ್ಷೆ ಸ್ಥಾನದ ಆಯ್ಕೆಗೆ ಸೋಮವಾರ ನಗರಸಭೆಯ ಕೌನ್ಸಿಲ್ ಸಭಾಂಗಣದಲ್ಲಿ ಚುನಾವಣೆ ನಡೆಯಿತು.

ಶಕೀಲಾ ಬಾನು ಅವರು ನಗರಸಭೆ ಅಧ್ಯಕ್ಷೆ ಸಮಿತಾ ಬಿ.ಎನ್, ಸ್ಥಾಯಿ ಸಮಿತಿ ಅಧ್ಯಕ್ಷ ಸೈಯದ್ ನಸುರುಲ್ಲಾ ಸೇರಿದಂತೆ ಇತರೆ ಸದಸ್ಯರೊಂದಿಗೆ ಆಗಮಿಸಿ ಉಪಾಧ್ಯಕ್ಷೆ ಸ್ಥಾನದ ಆಯ್ಕೆಗೆ ನಾಮಪತ್ರ ಸಲ್ಲಿಸಿದರು. ಚುನಾವಣೆ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ಉಪವಿಭಾಗಾಧಿಕಾರಿ ಮೆಹಬೂಬ್ ಜಿಲಾನಿ ಖುರೇಷಿ ನಾಮಪತ್ರ ಸ್ವೀಕರಿಸಿ, ನಾಮಪತ್ರದ ಪರಿಶೀಲನೆ ಕಾರ್ಯ ನಡೆಸಿದರು.

ನಿಗದಿಪಡಿಸಿದ ಅವಧಿಯೊಳಗೆ ಬೇರೆ ಯಾವ ಸದಸ್ಯರು ನಾಮಪತ್ರ ಸಲ್ಲಿಸದ ಕಾರಣ ಶಕೀಲಾ ಬಾನು ಉಪಾಧ್ಯಕ್ಷೆಯಾಗಿ ಅವಿರೋಧ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ಮೆಹಬೂಬ್ ಜಿಲಾನಿ ಖುರೇಷಿ ಘೋಷಿಸಿದರು. ಈ ವೇಳೆ ನಗರ ಸಭೆ ಪೌರಾಯಕ್ತೆ ಎಂ.ರೇಣುಕಾ ಉಪಸ್ಥಿತರಿದ್ದರು. 35 ವಾರ್ಡ್‌ಗಳ ಚುನಾಯಿತ ಸದಸ್ಯರು, ಸ್ಥಳೀಯ ವಿಧಾನಸಭೆ ಶಾಸಕ ಮತ್ತು ಲೋಕಸಭಾ ಸಂಸದರು ಸೇರಿ ಒಟ್ಟು 37 ಸದಸ್ಯರ ಸಂಖ್ಯಾ ಬಲವನ್ನು ಚಿತ್ರದುರ್ಗ ನಗರಸಭೆ ಹೊಂದಿದೆ. ಇದರಲ್ಲಿ ಒಟ್ಟು 9 ಸದಸ್ಯರು ಉಪಾಧ್ಯಕ್ಷರ ಚುನಾವಣೆ ಸಭೆಗೆ ಗೈರು ಹಾಜರಾಗಿದ್ದರು.

ನೂತನವಾಗಿ ಉಪಾಧ್ಯಕ್ಷೆ ಸ್ಥಾನಕ್ಕೆ ಆಯ್ಕೆಯಾದ ಶಕೀಲಾ ಬಾನು ಅವರಿಗೆ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, ನಗರಸಭೆ ಅಧ್ಯಕ್ಷೆ ಸಮಿತಾ ಬಿ.ಎನ್. ಸ್ಥಾಯಿ ಸಮಿತಿ ಅಧ್ಯಕ್ಷ ಸೈಯದ್ ನಸುರುಲ್ಲಾ ಸೇರಿದಂತೆ ಸದಸ್ಯರು ಅಭಿನಂದಿಸಿದರು.

## ದಕ್ಷಿಣ ಕನ್ನಡ ಜಿಲ್ಲೆಗೆ ಕ್ಯಾನ್ಸರ್ ಡೇ ಕೇರ್ ಸೆಂಟರ್ ಮಂಜೂರು

• ಉದಯವಾಹಿನಿ, ದಕ್ಷಿಣ ಕನ್ನಡ




ಉದಯವಾಹಿನಿ ಚಿತ್ರ

ಕ್ಯಾನ್ಸರ್ ರೋಗಿಗಳ ಅನುಕೂಲ, ಆರೈಕೆ ಮೂಲಸೌಕರ್ಯವನ್ನು ಬಲಪಡಿಸುವ ಉದ್ದೇಶದಿಂದ ಕೇಂದ್ರ ಸರ್ಕಾರವು ಮಂಗಳೂರಿನ ವೆನ್ಲಾಕ್ ಜಿಲ್ಲಾ ಆಸ್ಪತ್ರೆಗೆ ಕ್ಯಾನ್ಸರ್ ಡೇ ಕೇರ್ ಸೆಂಟರ್ ಸ್ಥಾಪನೆಗೆ ಅನುಮೋದನೆ ನೀಡಿದೆ. ಇದಕ್ಕಾಗಿ 1.49 ಕೋಟಿ ರೂ. ಅನುದಾನ ಮೀಸಲಿಡಲಾಗಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾ. ಬ್ರಿಜೇಶ್ ಚೌಟ ಹೇಳಿದ್ದಾರೆ.

ಕ್ಯಾನ್ಸರ್ ರೋಗಿಗಳ ಆರೈಕೆಯಲ್ಲಿ ನಗರ- ಗ್ರಾಮೀಣ ಅಸಮಾನತೆ ಕಡಿಮೆ ಮಾಡಿ, ಪರಿಣಾಮಕಾರಿ ಚಿಕಿತ್ಸೆ ಒದಗಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು 2025-26ರ ಕೇಂದ್ರ ಬಜೆಟ್‌ನಲ್ಲಿ ಮುಂದಿನ ಮೂರು ವರ್ಷಗಳಲ್ಲಿ ದೇಶದ ಎಲ್ಲಾ ಜಿಲ್ಲಾ ಆಸ್ಪತ್ರೆಗಳಲ್ಲಿ ಕ್ಯಾನ್ಸರ್ ಡೇ ಕೇರ್ ಸ್ಥಾಪಿಸುವ ಬಗ್ಗೆ ಘೋಷಣೆ ಮಾಡಿತ್ತು. ಈ ಉಪಕ್ರಮದ ಭಾಗವಾಗಿ ಪ್ರಥಮ ಹಂತದಲ್ಲಿ ದೇಶದಲ್ಲಿ 200 ಕೇಂದ್ರಗಳನ್ನು ಸ್ಥಾಪಿಸಲು ಕೇಂದ್ರ ಮುಂದಾಗಿದ್ದು, ರಾಷ್ಟ್ರೀಯ ಕ್ಯಾನ್ಸರ್ ನೋಂದಣಿ ದತ್ತಾಂಶ ಮತ್ತು ರಾಜ್ಯ ಸರ್ಕಾರ ಸಲ್ಲಿಸಿದ ಪ್ರಸ್ತಾವನೆಗಳ ಆಧಾರದ ಮೇಲೆ ದಕ್ಷಿಣ ಕನ್ನಡ ಸೇರಿದಂತೆ ಕರ್ನಾಟಕದ 16 ಜಿಲ್ಲೆಗಳನ್ನು ಆಯ್ಕೆ ಮಾಡಲಾಗಿದೆ. ರಾಷ್ಟ್ರೀಯ ಆರೋಗ್ಯ ಅಭಿಯಾನದ ಅಡಿಯಲ್ಲಿ ಡೇ ಕೇರ್ ಕ್ಯಾನ್ಸರ್ ಕೇಂದ್ರ ಸ್ಥಾಪಿಸಲು ಜಿಲ್ಲೆಗೆ 1.49 ಕೋಟಿ ರೂ. ವರೆಗೆ ಅನುದಾನವನ್ನು ಹಂಚಿಕೆ ಮಾಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಪ್ರಸ್ತಾವಿತ ಕೇಂದ್ರವು ಮಂಗಳೂರಿನ ವೆನ್ಲಾಕ್ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ಕ್ಯಾನ್ಸರ್ ರೋಗನಿರ್ಣಯ, ಕೀಮೋಥೆರಪಿ, ಆರೈಕೆ, ಕ್ಯಾನ್ಸರ್ ತಡೆಗಟ್ಟುವಿಕೆ -ಜಾಗೃತಿ ಕಾರ್ಯಕ್ರಮ ಮತ್ತು ಚಿಕಿತ್ಸಾ ಸೇವೆಗಳ ಜೊತೆಗೆ ಇತರ ಸೇವೆಗಳು ಒದಗಿಸಲಿದೆ. ಜನರಿಗೆ ಗುಣಮಟ್ಟದ ಕ್ಯಾನ್ಸರ್ ಆರೈಕೆಯನ್ನು ಒದಗಿಸುವುದು ಮತ್ತು ತೃತೀಯ ಹಂತದ ಆರೈಕೆ ಕೇಂದ್ರಗಳ ಮೇಲಿನ ಹೊರೆಯನ್ನು ಕಡಿಮೆ ಮಾಡುವುದು ಈ ಯೋಜನೆಯ ಉದ್ದೇಶವಾಗಿದೆ.

ಕ್ಯಾನ್ಸರ್ ರೋಗಿಗಳಿಗೆ ಚಿಕಿತ್ಸೆಯನ್ನು ಇನ್ನಷ್ಟು ಸುಲಭವಾಗಿ ತಲುಪಿಸಲು ಇದು ಒಂದು ಸಕಾಲಿಕ ನಿರ್ಧಾರವಾಗಿದ್ದು ಮಂಗಳೂರಿನಲ್ಲಿ ಡೇ ಕೇರ್ ಕ್ಯಾನ್ಸರ್ ಸೆಂಟರ್ ಸ್ಥಾಪನೆಯು ಶ್ರೇಣಿ 2, 3ನೇ ಹಂತದ ನಗರಗಳಲ್ಲಿ ನಗರಗಳಲ್ಲಿ ಆರೋಗ್ಯ ಸೇವೆಗಳನ್ನು ಬಲಪಡಿಸುವ ಪ್ರಧಾನಮಂತ್ರಿ ಮೋದಿ ಸರ್ಕಾರದ ಬದ್ಧತೆಯನ್ನು ಎತ್ತಿ ತೋರಿಸುತ್ತದೆ.

ಈ ಡೇ ಕೇರ್ ಸೆಂಟರ್ ನಲ್ಲಿ ಕ್ಯಾನ್ಸರ್ ಪೀಡಿತರಿಗೆ ಆರೈಕೆಯನ್ನು ಸ್ಥಳೀಯವಾಗಿಯೇ ಒದಗಿಸುವುದರಿಂದ ರೋಗಿಗಳು ದೂರದ ನಗರಗಳಿಗೆ ಪ್ರಯಾಣಿಸುವ ತೊಂದರೆ ತಪ್ಪುತ್ತದೆ. ಇದು ಅವರ ಚಿಕಿತ್ಸಾ ವೆಚ್ಚ ಮತ್ತು ಸಮಯವನ್ನು ಉಳಿಸುವುದಲ್ಲದೆ, ಚೇತರಿಕೆಗೆ ಅಗತ್ಯವಾದ ಮಾನಸಿಕ ನೆಮ್ಮದಿಯನ್ನೂ ನೀಡುತ್ತದೆ. ಮುಂದಿನ ದಿನಗಳಲ್ಲಿ ಈ ಸೆಂಟರ್ ದಕ್ಷಿಣ ಕನ್ನಡ ಮತ್ತು ಸುತ್ತಮುತ್ತಲಿನ ಜಿಲ್ಲೆಗಳ ನೂರಾರು ಕ್ಯಾನ್ಸರ್ ರೋಗಿಗಳಿಗೆ ಆಶಾಕಿರಣವಾಗಲಿದೆ ಎಂದು ಅವರು ಶ್ಲಾಘಿಸಿದ್ದಾರೆ.

## ಅಧಿಕವಾದ ಹಳದಿ ರೋಗ: ರೈತರಿಗೆ ಸಂಕಷ್ಟ


• ಉದಯವಾಹಿನಿ, ರೋಣ

ತಾಲ್ಲೂಕಿನಾದ್ಯಂತ ಸುರಿಯುತ್ತಿರುವ ಮಳೆಯಿಂದಾಗಿ ತೇವಾಂಶದ ಹೆಚ್ಚಾದ ಕಾರಣ ತಾಲ್ಲೂಕಿನ ರೈತರ ಹೆಸರು ಬೆಳೆಗೆ ಹಳದಿ ರೋಗ ಆವರಿಸುತ್ತಿದ್ದು, ರೋಗ ನಿಯಂತ್ರಣಕ್ಕೆ ರೈತರು ಪರದಾಡುವ ಸ್ಥಿತಿ ಉಂಟಾಗಿದೆ. ತಾಲ್ಲೂಕಿನ ಬೆಳವಣಿಕಿ ಗ್ರಾಮ ಸೇರಿದಂತೆ ಸುತ್ತಮುತ್ತಲಿನ ಕೃಷಿ ಭೂಮಿಗಳಲ್ಲಿ ಈಗಾಗಲೇ ಫಸಲು ಬಿಡುವ ಹಂತಕ್ಕೆ ಹೆಸರು ಬೆಳೆ ತಲುಪಿದೆ. ಹಳದಿ ರೋಗ ವ್ಯಾಪಕವಾಗಿ ಹರಡುತ್ತಿರುವ ಕಾರಣ ಇಳುವರಿ ಕುಂಟಿತಗೊಳ್ಳುವ ಭೀತಿಗೆ ರೈತರು ಒಳಗಾಗಿದ್ದಾರೆ.

ಹಳದಿ ರೋಗ ನಿಯಂತ್ರಣಕ್ಕೆ ಬಾರದಿದ್ದರೆ ಕಾಳು ಕಟ್ಟುವುದಿಲ್ಲ ಈ ಹಂತದವರೆಗೂ ಉತ್ತಮವಾಗಿ ಬೆಳೆ ಬಂದಿದ್ದರು ಫಸಲು ಬಿಡುವ ಸಮಯಕ್ಕೆ ಸರಿಯಾಗಿ ರೋಗ ವ್ಯಾಪಿಸಿದೆ ಎಂದು ರೈತ ಭೀಮಪ್ಪ ತಾಳಿ ಮತ್ತು ಬಸವಂತಪ್ಪ ಸುಣಗದ ಅಳಲು ತೋಡಿಕೊಂಡರು.

**ರೋಗ ನಿಯಂತ್ರಣಕ್ಕೆ ಸಲಹೆ**

**ಹಳದಿ ರೋಗ ನಿಯಂತ್ರಣಕ್ಕೆ ಬಿತ್ತನೆ ಪೂರ್ವದಲ್ಲಿಯೇ ಇಮಿಡಾಕ್ಲೋಪ್ರಿಡ್ 60 ಎಫ್.ಎಸ್ 5 ಮಿ.ಗ್ರಾಂ ಪ್ರತಿ ಕೆಜಿ ಬಿತ್ತನೆ ಬೀಜಕ್ಕೆ ಲೇಪನ ಮಾಡಿ ಬಿತ್ತನೆ ಮಾಡಬೇಕು. ರೋಗ ಪ್ರಾರಂಭದ ಹಂತದಲ್ಲಿ ಗುರುತಿಸಿ ರೋಗಪೀಡಿತ ಸಸಿಗಳನ್ನು ಕಿತ್ತು ಮಣ್ಣಿನಲ್ಲಿ ಹೂಳಬೇಕು. ರೋಗ ನಿಯಂತ್ರಣಕ್ಕಾಗಿ ಪ್ರತಿ ಲೀಟರ್ ನೀರಿಗೆ 0.3 ಗ್ರಾಂ ಥೈಯೋಮಿಥೋಕ್ಸಾಮ್ 25 % ಡಬ್ಲೂಜಿ 10 ರಿಂದ 15 ದಿನಗಳ ಅಂತರದಲ್ಲಿ ಅಂಟು ಮಿಶ್ರಣ ಮಾಡಿ ಸಿಂಪಡಣೆ ಮಾಡಬೇಕು ಎಂದು ಪ್ರಭಾರಿ ಸಹಾಯಕ ಕೃಷಿ ನಿರ್ದೇಶಕ ಎಸ್.ಎಫ್. ತಹಶೀಲ್ದಾರ್ ತಿಳಿಸಿದರು.**



ಉದಯವಾಹಿನಿ ಚಿತ್ರ

**ರೈತರು ಈಗಾಗಲೇ ಸಾಕಷ್ಟು ಖರ್ಚು ಮಾಡಿದ್ದು, ರೋಗ ನಿಯಂತ್ರಣಕ್ಕಾಗಿ ಮಾರುಕಟ್ಟೆಯಲ್ಲಿ ಲಭ್ಯವಿರುವ ಔಷಧಿಗಳನ್ನು ಡ್ರೋನ್ ಮೂಲಕ ಸಿಂಪರಣೆಗೆ ಸಾಕಷ್ಟು ಖರ್ಚು ಮಾಡಿದ್ದೇವೆ ಆದರೂ ರೋಗ ನಿಯಂತ್ರಣಕ್ಕೆ ಬರುತ್ತಿಲ್ಲ.**

**-ಶಿವಾನಂದ ಅಳಗವಾಡಿ, ರೈತ**

## ವಿಜಯೇಂದ್ರ ಡಮ್ಮಿ ಅಂತ ಬಿಜೆಪಿ ಹೈಕಮಾಂಡ್‌ಗೆ ಮನವರಿಕೆಯಾಗಿದೆ: ಯತ್ನಾಳ್

• ಉದಯವಾಹಿನಿ, ವಿಜಯಪುರ



ವಿಜಯೇಂದ್ರ ಡಮ್ಮಿ ಅಂತ ಬಿಜೆಪಿ ಹೈಕಮಾಂಡ್‌ಗೆ ಮನವರಿಕೆಯಾಗಿದೆ. ಹೀಗಾಗಿ ರಾಜ್ಯಾಧ್ಯಕ್ಷರ ನೇಮಕದಲ್ಲಿ ವಿಳಂಬವಾಗುತ್ತಿದೆ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ತಿಳಿಸಿದರು. ಜಿಲ್ಲೆಯಲ್ಲಿ ಮಾಧ್ಯಮದವರೊಂದಿಗೆ ಬಿಜೆಪಿ ರಾಜಾಧ್ಯಕ್ಷ ನೇಮಕ ವಿಳಂಬ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ವಿಜಯೇಂದ್ರ ಡಮ್ಮಿ ಎಂದು ಹೈಕಮಾಂಡ್‌ಗೆ ಮನವರಿಕೆಯಾಗಿದೆ. ಅದಕ್ಕೆ ರಾಜ್ಯಾಧ್ಯಕ್ಷ ಸ್ಥಾನ ನೇಮಕಕ್ಕೆ ವಿಳಂಬ ಮಾಡುತ್ತಿದ್ದಾರೆ.

ವಿಳಂಬ ಮಾಡುತ್ತಿದ್ದಾರೆ ಎಂದರೆ ವಿಜಯೇಂದ್ರ ಬಿಜೆಪಿ ಅಧ್ಯಕ್ಷನಾಗೋದಿಲ್ಲ ಎಂದರ್ಥ. ಸೋಮಣ್ಣ ಅವರು ಬೇರೆ ಬೇರೆ ಕೆಲಸದ ನಿಮಿತ್ತ ಅಮಿತ್ ಶಾ ಅವರನ್ನು ಭೇಟಿಯಾಗಿರಬಹುದು. ಆದರೆ ಸೋಮಣ್ಣ ಕೂಡಾ ಬಿಜೆಪಿ ರಾಜಾಧ್ಯಕ್ಷ ಸ್ಥಾನದ ಪ್ರಬಲ ಆಕಾಂಕ್ಷಿ ಎಂದರು. ಆ.2ರಂದು ವಿಜಯಪುರಕ್ಕೆ ಬಿಜೆಪಿ ವಿಭಾಗ ಮಟ್ಟದ ಕಾರ್ಯಕ್ರಮಕ್ಕೆ ವಿಜಯೇಂದ್ರ ಅವರು ಭೇಟಿ ನೀಡುತ್ತಿರುವ ವಿಚಾರವಾಗಿ ಮಾತನಾಡಿದ ಅವರು, ನಾನು ಪಕ್ಷ ಬಿಟ್ಟ ಮೇಲೆ ವಿಜಯೆಂದ್ರ ವಿಜಯಪುರಕ್ಕೆ ಬರುತ್ತಿದ್ದಾನೆ. ನಾನು ಬಿಜೆಪಿಯಲ್ಲಿದ್ದಾಗ ವಿಜಯೇಂದ್ರನಿಗೆ ಇಲ್ಲಿ ಬರೋಕೆ ಧೈರ್ಯ ಇರಲಿಲ್ಲ ಎಂದು ಟಾಂಗ್ ಕೊಟ್ಟರು. ಇನ್ನು ಸಭೆ ಮಾಡಲಿ, ಬಿಡಲಿ, ವಿಜಯೇಂದ್ರನಿಂದ ಬಿಜೆಪಿ ಉದ್ಧಾರ ಆಗಲ್ಲ. ವಿಜಯೇಂದ್ರ, ಯಡಿಯೂರಪ್ಪ ಯುಗ ಮುಗಿದಿದೆ. ಇಲ್ಲಿಗೆ ಬಂದು ಏನು ಮಾಡುತ್ತಾನೆ. ಸುಮ್ಮನೆ ಮಾಧ್ಯಮದವರು ಆತನನ್ನು ಹೈಲೆಟ್ ಮಾಡುತ್ತಿದ್ದಾರೆ ಎಂದರು. ಸಿಎಂ ಸ್ಥಾನ ತಪ್ಪಿದರ ಬಗ್ಗೆ ಖರ್ಗೆ ಹೇಳಿಕೆಗೆ ಪ್ರತಿಕ್ರಿಯಿಸಿ, ಖರ್ಗೆ ಅವರಿಗೆ ಈ ಹಿಂದೆಯೇ ಸಿಎಂ ಸ್ಥಾನ ಸಿಗಬೇಕಿತ್ತು. ಎರಡನೇ ಬಾರಿ ಸಿದ್ದು ಸಿಎಂ ಆಗುವ ಬದಲು ಖರ್ಗೆ ಅವರಿಗೆ ಬಿಟ್ಟುಕೊಡಬೇಕಿತ್ತು. ಈಗಲೂ ಸಿಎಂ ಬದಲಾವಣೆ ಆದ್ರೆ ಖರ್ಗೆ ಅವರನ್ನು ಸಿಎಂ ಮಾಡಿ ಎಂದು ಒತ್ತಾಯಿಸಿದರು.

## ಕಂಪನಿಗಳ ಒತ್ತಡ: ಯೂರಿಯಾ ಕೊರತೆಗೆ ಕಾರಣ

### ಯೂರಿಯಾ ಜೊತೆ ಇತರೆ ಉತ್ಪನ್ನಗಳನ್ನು ಕೊಳ್ಳಲು ಕಾರ್ಯತಂತ್ರ

• ಉದಯವಾಹಿನಿ, ಬಳ್ಳಾರಿ



ಉದಯವಾಹಿನಿ ಚಿತ್ರ

**ರೈತರ ಮೇಲೆ ಒತ್ತಡ**

ರಾಜ್ಯದಲ್ಲಿ ಎದುರಾಗಿರುವ ಯೂರಿಯಾ ಬಿಕ್ಕಟ್ಟಿನ ಹಿಂದೆ ರಸಗೊಬ್ಬರ ತಯಾರಕ ಕಂಪನಿಗಳು ವ್ಯಾಪಾರಿಗಳ ಮೇಲೆ ಹೇರುತ್ತಿರುವ ಒತ್ತಡವೇ ಕಾರಣ ಎಂಬ ಆರೋಪಗಳು ಕೇಳಿ ಬಂದಿವೆ. ಯೂರಿಯಾ ಖರೀದಿ ಮಾಡಲು ಬರುವ ರೈತರಿಗೆ, ಯೂರಿಯಾ ಜೊತೆಗೆ ಇತರ ಉಪ ಉತ್ಪನ್ನಗಳನ್ನು ಖರೀದಿ ಮಾಡುವಂತೆ ಮಾರಾಟಗಾರರು ಒತ್ತಾಯಿಸುತ್ತಿದ್ದಾರೆ.

ಯೂರಿಯಾ ಒಂದೇ ಬೇಕಾದರೆ, ದುಪ್ಪಟ್ಟು ದರ ಕೇಳುತ್ತಿದ್ದಾರೆ ಎಂಬ ಆರೋಪಗಳು ರಾಜ್ಯದ ಹಲವು ಕಡೆಗಳಿಂದ ಕೇಳಿ ಬಂದಿವೆ. ಇದರ ಜಾಡು ಹಿಡಿದು ಹೊರಟಾಗ ರಸಗೊಬ್ಬರ ಉತ್ಪಾದಕ ಕಂಪನಿಗಳ ಒತ್ತಡ ಬಯಲಾಗಿದೆ. ಯೂರಿಯಾ ಮತ್ತು ಇತರ ರಸಗೊಬ್ಬರಗಳ ಜೊತೆಗೆ ಡೀಲರ್‌ಗಳು ಇತರ ಉತ್ಪನ್ನಗಳನ್ನು ಖರೀದಿ ಮಾಡಲೇ ಬೇಕು ಎಂದು ಕಂಪನಿಗಳು ಒತ್ತಾಯಿಸುತ್ತಿವೆ. ಡೀಲರ್‌ಗಳು ಯೂರಿಯಾ ಜೊತೆಗೆ ಅನಿವಾರ್ಯವಾಗಿ ಇತರೆ ಉತ್ಪನ್ನಗಳನ್ನೂ ಖರೀದಿಸಿ ತರುತ್ತಿದ್ದಾರೆ. ಇದೇ ಡೀಲರ್‌ಗಳು ವ್ಯಾಪಾರಿಗಳ ಮೇಲೆ ಒತ್ತಡ ಹೇರಿ ಯೂರಿಯಾ ಜತೆಗೆ ಇತರ ಉತ್ಪನ್ನಗಳನ್ನು ಮಾರಾಟ ಮಾಡುತ್ತಿದ್ದಾರೆ. ಮಾರಾಟಗಾರರು ಈ ಒತ್ತಡವನ್ನು ರೈತರ ಮೇಲೆ ಹಾಕುತ್ತಿದ್ದಾರೆ ಎಂದು ಕೃಷಿ ಇಲಾಖೆಯ ಅಧಿಕಾರಿಗಳೇ ಒಪ್ಪಿಕೊಂಡಿದ್ದಾರೆ.

ನ್ಯಾನೊ ಯುರಿಯಾ, ನ್ಯಾನೊ ಡಿಎಫ್‌ಎಗಳಿಗೆ ಕಂಪನಿಗಳು ಇತ್ತೀಚೆಗೆ ಹೆಚ್ಚು ಆದ್ಯತೆ ನೀಡುತ್ತಿವೆ. ಯೂರಿಯಾ ಜೊತೆಗೆ ಈ ಉತ್ಪನ್ನಗಳನ್ನೂ ಖರೀದಿಸಲೇ ಬೇಕು ಎಂದು ಕಡ್ಡಾಯಪಡಿಸುತ್ತಿವೆ. ನ್ಯಾನೊ ಉತ್ಪನ್ನಗಳನ್ನು ಬೇಡ ಎಂದರೆ ಏನನ್ನೂ ಕೊಡುವುದಿಲ್ಲ ಎನ್ನುತ್ತಿವೆ. ಅವರು ಹೇಳಿದಂತೆ ಕೇಳಬೇಕು ಎಂಬಂತಾಗಿದೆ. ಅವರು ಕೊಡುವ ಉತ್ಪನ್ನಕ್ಕೂ ಕೇವಲ ಒಂದು ವರ್ಷದ ಕಾಲಾವಧಿ ಇರುತ್ತದೆ. ಅದರ ಒಳಗೆ ಮಾರಲೇ ಬೇಕಾದ ಪರಿಸ್ಥಿತಿ ಡೀಲರ್‌ಗಳದ್ದು ಮತ್ತು ವ್ಯಾಪಾರಸ್ಥರದ್ದು. ಇತ್ತೀಚೆಗೆ ಎಲ್ಲ ಕಂಪನಿಗಳೂ ನ್ಯಾನೊ ಉತ್ಪನ್ನಗಳನ್ನು ಮಾರುತ್ತಿವೆ. ನಾವು ಕಂಪನಿಯವರ ಮಾತು ಕೇಳುವುದೋ ಅಥವಾ ಮಾರಾಟಗಾರರು, ರೈತರ ಮಾತು ಕೇಳುವುದೋ ಗೊತ್ತಿಲ್ಲ ಎಂದು ರಸಗೊಬ್ಬರದ ಡೀಲರ್‌ವೊಬ್ಬರು ಮಾಹಿತಿ ನೀಡಿದ್ದಾರೆ. ಯೂರಿಯಾ ಜತೆಗೆ, ಇತರೆ ಉತ್ಪನ್ನಗಳನ್ನೂ ಮಾರಾಟ ಮಾಡಬೇಕು ಎಂದು ಕೇಂದ್ರ ಸರ್ಕಾರವೇ ಹೇಳಿದೆ. ಹಾಗೆಂದು ರೈತರು ಇತರೆ ಉತ್ಪನ್ನಗಳನ್ನು ಖರೀದಿಸಲೇಬೇಕು ಎಂದು ಒತ್ತಡ ಹೇರುವಂತೆ ಇಲ್ಲ. ಅವರಿಗೆ ಅಗತ್ಯವಿದ್ದ ಉತ್ಪನ್ನಗಳನ್ನು ಮಾತ್ರವೇ ವ್ಯಾಪಾರಸ್ಥರು ಮಾರಾಟ ಮಾಡಬೇಕು ಎಂದು ಸರ್ಕಾರ ಹೇಳಿದೆ ಎಂದು ಕೃಷಿ ಇಲಾಖೆಯ ಬಳ್ಳಾರಿ ಜಿಲ್ಲೆಯ ಜಂಟಿ ನಿರ್ದೇಶಕ ಸೋಮವಸುಂದರ್ ತಿಳಿಸಿದ್ದಾರೆ.

**ರೈತರ ಮನಸ್ಥಿತಿಯೂ ಕಾರಣ:** ರಸಗೊಬ್ಬರ ಎಂದರೆ ಯೂರಿಯಾ ಮಾತ್ರ. ಅದನ್ನು ಸಿಂಪರಣೆ ಮಾಡಿದರೆ ಬೆಳೆಗೆ ಗೊಬ್ಬರ ಹಾಕಿದ ಜವಾಬ್ದಾರಿ ಮುಗಿಯಿತು ಎಂಬ ತಪ್ಪು ಕಲ್ಪನೆಯೂ ಯೂರಿಯಾ ಬಿಕ್ಕಟ್ಟಿಗೆ ಮತ್ತೊಂದು. ಇದರ ಜತೆಗೆ, ಇತರ ಉತ್ಪನ್ನಗಳಿಗಿಂತಲೂ ಯೂರಿಯಾ ಬೆಲೆ ಕಡಿಮೆ ಇದೆ. ಹೀಗಾಗಿ ರೈತರು ಯೂರಿಯಾ ಕಡೆ ಮುಗಿಬೀಳುತ್ತಾರೆ ಎಂದು ಅಧಿಕಾರಿಗಳು ಹೇಳುತ್ತಿದ್ದಾರೆ.

**ಯೂರಿಯಾ ಜತೆಗೆ ಇತರೆ ಉತ್ಪನ್ನಳನ್ನು ಕೊಳ್ಳಲೇಬೇಕು ಎಂದು ರೈತರ ಮೇಲೆ ಒತ್ತಡ ಹಾಕದಂತೆ ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಇತ್ತೀಚೆಗೆ ನಡೆದ ಡೀಲರ್‌ಗಳು, ವ್ಯಾಪಾರಿಗಳ ಸಭೆಯಲ್ಲಿ ಹೇಳಲಾಗಿದೆ.**

**-ಸೋಮಸುಂದರ್, ಕೃಷಿ ಇಲಾಖೆ ಜಂಟಿ ನಿರ್ದೇಶಕ, ಬಳ್ಳಾರಿ**

**ಯೂರಿಯಾ ಜತೆಗೆ, ಇತರ ಉತ್ಪನ್ನಗಳನ್ನೂ ಕೊಳ್ಳುವಂತೆ ಕಂಪನಿಗಳು ಒತ್ತಡ ಹೇರುತ್ತಿವೆ. ಕೊಳ್ಳದೇ ಹೋದರೆ, ಯಾವುದೇ ಉತ್ಪನ್ನವನ್ನೂ ಕೊಡುವುದಿಲ್ಲ. ಇದು ಕಂಪನಿಗಳು ಸೃಷ್ಟಿಸುತ್ತಿರುವ ಸಮಸ್ಯೆ.**

**-ತಿಮ್ಮನಗೌಡ, ಜಿಲ್ಲಾ ಕೃಷಿ ಪರಿಕರ ಮಾರಾಟಗಾರ ಸಂಘದ ಅಧ್ಯಕ್ಷ**

# ಮಿನಿ ನ್ಯೂಸ್

## ಟಿಬಿ ಡ್ಯಾಂನಿಂದ 1 ಲಕ್ಷ ಕ್ಯೂಸೆಕ್ ನೀರು ರಿಲೀಸ್ ಕಂಪ್ಲಿ ಸೇತುವೆ ಮುಳುಗಡೆ

• ಉದಯವಾಹಿನಿ, ಕೊಪ್ಪಳ

ಮಲೆನಾಡು ಭಾಗದಲ್ಲಿ ನಿರಂತರ ಮಳೆಯಾಗುತ್ತಿರುವ ಹಿನ್ನೆಲೆ ತುಂಗಭದ್ರಾ ಜಲಾಶಯದಿಂದ 1 ಲಕ್ಷ ಕ್ಯೂಸೆಕ್ ನೀರನ್ನು ರಿಲೀಸ್ ಮಾಡಲಾಗಿದೆ. ಪರಿಣಾಮ ಕಂಪ್ಲಿ ಸೇತುವೆ ಮುಳುಗಡೆಯಾಗಿ ಬಳ್ಳಾರಿ-ಗಂಗಾವತಿ ಸಂಪರ್ಕ ಸ್ಥಗಿತಗೊಂಡಿದೆ. ಮಲೆನಾಡು ಪ್ರದೇಶದಲ್ಲಿ ಮಳೆ ಪ್ರಮಾಣ ಹೆಚ್ಚಾದ ಹಿನ್ನೆಲೆ ತುಂಗಭದ್ರಾ ಜಲಾಶಯಕ್ಕೆ ಒಳಹರಿವು ಹೆಚ್ಚಾಗಿದ್ದು, ಸದ್ಯ 1,07,500 ಕ್ಯೂಸೆಕ್ ನೀರಿನ ಒಳಹರಿವಿದೆ. ಡ್ಯಾಂನ ಸುರಕ್ಷತಾ ದೃಷ್ಟಿಯಿಂದ 26 ಗೇಟ್‌ಗಳ ಮೂಲಕ 1,06,548 ಕ್ಯೂಸೆಕ್ ನೀರು ರಿಲೀಸ್ ಮಾಡಲಾಗಿದೆ. ಏಕಾಏಕಿ ಅಪಾರ ಪ್ರಮಾಣದ ನೀರು ನದಿಗೆ ರಿಲೀಸ್ ಮಾಡಿರುವುದರಿಂದ ಬಳ್ಳಾರಿ ಜಿಲ್ಲೆಯ ಕಂಪ್ಲಿ ಸೇತುವೆ ಮುಳುಗಡೆಯಾಗಿದೆ. ಪರಿಣಾಮ ಬಳ್ಳಾರಿ-ಗಂಗಾವತಿ ಸಂಪರ್ಕ ಕಡಿತವಾಗಿದ್ದು, ವಾಹನ ಸಂಚಾರ ನಿರ್ಬಂಧಿಸಲಾಗಿದೆ. ಯಾವುದೇ ಅಹಿತಕರ ಘಟನೆ ನಡೆಯದಂತೆ ಮುನ್ನೆಚ್ಚರಿಕೆ ಕ್ರಮವಾಗಿ ಬ್ಯಾರಿಕೇಡ್ ಅಳವಡಿಸಿ, ಪೊಲೀಸರ ನಿಯೋಜನೆ ಮಾಡಲಾಗಿದೆ. ನದಿಗೆ ಅಪಾರ ಪ್ರಮಾಣದ ನೀರು ರಿಲೀಸ್ ಮಾಡಿರುವುದರಿಂದ ನದಿ ಪಾತ್ರದ ಗ್ರಾಮಗಳ ಜನರು ನದಿ ತೀರಕ್ಕೆ ಹೋಗದಂತೆ ಟಿಬಿ ಬೋರ್ಡ್ ಎಚ್ಚರಿಕೆ ನೀಡಿದೆ.

## ಭದ್ರಾ ನದಿಗೆ ಬಿದ್ದ ಪಿಕಪ್ 5 ದಿನಗಳ ಬಳಿಕ 2 ಕಿಮೀ ದೂರದಲ್ಲಿ ಚಾಲಕನ ಶವ ಪತ್ತೆ

• ಉದಯವಾಹಿನಿ, ಚಿಕ್ಕಮಗಳೂರು

ಕಳಸದ ಬಳಿ ಜೀಪ್ ಸಮೇತ ಭದ್ರಾ ನದಿಗೆ ಬಿದ್ದು ನಾಪತ್ತೆಯಾಗಿದ್ದ ಚಾಲಕ ಶಮಂತ್‌ನ ಮೃತದೇಹ 5 ದಿನಗಳ ಬಳಿಕ ಪತ್ತೆಯಾಗಿದೆ. ಸುಮಾರು 2 ಕಿಮೀ ದೂರದಲ್ಲಿ ಗಿಡಗಳ ನಡುವೆ ಮೃತದೇಹ ಕಳೆದ ಗುರುವಾರ ಬಾಡಿಗೆ ಮುಗಿಸಿಕೊಂಡು ಕೂಲಿ ಕಾರ್ಮಿಕರನ್ನ ಕರೆದೊಯ್ಯಲು ಹೋಗುವಾಗ ರಸ್ತೆಯ ಇಳಿಜಾರಿನಲ್ಲಿ ಪಿಕಪ್ ಚಾಲಕನ ನಿಯಂತ್ರಣ ತಪ್ಪಿ ರಸ್ತೆ ಬದಿಯ ವಿದ್ಯುತ್ ಕಂಬಕ್ಕೆ ಡಿಕ್ಕಿಯಾಗಿ ಭದ್ರಾ ನದಿಗೆ ಉರುಳಿತ್ತು. ಮರುದಿನವೇ ಪಿಕಪ್ ಪತ್ತೆಯಾಗಿತ್ತು. ಚಾಲಕ ಶಮಂತ್ ಮೃತದೇಹ ಪತ್ತೆಯಾಗಿರಲಿಲ್ಲ. ಕಳೆದ ಐದು ದಿನಗಳಿಂದ ಎನ್‌ಡಿಆರ್‌ಎಫ್ ಅಗ್ನಿಶಾಮಕ ಸಿಬ್ಬಂದಿ, ಪೊಲೀಸರು, ನುರಿತ ಈಜು ತಜ್ಞರು ಹಾಗೂ ಸ್ಥಳೀಯರು ಹುಡುಕಾಟ ನಡೆಸಿದ್ದರು. ಇಂದು (ಜು.28) ಮೃತದೇಹ ಪತ್ತೆಯಾಗಿದೆ. ಪಿಕಪ್ ಭದ್ರಾ ನದಿಗೆ ಬಿದ್ದು ಮಗ ಸಾವನ್ನಪ್ಪಿದ ವಿಷಯ ತಿಳಿದು ತಾಯಿ ರವಿಕಲಾ ಕೂಡ ಮನೆ ಹಿಂದಿನ ಕೆರೆಗೆ ಹಾರಿ ಆತ್ಮಹತ್ಯೆಗೆ ಶರಣಾಗಿದ್ದರು. ಒಂದೇ ದಿನ ಒಂದೇ ಮನೆಯಲ್ಲಿ ಇಬ್ಬರು ಸಾವನ್ನಪ್ಪಿದ್ದರು. ಕಳಸ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪತ್ರಿಕೆಗಳು ಶೋಷಿತರ ಧ್ವನಿಯಾಗಲಿ: ಶಾಸಕ ಸಿದ್ದು ಸವದಿ

• ಉದಯವಾಹಿನಿ, ರಬಕವಿ ಬನಹಟ್ಟಿ

ಪತ್ರಿಕೆಗಳು ಇಂದು ಸಮಾಜಮುಖಿಯಾಗಿ ಕರ್ತವ್ಯ ನಿರ್ವಹಿಸುತ್ತಿವೆ. ಪತ್ರಿಕಾ ರಂಗದ ಸೇವೆ ಮಹತ್ವದ್ದಾಗಿದೆ. ಪತ್ರಿಕೆಗಳು ಶೋಷಿತರ ಧ್ವನಿಯಾಗಲಿ ಎಂದು ಶಾಸಕ ಸಿದ್ದು ಸವದಿ ತಿಳಿಸಿದರು. ರಬಕವಿ ಬನಹಟ್ಟಿ ನಗರ ಸಭೆಯ ಸಭಾಭವನದಲ್ಲಿ ಕಾರ್ಯನಿರತ ಪತ್ರಕರ್ತರ ಸಂಘದ ಆಶ್ರಯದಲ್ಲಿ ನಡೆದ ಪತ್ರಿಕಾ ದಿನಾಚರಣೆ, ಪ್ರತಿಭಾ ಪುರಸ್ಕಾರ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಪತ್ರಿಕೆಗಳು ಶಾಸಕಾಂಗ, ಕಾರ್ಯಾಂಗವನ್ನು ಎಚ್ಚರಿಸುವ ಕಾರ್ಯ ಮಾಡುತ್ತವೆ. ದೇಶದ ಅಭಿವೃದ್ಧಿಯಲ್ಲಿ ಪತ್ರಿಕೆಗಳ ಪಾತ್ರ ಮುಖ್ಯವಾಗಿದೆ. ರಬಕವಿ ಬನಹಟ್ಟಿಯಲ್ಲಿ ಪತ್ರಿಕಾ ಭವನ ನಿರ್ಮಿಸಲು ಪ್ರಯತ್ನ ಮಾಡುತ್ತೇನೆ. ಈ ನಿಟ್ಟಿನಲ್ಲಿ 1 ಲಕ್ಷ ನೀಡುತ್ತೇನೆ ಎಂದು ತಿಳಿಸಿದರು. ಕಾಂಗ್ರೆಸ್ ಮುಖಂಡ ಸಿದ್ದು ಕೊಣ್ಣೂರ ಮಾತನಾಡಿ, ಶಾಲಾ ಕಾಲೇಜು ವಿದ್ಯಾರ್ಥಿಗಳು ಪತ್ರಿಕೆಗಳನ್ನು ಓದುವಂತಾಗಬೇಕು. ಪ್ರತಿ ಮನೆಗೂ ಪತ್ರಿಕೆಗಳು ತಲುಪುವಂತಾಗಬೇಕು. ಪತ್ರಿಕಾ ಭವನ ನಿರ್ಮಾಣಕ್ಕೆ ಸರ್ಕಾರದಿಂದ ವಿಶೇಷ ನೀಡುವ ನಿಟ್ಟಿನಲ್ಲಿ ಪ್ರಯತ್ನ ಮಾಡುತ್ತೇನೆ ಎಂದರು. ಜಿಲ್ಲಾ ಘಟಕದ ಅಧ್ಯಕ್ಷ ಆನಂದ ದಲಬಂಜನ ಮಾತನಾಡಿ, ಬದಲಾಗುತ್ತಿರುವ ಮಾಹಿತಿ ತಂತ್ರಜ್ಞಾನ ಯುಗದಲ್ಲಿಯೂ ನಾವು ಪತ್ರಿಕೆಗಳನ್ನು ಕೊಂಡು ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು ಎಂದರು.

## ಅತ್ತೂರು ಶಾಲೆಯಲ್ಲಿ ಹೈಟೆಕ್ ಶೌಚಾಲಯ: ವಿದ್ಯಾರ್ಥಿಗಳು ಸಂತಸ

• ಉದಯವಾಹಿನಿ, ರಾಯಚೂರು

ತಾಲ್ಲೂಕಿನ ಆಲ್ಕೂರು ಗ್ರಾಮದ ಉನ್ನತೀಕರಿಸಿದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ನರೇಗಾ ಯೋಜನೆಯಡಿ 5.20 ಲಕ್ಷ ವೆಚ್ಚದಲ್ಲಿ ಹೈಟೆಕ್ ಶೌಚಾಲಯ ನಿರ್ಮಾಣ ಮಾಡಲಾಗಿದೆ. ಅತ್ತೂರು ಗ್ರಾಮ ಪಂಚಾಯಿತಿ ಸಹಕಾರದಿಂದ ನಿರ್ಮಾಣ ಆಗಿರುವ ಹೈಟೆಕ್ ಶೌಚಾಲಯ ವಿದ್ಯಾರ್ಥಿಗಳಲ್ಲಿ ಸಂತಸ ಮೂಡಿಸಿದೆ.

ಈ ಮೊದಲು ಒಂದು ಚಿಕ್ಕದಾದ ಶೌಚಾಲಯ ಇತ್ತು. ಅದನ್ನು ಶಿಕ್ಷಕರು ಹೆಚ್ಚು ಉಪಯೋಗಿಸಿಸುತ್ತಿದ್ದರು. ಬಾಲಕ, ಬಾಲಕಿಯರಿಗೆ ಪ್ರತ್ಯೇಕ ಆಗಿರದೇ ಮತ್ತು ಚಿಕ್ಕದಾಗಿರುವುದರಿಂದ ವಿದ್ಯಾರ್ಥಿಗಳು ಉಪಯೋಗ ಮಾಡಲು ಬಹಳ ತೊಂದರೆಯಾಗುತ್ತಿತ್ತು. ಇದರಿಂದ ವಿದ್ಯಾರ್ಥಿಗಳು ಶೌಚಕ್ಕಾಗಿ ಹೊರಗಡೆ ಹೋಗುವುದು ಅನಿವಾರ್ಯವಾಗಿತ್ತು. ನಮ್ಮ ಶಾಲೆಯಲ್ಲಿ ಮಹಾತ್ಮ ಗಾಂಧಿ ನರೇಗಾ ಯೋಜನೆಯ ಮೂಲಕ ಹೈಟೆಕ್ ಶೌಚಾಲಯ ಮಾಡಿಕೊಟ್ಟಿದ್ದಾರೆ. ಅದರಲ್ಲಿ ಬಾಲಕ, ಬಾಲಕಿಯರಿಗೆ ಪ್ರತ್ಯೇಕ ಮಾಡಿರುವುದರಿಂದ ನಮಗೆ ತುಂಬಾ ಅನುಕೂಲವಾಗಿದೆ ಎಂದು ವಿದ್ಯಾರ್ಥಿನಿಯರಾದ ಪ್ರತಿಭಾ, ಮೋನಿಕಾ, ಗೌರಮ್ಮ, ಗಂಗೋತ್ರಿ, ಉದಯಕುಮಾರ, ಕಿಶೋರ, ವಿಕಾಸ ಸಂತಸ ವ್ಯಕ್ತಪಡಿಸಿದರು.

## ದಾವಣಗೆರೆ ವಿವಿ: ಮೌಲ್ಯಮಾಪನ ಮುಗಿದ 2 ಗಂಟೆಯಲ್ಲಿ ಫಲಿತಾಂಶ

• ಉದಯವಾಹಿನಿ, ದಾವಣಗೆರೆ

ದಾವಣಗೆರೆ ವಿಶ್ವವಿದ್ಯಾಲಯವು ಸ್ನಾತಕ ಪದವಿಯ 6ನೇ ಸೆಮಿಸ್ಟರ್ ಪರೀಕ್ಷೆಯ ಮೌಲ್ಯಮಾಪನ ಕಾರ್ಯ ಮುಗಿದ 2 ಗಂಟೆಯ ಒಳಗೆ ಫಲಿತಾಂಶ ಪ್ರಕಟಿಸಿದೆ. 2 ಮತ್ತು 4ನೇ ಸೆಮಿಸ್ಟರ್ ಪರೀಕ್ಷೆಯ ಫಲಿತಾಂಶವನ್ನು ಮೌಲ್ಯಮಾಪನ ಕಾರ್ಯ ಮುಗಿದ 2 ದಿನಗಳಲ್ಲಿ ಪ್ರಕಟಿಸಿದೆ. ಉನ್ನತ ಶಿಕ್ಷಣಕ್ಕೆ ತೆರಳುವ ವಿದ್ಯಾರ್ಥಿಗಳಿಗೆ ಅನುಕೂಲ ಮಾಡಿಕೊಡುವ ದೃಷ್ಟಿಯಿಂದ ಪರೀಕ್ಷೆ ನಡೆದ 12 ದಿನಗಳ ಒಳಗಾಗಿ ಫಲಿತಾಂಶ ನೀಡಿದೆ. 2024-25ನೇ ಶೈಕ್ಷಣಿಕ ಸಾಲಿನ ಬಿಎ, ಬಿಎಸ್ಸಿ, ಬಿಕಾಂ, ಬಿಬಿಎ, ಮತ್ತು ಬಿಸಿಎ ವಿಭಾಗದ ಪರೀಕ್ಷೆಗಳು ಜುಲೈ 16ಕ್ಕೆ ಪೂರ್ಣಗೊಂಡಿದ್ದವು. ವಿಶ್ವವಿದ್ಯಾಲಯ ವ್ಯಾಪ್ತಿಯ 104 ಕಾಲೇಜುಗಳ 50,470 ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಿದ್ದರು. ಅತಿ ಶೀಘ್ರವಾಗಿ ಫಲಿತಾಂಶ ಪ್ರಕಟಿಸಿದ್ದು ವಿಶ್ವವಿದ್ಯಾಲಯದ ದಾಖಲೆ ಎಂದು ಕುಲಪತಿ ಪ್ರೊ.ಬಿ.ಡಿ. ಕುಂಬಾರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 03:00 ರಿಂದ 04:30 |
| ಗುಳಿಕ ಕಾಲ | ಬೆಳಿಗ್ಗೆ | 12:00 ರಿಂದ 01:30 |
| ಯಮಗಂಡ ಕಾಲ | ಬೆಳಿಗ್ಗೆ | 09:00 ರಿಂದ 10:30 |

**ಮೇಷ** ಕಳೆದ ಉದ್ಯಮಗಳ ಯಶಸ್ಸು ನಿಮ್ಮ ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ಇಂದು ಹಣದ ಪ್ರಯೋಜನವನ್ನು ಪಡೆಯುವ ಸಾಧ್ಯತೆ ಇದೆ ಆದರೆ ನಿಮ್ಮ ಕೋಪದ ಸ್ವಭಾವದಿಂದ ಇಂದು ಹಣವನ್ನು ಗಳಿಸುವಲ್ಲಿ ಸಾಧ್ಯವಾಗದಿರಬಹುದು. ಸಾಮಾಜಿಕ ಚಟುವಟಿಕೆಯಲ್ಲಿ ರಹಸ್ಯಗಳನ್ನು ಹಂಚಿಕೊಳ್ಳಬಾರದು.

**ವೃಷಭ** ಪ್ರೀತಿ, ಭರವಸೆ, ನಂಬಿಕೆ, ಸಹಾನುಭೂತಿ, ಆಶಾವಾದ, ನಿಷ್ಠೆಗಳಂಥ ಧನಾತ್ಮಕ ಭಾವನೆಗಳನ್ನು ಗ್ರಹಿಸಲು ಮನಸ್ಸನ್ನು ಪ್ರೋತ್ಸಾಹಿಸಿ. ಒಮ್ಮೆ ಈ ಭಾವನೆಗಳು ಸಂಪೂರ್ಣವಾಗಿ ಹತೋಟಿಗೆ ತೆಗೆದುಕೊಂಡ ನಂತರ ಮನಸ್ಸು ತಾನಾಗಿಯೇ ಪ್ರತಿ ಪರಿಸ್ಥಿತಿಗೂ ಧನಾತ್ಮಕವಾಗಿ ಪ್ರತಿಕ್ರಿಯಿಸುತ್ತದೆ.

**ಮಿಥುನ** ನಿಮ್ಮ ಮನಸ್ಸು ಒಳ್ಳೆಯ ವಿಷಯಗಳನ್ನು ಗ್ರಹಿಸುತ್ತದೆ. ಬಾಕಿಯಿರುವ ವಿಷಯಗಳು ರಹಸ್ಯಮಯವಾಗುತ್ತವೆ, ವೆಚ್ಚಗಳು ನಿಮ್ಮ ಮನಸ್ಸನ್ನು ಆವರಿಸಿಕೊಳ್ಳುತ್ತವೆ. ಸಾಮಾಜಿಕ ಕಾರ್ಯಗಳಿಗೆ ಹಾಜರಾಗಲು ಅವಕಾಶಗಳಿರಬಹುದು, ಇದು ನಿಮ್ಮನ್ನು ಪ್ರಭಾವಿ ವ್ಯಕ್ತಿಗಳ ಜೊತೆ ನಿಕಟ ಸಂಪರ್ಕ ಹೊಂದುವಂತೆ ಮಾಡಬಹುದು.

**ಕರ್ಕಾಟಕ** ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ಊಹೆಗಳು ಲಾಭ ತರುತ್ತವೆ. ನೀವು ಸ್ನೇಹಿತರ ಮೂಲಕ ಪ್ರಮುಖ ಸಂಪರ್ಕಗಳನ್ನು ಹೊಂದುತ್ತೀರಿ. ಇಂದಿನ ದಿನ ಪ್ರೀತಿಯ ಬಣ್ಣಗಳಲ್ಲಿ ಮುಳುಗಿರುತ್ತದೆ ಆದರೆ ರಾತ್ರಿಯ ಸಮಯದಲ್ಲಿ ಯಾವುದೊ ಹಳೆಯ ವಿಷ್ಯದ ಬಗ್ಗೆ ನೀವು ಜಗಳವಾಡಬಹುದು.

**ಸಿಂಹ** ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ಇದು ಮತ್ತೊಂದು ಚೈತನ್ಯದಾಯಕ ದಿನವಾಗಿರುತ್ತದೆ ಮತ್ತು ಅನಿರೀಕ್ಷಿತ ಲಾಭಗಳನ್ನು ನಿರೀಕ್ಷಿಸಬಹುದು. ಮನೆಯ ಕೆಲಸ ನಿಮ್ಮನ್ನು ಯಾವಾಗಲೂ ವ್ಯಸ್ತವಾಗಿರಿಸುತ್ತದೆ.

**ಕನ್ಯಾ** ನಿಮ್ಮ ಮನಸ್ಥಿತಿಯನ್ನು ಬದಲಾಯಿಸಲು ಯಾವುದಾದರೂ ಸಾಮಾಜಿಕ ಸಭೆಗೆ ಹಾಜರಾಗಿ. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು, ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ. ಸಂಬಂಧಿಗಳಿದ್ದಲ್ಲಿ ಸಣ್ಣ ಪ್ರಯಾಣ ಒತ್ತಡದ ಜೀವನದಿಂದ ಸುಖ, ವಿಶ್ರಾಂತಿಯನ್ನು ತರುತ್ತದೆ.

**ತುಲಾ** ಪ್ರಕೃತಿಯು ನಿಮ್ಮಲ್ಲಿ ಗಮನಾರ್ಹ ವಿಶ್ವಾಸ ಮತ್ತು ಬುದ್ಧಿವಂತಿಕೆಯನ್ನಿರಿಸಿದೆ ಅದನ್ನು ಸಾಧ್ಯವಾದಷ್ಟೂ ಬಳಸಿಕೊಳ್ಳಿ. ದಿನದ ಆರಂಭದಲ್ಲಿ ಇಂದು ನೀವು ಯಾವುದೇ ಆರ್ಥಿಕ ನಷ್ಟವನ್ನು ಹೊಂದಿರಬಹುದು.ಇದರಿಂದ ನಿಮ್ಮ ಪೂರ್ತಿ ದಿನ ಹದಗೆಡಬಹುದು. ಅರ್ಹರಿಗೆ ವೈವಾಹಿಕ ಮೈತ್ರಿಗಳು.

**ವೃಶ್ಚಿಕ** ನಿಮ್ಮಲ್ಲಿ ಶಕ್ತಿಯ ಕೊರತೆಯಿರದೇ ಆತ್ಮವಿಶ್ವಾಸದ ಕೊರತೆಯಿರುವುದರಿಂದ ನಿಮ್ಮ ನಿಜವಾದ ಸಾಮರ್ಥ್ಯವನ್ನು ಅರಿತುಕೊಳ್ಳಿ. ಆಲ್ಕೋಹಾಲ್ ಸಿಗರೇಟ್ ಮುಂತಾದವುಗಳಿಗೆ ಹಣವನ್ನು ಖರ್ಚು ಮಾಡಬಾರದು, ಎಂದು ನಿಮಗೆ ನನ್ನ ಸಲಹೆ ನೀಡಲಾಗಿದೆ, ಅದನ್ನು ಮಾಡುವುದು ಆರೋಗ್ಯವನ್ನು ಹದಗೆಡಿಸುತ್ತದೆ.

**ಧನಸ್ಸು** ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ಸಣ್ಣ ಉದ್ಯೋಗವನ್ನು ಮಾಡುವ ಜನರು, ಇಂದು ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು. ಇದರಿಂದ ಅವರಿಗೆ ಆರ್ಥಿಕವಾಗಿ ಲಾಭ ಪಡೆಯುವ ಸಾಧ್ಯತೆ ಇದೆ.

**ಮಕರ** ನೀವು ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಇಂದು ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ನಿಮ್ಮ ಜೀವನ ಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ.


**ಕುಂಭ** ಒಬ್ಬ ಸಂತನ ಆಶೀರ್ವಾದದಿಂದ ಮನಶ್ಶಾಂತಿ. ಇಂದಿನವರೆಗೂ ಅಗತ್ಯವಿಲ್ಲದೆ ಹಣವನ್ನು ಖರ್ಚು ಮಾಡುತ್ತಿದ್ದ ಜನರು, ಇಂದು ಅವರು ತನ್ನನ್ನು ನಿಯಂತ್ರಿಸಬೇಕು ಮತ್ತು ಹಣವನ್ನು ಉಳಿಸಬೇಕು. ಭಾವನಾತ್ಮಕ ಅಪಾಯ ನಿಮ್ಮ ಪರವಾಗಿರುತ್ತದೆ. ಕೆಲವರಿಗೆ ಹೊಸ ಪ್ರಣಯ ನಿಮ್ಮ ಚೈತನ್ಯವನ್ನು ಪ್ರೇರೇಪಿಸಬಹುದು.

**ಮೀನ** ಇಂದಿನ ಮನರಂಜನೆ ಕ್ರೀಡಾ ಚಟುವಟಿಕೆಗಳು, ಹೊರಾಂಗಣ ಕಾರ್ಯಕ್ರಮಗಳನ್ನು ಒಳಗೊಂಡಿರಬೇಕು. ಈ ರಾಶಿಚಕ್ರದ ವಿವಾಹಿತ ಜನರಿಗೆ ಇಂದು ಅತ್ತೆಮನೆಯ ಕಡೆಯಿಂದ ಹಣದ ಪ್ರಯೋಜನವಾಗುವ ಸಾಧ್ಯತೆ ಇದೆ. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ.

# ಜೆ ಜೆ ಎಂ ಯೋಜನೆಯ ವಿವಿಧ ಕಾಮಗಾರಿಗಳ ಪರಿಶೀಲಿಸಿದ ಸಿಇಒ

• ಉದಯವಾಹಿನಿ, ಬಸವನ ಬಾಗೇವಾಡಿ

ಜಿಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ್ ಅವರು ತಾಲ್ಲೂಕಿನ ಮಣ್ಣೂರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಾಗೂರ, ಮಣ್ಣೂರ ಹಾಗೂ ಹಂಗರಗಿ ಗ್ರಾಮಗಳಿಗೆ ಭೇಟಿ ನೀಡಿ ಜಲ ಜೀವನ ಮಿಷನ್ ಯೋಜನೆಯ ಕಾಮಗಾರಿಗಳನ್ನು ಪರಿಶೀಲನೆ ನಡೆಸಿದರು. ಮಣ್ಣೂರ ಗ್ರಾಮ ಪಂಚಾಯತಿ ವ್ಯಾಪ್ತಿಯ ನಾಗೂರ್ ಗ್ರಾಮದಲ್ಲಿನ 422 FHTCಗಳನ್ನು ಒದಗಿಸುವ ಕಾಮಗಾರಿ ವೀಕ್ಷಿಸಿ ಮನೆಗಳಿಗೆ ಅಳವಡಿಸಿರುವ ನಳಗಳನ್ನು ಪರೀಕ್ಷಿಸಿ ನೀರಿನ ಗುಣಮಟ್ಟವನ್ನು ಪರಿಶೀಲನೆ ಮಾಡಿದರು. ಹಾಗೂ ದಿನನಿತ್ಯ ಕುಡಿಯಲು ನೀರು ಬರುವುದೋ ಎಂದು ಗ್ರಾಮಸ್ಥರಿಂದ ಅಭಿಪ್ರಾಯ ತಿಳಿದುಕೊಂಡರು.


ಉದಯವಾಹಿನಿ ಚಿತ್ರ

ಮಣ್ಣೂರ ಗ್ರಾಮದಲ್ಲಿ 430ಎಫ್ ಎಚ್ ಟಿ ಸಿ ಗಳನ್ನು ಒದಗಿಸುವ ಗುರಿಯನ್ನು ಹೊಂದಿದ್ದು. ಪ್ರಗತಿ ಹಂತದಲ್ಲಿರುವ ಕಾಮಗಾರಿ ವೀಕ್ಷಿಸಿ ಕಾರ್ಯಾತ್ಮಕ ನಳಗಳನ್ನು ಅಳವಡಿಸಲು ಗ್ರಾಮೀಣ ಕುಡಿಯುವ ನೀರು ಇಲಾಖೆಯ ಅಭಿಯಂತರರಿಗೆ ಸೂಚನೆ ನೀಡಿದರು. ಗ್ರಾಮದಲ್ಲಿ ಸ್ವಚ್ಛತೆಯನ್ನು ಕಾಪಾಡಿ ಎಂದು ಗ್ರಾಮ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚನೆ ನೀಡಿ ಜೆಜೆಮ್ ಕಾಮಗಾರಿಯನ್ನು ಪರಿಶೀಲನೆ ಮಾಡಿದರು. ಹಂಗರಗಿ ಗ್ರಾಮದಲ್ಲಿನ 498 FHTC ಗುರಿ ಹೊಂದಿರುವ ಒಟ್ಟು ಅಳವಡಿಕೆ ಆಗಿರುವ ಬಗ್ಗೆ ಮಾನ್ಯ ಅಧಿಕಾರಿಗಳು ಮಾಹಿತಿಯನ್ನು ಪಡೆದುಕೊಂಡರು ಹಾಗೂ ಗ್ರಾಮದಲ್ಲಿನ ಮನೆಗೆ ಅಳವಡಿಸಿರುವ ನಳ ಸಂಪರ್ಕದ ಕುರಿತು ಸ್ಥಳೀಯ ಫಲಾನುಭವಿಗಳ ಜೊತೆ ಚರ್ಚೆ ಮಾಡಿ ನೀರು ಪ್ರತಿ ನಿತ್ಯ ಬರುವುದೋ ಎಂದು ವಿಚಾರಿಸಿ ನೀರನ್ನು ಪೋಲು ಮಾಡದೆ ವ್ಯವಸ್ಥಿತವಾಗಿ ಬಳಸಿ, ನಳದ

**ಸ್ವಚ್ಛತೆ ಕಾಪಾಡಲು ಪಿಡಿಓಗಳಿಗೆ ಸೂಚನೆ**

ನೀರಿನ ಮೀಟರ್ ಪರೀಕ್ಷಿಸಿ ಸರಿಯಾಗಿ ನೀರು ಬರುತ್ತದೆ ಎಂದು ಖಚಿತಪಡಿಸಿಕೊಂಡರು. ನೀರು ಎಲ್ಲೂ ಪೋಲಾಗದಂತೆ ನೋಡಿಕೊಳ್ಳಿ. ಪೋಲು ಆಗುತ್ತಿರುವ ನಲ್ಲಿಗಳಿಗೆ ತುರ್ತಾಗಿ ನಲ್ಲಿಗಳ ಜೋಡಣೆಯನ್ನು ಮಾಡಿ ಎಂದು ಸೆಕ್ಷನ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮೀಣ ಕುಡಿಯುವ ನೀರು, ನೈರ್ಮಲಿಕರಣ ಕಾರ್ಯನಿರ್ವಾಹಕ ಅಭಿಯಂತಕ ಬಸವರಾಜ ಕುಂಬಾರ, ಟಿಪಿ ಇಓ ಪ್ರಕಾಶ ದೇಸಾಯಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ವಿಬಿ ಗೊಂಗಡಿ, ರವಿ ಗುಂಡಳ್ಳಿ, ಎಸ್‌ವಾಯ್ ಕುಂಬಾರ ಸೇರಿದಂತೆ ಅನೇಕರು ಹಾಜರಿದ್ದರು.

# ಬೆಳೆ ಪರಿಹಾರಕ್ಕೆ ರೈತರ ಒತ್ತಾಯ

## ನಾಲ್ಕೈದು ದಿನಗಳಿಂದ ಮಳೆಯ ಆರ್ಭಟ, ರೈತರು ಹೊಲದಲ್ಲಿ ಬೆಳೆದ ಬೆಳೆಗಳು ನಾಶ

• ಉದಯವಾಹಿನಿ ವಿಶೇಷ

• ಮಹೇಬೂಬಶಾ ಅಣವಾರ.

**ಚಿಂಚೋಳಿ:** ತಾಲ್ಲೂಕಿನಾದ್ಯಂತ ಕಳೆದ ನಾಲ್ಕೈದು ದಿನಗಳಿಂದ ಧಾರಾಕಾರವಾಗಿ ಸುರಿಯುತ್ತಿರುವ ಮಳೆಯಿಂದ ರೈತರು ಹೊಲಗದ್ದೆಗಳಲ್ಲಿ ಬೆಳೆದ ಉದ್ದು,ಹೆಸರು,ತೊಗರಿ, ಸೋಯಾಬಿನ್ ಬೆಳೆಗಳು ಸಂಪೂರ್ಣ ನಾಶವಾಗಿದ್ದು ರೈತರು ಕಂಗಾಲಾಗಿದ್ದಾರೆ.

ಈಗಾಗಲೇ ತಾಲ್ಲೂಕಿನಾದ್ಯಂತ 60ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ರೈತರು ಬಿತ್ತನೆ ಮಾಡಲಾಗಿದೆ,ಉದ್ದು 12ಸಾವಿರ ಹೇಕ್ಟರ್ ಪ್ರದೇಶ, ಹೆಸರು 08ಸಾವಿರ ಹೇಕ್ಟರ್ ಪ್ರದೇಶ,ತೊಗರಿಬೇಳೆ 37ಸಾವಿರ ಹೇಕ್ಟರ್ ಪ್ರದೇಶ, ಸೋಯಾಬಿನ್ 05ಸಾವಿರ ಹೇಕ್ಟರ್ ಪ್ರದೇಶದಲ್ಲಿ ಬಿತ್ತನೆಯಾಗಿದೆ ಆದರೆ ತೆಗ್ಗಿನ ಪ್ರದೇಶದ ರೈತರ ಹೊಲಗದ್ದೆಗಳಲ್ಲಿ ಕಳೆದ ನಾಲ್ಕೈದು ದಿನಗಳಿಂದ ಧಾರಾಕಾರವಾಗಿ ಸುರಿದ ಮಳೆಯಿಂದ ಬೆಳೆಗಳು ಸಂಪೂರ್ಣವಾಗಿ ನಾಶವಾಗಿದೆ ಇದರಿಂದ ರೈತರು ಕಂಗಾಲಾಗಿದ್ದು ಸರ್ಕಾರ ಗಮನಹರಿಸಿ ನಾಶವಾದ ಬೆಳೆಯನ್ನು ಸಮೀಕ್ಷೆ ನಡೆಸಿ ಪರಿಹಾರ ನೀಡಬೇಕು ಎಂಬುವುದೆ ರೈತರ ಅಹವಾಲುವಾಗಿದೆ.

**ಕೆಲ ಹೊಲಗದ್ದೆಗಳಲ್ಲಿ ಉತ್ತಮ ಬೆಳೆ:** ತಾಲ್ಲೂಕಿನ ಕೆಲ ರೈತರ ಹೊಲಗದ್ದೆಗಳಲ್ಲಿ ಉತ್ತಮವಾಗಿ ಉದ್ದು ಹೆಸರು ತೊಗರಿ ಸೋಯಾಬಿನ್ ಬೆಳೆಗಳು ಬೆಳೆದಿವೆ, ಇದರಿಂದ ರೈತರು ಸಂತೋಷವಾಗಿದ್ದು ಈಗಾಗಲೇ ಕೆಲವರ ರೈತರ ಹೊಲಗಳಲ್ಲಿ ಹೂ,ಕಾಯಿ ಕಾಣಿಸುತ್ತಿದೆ.

**ಹದಗೆಟ್ಟ ರಸ್ತೆಗಳು:** ತಾಲ್ಲೂಕಿನಾದ್ಯಂತ ಕಳೆದ ನಾಲ್ಕೈದು ದಿನಗಳಿಂದ ಸತತವಾಗಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದಾಗಿ ಚಿಂಚೋಳಿ-ತಾಂಡೂರ ರಸ್ತೆ, ಚಿಂಚೋಳಿ- ಕಲಬುರ್ಗಿ ರಸ್ತೆ, ಚಿಂಚೋಳಿ-ಮನ್ನಾಏಖೇಳ್ಳಿ ರಸ್ತೆ, ಚಿಂಚೋಳಿ-ಹುಮನಾಬಾದ ರಸ್ತೆ ಸೇರಿದಂತೆ ಗ್ರಾಮೀಣ ಪ್ರದೇಶಗಳಿಗೆ ಹೋಗುವ ರಸ್ತೆಗಳು ಹದಗೆಟ್ಟು ಹೋಗುತ್ತಿದ್ದು ತೆಗ್ಗುಗುಂಡಿಗಳು ಬಿದ್ದಿವೆ ಸ್ಥಳೀಯ ಶಾಸಕರು ಮುತುವರ್ಜಿ ವಹಿಸಿ ತಾಲ್ಲೂಕಾ ಮಟ್ಟದ ಅಧಿಕಾರಿಗಳ ಸಭೆ ನಡೆಸಿ ತಾತ್ಕಾಲಿಕ ರಸ್ತೆಗಳು ದುರಸ್ತಿ ಮಾಡುವಂತೆ ನಿರ್ದೇಶನ ನೀಡಬೇಕು ಎಂಬುವುದೆ ಸಾರ್ವಜನಿಕರ ಅಭಿಪ್ರಾಯವಾಗಿದೆ.

**ಮಳೆಯ ವಿವರ:** ಶನಿವಾರ ಚಿಂಚೋಳಿ 44.4ಮಿಮೀ, ಕುಂಚಾವರಂ 80.2ಮಿಮೀ, ಐನಾಪೂರ 38.5ಮಿಮೀ, ಸುಲೇಪೇಟ 23.8ಮಿಮೀ, ಚಿಮ್ಮನಚೋಡ 38.2ಮಿಮೀ, ನೀಡಗುಂದಾ 42.8ಮಿಮೀ.

**ರವಿವಾರದ ಮಳೆ ವಿವರ:** ಚಿಂಚೋಳಿ 02.8ಮಿಮೀ, ಕುಂಚಾವರಂ 20ಮಿಮೀ, ಐನಾಪೂರ 35.6ಮಿಮೀ, ಸುಲೇಪೇಟ 27ಮಿಮೀ, ಚಿಮ್ಮನಚೋಡ 02.2ಮಿಮೀ, ನಿಡಗುಂದಾ 03.0ಮಿಮೀ ಮಳೆಯಾಗಿದೆ.


ಉದಯವಾಹಿನಿ ಚಿತ್ರ



ರೈತರ ಹೊಲಗದ್ದೆಗಳಲ್ಲಿ ತೆಗ್ಗಿನ ಪ್ರದೇಶದಲ್ಲಿ ನೀರು ನಿಂತುಕೊಂಡು ಶೇಕಡಾ 33ರಷ್ಟು ಬೆಳೆಹಾನಿಯಾದರೆ ಪರಿಹಾರ ಕೊಡಲು ಬರುವುದಿಲ್ಲ, ಪ್ರತಿಶತಃ 33ಕ್ಕಿಂತ ಹೆಚ್ಚು ಬೆಳೆ ಹಾನಿಯಾದರೆ ಪರಿಹಾರ ಸಿಗುತ್ತೆ, ತೆಗ್ಗಿನ ಹೊಲಗದ್ದೆ ಪ್ರದೇಶದಲ್ಲಿ ನೀರು ನಿಂತಿದರೆ ರೈತರು ಕಾಲುವೆ ಮೂಲಕ ನೀರು ಹೊಲದ ಹೊರಗಡೆ ಹಾಕಿ ತದನಂತರ ನ್ಯಾನೋ ಯುರಿಯಾ ಮತ್ತು 19 ಆಲ್ ರಸಗೊಬ್ಬರ ಆಪ್ರದೇಶದಲ್ಲಿ ಸಿಂಪಡನೆ ಮಾಡಬೇಕು. ಬೆಳೆ ರೈತರು ನೊಂದಣಿ ಮಾಡಲು ಇದೆ ತಿಂಗಳು 31ರಂದು ಕೊನೆಯದಿನವಿದ್ದು ಹೆಚ್ಚಿನ ಸಂಖ್ಯೆಯಲ್ಲಿ ರೈತರು ಬೆಳೆವಿಮೆ ತಪ್ಪದೆ ಮಾಡಿಸಿಕೊಳ್ಳಿ ಹೆಚ್ಚಿನ ಬೆಳೆವಿಮೆ ಪರಿಹಾರ ದೊರಕುತ್ತದೆ.

- ವೀರಶೇಟ್ಟಿ ರಾಠೋಡ್
ಸಹಾಯಕ ಕೃಷಿ ನಿರ್ದೇಶಕರು ಚಿಂಚೋಳಿ.



ಈಗಾಗಲೇ ತಾಲ್ಲೂಕಿನಾದ್ಯಂತ ರೈತರು ಬಿತ್ತನೆ ಮಾಡಲಾಗಿದೆ ಕಳೆದ ನಾಲ್ಕೈದು ದಿನಗಳಿಂದ ಸುರಿಯುತ್ತಿರುವ ಧಾರಾಕಾರ ಮಳೆಗೆ ತೆಗ್ಗು ಪ್ರದೇಶದ ರೈತರ ಹೊಲಗದ್ದೆಗಳಲ್ಲಿ ಉದ್ದು ಹೆಸರು ತೊಗರಿಬೇಳೆ ಸೋಯಾಬಿನ್ ಅಂಥಹ ಬೆಳೆಗಳನ್ನು ಸಂಪೂರ್ಣವಾಗಿ ನಾಶವಾಗಿವೆ ಕೃಷಿ ಇಲಾಖೆ ಅಧಿಕಾರಿಗಳು ಮತ್ತು ದಂಡಾಧಿಕಾರಿಗಳು ಬೆಳೆ ನಾಶವಾದ ರೈತರ ಜಂಟಿ ಸಮೀಕ್ಷೆ ನಡೆಸಿ ವರದಿ ಸರ್ಕಾರಕ್ಕೆ ಸಲ್ಲಿಸಿ ರೈತರಿಗೆ ಪರಿಹಾರ ದೊರಕಿಸಿ ಕೊಡಬೇಕು. ಕ್ಷೇತ್ರದ ಸ್ಥಳೀಯ ಶಾಸಕರು ರೈತರು ಬೆಳೆದ ಬೆಳೆಗಳು ನಾಶವಾದ ಪ್ರದೇಶಗಳಲ್ಲಿ ಅಧಿಕಾರಿಗಳ ತಂಡದೊಂದಿಗೆ ತೆರಳಿ ಪರಿಶೀಲನೆ ನಡೆಸಬೇಕು ಹಾಗೂ ಅನೇಕ ಬಡವರ ಮನೆಗಳು ಕುಸಿದು ಬಿದ್ದಿವೆ ರಸ್ತೆಗಳು ಹದಗೆಟ್ಟಿವೆ ಶಾಸಕರು ಮುತುವರ್ಜಿ ವಹಿಸಿ ತಾತ್ಕಾಲಿಕ ದುರಸ್ತಿಗೊಳಿಸಬೇಕು.

- ಮಸ್ತಾನ ಅಲಿ ಇಟಲಿ ನೀಮಾಹೋಸಳ್ಳಿ
ರೈತ ಮುಖಂಡ.

## ಕಾಡಾನೆ ದಾಳಿ ರೈತ ಬಲಿ

• ಉದಯವಾಹಿನಿ ಚಿಕ್ಕಮಗಳೂರು

ಕಾಡಾನೆ ದಾಳಿಗೆ ರೈತರೊಬ್ಬರು ಮೃತಪಟ್ಟಿರುವ ಘಟನೆ ಬಾಳೆಹೊನ್ನೂರು ಸಮೀಪದ ಅಂಡವಾಗ್ರಾಮದಲ್ಲಿ ನಡೆದಿದೆ. ಮೃತರನ್ನು ಸುಬ್ರಾಯ ಗೌಡ (63)ಎಂದು ಗುರುತಿಸಲಾಗಿದೆ. ಸಂಜೆ 7:30ರ ಸಮಯದಲ್ಲಿ ತಮ ತೋಟದ ಐಬೆಕ್ಸ್ ಬೇಲಿ ಆನ್ ಮಾಡಲು ಹೋದ ಸಂದರ್ಭದಲ್ಲಿ ಈ ಘಟನೆ ನಡೆದಿದೆ. ಕಳೆದ ನಾಲ್ಕು ದಿನಗಳ ಹಿಂದೆ ಕಾಡಾನೆ ದಾಳಿಗೆ ಅನಿತ ಎಂಬ ಯುವತಿ ಮೃತಪಟ್ಟಿದ್ದರು. ಇದು ಮಾಸುವ ಮುನ್ನವೇ ಮತ್ತೊಬ್ಬ ರೈತ ಬಲಿಯಾಗಿದ್ದಾರೆ.

ಘಟನೆ ಸಂಬಂಧ ಬಾಳೆಹೊನ್ನೂರು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಘಟನೆಯಿಂದ ಸ್ಥಳೀಯರು ತೀವ್ರ ಆತಂಕಗೊಂಡಿದ್ದು, ಅರಣ್ಯ ಇಲಾಖೆಯ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಇತ್ತೀಚೆಗೆ ಹಾಸನ ಜಿಲ್ಲೆಯ ಸಕಲೇಶಪುರ ತಾಲ್ಲೂಕಿನ ಕಾಡು ಆನೆಗಳನ್ನು ಸೆರೆ ಹಿಡಿದು ಭದ್ರಾ ಅಭಯಾರಣ್ಯ ವ್ಯಾಪ್ತಿಯಲ್ಲಿ ಬಿಡಲಾಗಿತ್ತು.

ಇವುಗಳು ಹೊರ ಬಂದು ಸ್ಥಳೀಯ ಜನರ ಮೇಲೆ ನಿರಂತರ ದಾಳಿ ಮಾಡುತ್ತಿದ್ದು ಅಮಾಯಕ ಜನರು ಪ್ರಾಣ ಕಳೆದುಕೊಂಡಿದ್ದಾರೆ ಎಂದು ದೂರಿದ್ದಾರೆ. ವಿಷಯ ತಿಳಿದು ಸ್ಥಳಕ್ಕಾಗಮಿಸಿದ ಅರಣ್ಯ ಇಲಾಖೆ ಅಧಿಕಾರಿಗಳು ಕೂಡಲೇ ಕ್ರಮ ಕೈಗೊಳ್ಳುವ ಭರವಸೆ ನೀಡಿದ್ದು, ಕಾಡಾನೆ ಹಿಡಿಯಲು ಐದು ಸಾಕಾನೆಗಳನ್ನು ಕರೆತರಲಾಗುವುದು ಎಂದು ಸಮಜಾಯಿಷಿ ನೀಡಿದ್ದಾರೆ. ಒಟ್ಟಾರೆ ಕಾಡುಪ್ರಾಣಿಗಳು ಹಾಗೂ ಮಾನವ ಸಂಘರ್ಷದಿಂದಾಗಿ ರೈತರು ಕೂಲಿ ಕಾರ್ಮಿಕರು ಪ್ರಾಣ ಕಳೆದುಕೊಳ್ಳುತ್ತಿದ್ದು, ಸರ್ಕಾರ ಮಧ್ಯಪ್ರವೇಶಿಸಿ ಇದಕ್ಕೊಂದು ಶಾಶ್ವತ ಪರಿಹಾರ ಕಲ್ಪಿಸಬೇಕಾಗಿದೆ.

## ಜಾತಿ ಗಣತಿ| ವಿಶ್ವಕರ್ಮ ಎಂದು ನಮೂದಿಸಿ: ಕೆ.ಪಿ.ನಂಜುಂಡಿ

• ಉದಯವಾಹಿನಿ, ಹುಬ್ಬಳ್ಳಿ

ವಿಶ್ವಕರ್ಮ ಸಮಾಜದಲ್ಲಿ 39 ಉಪಜಾತಿಗಳಿವೆ. ಜಾತಿ ಗಣತಿ ಸಂದರ್ಭದಲ್ಲಿ ಜಾತಿ ಕಾಲಂನಲ್ಲಿ ಉಪಜಾತಿಗಳ ಹೆಸರು ನಮೂದಿಸದೆ, ವಿಶ್ವಕರ್ಮ ಎಂದು ಬರೆಸಬೇಕು ಎಂದು ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾದ ಅಧ್ಯಕ್ಷ ಕೆ.ಪಿ. ನಂಜುಂಡಿ ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಂಚ ಕುಲಕಸುಬುಗಳನ್ನು ಮಾಡುವವರೆಲ್ಲರೂ ವಿಶ್ವಕರ್ಮರು. ವಿಶ್ವ ಬ್ರಾಹ್ಮಣ ಎಂಬುದು ವಿಶ್ವಕರ್ಮ ಜಾತಿಯ ಉಪಜಾತಿಯಾಗಿದೆ. ಇದಕ್ಕೂ, ಬ್ರಾಹ್ಮಣ ಜಾತಿಗೂ ಸಂಬಂಧವಿಲ್ಲ ಎಂದರು. ರಾಜ್ಯದಲ್ಲಿ ಮುಂದಿನ ವರ್ಷದಿಂದ ಅಖಿಲ ಕರ್ನಾಟಕ ವಿಶ್ವಕರ್ಮ ಮಹಾಸಭಾದಿಂದ ಐದು ಸಾವಿರ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

ರಾಜ್ಯ ಸರ್ಕಾರ ಮರು ಜಾತಿ ಸಮೀಕ್ಷೆ ನಡೆಸಲು ಮುಂದಾಗಿದೆ. ಎಲ್ಲಾ ಸಮಾಜಗಳು ಜಾಗೃತರಾಗಬೇಕು. ಇಲ್ಲದಿದ್ದರೆ, ಧ್ವನಿ ಇಲ್ಲದ ಸಮಾಜಗಳಿಗೆ ಅನ್ಯಾಯವಾಗುತ್ತದೆ. ರಾಜಕೀಯ ಜ್ಞಾನ ಇರುವ ಸಮಾಜದವರು ಪ್ರಬಲರಾಗುತ್ತಾರೆ ಎಂದರು. ನಾನು ವಿಧಾನ ಪರಿಷತ್ ಸ್ಥಾನದ ಆಕಾಂಕ್ಷಿಯಲ್ಲ. ಯಾವುದೇ ಸ್ಥಾನಮಾನಕ್ಕಿಂತ ನಮ್ಮ ಸಮಾಜಕ್ಕೆ ನ್ಯಾಯ ಸಿಗಬೇಕು ಎಂಬುದು ನನ್ನ ಉದ್ದೇಶ. ಕಾಂಗ್ರೆಸ್ ಸೇರುವ ಸಂದರ್ಭದಲ್ಲಿ ಯಾವುದೇ ಸ್ಥಾನಮಾನಕ್ಕಾಗಿ ಷರತ್ತು ಹಾಕಿಲ್ಲ ಎಂದು ಹೇಳಿದರು. ವಿಶ್ವಕರ್ಮ ಸಮಾಜಕ್ಕೆ ಸದ್ಯ 2ಎ ಮೀಸಲಾತಿ ಕಲ್ಪಿಸಲಾಗಿದೆ. ಪ್ರಬಲ ಜಾತಿಗಳ ನಡುವೆ ನಮ್ಮ ಸಮಾಜಕ್ಕೆ ಮೀಸಲಾತಿಯ ಲಾಭ ಸಿಗುತ್ತಿಲ್ಲ. ನಮ್ಮ ಮಕ್ಕಳ ಭವಿಷ್ಯಕ್ಕಾಗಿ ಸಮಾಜವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಬೇಕು ಎಂದು ಒತ್ತಾಯಿಸಿದರು.

# ಕಾರ್ಮಿಕರ ಕಲ್ಯಾಣಕ್ಕಾಗಿ ಇಂಧನ ತೈಲಗಳ ಸೆಸ್ ಹೆಚ್ಚಳ: ಸಚಿವ

• ಉದಯವಾಹಿನಿ, ಬೆಳಗಾವಿ

ಪೆಟ್ರೋಲ್, ಡೀಸೆಲ್ ಮೇಲಿನ ಸೆಸ್ ತುಸು ಹೆಚ್ಚಳ ಮಾಡಿ, ಅದರಿಂದ ಬರುವ ಆದಾಯವನ್ನು ಕಾರ್ಮಿಕರ ಕಲ್ಯಾಣಕ್ಕೆ ಬಳಸಲು ಉದ್ದೇಶಿಸಿದ್ದೇನೆ. ಎಲ್ಲಾ ಸಚಿವರು, ಶಾಸಕರ ಬೆಂಬಲದೊಂದಿಗೆ ಇದನ್ನು ಮುಖ್ಯಮಂತ್ರಿ ಅವರಿಗೆ ಮನವರಿಕೆ ಮಾಡುತ್ತೇನೆ ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ಹೇಳಿದರು. ನಗರದಲ್ಲಿ ಸೋಮವಾರ ಶ್ರಮಿಕರ ತಾತ್ಕಾಲಿಕ ವಸತಿ ಸಮುಚ್ಚಯ ಉದ್ಘಾಟಿಸಿ, ಅಸಂಘಟಿತ ವಲಯದ ಕಾರ್ಮಿಕರಿಗೆ ಸ್ಮಾರ್ಟ್‌ಕಾರ್ಡ್ ವಿತರಿಸಿ ಮಾತನಾಡಿದ ಅವರು, ಕೇವಲ 1 ಸೆಸ್ ಹೆಚ್ಚಳ ಮಾಡಿದರೂ ಸಾವಿರಾರು ಕೋಟಿ ಹಣ ಸಂಗ್ರಹವಾಗುತ್ತದೆ. ಇದರಿಂದ ತೈಲ ಬಳಸುವವರುಗೆ ಹೊರೆ ಏನೂ ಆಗುವುದಿಲ್ಲ. ಆದರೆ, ಕಾರ್ಮಿಕರ ಎಲ್ಲಾ ಬೇಡಿಕೆ ಈಡೇರಿಸಬಹುದು ಎಂದರು. ರಾಜ್ಯದಲ್ಲಿ ಹಿಂದೆ 27 ಅಸಂಘಟಿತ ವಲಯಗಳು ಮಾತ್ರ ಇದ್ದವು. ನಾನು ಒಟ್ಟು 91 ಅಸಂಘಟಿತ ವಲಯ ಗುರುತಿಸಿದ್ದೇನೆ. ಮನೆಯಲ್ಲಿ ಪಾತ್ರೆ ತೊಳೆಯುವವರಿಂದ ಹಿಡಿದು ಕಾರ್ಖಾನೆಗಳವರೆಗೆ ಎಲ್ಲರಿಗೂ ಹಕ್ಕುಗಳು, ಯೋಜನೆಗಳು ಸಿಗಬೇಕು ಎಂಬುದು ನನ್ನ ಉದ್ದೇಶ. ರಾಜ್ಯದಲ್ಲಿ 1.67 ಕೋಟಿ ಕಾರ್ಮಿಕರು ಮಾತ್ರ ನೋಂದಣಿ ಮಾಡಿಕೊಂಡಿದ್ದಾರೆ. ಶೇ 83ರಷ್ಟು ಮಂದಿ ಅಸಂಘಟಿತ ವಲಯಕ್ಕೇ ಸೇರಿದ್ದಾರೆ ಎಂದರು.

ಆಹಾರ ಸರಬರಾಜು ಮಾಡುವವರಿಗೆ ಗಿಗ್‌ಮಿಲ್, ಚಲನಚಿತ್ರ ಕ್ಷೇತ್ರದ ಕಾರ್ಮಿಕರಿಗಾಗಿ ಸಿನಿಮಿಲ್, ಸಾರಿಗೆ, ಮೆಕ್ಯಾನಿಕ್ ವಲಯದ ಕಾರ್ಮಿಕರಿಗಾಗಿ ಟ್ರಾನ್ಸ್‌ಪೋರ್ಟ್ ಮಿಲ್, ಮನೆಗೆಲಸದವರಿಗೆ ಡೊಮೆಸ್ಟಿಕ್ ಮಿಲ್‌ಗಳನ್ನು ಘೋಷಣೆ ಮಾಡಲಾಗಿದೆ. ಕಾರ್ಮಿಕರು ಇದ್ದಲ್ಲಿಗೇ ಹೋಗಿ ನೋಂದಣಿ


ಉದಯವಾಹಿನಿ ಚಿತ್ರ

ಮಾಡಿಸುವ ಕೆಲಸವೂ ನಡೆದಿದೆ. ದೇಶದಲ್ಲಿ ಪ್ರತಿ ವರ್ಷ 1.60 ಲಕ್ಷ ಜನ ಅಪಘಾತಗಳಲ್ಲಿ ಸಾವನ್ನಪ್ಪುತ್ತಿದ್ದಾರೆ. ಇದರಲ್ಲಿ ಕಾರ್ಮಿಕರ ಸಂಖ್ಯೆಯೇ ಹೆಚ್ಚು. ಹಾಗಾಗಿ, ಎಲ್ಲರೂ ಒಂದೇ ಸೂರಿನಡಿ ನೋಂದಣಿ ಮಾಡಿಕೊಳ್ಳುವುದು ಅಗತ್ಯ. ಆಕಸ್ಮಿಕವಾಗಿ ಮೃತಪಟ್ಟರೆ 5 ಲಕ್ಷದವರೆಗೆ ಪರಿಹಾರ ಸಿಗಲಿದೆ ಎಂದರು.

20ಕ್ಕೂ ಹೆಚ್ಚು ಕಾರ್ಮಿಕರನ್ನು ನೇಮಕ ಮಾಡಿಕೊಳ್ಳುವ ಪ್ರತಿಯೊಂದು ಕಂಪನಿ ಕಡ್ಡಾಯವಾಗಿ ಗ್ರಾಚ್ಯುಟಿ ನೀಡಲು ಸೂಚಿಸಲಾಗಿದೆ. ರಾಜ್ಯದ 6,000 ಕಂಪನಿಗಳು ನೋಂದಣಿ ಮಾಡಿಕೊಂಡಿವೆ. ಎಲ್ಲಾ ಕಂಪನಿಗಳಿಗೂ ಇದನ್ನು ಕಡ್ಡಾಯ ಮಾಡಿದ್ದೇವೆ. ಅಲ್ಲದೇ, ಪರಿಶಿಷ್ಟ ಕಾರ್ಮಿಕರಿಗಾಗಿ 'ಆಶಾದೀಪ' ಯೋಜನೆ ಅನುಷ್ಠಾನ ಮಾಡಿದ್ದು, ಕೆಲಸಕ್ಕೆ ಸೇರಿದ ಎರಡು ವರ್ಷಗಳವರೆಗೆ 7,500 ನೆರವು ನೀಡಲಾಗುತ್ತಿದೆ ಎಂದೂ ತಿಳಿಸಿದರು.

## ಪುರಸಭೆ ವಿವಿಧ ವಾರ್ಡ್‌ಗಳಿಗೆ ಅಧ್ಯಕ್ಷ ಭೇಟಿ

• ಉದಯವಾಹಿನಿ,ಚಿಂಚೋಳಿ

ತಾಲ್ಲೂಕಿನಲ್ಲಿ ಕಳೆದ ನಾಲ್ಕೈದು ದಿನಗಳಿಂದ ಧಾರಾಕಾರವಾಗಿ ಸುರಿಯುತ್ತಿರುವ ಮಳೆಯಿಂದ ಪಟ್ಟಣದ ಪುರಸಭೆ ವ್ಯಾಪ್ತಿಯಲ್ಲಿ ವಿವಿಧ ವಾರ್ಡ್ ಗಳಲ್ಲಿ ಮಳೆಯ ನೀರಿಂದ ಜನರಿಗೆ ಸಮಸ್ಯೆಯಾದ ಹಿನ್ನಲೆಯಲ್ಲಿ ಪುರಸಭೆ ಅಧ್ಯಕ್ಷ ಆನಂದಕುಮಾರ ಟೈಗರ್ ಪುರಸಭೆಯ ವಿವಿಧ ಬಡಾವಣೆಗಳಿಗೆ ಅಧಿಕಾರಿಗಳ ತಂಡದೊಂದಿಗೆ ಭೇಟಿನೀಡಿ ಜನರ ಸಮಸ್ಯೆ ಆಲಿಸಿದರು. ವಿವಿಧ ವಾರ್ಡ್ ಗಳು ಪರಿಶೀಲಿಸಿ ಮಾತನಾಡಿದ ಅವರು,ಈಗಾಗಲೇ ಕೆಕೆಆರ್ ಡಿಬಿ ವತಿಯಿಂದ 1ಕೋಟಿ ರೂ.ಅನುದಾನ ಬಿಡುಗಡೆಯಾಗಿದ್ದು ಕ್ರೀಯಾಯೋಜನೆ ಮಾಡಲಾಗಿದೆ ಶೀಘ್ರದಲ್ಲೇ ಕಾಮಗಾರಿ ಪ್ರಾರಂಭಿಸಲಾಗುವುದು.

ಮಳೆಯ ನೀರು ನಿಲ್ಲದಂತೆ ಚರಂಡಿಗಳು ಸ್ವಚ್ಛಗೊಳಿಸಿ, ಬ್ಲಿಚಿಂಗ್ ಪೌಡರ್ ಸಿಂಪಡಿಸಿ, ತೆಗ್ಗು ಪ್ರದೇಶವಿರುವ ಸ್ಥಳಗಳು ಗುರುತಿಸಿ ಆಯಾ ಸ್ಥಳದ ರಸ್ತೆ, ಚರಂಡಿ ಮಾಡಲು ಕ್ರೀಯಾ ಯೋಜನೆ ಸಿದ್ದಪಡಿಸುವಂತೆ ಪುರಸಭೆ ಇಂಜಿನಿಯರಗಳಿಗೆ ಅಧ್ಯಕ್ಷ ಆನಂದ ಟೈಗರ್ ಸೂಚಿಸಿದರು.

ಈ ಸಂದರ್ಭದಲ್ಲಿ ಜೆಇ ದೇವೀಂದ್ರಪ್ಪ ಕೋರವಾರ, ಜೆಇ ಸಚಿನ್, ಆರ್.ಗಣಪತರಾವ, ವಿಶ್ವನಾಥ ಬೀರನಳ್ಳಿ, ಮಹ್ಮುದ್ ಹಾದಿಸಾಬ, ಬಾಬಾ, ಸೇರಿದಂತೆ ಅನೇಕರಿದ್ದರು.


ಉದಯವಾಹಿನಿ ಚಿತ್ರ


**ಜನರ ಸಮಸ್ಯೆಗಳಿಗೆ ಪರಿಹಾರ**

## ಬಸವರಾಜ ಬೊಮ್ಮಾಯಿ ದೊಡ್ಡವರು, ನಮಗೆ ಸಿಗುವುದು ಕಷ್ಟ

• ಉದಯವಾಹಿನಿ, ಹಾವೇರಿ

ಮಾಜಿ ಮುಖ್ಯಮಂತ್ರಿಯೂ ಆಗಿರುವ ಸಂಸದ ಬಸವರಾಜ ಬೊಮ್ಮಾಯಿ ಅವರು ದೊಡ್ಡವರು. ಅವರ ತಂದೆಯೂ ಮುಖ್ಯಮಂತ್ರಿಯಾಗಿದ್ದವರು. ಅಂಥವರು ನಮಗೆ ಸಿಗೋದು ಕಷ್ಟ ಎಂದು ಹಿರೇಕೆರೂರಿನ ಮಾಜಿ ಶಾಸಕರೂ ಆಗಿರುವ ಬಿಜೆಪಿ ಮುಖಂಡ ಬಿ.ಸಿ. ಪಾಟೀಲ ಅಸಮಾಧಾನ ವ್ಯಕ್ತಪಡಿಸಿದರು.

ನಗರದಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ದೆಹಲಿಗೆ ಹೋಗಿದ್ದ ಸಂದರ್ಭದಲ್ಲಿ ಬಸವರಾಜ ಬೊಮ್ಮಾಯಿ ಅವರನ್ನು ಭೇಟಿಯಾಗಲು ಅವಕಾಶ ಸಿಗಲಿಲ್ಲ. ಇದರಿಂದ ಬೇಸರವಾಗಿದೆ. ಅದನ್ನು ಫೇಸ್ ಬುಕ್ ಪೋಸ್ಟ್ ಮೂಲಕ ಹೊರಹಾಕಿದ್ದೇನೆ ಎಂದರು. ಜುಲೈ 22ರಂದು ದೆಹಲಿಗೆ ಹೋಗಿದ್ದೆ. ಬಸವರಾಜ ಬೊಮ್ಮಾಯಿ ಅವರಿಗೆ ಕರೆ ಮಾಡಿದರೂ ಅವರು ಸ್ವೀಕರಿಸುವುದಿಲ್ಲ. ಹೀಗಾಗಿ, ಅವರ ಆಪ್ತ ಸಹಾಯಕನಿಗೆ



ಕರೆ ಮಾಡಿ ಭೇಟಿಗೆ ಅವಕಾಶ ಕೋರಿದ್ದೆ. ಬೊಮ್ಮಾಯಿ ಅವರು ವಿಮಾನದಲ್ಲಿ ಪ್ರಯಾಣಿಸುತ್ತಿದ್ದಾರೆ. ಅವರನ್ನು ಸಂಪರ್ಕಿಸಲಾಗುವುದು ಎಂದು ಹೇಳಿದ್ದ ಆಪ್ತ ಸಹಾಯಕ ಕರೆ ಕಡಿತಗೊಳಿಸಿದ್ದ. ಅದಾದ ನಂತರ, ಭೇಟಿಗೆ ಯಾವುದೇ ಅವಕಾಶ ಸಿಗಲಿಲ್ಲ. ಬಿ.ವೈ. ರಾಘವೇಂದ್ರ, ಸಚಿವರಾದ ಶೋಭಾ ಕರಂದ್ಲಾಜೆ ಅವರನ್ನು ಭೇಟಿಯಾದೆ. ಜೊತೆಗೆ, ಕರ್ನಾಟಕ ಭವನಕ್ಕೆ ಬಂದಿದ್ದ ಸಿದ್ದರಾಮಯ್ಯ ಅವರನ್ನೂ ಭೇಟಿಯಾದೆ. ಆದರೆ, ನಮ್ಮ ಸಂಸದರ ಭೇಟಿಗೆ ಅವಕಾಶ ಸಿಗಲಿಲ್ಲ. ಇದರಿಂದ ಬೇಜಾರಾಯಿತು ಎಂದು ಅಸಮಾಧಾನ ಹೊರಹಾಕಿದರು.

ಶಿವಮೊಗ್ಗ ಸಂಸದ ಬಿ.ವೈ. ರಾಘವೇಂದ್ರ ಅವರು ಭದ್ರಾವತಿಯಲ್ಲಿ ಪ್ರವಾಸಿ ತಾಣವೊಂದನ್ನು ಅಭಿವೃದ್ಧಿಪಡಿಸಿದ್ದಾರೆ. ಅದೇ ಮಾದರಿಯಲ್ಲಿ ಸರ್ವಜ್ಞರ ಸ್ಥಳವನ್ನೂ ಅಭಿವೃದ್ಧಿಪಡಿಸುವಂತೆ ಸಂಸದರನ್ನು ಕೋರಬೇಕಿತ್ತು. ಜಿಲ್ಲೆಯಲ್ಲಿ ಕಾರ್ಯಕ್ರಮವೊಂದರಲ್ಲಿ ಭೇಟಿಯಾಗಿದ್ದ ಬೊಮ್ಮಾಯಿ, ದೆಹಲಿಗೆ ಬನ್ನಿ ಮಾತನಾಡೋಣ. ಬರುವಾಗ ನಮ್ಮ ಆಪ್ತ ಸಹಾಯಕನಿಗೆ ಕರೆ ಮಾಡಿ ಎಂದಿದ್ದರು ಎಂದು ಹೇಳಿದರು.

## ರೈತರು ಬೆಳೆಗೆ ನ್ಯಾನೊ ರಸಗೊಬ್ಬರ ಬಳಸಲಿ

• ಉದಯವಾಹಿನಿ, ಸುರಪುರ

ರೈತರು ಬೆಳೆಗೆ ನ್ಯಾನೊ ಡಿಎಪಿ ಮತ್ತು ನ್ಯಾನೊ ರಸಗೊಬ್ಬರ ಬಳಕೆ ಮಾಡಬೇಕು ಎಂದು ಕೃಷಿ ಇಲಾಖೆ ಸಹಾಯಕ ನಿರ್ದೇಶಕ ರಾಮನಗೌಡ ಪಾಟೀಲ ಸಲಹೆ ನೀಡಿದರು. ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಕೃಷಿ ಇಲಾಖೆಯು ರೈತ ಸಂಪರ್ಕ ಕೇಂದ್ರಗಳ ಮೂಲಕ ಆತ್ಮಯೋಜನೆ ಅಡಿಯಲ್ಲಿ ನ್ಯಾನೊ ರಸಗೊಬ್ಬರ ಮತ್ತು ಸೂಕ್ಷ್ಮ ಪೋಷಕಾಂಶಗಳ ಬಳಕೆ ಕುರಿತು ಗ್ರಾಮ ಮಟ್ಟದ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

2025-26ನೇ ಸಾಲಿನಲ್ಲಿ ಮುಂಗಾರು ಹಂಗಾಮಿನ ಕ್ಷೇತ್ರದಲ್ಲಿ ಶೇ 75ರಷ್ಟು ಪ್ರದೇಶದಲ್ಲಿ ಬಿತ್ತನೆಯಾಗಿದ್ದು ಶೇ 25ರಷ್ಟು ಪ್ರದೇಶದಲ್ಲಿ ಭತ್ತ ನಾಟಿ ಮಾಡುವ ಕಾರ್ಯ ಪ್ರಗತಿಯಲ್ಲಿದೆ. ಈಗಾಗಲೇ ಬಿತ್ತನೆಯಾದ ಬೆಳೆಗೆ ಮೇಲು ಗೊಬ್ಬರವಾಗಿ ಯೂರಿಯಾ, ಡಿಎಪಿ ರಸಗೊಬ್ಬರ ಬಳಸುವುದು ವಾಡಿಕೆಯಾಗಿದೆ. ಆದರೆ ವಿಶ್ವದಲ್ಲಿ ಯುದ್ಧದ ಕಾರ್ಮೋಡ ಕವಿದಿರುವುದರಿಂದ ರಸಗೊಬ್ಬರ ತಯಾರಿಕೆ ಕಚ್ಚಾ ವಸ್ತುಗಳು ವಿದೇಶಗಳಿಂದ ಪೂರೈಕೆಯಾಗುತ್ತಿಲ್ಲ ಎಂದರು.

## ಸಾಹಿತ್ಯ ರಚನೆಗೆ ಎದುರಾಗಿದೆ ಸವಾಲು: ಕುಮಾರಸ್ವಾಮಿ

• ಉದಯವಾಹಿನಿ, ಚಿತ್ರದುರ್ಗ

ಸಾಹಿತ್ಯದ ಮೇಲೆ ಬೆಳಕು ಚೆಲ್ಲುವ ಬರಹಗಳ ಅಗತ್ಯತೆ ಹೆಚ್ಚಾಗಿದೆ. ಇದರಿಂದ ಮಾತ್ರ ಉತ್ತಮ ಸಮಾಜ ನಿರ್ಮಾಣ ಸಾಧ್ಯವಾಗಲಿದೆ ಎಂದು ಹೆಚ್ಚುವರಿ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ತಿಳಿಸಿದರು. ಮೊಬೈಲ್ ಯುಗದಲ್ಲಿ ಸಾಹಿತ್ಯವೆಂದರೆ ಮೂಗು ಮುರಿಯುವಂತಾಗಿದೆ. ಇಂತಹ ಕಾಲಘಟ್ಟದಲ್ಲಿ ಸಾಹಿತ್ಯ ರಚನೆಯು ಸವಾಲಾಗಿದೆ. ಬರೆಯುವವರು ತುಂಬಾ ಇದ್ದಾರೆ. ಆದರೆ ಓದುವವರು ವಿರಳವಾಗಿರುವುದರಿಂದ ಅಧ್ಯಯನ, ಸೃಜನಶೀಲತೆಯ ಕೊರತೆ ಕಾಣುತ್ತಿದೆ. ಸಾಹಿತ್ಯವು ಬದುಕು ಕಟ್ಟಿಕೊಡಬೇಕು. ಪ್ರತಿಯೊಬ್ಬರಲ್ಲಿಯೂ ಕವಿ ಹೃದಯವಿರುತ್ತದೆ. ಕವನಗಳು ಸಮಾಜಕ್ಕೆ ಸಂದೇಶ ಕೊಡುವಂತಿರಬೇಕು ಎಂದರು.

# ಆ.1ರಂದು ಜಿಲ್ಲೆಯಲ್ಲಿ ಅರೆಬೆತ್ತಲೆ ಪ್ರತಿಭಟನೆ

## ಕಾಂಗ್ರೇಸ್ ಪಕ್ಷ ಹಾಗೂ ಸಚಿವ ಸಂಪುಟ ಸಚಿವರು ಮಾದಿಗ ಸಮಾಜಕ್ಕೆ ತುಳಿಯುವ ಕೆಲಸ ಮಾಡುತ್ತಿದೆ: ಕಟ್ಟಿಮನಿ

• ಉದಯವಾಹಿನಿ,ಚಿಂಚೋಳಿ

ರಾಜ್ಯದಲ್ಲಿ ಒಳಮೀಸಲಾತಿ ಜಾರಿಗೆ ಮಾಡದೆ ಕಾಂಗ್ರೇಸ್ ಪಕ್ಷ ಹಾಗೂ ಸಚಿವ ಸಂಪುಟದ ಸಚಿವರು ಮಾದಿಗ ಸಮಾಜಕ್ಕೆ ತುಳಿಯುವ ಕೆಲಸ ಮಾಡುತ್ತಿದೆ ಅದಕ್ಕಾಗಿ ಕಲಬುರ್ಗಿಯಲ್ಲಿ ಆಗಸ್ಟ್ 1ರಂದು ಬೃಹತ್ ಅರೆಬೆತ್ತಲೆ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಪರಿಶೀಷ್ಟ ಜಾತಿಗಳ ಒಳಮೀಸಲಾತಿ ಜಾರಿ ಹೋರಾಟ ಸಮಿತಿ ರಾಜ್ಯ ಸಂಚಾಲಕ ಗೋಪಾಲರಾವ ಕಟ್ಟಿಮನಿ ಹೇಳಿದರು. ಪಟ್ಟಣದ ಪ್ರವಾಸಿ ಮಂದಿರದಲ್ಲಿ ತಾಲ್ಲೂಕಾ ಮಾದಿಗಾ ಮಹಾ ಒಕ್ಕೂಟ ವತಿಯಿಂದ ಕರೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 30ವರ್ಷಗಳಿಂದ ಮಾದಿಗಾ ಒಳಮೀಸಲಾತಿ ನಿರಂತರ ಹೋರಾಟ ಮಾಡುತ್ತಿದರೂ ಇಲ್ಲಿಯವರೆಗೆ ಮಾದಿಗಾ ಸಮಾಜಕ್ಕೆ ಸಮಾಜಿಕ ನ್ಯಾಯ ದೊರಕದೆ ಇರುವುದು ದುಃಖದ ಸಂಗತಿಯಾಗಿದೆ.

ಈಗಾಗಲೇ ನ್ಯಾ.ನಾಗಮೋಹನ್ ದಾಸ ವರದಿ, ಕಾಂತುರಾಜು ವರದಿ ಸೇರಿದಂತೆ ಅನೇಕ ವರದಿಗಳ ದತ್ತಾಂಶಯಿದೆ ಅದರಂತೆ ಒಳಮೀಸಲಾತಿ ಜಾರಿಗೆ ಮಾಡಲಿ ಅದನ್ನು ಬಿಟ್ಟು ಕುಂಟುನೆಪ ಹೇಳುವುದು ಬಿಡಲಿ, ದಲಿತರಲ್ಲಿ ಮಾದಿಗ ಸಮಾಜಕ್ಕೆ ಕಾಂಗ್ರೇಸ್ ಪಕ್ಷ


ಉದಯವಾಹಿನಿ ಚಿತ್ರ

ಅನ್ಯಾಯ ಮಾಡುತ್ತಿದೆ, ಕಾಂಗ್ರೇಸ್ ಅಧಿಕಾರಕ್ಕೆ ಬರದ ಮುಂಚೆ 06ನೇ ಗ್ಯಾರಂಟಿಯಾಗಿ ಕಾಂಗ್ರೇಸ್ ಅಧಿಕಾರಕ್ಕೆ ಬಂದರೆ ಒಳಮೀಸಲಾತಿ ಜಾರಿಗೆ ಮಾಡುತ್ತೇವೆಂದು ಹೇಳಿದ ಸಿಎಂ ಸಿದ್ದರಾಮಯ್ಯ ಈಗ ಏಕಾಏಕಿ ಕಾಲಹರಣ ಮಾಡುತ್ತಿದ್ದಾರೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಯಾವುದೇ ಒತ್ತಡಕ್ಕೆ ಮಣಿಯದೆ ಒಳಮೀಸಲಾತಿ ಜಾರಿಗೆ ಮಾಡಬೇಕು ನಮ್ಮ ಸಮೂದಾಯಕ್ಕೆ ಸಮಾಜಿಕ ನ್ಯಾಯ ದೊರಕಿಸಿಕೊಡಬೇಕು.

ಒಳಮೀಸಲಾತಿ ಜಾರಿಗಾಗಿ ಕಲಬುರ್ಗಿಯಲ್ಲಿ ಆಗಸ್ಟ್ 01ರಂದು ಅಂಬೇಡ್ಕರ್ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಅರೆಬೆತ್ತಲೆ ಪ್ರತಿಭಟನೆ ಮಾಡಲು ಈಗಾಗಲೇ ಸಮಿತಿ ನಿರ್ಣಯ ಮಾಡಿದೆ,ಈ ಹೋರಾಟಕ್ಕೆ ಬುದ್ದಿಜೀವಿಗಳು,ಸಮಾಜ ಸೇವಕರು,ಸಮಾಜದ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿಬೇಕು ಜಿಲ್ಲೆಯಲ್ಲಿ ಕನಿಷ್ಠ ಹತ್ತು ಸಾವಿರ ಜನಸಂಖ್ಯೆ ಪ್ರತಿಭಟನೆಯಲ್ಲಿ ಭಾಗಿ,ಚಿಂಚೋಳಿಯಿಂದ ಕನಿಷ್ಠ 500ಜನರು ಭಾಗಿಯಾಗಲಿದ್ದಾರೆ ಎಂದರು. ಪತ್ರಿಕಾಗೋಷ್ಠಿಯಲ್ಲಿ ಮಲ್ಲು ಕೊಡಂಬಲ್, ವಿಜಯರಾಜ್ ಕೊರಡಂಪಳ್ಳಿ, ನರಸಪ್ಪ ಕಿವಣೋರಕರ್, ಅಂಬರೀಷ್, ವಿವೇಕ, ಕಾಶಿನಾಥ ಬೀರನಳ್ಳಿ, ಜಾನ್ಸನ್, ಸಚಿನ್, ಜನಾರ್ಧನ, ಮೋಹನ್, ವೀರೇಶ ಮೇತ್ರಿ, ರವಿ ಗಡಿಲಿಂಗದಳ್ಳಿ, ವಿಶಾಲ ಸುಗಂಧಿ, ನಾಗೇಶ್ವರಾವ, ಅನೇಕರಿದ್ದರು.

**ಸರ್ಕಾರದ ವಿರುದ್ಧ ಅಸಹಕಾರ ಚಳುವಳಿ**

ಸರ್ವೋಚ್ಚ ನ್ಯಾಯಾಲಯವು ಆಯಾ ರಾಜ್ಯ ಸರ್ಕಾರಕ್ಕೆ ಒಳಮೀಸಲಾತಿ ಜಾರಿಗೆ ಮಾಡಲು ಅಧಿಕಾರ ನೀಡಿ ಒಂದು ವರ್ಷ ಗತಿಸಿದರೂ ರಾಜ್ಯ ಸಿಎಂ ಸಿದ್ದರಾಮಯ್ಯನವರು ಒಳಮೀಸಲಾತಿ ಜಾರಿಗೆ ಮಾಡಲು ಕಾಲಾಹರಣ ಮಾಡುತ್ತಿದ್ದಾರೆ,ಈಗಾಗಲೇ ಆಂದ್ರಪ್ರದೇಶ, ತೆಲಂಗಾಣ, ಛತ್ತಿಸಗಡ್ ಸೇರಿದಂತೆ ನಾಲ್ಕೈದು ರಾಜ್ಯಗಳಲ್ಲಿ ಒಳಮೀಸಲಾತಿ ನೀಡಲಾಗಿದೆ ಆದರೆ ಕರ್ನಾಟಕದಲ್ಲಿ ಜಾರಿಗೆ ಮಾಡುತ್ತಿಲ್ಲ, ಆಗಸ್ಟ್ 10ರ ಒಳಗೆ ಒಳಮೀಸಲಾತಿ ಜಾರಿಗೆ ಮಾಡಿದರೆ ಸರಿ ಇಲ್ಲದಿದ್ದರೆ ಸರ್ಕಾರದ ವಿರುದ್ಧ ಅಸಹಕಾರ ಚಳುವಳಿ ನಡೆಸುತ್ತೇವೆ.

# ಆರ್ಥಿಕತೆ ಸ್ವಿಚ್ ಆಫ್ ಮಾಡುವುದು ಅಸಾಧ್ಯ

## ಭಾರತಕ್ಕೆ ಎಚ್ಚರಿಕೆ ನೀಡುತ್ತಿರುವವರಿಗೆ ವಿಕ್ರಮ್ ದೊರೈಸ್ವಾಮಿ ತಿರುಗೇಟು

**ಲಂಡನ್:** ಭಾರತವು ರಷ್ಯಾದಿಂದ ತೈಲ ಆಮದು ಮಾಡಿಕೊಳ್ಳುತ್ತಿರುವ ಬಗ್ಗೆ ಪಶ್ಚಿಮ ದೇಶಗಳ ಟೀಕೆಯನ್ನು, ಯುಕೆಯಲ್ಲಿರುವ ಭಾರತೀಯ ಹೈಕಮಿಷನರ್ ವಿಕ್ರಮ್ ದೊರೈಸ್ವಾಮಿ ತಿರಸ್ಕರಿಸಿದ್ದಾರೆ. ಇದೇ ವೇಳೆ ಈ ವಿಚಾರವಾಗಿ ಅಮೆರಿಕದ ಸೆನೆಟರ್ ಲಿಂಡ್ಸೆ ಗ್ರಹಾಂ ಅವರು ಭಾರತಕ್ಕೆ ನೀಡಿರುವ ಎಚ್ಚರಿಕೆಯನ್ನು ಹಾಸ್ಯಾಸ್ಪದ ಎಂದು ವಿಕ್ರಮ್ ದೊರೈಸ್ವಾಮಿ ಕುಹುಕವಾಡಿದ್ದಾರೆ. ಕಳೆದ ವಾರ ಬ್ರಿಟಿಷ್ ರೇಡಿಯೋ ಸ್ಟೇಷನ್ ಟೈಮ್ಸ್ ರೇಡಿಯೋಗೆ ನೀಡಿದ ಸಂದರ್ಶನದಲ್ಲಿ, ಯಾವುದೇ ಒಂದು ದೇಶ ಮತ್ತೊಂದು ದೇಶದ ಆರ್ಥಿಕತೆಯನ್ನು ಮನಸ್ಸು ಬಂದಾಗ ಸ್ವಿಚ್ ಆಫ್ ಮಾಡಲು ಸಾಧ್ಯವಿಲ್ಲ ಎಂದು ವಿಕ್ರಮ್ ದೊರೈಸ್ವಾಮಿ ಸೂಚ್ಯವಾಗಿ ಹೇಳಿದ್ದಾರೆ. ಇತ್ತೀಚಿಗೆ ನ್ಯಾಟೋ ಮುಖ್ಯಸ್ಥ ಮಾರ್ಕ್ ರುಟ್ಟೆ ಕೂಡ ರಷ್ಯಾದಿಂದ ವ್ಯವಹರಿಸುವ ಭಾರತಕ್ಕೆ ಎಚ್ಚರಿಕೆ ನೀಡಿದ್ದನ್ನು ಇಲ್ಲಿ ಸ್ಮರಿಸಬಹುದು.

**ದ್ವಂದ್ವ ನೀತಿ ವಿಚಿತ್ರ**

ಭಾರತದ ಅನೇಕ ಯುರೋಪಿಯನ್ ಪಾಲುದಾರರು ನಮಗೆ ಖರೀದಿಸಲು ಅವಕಾಶ ನೀಡಲು ನಿರಾಕರಿಸುತ್ತಿರುವ ಅದೇ ರಷ್ಯಾದಿಂದ ಇಂಧನ ಉತ್ಪನ್ನಗಳನ್ನು ಖರೀದಿಸುವುದನ್ನು ಮುಂದುವರಿಸಿದ್ದಾರೆ. ಆದರೆ ಯರೋಪಿಯನ್ ಒಕ್ಕೂಟ ಮತ್ತು ಅಮೆರಿಕದ ಕೆಲವು ಪ್ರಮುಖರು, ರಷ್ಯಾದಿಂದ ತೈಲ ಖರೀದಿಸಿದರೆ ನಿರ್ಬಂಧ ಹೇರುವುದಾಗಿ ಭಾರತಕ್ಕೆ ಎಚ್ಚರಿಕೆ ನೀಡುತ್ತಿದ್ದಾರೆ. ಈ ದ್ವಂದ್ವ ನೀತಿ ವಿಚಿತ್ರವಾಗಿ ಕಾಣುತ್ತಿದೆ ಎಂದು ವಿಕ್ರಮ್ ದೊರೈಸ್ವಾಮಿ ಅವರು ಪಾಶ್ಚಿಮಾತ್ಯ ರಾಷ್ಟ್ರಗಳನ್ನು ತೀವ್ರವಾಗಿ ತರಾಟೆಗೆ ತೆಗೆದುಕೊಂಡರು.

ವಿಶ್ವದ ಮೂರನೇ ಅತಿದೊಡ್ಡ ತೈಲ ಆಮದುದಾರರಾದ ಭಾರತವು, ಸಾಂಪ್ರದಾಯಿಕವಾಗಿ ಮಧ್ಯಪ್ರಾಚ್ಯದಿಂದ ತನ್ನ ತೈಲವನ್ನು ಪಡೆಯುತ್ತಿತ್ತು. ಆದರೆ ಪರ್ಯಾಯ ಖರೀದಿದಾರರನ್ನು ಆಕರ್ಷಿಸಲು ಕಡಿದಾದ ರಿಯಾಯಿತಿಗಳನ್ನು ನೀಡಲು ಪ್ರಾರಂಭಿಸಿದ ನಂತರ, ರಷ್ಯಾದಿಂದ ಹೆಚ್ಚಿನ ಪ್ರಮಾಣದ ತೈಲವನ್ನು ಆಮದು ಮಾಡಿಕೊಳ್ಳಲು ಪ್ರಾರಂಭಿಸಿತು. ಫೆ. 2022ರಲ್ಲಿ ಉಕ್ರೇನ್ ಆಕ್ರಮಣದ ನಂತರ ವಿವಿಧ ಪಾಶ್ಚಿಮಾತ್ಯ ದೇಶಗಳಿಂದ ನಿರ್ಬಂಧಗಳನ್ನು ಎದುರಿಸಿದ ನಂತರ, ರಷ್ಯಾ ಅಗ್ಗದ ದರಕ್ಕೆ ಕಚ್ಚಾತೈಲ ಮಾರಾಟ ಮಾಡುತ್ತಿದೆ. ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರೊಂದಿಗಿನ ಭಾರತದ ನಿಕಟತೆಯ ಪ್ರಶ್ನೆಗೆ, ಮಾಸ್ಕೋ, ಹೊಸದಿಲ್ಲಿಯ ಸಂಬಂಧ ವಿವಿಧ ಮಾನದಂಡಗಳನ್ನು ಆಧರಿಸಿದೆ.

ಉಭಯ ರಾಷ್ಟ್ರಗಳ ನಡುವಿನ ಐತಿಹಾಸಿಕ ರಾಜತಾಂತ್ರಿಕ ಸಂಬಂಧ ಬಹಳಷ್ಟು ಗಟ್ಟಿಯಾಗಿದ್ದು, ಜಾಗತಿಕ ಬದಲಾವಣೆಗಳು ಈ ಸಂಬಂಧವನ್ನು ಶಿಥಿಲಗೊಳಿಸಲು ಸಾಧ್ಯವಿಲ್ಲ ಎಂದು ಯುಕೆಯಲ್ಲಿರುವ ಭಾರತೀಯ ಹೈಕಮಿಷನರ್ ಹೇಳಿದರು. ನಮ್ಮ ಕೆಲವು ಪಾಶ್ಚಿಮಾತ್ಯ ಪಾಲುದಾರರು ಈ ಹಿಂದೆ ನಮಗೆ ಶಸ್ತ್ರಾಸ್ತ್ರಗಳನ್ನು ಮಾರಾಟ ಮಾಡುತ್ತಿರಲಿಲ್ಲ. ಆದರೆ ಅದೇ ರಾಷ್ಟ್ರಗಳು ನಮ್ಮ ನೆರೆಹೊರೆಯ ದೇಶಗಳಿಗೆ ಶಸ್ತ್ರಾಸ್ತ್ರ ಮಾರಾಟ ಮಾಡುತ್ತಿದ್ದರು. ಆದರೆ ರಷ್ಯಾ ನಮಗೆ ಅಂತಹ ಸಂದಿಗ್ಧ ಕಾಲದಲ್ಲಿ ಶಸ್ತ್ರಾಸ್ತ್ರಗಳನ್ನು ಪೂರೈಸಿತ್ತು.



**ಲಿಂಡ್ಸೆ ಗ್ರಹಾಂ ಹೇಳಿದ್ದೇನು?**

ಉಕ್ರೇನ್ ಮೇಲೆ ಯುದ್ಧ ಸಾರಿರುವ ರಷ್ಯಾದ ಜೊತೆಗೆ ಇಂಧನ ವ್ಯಾಪಾರ ಮಾಡುವ ರಾಷ್ಟ್ರಗಳ ವಿರುದ್ಧ ಗುಡುಗಿದ್ದ ಅಮೆರಿಕದ ರಿಪಬ್ಲಿಕನ್ ಸೆನೆಟರ್ ಲಿಂಡ್ಸೆ ಗ್ರಹಾಂ, ಅಮೆರಿಕವು ಭಾರತದ ಆರ್ಥಿಕತೆಯನ್ನು ಪುಡಿ ಮಾಡಲಿದೆ ಎಂದು ಎಚ್ಚರಿಸಿದ್ದರು. ಲಿಂಡ್ಸೆ ಗ್ರಹಾಂ ಅವರು ಭಾರತ, ಬ್ರೆಜಿಲ್ ಮತ್ತು ಚೀನಾ ರಾಷ್ಟ್ರಗಳನ್ನು ಗುರಿಯಾಗಿಸಿಕೊಂಡು ತೀವ್ರ ವಾಗ್ದಾಳಿ ನಡೆಸಿದ್ದರು. ರಷ್ಯಾದೊಂದಿಗೆ ವ್ಯಾಪಾರ ಸಂಬಂಧ ಹೊಂದಿರುವ ರಾಷ್ಟ್ರಗಳು ತೀವ್ರ ಪರಿಣಾಮ ಎದುರಸಲಿವೆ ಎಂದು ಅವರು ಎಚ್ಚರಿಕೆ ನೀಡಿದ್ದರು. ಇದೀಗ ಯುಕೆಗೆ ಭಾರತದ ಹೈಕಮಿಷನರ್ ವಿಕ್ರಮ್ ದೊರೈಸ್ವಾಮಿ ಅವರು, ಯಾವ ದೇಶವೂ ದೇಶದ ಆರ್ಥಿಕತೆಯನ್ನು ಸ್ವಿಚ್ ಆಫ್ ಮಾಡಲು ಸಾಧ್ಯವಿಲ್ಲ ಎಂದು ಹೇಳುವ ಮೂಲಕ, ಲಿಂಡ್ಸೆ ಗ್ರಹಾಂ ತಿರುಗೇಟು ನೀಡಿದ್ದಾರೆ.

- ರಷ್ಯಾದಿಂದ ವ್ಯವಹರಿಸುತ್ತಿರುವ ಭಾರತಕ್ಕೆ ಪಶ್ಚಿಮಾತ್ಯ ರಾಷ್ಟ್ರಗಳಿಂದ ಹೆಚ್ಚಿದ ಬೆದರಿಕೆ.
- ಭಾರತದ ಆರ್ಥಿಕತೆ ಪುಡಿ ಮಾಡುತ್ತೇವೆ ಎಂದಿದ್ದ ಅಮೆರಿಕದ ಸೆನೆಟರ್ ಲಿಂಡ್ಸೆ ಗ್ರಹಾಂ.
- ಯಾರೂ ನಮ್ಮ ಆರ್ಥಿಕತೆ ಸ್ವಿಚ್ ಆಫ್ ಮಾಡಲು ಸಾಧ್ಯವಿಲ್ಲ ಎಂದ ವಿಕ್ರಮ್ ದೊರೈಸ್ವಾಮಿ.

ಇದು ನಮ್ಮ ಸಂಬಂಧ ಗಟ್ಟಿಯಾಗಲು ಪ್ರಮುಖ ಕಾರಣ ಎಂದು ವಿಕ್ರಮ್ ದೊರೈಸ್ವಾಮಿ ಅಭಿಪ್ರಾಯಪಟ್ಟರು. ಇನ್ನು ರಷ್ಯಾದಿಂದ ವ್ಯವಹರಿಸದಂತೆ ಎಚ್ಚರಿಕೆ ನೀಡಿದ್ದ ನ್ಯಾಟೋ ಮುಖ್ಯಸ್ಥರಿಗೆ ಭಾರತ ತಿರುಗೇಟು ನೀಡಿದ್ದನ್ನು ಕೂಡ ಇಲ್ಲಿ ಸ್ಮರಿಸಬಹುದು. ಮುಂದುವರೆದು, ಭಾರತವು ರಷ್ಯಾದೊಂದಿಗೆ ಇಂಧನ ಸಂಬಂಧ ಹೊಂದಿದೆ. ನಾವು ಮೊದಲು ಖರೀದಿಸುತ್ತಿದ್ದ ಮೂಲಗಳಿಂದ ಉಳಿದವರೆಲ್ಲರೂ ಇಂಧನವನ್ನು ಖರೀದಿಸುವುದರಿಂದ, ನಾವು ಅಗ್ಗದ ದರದಲ್ಲಿ ಇಂಧನ ಪೂರೈಸುತ್ತಿರುವ ರಷ್ಯಾದೊಂದಿಗೆ ವ್ಯಾಪಾರ ಮಾಡುತ್ತಿರುವುದರಲ್ಲಿ ಯಾವ ತಪ್ಪೂ ಇಲ್ಲ ಎಂದು ವಿಕ್ರಮ್ ದೊರೈಸ್ವಾಮಿ ಭಾರತದ ನಿರ್ಧಾರವನ್ನು ಸಮರ್ಥಿಸಿಕೊಂಡರು.

# ಮಳೆಯ ನಡುವೆಯೂ ಅಮರನಾಥನ ದರ್ಶನಕ್ಕೆ ತೆರಳಿದ 1600 ಭಕ್ತರು

**ಜಮ್ಮು:** ಭಾರೀ ಮಳೆಯ ನಡುವೆಯೂ ಸೋಮವಾರ 1600ಕ್ಕೂ ಹೆಚ್ಚು ಯಾತ್ರಿಕರು ಜಮ್ಮುವಿನಿಂದ ದಕ್ಷಿಣ ಕಾಶ್ಮೀರ ಹಿಮಾಲಯದಲ್ಲಿರುವ ಅಮರನಾಥ ಗುಹೆ ದೇವಾಲಯದ ಅವಳಿ ಮೂಲ ಶಿಬಿರಗಳಿಗೆ ಬಿಗಿ ಭದ್ರತಾ ವ್ಯವಸ್ಥೆಗಳ ನಡುವೆ ಹೊರಟರು. ಜುಲೈ 3ರಂದು ಕಣಿವೆಯಿಂದ ಪ್ರಾರಂಭವಾದ 3,880 ಮೀಟರ್ ಎತ್ತರದ ದೇವಾಲಯಕ್ಕೆ 38 ದಿನಗಳ ಯಾತ್ರೆಯಲ್ಲಿ 3.77 ಲಕ್ಷಕ್ಕೂ ಹೆಚ್ಚು ಯಾತ್ರಿಕರು ಶಿವನ ಹಿಮಲಿಂಗದ ದರ್ಶನ ಪಡೆದಿದ್ದಾರೆ. ಸಿಆರ್‌ಪಿಎಫ್ ಮತ್ತು ಪೊಲೀಸ್ ಸಿಬ್ಬಂದಿಯ ಬೆಂಗಾವಲಿನೊಂದಿಗೆ,



1,303 ಪುರುಷರು, 286 ಮಹಿಳೆಯರು, ನಾಲ್ವರು ಮಕ್ಕಳು ಮತ್ತು 42 ಸಾಧುಗಳು ಮತ್ತು ಸಾಧ್ವಿಗಳು ಸೇರಿದಂತೆ 1,635 ಯಾತ್ರಿಕರ 23 ನೇ ಬ್ಯಾಚ್, ಭಗವತಿ ನಗರ ಮೂಲ ಶಿಬಿರದಿಂದ 59 ವಾಹನಗಳಲ್ಲಿ ಬೆಳಗಿನ ಜಾವ 3:25 ರಿಂದ 4:00 ರ ನಡುವೆ ಕಾಶ್ಮೀರದ ಅವಳಿ ಮೂಲ ಶಿಬಿರಗಳಿಗೆ ತೆರಳಿತು ಎಂದು ಅಧಿಕಾರಿಗಳು ತಿಳಿಸಿದ್ದಾರೆ. 17 ವಾಹನಗಳಲ್ಲಿ 374 ಯಾತ್ರಿಕರನ್ನು ಹೊತ್ತ ಮೊದಲ ಬೆಂಗಾವಲು ತಂಡವು ಗಂಡೇರ್‌ಬಲ್ ಜಿಲ್ಲೆಯ 14 ಕಿಮೀ ಬಾಲ್ಟಾಲ್ ಮಾರ್ಗಕ್ಕೆ ಹೊರಟಿತು, ನಂತರ 62 ವಾಹನಗಳಲ್ಲಿ 1,262 ಯಾತ್ರಿಕರ ಎರಡನೇ ಬೆಂಗಾವಲು ತಂಡವು ಅನಂತ್‌ನಾಗ್ ಜಿಲ್ಲೆಯ 48 ಕಿಮೀ ಸಾಂಪ್ರದಾಯಿಕ ಪೆಹಲ್ಗಾಮ್ ಮಾರ್ಗದ ಮೂಲಕ ಯಾತ್ರೆ ಕೈಗೊಳ್ಳುತ್ತಿದೆ ಎಂದು ಅವರು ಹೇಳಿದರು. ಬಮ್ ಬಮ್ ಭೋಲೆ ಮತ್ತು ಹರ್ ಹರ್ ಮಹದೇವ್ ಎಂದು ಉತ್ಸಾಹದಿಂದ ಜಪಿಸುತ್ತಾ, ಯಾತ್ರಿಕರು ಗುಹಾ ದೇಗುಲಕ್ಕೆ ತೆರಳುವಾಗ ಭಾರೀ ಮಳೆಯನ್ನು ಎದುರಿಸಿದರು. ಇದರೊಂದಿಗೆ, ಜುಲೈ 2 ರಂದು ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಮೊದಲ ಬ್ಯಾಚ್‌ಗೆ ಚಾಲನೆ ನೀಡಿದ ನಂತರ ಒಟ್ಟು 14,12,95 ಯಾತ್ರಿಕರು ಜಮ್ಮು ಮೂಲ ಶಿಬಿರದಿಂದ ಕಣಿವೆಗೆ ತೆರಳಿದ್ದಾರೆ. ಕಳೆದ ವರ್ಷ, ನೈಸರ್ಗಿಕವಾಗಿ ರೂಪುಗೊಂಡ ಮಂಜುಗಡ್ಡೆಯ ಲಿಂಗವನ್ನು ಹೊಂದಿರುವ ಗುಹಾ ದೇಗುಲದಲ್ಲಿ 5.10 ಲಕ್ಷಕ್ಕೂ ಹೆಚ್ಚು ಯಾತ್ರಿಕರು ಪೂಜೆ ಸಲ್ಲಿಸಿದರು. ರಕ್ಷಾ ಬಂಧನ ಹಬ್ಬದೊಂದಿಗೆ ಆಗಸ್ಟ್ 9 ರಂದು ತೀರ್ಥಯಾತ್ರೆ ಕೊನೆಗೊಳ್ಳಲಿದೆ.

# ಅಮೆರಿಕ-ಇಯು ನಡುವೆ ಬೃಹತ್ ವ್ಯಾಪಾರ ಒಪ್ಪಂದ ಜಾರಿ

## ಅಮೆರಿಕಕ್ಕೆ ಯುರೋಪಿಯನ್ ಒಕ್ಕೂಟದ ರಫ್ತಿನ ಮೇಲೆ ಶೇ. 15ರಷ್ಟು ಮೂಲ ಸುಂಕ

**ಎಡಿನ್‌ಬರ್ಗ್:** ಅಮೆರಿಕ, ಯುರೋಪಿಯನ್ ಒಕ್ಕೂಟದ ನಡುವೆ ಬೃಹತ್ ವ್ಯಾಪಾರ ಒಪ್ಪಂದವೇರ್ಪಟ್ಟಿದ್ದು, ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇದನ್ನು ಇದುವರೆಗಿನ ಅತಿದೊಡ್ಡ ವ್ಯಾಪಾರ ಒಪ್ಪಂದ ಎಂದು ಬಣ್ಣಿಸಿದ್ದಾರೆ.

ಸ್ಕಾಟ್ಲೆಂಡ್‌ನಲ್ಲಿರುವ ತಮ್ಮ ಗಾಲ್ಫ್ ರೆಸಾರ್ಟ್‌ನಲ್ಲಿ ಯುರೋಪಿಯನ್ ಕಮಿಷನ್ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಅವರೊಂದಿಗೆ ನಡೆದ ಉನ್ನತ ಮಟ್ಟದ ಸಭೆಯ ನಂತರ, ಅಮೆರಿಕ-ಇಯು ಐತಿಹಾಸಿಕ ವ್ಯಾಪಾರ ಒಪ್ಪಂದವನ್ನು ಡೊನಾಲ್ಡ್ ಟ್ರಂಪ್ ಘೋಷಿಸಿದರು.

ಅಟ್ಲಾಂಟಿಕ್ ಸಾಗರದಾಚೆಗಿನ ಸುಂಕದ ಬಿಕ್ಕಟ್ಟನ್ನು ಪರಿಹರಿಸುವಲ್ಲಿ, ಇಯು ಜೊತೆಗಿನ ವ್ಯಾಪಾರ ಒಪ್ಪಂದ ನೆರವಾಗಲಿದೆ ಎಂದು ಅಮೆರಿಕ ಅಧ್ಯಕ್ಷರು ಇದೇ ವೇಳೆ ಭರವಸೆ ವ್ಯಕ್ತಪಡಿಸಿದ್ದಾರೆ. ಇತ್ತೀಚಿಗಷ್ಟೇ ಭಾರತ-ಯುಕೆ ಮುಕ್ತ ವ್ಯಾಪಾರ ಒಪ್ಪಂದ ಜಾರಿಯಾಗಿರುವುದನ್ನು ಇಲ್ಲಿ ಗಮನಿಸಬಹುದು. ಅಮೆರಿಕಕ್ಕೆ ಯುರೋಪಿಯನ್ ಒಕ್ಕೂಟದ ರಫ್ತಿನ ಮೇಲೆ ಶೇ. 15ರಷ್ಟು ಮೂಲ ಸುಂಕವನ್ನು ವಿಧಿಸಲು, ಡೊನಾಲ್ಡ್ ಟ್ರಂಪ್ ಮತ್ತು ಉರ್ಸುಲಾ ವಾನ್ ಡೆರ್ ಲೇಯೆನ್ ಅವರ ನಡುವಿನ ಮಾತುಕತೆಯಲ್ಲಿ ಒಪ್ಪಿಕೊಳ್ಳಲಾಗಿದೆ. ಸುಮಾರು ಒಂದು ಗಂಟೆಗೂ ಅಧಿಕ ಕಾಲ ನಡೆದ ಮಾತುಕತೆಯು, ಯುರೋಪಿಯನ್ ಸರಕುಗಳ ಮೇಲೆ ಶೇ. 30ರಷ್ಟು ಯುಎಸ್ ತೆರಿಗೆಯನ್ನು ತಪ್ಪಿಸುವಲ್ಲಿ ಯಶಸ್ವಿಯಾಗಿದೆ.

**ಒಪ್ಪಂದದಲ್ಲಿ ಏನಿದೆ?:** ಯುರೋಪ್‌ನ ನಿರ್ಣಾಯಕ ಆಟೋಮೊಬೈಲ್ ವಲಯ, ಔಷಧಗಳು, ಅರೆವಾಹಕಗಳು ಸೇರಿದಂತೆ ಎಲ್ಲಾ ಕ್ಷೇತ್ರಗಳಿಗೂ ಶೇ. 15ರಷ್ಟು ಸುಂಕ ಅನ್ವಯಿಸುತ್ತದೆ. ಒಪ್ಪಂದದ ಭಾಗವಾಗಿ, 27 ರಾಷ್ಟ್ರಗಳ ಇಯು ಗುಂಪು, ಅಮೆರಿಕದಿಂದ 750 ಶತಕೋಟಿ ಅಮೆರಿಕನ್ ಡಾಲರ್ ಮೌಲ್ಯದ ಇಂಧನವನ್ನು ಖರೀದಿಸಲು ಮತ್ತು ಹೆಚ್ಚುವರಿ ಹೂಡಿಕೆಗಳಲ್ಲಿ 600 ಶತಕೋಟಿ ಅಮೆರಿಕನ್ ಡಾಲರ್ ಗಳಿಸಲು ಒಪ್ಪಿಕೊಂಡಿದೆ. ರಷ್ಯಾದ ಇಂಧನ ಮೂಲಗಳಿಂದ ದೂರವಿರುವ ಇಯು ಗುಂಪಿನ ಪ್ರಯತ್ನದ ಭಾಗವಾಗಿ, ಅಮೆರಿಕದಿಂದ ದ್ರವೀಕೃತ ನೈಸರ್ಗಿಕ ಅನಿಲ, ತೈಲ ಮತ್ತು ಪರಮಾಣು ಇಂಧನಗಳ ಮಹತ್ವದ ಖರೀದಿ ಒಪ್ಪಂದಗಳು, ಮುಂಬರುವ ಮೂರು ವರ್ಷಗಳಲ್ಲಿ ಜಾರಿಯಾಗಲಿವೆ ಎಂದು ವಾನ್ ಡೆರ್ ಲೇಯೆನ್ ಹೇಳಿದ್ದಾರೆ. ಅಮೆರಿಕ-ಭಾರತ ನಡುವೆ ಮಧ್ಯಂತರ ವ್ಯಾಪಾರ ಒಪ್ಪಂದ ಕೂಡ ಶೀಘ್ರದಲ್ಲೇ ಜಾರಿಯಾಗುವ ನಿರೀಕ್ಷೆ ಇದೆ. ಇಯುನ 27 ದೇಶಗಳ ಪರವಾಗಿ ಮಾತುಕತೆ ನಡೆಸುತ್ತಾ, ವಾನ್ ಡೆರ್ ಲೇಯೆನ್ ಅವರು ವಾರ್ಷಿಕ 1.9 ಟ್ರಿಲಿಯನ್ ಅಮೆರಿಕನ್ ಡಾಲರ್ ಮೌಲ್ಯದ ಸರಕು ಮತ್ತು ಸೇವೆಗಳ ವ್ಯಾಪಾರ ಸಂಬಂಧವನ್ನು ಉಳಿಸುವಲ್ಲಿ ಯಶಸ್ವಿಯಾಗಿದ್ದಾರೆ. ಡೊನಾಲ್ಡ್ ಟ್ರಂಪ್ ಅವರೊಂದಿಗಿನ ಸಭೆಯ ಬಳಿಕ ಇದು ಒಳ್ಳೆಯ ಒಪ್ಪಂದ ಎಂದು ಇಯು ಮುಖ್ಯಸ್ಥರು ವರದಿಗಾರರಿಗೆ ತಿಳಿಸಿದರು.



**ನ್ಯಾಟೋ ಕೂಟ ರಕ್ಷಣಾ ವೆಚ್ಚ**

ವಿಮಾನ, ರಾಸಾಯನಿಕಗಳು, ಕೃಷಿ ಉತ್ಪನ್ನಗಳು, ನಿರ್ಣಾಯಕ ಕಚ್ಚಾ ವಸ್ತುಗಳ ಮೇಲೆ, ದ್ವಿಪಕ್ಷೀಯ ಸುಂಕ ವಿನಾಯಿತಿಗಳನ್ನು ಒಪ್ಪಿಕೊಳ್ಳಲಾಗಿದೆ ಎಂದು ವಾನ್ ಡೆರ್ ಲೇಯೆನ್ ಮಾಹಿತಿ ನೀಡಿದರು. ಇತ್ತೀಚೆಗೆ ನ್ಯಾಟೋ ಕೂಟ ರಕ್ಷಣಾ ವೆಚ್ಚವನ್ನು ಹೆಚ್ಚಿಸಲು ನಿರ್ಧರಿಸಿದ್ದು, ಯುರೋಪಿಯನ್ ಒಕ್ಕೂಟವು ಅಮೆರಿಕದಿಂದ ಇದೀಗ ನೂರಾರು ಶತಕೋಟಿ ಅಮೆರಿಕನ್ ಡಾಲರ್ ಮೌಲ್ಯದ ಮಿಲಿಟರಿ ಉಪಕರಣಗಳನ್ನು ಖರೀದಿಸಲಿವೆ.

ನಾವು ಒಂದು ಒಪ್ಪಂದವನ್ನು ತಲುಪಿದ್ದೇವೆ. ಇದು ಎಲ್ಲರಿಗೂ ಒಳ್ಳೆಯ ಒಪ್ಪಂದವಾಗಿದೆ. ಇದು ಬಹುಶಃ ಯಾವುದೇ ಸಾಮರ್ಥ್ಯದಲ್ಲಿ ತಲುಪಿದ ಅತಿದೊಡ್ಡ ಒಪ್ಪಂದವಾಗಿದೆ ಎಂದು ಡೊನಾಲ್ಡ್ ಟ್ರಂಪ್ ಅವರು ಯುರೋಪಿಯನ್ ಕಮಿಷನ್ ಅಧ್ಯಕ್ಷೆ ಉರ್ಸುಲಾ ವಾನ್ ಡೆರ್ ಲೇಯೆನ್ ಅವರೊಂದಿಗಿನ ಸಭೆಯ ಬಳಿಕ ಹೇಳಿದರು.

# ಪೆಹಲ್ಗಾಮ್ ದಾಳಿಕೋರರೆಂದು ಶಂಕಿಸಲಾದ ಮೂವರು ಹತ್ಯೆ

**ಶ್ರೀನಗರ:** ಪೆಹಲ್ಗಾಮ್ ದಾಳಿಯಲ್ಲಿ ಭಾಗಿಯಾಗಿದ್ದಾರೆಂದು ಶಂಕಿಸಲಾದ ಮೂವರು ಭಯೋತ್ಪಾದಕರು ಸೋಮವಾರ ಶ್ರೀನಗರದ ಹೊರವಲಯದಲ್ಲಿರುವ ದಚಿಗಮ್ ರಾಷ್ಟ್ರೀಯ ಉದ್ಯಾನವನದ ಬಳಿಯ ಲಿದ್ವಾಸ್ ಅರಣ್ಯ ಪ್ರದೇಶದಲ್ಲಿ ಭದ್ರತಾ ಪಡೆಗಳೊಂದಿಗೆ ನಡೆದ ಎನ್‌ಕೌಂಟರ್‌ನಲ್ಲಿ ಹತರಾಗಿದ್ದಾರೆ ಎಂದು ವರದಿಯಾಗಿದೆ. ಹರ್ವಾನ್ ಮುಲ್ನಾರ್ ಪ್ರದೇಶದಲ್ಲಿ ಭಯೋತ್ಪಾದಕರು ಅಡಗಿರುವ ಬಗ್ಗೆ ಗುಪ್ತಚರ ವಿಭಾಗದ ಖಚಿತ ಮಾಹಿತಿ ಆಧರಿಸಿ, ಭಾರತೀಯ ಸೇನೆ, ಜಮ್ಮು, ಕಾಶ್ಮೀರ ಪೊಲೀಸರು ಸೋಮವಾರ ಮುಂಜಾನೆ ಆಪರೇಷನ್ ಮಹಾದೇವ ಹೆಸರಿನಲ್ಲಿ ಕಾರ್ಯಾಚರಣೆ ಪ್ರಾರಂಭಿಸಿದ್ದಾರೆ. ಕಾರ್ಯಾಚರಣೆ ಇನ್ನೂ ಪ್ರಗತಿಯಲ್ಲಿದೆ ಎಂದು ಸೇನೆಯ ಚಿನಾರ್ ಕಾರ್ಪ್ಸ್ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದೆ. ಪ್ರಾಥಮಿಕ ವರದಿಗಳ ಪ್ರಕಾರ, ಹತ್ಯೆಗೀಡಾದ ಭಯೋತ್ಪಾದಕರು ವಿದೇಶಿ ಪ್ರಜೆಗಳಾಗಿದ್ದು, ಪಾಕಿಸ್ತಾನ ಮೂಲದ ಭಯೋತ್ಪಾದಕ ಗುಂಪು ಲಷ್ಕರ್-ಎ-ತಯಬಾ ಜೊತೆ ಸಂಬಂಧ ಹೊಂದಿದ್ದಾರೆ ಎನ್ನಲಾಗಿದೆ. ಇವರು, ಏ. 22ರಂದು ನಡೆದ ಪೆಹಲ್ಗಾಮ್ ದಾಳಿಗೆ ಕಾರಣವಾದ ಭಯೋತ್ಪಾದಕರ ಗುಂಪಿನ ಭಾಗವಾಗಿರುವ ಸಾಧ್ಯತೆ ಇದೆ. ಅವರ ಗುರುತು ಪತ್ತೆ ಮತ್ತು ದಾಳಿಯಲ್ಲಿ ಭಾಗಿಯಾಗಿರುವ ಸಾಧ್ಯತೆ ಬಗ್ಗೆ ಪರಿಶೀಲನೆ ನಡೆಸಲಾಗುತ್ತಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ಮಾಹಿತಿ ನೀಡಿದ್ದಾರೆ.

# ಬುದ್ಧ ಸಮ್ಯಕ್ ಸ್ತೂಪ ಇಂದು ಲೋಕಾರ್ಪಣೆ

**ಪಾಟ್ನಾ:** ವೈಶಾಲಿ ಜಿಲ್ಲೆಯಲ್ಲಿ ಮಂಗಳವಾರ ನಡೆಯಲಿರುವ ಬುದ್ಧ ಸಮ್ಯಕ್ ದರ್ಶನ ವಸ್ತುಸಂಗ್ರಹಾಲಯ-ಕಮ್-ಸ್ಮಾರಕ ಸ್ತೂಪದ ಉದ್ಘಾಟನೆಗೆ 15 ದೇಶಗಳ ಬೌದ್ಧ ಸನ್ಯಾಸಿಗಳು ಭಾಗವಹಿಸಲಿದ್ದಾರೆ ಎಂದು ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ತಿಳಿಸಿದ್ದಾರೆ.

ಭಗವಾನ್ ಬುದ್ಧನ ಪವಿತ್ರ ಅವಶೇಷವನ್ನು ವಸ್ತುಸಂಗ್ರಹಾಲಯದ ಮೊದಲ ಮಹಡಿಯಲ್ಲಿ ಸ್ಥಾಪಿಸಲಾಗಿದೆ ಎಂದು ಅವರು ಸೋಮವರ ಎಕ್ಸ್ ಮಾಡಿದ್ದಾರೆ. ಬುದ್ಧ ಸಮ್ಯಕ್ ದರ್ಶನ ವಸ್ತು ಸಂಗ್ರಹಾಲಯ-ಕಮ್-ಸ್ಮಾರಕ ಸ್ತೂಪ, ವೈಶಾಲಿಯನ್ನು ಇಂದು ಉದ್ಘಾಟಿಸಲಾಗುವುದು ಎಂದು ಘೋಷಿಸಲು ಬಹಳ ಸಂತೋಷದ ವಿಷಯವಾಗಿದೆ.

ಈ ಉದ್ಘಾಟನಾ ಸಮಾರಂಭಕ್ಕಾಗಿ ಸುಮಾರು 15 ದೇಶಗಳಿಂದ ಬೌದ್ಧ ಅನುಯಾಯಿಗಳು ಮತ್ತು ಸನ್ಯಾಸಿಗಳು ಬಿಹಾರಕ್ಕೆ ಬರುತ್ತಿದ್ದಾರೆ. ಬಿಹಾರದಲ್ಲಿ ನಮಗೆಲ್ಲರಿಗೂ ಇದು ಹೆಮ್ಮೆಯ ಕ್ಷಣವಾಗಿದೆ. ರಾಜಸ್ಥಾನದ ಗುಲಾಬಿ ಕಲ್ಲುಗಳನ್ನು ಬಳಸಿ 72 ಎಕರೆ ಭೂಮಿಯಲ್ಲಿ ಈ ಭವ್ಯವಾದ ಸ್ತೂಪವನ್ನು ನಿರ್ಮಿಸಲಾಗಿದೆ. ಭೇಟಿ ನೀಡುವ ಪ್ರವಾಸಿಗರಿಗೆ ಆಹ್ಲಾದಕರ ಅನುಭವವನ್ನು ನೀಡಲು ಈ ಸಂಕೀರ್ಣವನ್ನು ಪರಿಸರ ದೃಷ್ಟಿಕೋನದಿಂದ ವಿನ್ಯಾಸಗೊಳಿಸಲಾಗಿದೆ.



ಬುದ್ಧ ಸಮ್ಯಕ್ ದರ್ಶ ವಸ್ತುಸಂಗ್ರಹಾಲಯ ಸ್ಮಾರಕ ಸ್ತೂಪವನ್ನು ನಾಳೆ ನಿತೀಶ್ ಉದ್ಘಾಟಿಸಲಿದ್ದಾರೆ. ಸ್ತೂಪದ ಮೊದಲ ಮಹಡಿಯಲ್ಲಿ, ಬುದ್ಧನ ಪವಿತ್ರ ಅವಶೇಷವನ್ನು ಸ್ಥಾಪಿಸಲಾಗಿದೆ. ಇದು ಸ್ಮಾರಕದ ಪ್ರಮುಖ ಕೇಂದ್ರಬಿಂದುವಾಗಿರುತ್ತದೆ. ಭಗವಾನ್ ಬುದ್ಧನ ಅವಶೇಷಗಳನ್ನು ಆರು ಸ್ಥಳಗಳಿಂದ ಪಡೆಯಲಾಗಿದೆ, ಅವುಗಳಲ್ಲಿ ವೈಶಾಲಿಯ ಮಣ್ಣಿನ ಸ್ತೂಪದಲ್ಲಿ ಕಂಡುಬರುವ ಅವಶೇಷಗಳನ್ನು ಅತ್ಯಂತ ಅಧಿಕೃತವೆಂದು ಪರಿಗಣಿಸಲಾಗಿದೆ, ಇದನ್ನು ಚೀನಾದ ಪ್ರವಾಸಿ ಕ್ಸುವಾನ್‌ಜಾಂಗ್ ತಮ್ಮ ಪುಸ್ತಕದಲ್ಲಿ ಉಲ್ಲೇಖಿಸಿದ್ದಾರೆ ಎಂದು ಸಿಎಂ ಬರೆದಿದ್ದಾರೆ. ಹ್ಯುಯೆನ್ ತ್ಸಾಂಗ್ ಎಂದೂ ಕರೆಯಲ್ಪಡುವ ಕ್ಸುವಾನ್‌ಜಾಂಗ್, ಕ್ರಿ.ಶ. 7 ನೇ ಶತಮಾನದಲ್ಲಿ ರಾಜ ಹರ್ಷ ವರ್ಧನನ ಆಳ್ವಿಕೆಯಲ್ಲಿ ಭಾರತಕ್ಕೆ ಭೇಟಿ ನೀಡಿದ ಚೀನಾದ ಬೌದ್ಧ ಸನ್ಯಾಸಿ ಮತ್ತು ವಿದ್ವಾಂಸರಾಗಿದ್ದರು. ವೈಶಾಲಿಯು ಜಗತ್ತಿಗೆ ಮೊದಲ ಗಣರಾಜ್ಯವನ್ನು ನೀಡಿದ ಐತಿಹಾಸಿಕ ಮತ್ತು ಪೌರಾಣಿಕ ಭೂಮಿಯಾಗಿದೆ.

ಇದು ಮಹಿಳಾ ಸಬಲೀಕರಣದ ಭೂಮಿಯೂ ಆಗಿದೆ. ಮೊದಲ ಬಾರಿಗೆ, ಮಹಿಳೆಯರನ್ನು ಇಲ್ಲಿ ಬೌದ್ಧ ಸಂಘದಲ್ಲಿ ಸೇರಿಸಲಾಯಿತು. ಈ ಸ್ತೂಪವು ಬಿಹಾರದ ಸಾಂಸ್ಕೃತಿಕ ಪರಂಪರೆ ಮತ್ತು ಜಾಗತಿಕ ಬೌದ್ಧ ಪರಂಪರೆಯ ಭವ್ಯ ಸಂಕೇತವಾಗಿದೆ. ಬುದ್ಧ ಸಮ್ಯಕ್ ದರ್ಶನ ವಸ್ತುಸಂಗ್ರಹಾಲಯ ಮತ್ತು ಸ್ಮಾರಕ ಸ್ತೂಪವು ಜಾಗತಿಕ ಬೌದ್ಧ ಭೂಪಟದಲ್ಲಿ ವೈಶಾಲಿಯನ್ನು ಪ್ರಮುಖವಾಗಿ ಸ್ಥಾಪಿಸುವುದಲ್ಲದೆ, ಪ್ರವಾಸೋದ್ಯಮ, ಸಂಸ್ಕೃತಿ ಮತ್ತು ಉದ್ಯೋಗಕ್ಕೆ ಹೊಸ ದಿಕ್ಕನ್ನು ಒದಗಿಸುತ್ತದೆ ಎಂದು ಮುಖ್ಯಮಂತ್ರಿ ಬರೆದಿದ್ದಾರೆ.

# ಅವಸಾನೇಶ್ವರ ದೇವಸ್ಥಾನದಲ್ಲಿ ಕಾಲ್ತುಳಿತ, ಇಬ್ಬರ ಸಾವು

**ಬಾರಾಬಂಕಿ:** ಸೋಮವರ ಮುಂಜಾನೆ ಉತ್ತರ ಪ್ರದೇಶದ ದೇವಾಲಯವೊಂದರಲ್ಲಿ ಕೋತಿಗಳು ಮುರಿದು ವಿದ್ಯುತ್ ತಂತಿ ತಗಡಿನ ಶೆಡ್ ಮೇಲೆ ಬಿದ್ದ ಪರಿಣಾಮ ಸಂಭವಿಸಿದ ಕಾಲ್ತುಳಿತದಲ್ಲಿ ಇಬ್ಬರು ಸಾವನ್ನಪ್ಪಿದ್ದು, 32 ಜನರು ಗಾಯಗೊಂಡಿದ್ದಾರೆ. ಶ್ರಾವಣ ಪವಿತ್ರ ಮಾಸದ ಸಂದರ್ಭದಲ್ಲಿ ಸೋಮವಾರ ಬಾರಾಬಂಕಿಯ ಹೈದರ್ ಘರ್ ಪ್ರದೇಶದ ಅವಸಾನೇಶ್ವರ ದೇವಸ್ಥಾನದಲ್ಲಿ ಜಲಾಭಿಷೇಕ ಗಾಗಿ ಭಕ್ತರು ದೇವಾಲಯದಲ್ಲಿ ಜಮಾಯಿಸಿದ್ದಾಗ ಈ ಘಟನೆ ಸಂಭವಿಸಿದೆ. ತಂತಿ ಬಿದ್ದಾಗ ವಿದ್ಯುತ್ ಪ್ರವಾಹ ತಗಡಿನ ಶೆಡ್ ಮೂಲಕ ಹರಡಿತು, ದೇವಾಲಯದ ಆವರಣದಲ್ಲಿ ಭೀತಿ ಮತ್ತು ಕಾಲ್ತುಳಿತ ಉಂಟಾಯಿತು. ಲೋನಿಕತ್ರ ಪೊಲೀಸ್ ಠಾಣೆ ವ್ಯಾಪ್ತಿಯ ಮುಬಾರಕ್ ಪುರ ಗ್ರಾಮದ ಪ್ರಶಾಂತ್ (22) ಮತ್ತು ತ್ರಿವೇದಿಗಂಜ್ ಸಮುದಾಯ ಆರೋಗ್ಯ ಕೇಂದ್ರದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ 30 ವರ್ಷದ ಮತ್ತೊಬ್ಬ ಭಕ್ತ ಸಾವನ್ನಪ್ಪಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಹರಿದ್ವಾರದ ಬೆಟ್ಟದ ತುದಿಯಲ್ಲಿರುವ ಮಾನಸಾ ದೇವಿ ದೇವಸ್ಥಾನಕ್ಕೆ ಹೋಗುವ ಮೆಟ್ಟಿಲು ಮಾರ್ಗದಲ್ಲಿ ಯಾತ್ರಿಕರ ನೂಕುನುಗ್ಗಲಿನಲ್ಲಿ ಸಂಭವಿಸಿದ ಕಾಲ್ತುಳಿತದಲ್ಲಿ ಎಂಟು ಜನರು ಸಾವನ್ನಪ್ಪಿದ ಒಂದು ದಿನದ ನಂತರ ಇದು ಬಂದಿದೆ. ಮೆಟ್ಟಿಲುಗಳು ಪ್ರಾರಂಭವಾಗುವ ಸ್ಥಳದಲ್ಲಿ ವಿದ್ಯುತ್ ಪ್ರವಾಹದ ವದಂತಿಯು ಜನರಲ್ಲಿ ಭಯಭೀತತೆಯನ್ನು ಉಂಟುಮಾಡಿತು, ಇದು ಕಾಲ್ತುಳಿತಕ್ಕೆ ಕಾರಣವಾಯಿತು ಎಂದು ಪೊಲೀಸರು ತಿಳಿಸಿದ್ದಾರೆ. ಒಟ್ಟು 10 ಗಾಯಾಳುಗಳನ್ನು ತ್ರಿವೇದಿಗಂಜ್ ಸಿಎಚ್‌ಸಿಗೆ ಕರೆತರಲಾಯಿತು, ಅವರಲ್ಲಿ ಐದು ಜನರ ಸ್ಥಿತಿ ಗಂಭೀರವಾಗಿರುವುದರಿಂದ ಅವರನ್ನು ಉನ್ನತ ವೈದ್ಯಕೀಯ ಕೇಂದ್ರಗಳಿಗೆ ಕಳುಹಿಸಲಾಗಿದೆ. ಏತನ್ಮಧ್ಯೆ, 26 ಗಾಯಗೊಂಡ ಭಕ್ತರಿಗೆ ಹೈದರ್‌ಗಢ ಸಿಎಚ್‌ಸಿಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಮತ್ತು ಅವರಲ್ಲಿ ಒಬ್ಬರಿಗೆ ಗಂಭೀರ ಗಾಯಗಳಾಗಿದ್ದು, ಹೆಚ್ಚಿನ ಚಿಕಿತ್ಸೆಗಾಗಿ ಕಳುಹಿಸಲಾಗಿದೆ.

ಘಟನೆಯ ನಂತರ, ದೇವಾಲಯ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅವ್ಯವಸ್ಥೆ ಉಂಟಾಗಿತ್ತು. ಜಿಲ್ಲಾ, ಪೊಲೀಸ್ ಅಧಿಕಾರಿಗಳು ಸ್ಥಳಕ್ಕೆ ತಲುಪಿ ಪರಿಸ್ಥಿತಿಯನ್ನು ನಿರ್ವಹಿಸಲು ಕೆಲಸ ಮಾಡುತ್ತಿದ್ದಾರೆ. ಪರಿಣಾಮವಾಗಿ ಉಂಟಾದ ಕಾಲ್ತುಳಿತದಲ್ಲಿ ಇಬ್ಬರು ಪ್ರಾಣ ಕಳೆದುಕೊಂಡರು ಮತ್ತು ಎರಡು ಡಜನ್‌ಗೂ ಹೆಚ್ಚು ಜನರು ಗಾಯಗೊಂಡರು ಎಂದು ಅವರು ಹೇಳಿದರು.

ನಂತರ ಭಕ್ತರು ದೇವಾಲಯದಲ್ಲಿ ತಮ್ಮ ಪೂಜೆಯನ್ನು ಪುನರಾರಂಭಿಸಿದರು. ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರು ಜೀವಹಾನಿಗೆ ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ ಮತ್ತು ಮೃತರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ. ಗಾಯಗೊಂಡವರಿಗೆ ಸರಿಯಾದ ಚಿಕಿತ್ಸೆ ಮತ್ತು ಪರಿಹಾರ ಕಾರ್ಯಾಚರಣೆಗಳನ್ನು ತ್ವರಿತಗೊಳಿಸುವಂತೆ ಅವರು ಜಿಲ್ಲಾಡಳಿತ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ ಎಂದು ಆದಿತ್ಯನಾಥ್ ಅವರ ಕಚೇರಿ ನಲ್ಲಿ ಹಿಂದಿಯಲ್ಲಿ ಪೋಸ್ಟ್ ಮಾಡಿದೆ. ಮೃತರ ಆತ್ಮಗಳಿಗೆ ಮೋಕ್ಷ ಮತ್ತು ಗಾಯಾಳುಗಳಿಗೆ ತ್ವರಿತ ಚೇತರಿಕೆ ನೀಡಲಿ ಎಂದು ಅವರು ಪರಮಾತ್ಮ ಮಹಾದೇವನಲ್ಲಿ ಪ್ರಾರ್ಥಿಸಿದ್ದಾರೆ ಎಂದು ಅದು ಹೇಳಿದೆ.



ಘಟನೆಯ ನಿಖರವಾದ ಕಾರಣವನ್ನು ನಿರ್ಧರಿಸಲು ತನಿಖೆ ನಡೆಯುತ್ತಿದೆ. ಜಲಾಭಿಷೇಕ ಆಚರಣೆಯ ಸಮಯದಲ್ಲಿ, ಮಂಗಗಳು ವಿದ್ಯುತ್ ತಂತಿಯನ್ನು ಹಾನಿಗೊಳಿಸಿದವು, ಇದರಿಂದಾಗಿ ದೇವಾಲಯ ಸಂಕೀರ್ಣದಲ್ಲಿನ ಮೂರು ತವರ ಶೆಡ್‌ಗಳ ಮೂಲಕ ವಿದ್ಯುತ್ ಹರಿಯಿತು.

-ಶಶಾಂಕ್ ತ್ರಿಪಾಠಿ
ಬಾರಾಬಂಕಿ ಜಿಲ್ಲಾ ಮ್ಯಾಜಿಸ್ಟ್ರೇಟ್

# ಆಧಾರ್ ಪೌರತ್ವದ ಪುರಾವೆಯಲ್ಲ ಎಂದು ಚುನಾವಣಾ ಆಯೋಗ ವಾದ

## ಬಿಹಾರ ವೋಟರ್ ಲಿಸ್ಟ್ ಪರಿಷ್ಕರಣೆ: ಆಧಾರ್, ವೋಟರ್ ಕಾರ್ಡ್ ಯಾಕೆ ಪರಿಗಣಿಸುತ್ತಿಲ್ಲ? ಸುಪ್ರೀಂಕೋರ್ಟ್ ಪ್ರಶ್ನೆ

**ಹೊಸದಿಲ್ಲಿ:** ಸುಪ್ರೀಂ ಕೋರ್ಟ್ ಬಿಹಾರದಲ್ಲಿನ ಮತದಾರರ ಪಟ್ಟಿಯ ಪರಿಷ್ಕರಣೆಯಲ್ಲಿ ಆಧಾರ್ ಮತ್ತು ವೋಟರ್ ಐಡಿ ಕಾರ್ಡ್ ಅನ್ನು ಗುರುತಿನ ದಾಖಲೆಗಳಾಗಿ ಪರಿಗಣಿಸಲು ಚುನಾವಣಾ ಆಯೋಗದ ಹಿಂದೇಟನ್ನು ಪ್ರಶ್ನಿಸಿದೆ. ಯಾವುದೇ ದಾಖಲೆಯನ್ನೂ ಸುಳ್ಳಾಗಿ ಸೃಷ್ಟಿಸಬಹುದು ಎಂದು ಸುಪ್ರೀಂಕೋರ್ಟ್ ಹೇಳಿದೆ. ಇಂದು ನ್ಯಾಯಮೂರ್ತಿ ಸೂರ್ಯಕಾಂತ್ ಅವರ ನೇತೃತ್ವದ ಪೀಠವು, ಚುನಾವಣಾ ಆಯೋಗದ ಈ ನಿಲುವನ್ನು ಪ್ರಶ್ನಿಸಿದೆ. ಆಧಾರ್ ಕಾರ್ಡ್ ಅನ್ನು ಈಗಾಗಲೇ ನೋಂದಣಿ ಫಾರ್ಮ್‌ನಲ್ಲಿ ಕೇಳಲಾಗುತ್ತಿದ್ದರೂ, ಅದನ್ನು ಮತ್ತು ವೋಟರ್ ಕಾರ್ಡ್ ಅನ್ನು ಯಾಕೆ ಪರಿಗಣಿಸುತ್ತಿಲ್ಲ ಎಂದು ಪ್ರಶ್ನಿಸಿದೆ.

**ಆಧಾರ್, ವೋಟರ್ ಐಡಿ, ರೇಷನ್ ಕಾರ್ಡ್‌ಗಳನ್ನು ಪರಿಗಣಿಸಿ:** ಸುಪ್ರೀಂ ಕೋರ್ಟ್ ಜುಲೈ 10 ರಂದು, ಬಿಹಾರದಲ್ಲಿ ನಡೆಯುತ್ತಿರುವ ವಿಶೇಷ ತೀವ್ರ ಪರಿಷ್ಕರಣೆಯಲ್ಲಿ ಆಧಾರ್, ವೋಟರ್ ಐಡಿ ಮತ್ತು ರೇಷನ್ ಕಾರ್ಡ್‌ಗಳನ್ನು ಮತದಾರರ ನೋಂದಣಿಗೆ ಮಾನ್ಯ ದಾಖಲೆಗಳೆಂದು ಪರಿಗಣಿಸುವಂತೆ ಚುನಾವಣಾ ಆಯೋಗಕ್ಕೆ ತಿಳಿಸಿತ್ತು. ಇದು ನ್ಯಾಯದ ಹಿತಾಸಕ್ತಿಗೆ ಅಗತ್ಯ ಎಂದು ಹೇಳಿತ್ತು. ಪರಿಷ್ಕರಣಾ ಕಾರ್ಯವನ್ನು ಮುಂದುವರಿಸಲು ಸಹ ಅನುಮತಿ ನೀಡಿತ್ತು. ಆಧಾರ್ ಪೌರತ್ವದ ಪುರಾವೆಯಲ್ಲ ಎಂದು ಚುನಾವಣಾ ಆಯೋಗ ವಾದಿಸಿತು. ಅಲ್ಲದೆ, ನಕಲಿ ರೇಷನ್ ಕಾರ್ಡ್‌ಗಳ ಬಗ್ಗೆಯೂ ಆತಂಕ ವ್ಯಕ್ತಪಡಿಸಿತು.

**ನಕಲಿ ದಾಖಲೆ ಸೃಷ್ಟಿ**

ದೊಡ್ಡ ಪ್ರಮಾಣದ ನಕಲಿ ದಾಖಲೆ ಸೃಷ್ಟಿಯಿಂದಾಗಿ ಅವುಗಳನ್ನು ನಂಬುವುದು ಕಷ್ಟ ಎಂದು ಹೇಳಿತು. ಆದರೆ, ಆಧಾರ್ ಅನ್ನು ಗುರುತಿನ ಪುರಾವೆಯಾಗಿ ಸಲ್ಲಿಸಬಹುದೆಂದು ಆಯೋಗ ಒಪ್ಪಿಕೊಂಡಿದೆ. ಅದರ ಸಂಖ್ಯೆಯನ್ನು ಈಗಾಗಲೇ ನೋಂದಣಿ ಫಾರ್ಮ್‌ನಲ್ಲಿ ಕೇಳಲಾಗುತ್ತಿದೆ ಎಂದು ತಿಳಿಸಿದೆ. ಪಟ್ಟಿಯಿಂದ ಯಾರನ್ನಾದರೂ ತೆಗೆದುಹಾಕಿದರೆ, ಆ ಪ್ರಕ್ರಿಯೆಗೆ ಎಷ್ಟು ಸಮಯ ತೆಗೆದುಕೊಳ್ಳುತ್ತದೆ ಎಂದು ಕೋರ್ಟ್ ಕೇಳಿದೆ. ಆಧಾರ್‌ನಂತಹ ದಾಖಲೆಗಳನ್ನು ಪರಿಗಣಿಸದಿರುವ ಮತ್ತು ಬಿಹಾರದ ಮತದಾರರ ಪಟ್ಟಿಯಿಂದ ದೊಡ್ಡ ಸಂಖ್ಯೆಯಲ್ಲಿ ಹೆಸರುಗಳನ್ನು ತೆಗೆದುಹಾಕಿರುವ ಬಗ್ಗೆ ಸಲ್ಲಿಕೆಯಾದ ಅರ್ಜಿಯ ವಿಚಾರಣೆ ನಡೆಯುತ್ತಿದೆ.



**ಚುನಾವಣಾ ಆಯೋಗಕ್ಕೆ ತರಾಟೆ**

ಇದಕ್ಕೆ ಪ್ರತಿಕ್ರಿಯಿಸಿದ ಸುಪ್ರೀಂ ಕೋರ್ಟ್, ಚುನಾವಣಾ ಆಯೋಗದ ವಾದದಲ್ಲಿನ ವ್ಯತ್ಯಾಸವನ್ನು ಪ್ರಶ್ನಿಸಿತು. ಚುನಾವಣಾ ಆಯೋಗದ ಪಟ್ಟಿಯಲ್ಲಿರುವ ಯಾವುದೇ ದಾಖಲೆಯು ಖಚಿತವಲ್ಲದಿದ್ದರೆ, ಅದೇ ವಾದವನ್ನು ಆಧಾರ್ ಮತ್ತು ವೋಟರ್ ಐಡಿಗೂ ಅನ್ವಯಿಸಬಹುದು ಎಂದು ಹೇಳಿತು. ಒಂದು ವೇಳೆ ನೀವು ಸ್ವೀಕರಿಸಿರುವ ಇತರ ಹತ್ತು ದಾಖಲೆಗಳು ನಕಲಿ ಎಂದು ಕಂಡುಬಂದರೆ, ಅದನ್ನು ತಡೆಯಲು ನಿಮ್ಮಲ್ಲಿ ಏನು ವ್ಯವಸ್ಥೆ ಇದೆ ಸಾಮೂಹಿಕವಾಗಿ ಸೇರಿಸುವ ಬದಲು, ಸಾಮೂಹಿಕವಾಗಿ ಹೊರಗಿಡಲು ಏಕೆ ಅವಕಾಶ ನೀಡುತ್ತೀರಿ? ಎಂದು ಪೀಠ ಪ್ರಶ್ನಿಸಿತು.

ಪಟ್ಟಿಯಿಂದ ಹೆಸರುಗಳನ್ನು ತೆಗೆದುಹಾಕುವುದನ್ನು ಪ್ರಶ್ನಿಸಿ ಅರ್ಜಿದಾರರು ಕೋರ್ಟ್ ಮೊರೆ ಹೋಗಿದ್ದಾರೆ. ಆ.1ರಂದು ಪ್ರಕಟವಾಗಲಿರುವ ಕರಡು ಪಟ್ಟಿಯನ್ನು ತಡೆಹಿಡಿಯುವಂತೆ ಅರ್ಜಿದಾರರು ಕೋರಿದ್ದಾರೆ. ಒಂದು ವೇಳೆ ಹೆಸರು ತೆಗೆದುಹಾಕಿದರೆ, ಪ್ರತಿಯೊಬ್ಬ ನಾಗರಿಕನು ಪ್ರತ್ಯೇಕವಾಗಿ ಪ್ರಶ್ನಿಸಬೇಕಾಗುತ್ತದೆ ಎಂದುವಾದಿಸಿದ್ದಾರೆ. ಅರ್ಜಿದಾರರ ಪರವಾಗಿ ವಾದ ಮಂಡಿಸಿದ ಹಿರಿಯ ವಕೀಲ ಗೋಪಾಲ್ ಶಂಕರನಾರಾಯಣನ್, ಕರಡು ಪಟ್ಟಿಯ ಪ್ರಕಟಣೆಗೆ ಮಧ್ಯಂತರ ತಡೆಯಾಜ್ಞೆ ನೀಡುವಂತೆ ಕೋರಿದರು. ವಾದಗಳನ್ನು ಮಂಡಿಸಲು ಒಂದು ಕಾಲಮಿತಿಯನ್ನು ನೀಡುವಂತೆ ನ್ಯಾಯಾಲಯವು ವಕೀಲರಿಗೆ ಸೂಚಿಸಿದೆ. ಜುಲೈ 29 ರಂದು ವಿಚಾರಣೆಯ ದಿನಾಂಕವನ್ನು ನಿರ್ಧರಿಸುವುದಾಗಿ ಹೇಳಿದೆ.

**ಚುನಾವಣಾ ಆಯೋಗದ ಬಗ್ಗೆ ಬೇಸರ**

ಸುಪ್ರೀಂ ಕೋರ್ಟ್ ಚುನಾವಣಾ ಆಯೋಗವನ್ನು ತರಾಟೆಗೆ ತೆಗೆದುಕೊಂಡಿತು. ಯಾವುದೇ ದಾಖಲೆಯನ್ನೂ ಸುಳ್ಳಾಗಿ ಸೃಷ್ಟಿಸಬಹುದು ಎಂದು ನ್ಯಾಯಮೂರ್ತಿ ಸೂರ್ಯಕಾಂತ್ ಹೇಳಿದರು. ಆಧಾರ್ ಕಾರ್ಡ್ ಅನ್ನು ನೋಂದಣಿ ಫಾರ್ಮ್‌ನಲ್ಲಿ ಕೇಳಲಾಗುತ್ತಿದ್ದರೂ, ಅದನ್ನು ಯಾಕೆ ಗುರುತಿನ ದಾಖಲೆಯಾಗಿ ಪರಿಗಣಿಸುತ್ತಿಲ್ಲ ಎಂದು ಪ್ರಶ್ನಿಸಿದರು. ಈ ನಡೆಯು ಸರಿಯಲ್ಲ ಎಂದು ಕೋರ್ಟ್ ಅಭಿಪ್ರಾಯಪಟ್ಟಿತು. ಚುನಾವಣಾ ಆಯೋಗವು ತನ್ನ ವಾದವನ್ನು ಸಮರ್ಥಿಸಿಕೊಂಡಿತು. ಆಧಾರ್ ಕಾರ್ಡ್ ಪೌರತ್ವದ ಪುರಾವೆಯಲ್ಲ ಎಂದು ಹೇಳಿತು. ಅಲ್ಲದೆ, ನಕಲಿ ರೇಷನ್ ಕಾರ್ಡ್‌ಗಳ ಬಗ್ಗೆಯೂ ಆತಂಕ ವ್ಯಕ್ತಪಡಿಸಿತು. ಆದರೆ, ಆಧಾರ್ ಕಾರ್ಡ್ ಅನ್ನು ಗುರುತಿನ ಚೀಟಿಯಾಗಿ ಪರಿಗಣಿಸುವುದಾಗಿ ಹೇಳಿತು.

## ಮಿನಿ ನ್ಯೂಸ್

### ಹಿಮಾಚಲ ಪ್ರದೇಶ : ಪಿಕಪ್ ವಾಹನ ಕಾಲುವೆಗೆ ಉರುಳಿ ಬಿದ್ದು 4 ಸಾವು

**ಲುಧಿಯಾನ:** ಪಿಕಪ್ ವಾಹನವು ಕಾಲುವೆಗೆ ಉರಳಿ ನಾಲ್ವರು ಸಾವನ್ನಪ್ಪಿರುವ ಘಟನೆ ಪಂಜಾಬ್‌ನ ಲುಧಿಯಾನ ಜಿಲ್ಲೆಯ ಜಾಗೇರಾ ಸೇತುವೆ ಬಳಿ ನಡೆದಿದೆ. ಹಿಮಾಚಲ ಪ್ರದೇಶದ ಮಾತಾ ನೈನಾ ದೇವಿ ದೇವಸ್ಥಾನದಲ್ಲಿ ಪೂಜೆ ಸಲ್ಲಿಸಿ ಹಿಂತಿರುಗುತ್ತಿದ್ದ ಸುಮಾರು 25 ಭಕ್ತರ ಗುಂಪು ವಾಪಸಾಗುವ ವೇಳೆ ರಾತ್ರಿ ಸಿರ್ಹಿಂದ್ ಕಾಲುವೆಗೆ ಬಿದ್ದ ಈ ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಮೃತರಲ್ಲಿ ಇಬ್ಬರು ಮಕ್ಕಳೂ ಸೇರಿದ್ದಾರೆ. ಕಾಲುವೆಯ ದಂಡೆಯಲ್ಲಿ ಮತ್ತೊಂದು ವಾಹನವನ್ನು ಹಿಂದಿಕ್ಕುವಾಗ ಚಾಲಕನ ನಿಯಂತ್ರಣ ತಪ್ಪಿ ಕಾಲುವೆಗೆ ಉರುಳಿ ಬಿದ್ದಿದೆ ಉಪ ಪೊಲೀಸ್ ಆಯುಕ್ತ ಹಿಮಾಂಶು ಜೈನ್, ಹಿರಿಯ ಪೊಲೀಸ್ ವರಿಷ್ಠಾಧಿಕಾರಿ ಜ್ಯೋತಿ ಯಾದವ್ ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆಯ ಮೇಲ್ವಿಚಾರಣೆ ನಡೆಸಿದರು. ಹೆಚ್ಚಿನ ಭಕ್ತರನ್ನು ರಕ್ಷಿಸಲಾಗಿದ್ದು, ಅವರನ್ನು ಹತ್ತಿರದ ಆಸ್ಪತ್ರೆಗಳಿಗೆ ಕರೆದೊಯ್ಯಲಾಗಿದೆ. ಆದಾಗ್ಯೂ, ಅಧಿಕಾರಿಗಳ ಪ್ರಕಾರ, ಮೂವರು ಇನ್ನೂ ನಾಪತ್ತೆಯಾಗಿದ್ದಾರೆ. ಈವರೆಗೆ ನಾಲ್ಕು ಶವಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

### ಹಳಿ ತಪ್ಪಿದ ರೈಲು: ಮೂವರ ಸಾವು ಹಲವರಿಗೆ ಗಂಭೀರ ಗಾಯ

**ಬರ್ಲಿನ್:** ದಕ್ಷಿಣ ಜರ್ಮನಿಯಲ್ಲಿ ಪ್ರಯಾಣಿಕ ರೈಲಿನ ಎರಡು ಬೋಗಿಗಳು ಹಳಿ ತಪ್ಪಿದ ಪರಿಣಾಮ ಮೂವರು ಮೃತಪಟ್ಟಿದ್ದು, ಹಲವರು ಗಂಭೀರವಾಗಿ ಗಾಯಗೊಂಡಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಮ್ಯೂನಿಚ್‌ನಿಂದ 158 ಕಿಲೋಮೀಟರ್ ದೂರದಲ್ಲಿರುವ ರೀಡ್ಲಿಂಗೆನ್ ಬಳಿ ಅವಘಡ ಸಂಭವಿಸಿದೆ. ಘಟನಾ ಸ್ಥಳದಲ್ಲಿ ರಕ್ಷಣಾ ಕಾರ್ಯಾಚರಣೆ ಭರದಿಂದ ಸಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಎಷ್ಟು ಜನರು ಗಾಯಗೊಂಡಿದ್ದಾರೆ ಎಂಬುದು ತಕ್ಷಣಕ್ಕೆ ಸ್ಪಷ್ಟವಾಗಿಲ್ಲ. ಹಳಿ ತಪ್ಪಿರುವ ಬೋಗಿಗಳಲ್ಲಿ 100ಕ್ಕೂ ಹೆಚ್ಚು ಪ್ರಯಾಣಿಕರಿದ್ದರು ಎಂದು ವರದಿಯಾಗಿದೆ. ಘಟನೆ ನಡೆದ ಸ್ಥಳದಲ್ಲಿ ಭಾರಿ ಮಳೆಯಿಂದಾಗಿ ಭೂಕುಸಿತ ಸಂಭವಿಸಿದೆ. ಇದರಿಂದಾಗಿ ರೈಲು ಹಳಿ ತಪ್ಪಿರುವ ಸಾಧ್ಯತೆ ಇದೆ. ಆದಾಗ್ಯೂ, ಘಟನೆ ಸಂಬಂದ ತನಿಖೆ ನಡೆಸಲಾಗುತ್ತಿದೆ ಎಂದು ಬಾಡೆನ್ ವುರ್ಟೆನ್‌ಬರ್ಗ್ ಸಚಿವ ಥಾಮಸ್ ಸ್ಟ್ರೋಬಲ್ ಹೇಳಿದ್ದಾರೆ.

### ಬಾಡಿಗೆ ತಾಯ್ತನದ ಹೆಸರಿನಲ್ಲಿ ಮಹಾ ಮೋಸ- ವೈದ್ಯೆ ಬಂಧನ

**ಹೈದರಾಬಾದ್:** ಬಾಡಿಗೆ ತಾಯ್ತನದ ಹೆಸರಿನಲ್ಲಿ ಮಕ್ಕಳ ಕಳ್ಳಸಾಗಣೆ ಅನೈತಿಕ ಐವಿಎಫ್ ಪ್ರಕ್ರಿಯೆಗಳನ್ನು ನಡೆಸುತ್ತಿದ್ದ ಆರೋಪದ ಮೇಲೆ ಹೈದರಾಬಾದ್‌ನ ಯುನಿವರ್ಸಲ್ ಸೃಷ್ಟಿ ಫರ್ಟಿಲಿಟಿ ಸೆಂಟರ್‌ನ ಮುಖ್ಯಸ್ಥೆ ಡಾ. ಅತಲೂರಿ ನಮ್ರತಾ, ಇತರ ಐವರನ್ನು ಬಂಧಿಸಲಾಗಿದೆ. ಹೈದರಾಬಾದ್‌ನಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಡಿಸಿಪಿ ರಶ್ಮಿಪೆರುಮಾಳ್ ಅವರು ಈ ವಿಷಯ ತಿಳಿಸಿದ್ದಾರೆ. ಸಿಕಂದರಾಬಾದ್‌ನಲ್ಲಿ ನೆಲೆಸಿದ್ದ ರಾಜಸ್ಥಾನ ಮೂಲದ ದಂಪತಿಯೊಬ್ಬರು ಯುನಿವರ್ಸಲ್ ಸೃಷ್ಟಿಫರ್ಟಿಲಿಟಿ ಸೆಂಟರ್‌ನಿಂದ ನಮಗೆ ಮೋಸ ಆಗಿದೆ ಎಂದು ಗೋಪಾಲಪುರ ಪೊಲೀಸ್ ಠಾಣೆಗೆ ದೂರು ಸಲ್ಲಿಸಿದ್ದರು. ಪತ್ನಿಗೆ ಗರ್ಭಧಾರಣೆ ಸಮಸ್ಯೆ ಇದ್ದಿದ್ದಕ್ಕೆ 2024 ರಲ್ಲಿ ಬಾಡಿಗೆ ತಾಯ್ತನದ ಮೊರೆ ಹೋಗಲಾಗಿತ್ತು. ಇದಕ್ಕಾಗಿ ಆಸ್ಪತ್ರೆಯವರು ಹಂತ ಹಂತವಾಗಿ 35 ಲಕ್ಷ ಕಟ್ಟಿಸಿಕೊಂಡಿದ್ದರು.

ನಮಗೆ ಮಗು ಕೊಟ್ಟಾಗ ಮಗುವಿನ ಅನುವಂಶೀಕ ಲಕ್ಷಣಗಳ ಮೇಲೆ ಅನುಮಾನ ಬಂದು ಡಿಎನ್‌ಎ ಪರೀಕ್ಷೆಯನ್ನು ದೆಹಲಿಯಲ್ಲಿ ಮಾಡಿಸಿದ್ದೆವು. ಆ ಪರೀಕ್ಷೆಯಲ್ಲಿ ಬಾಡಿಗೆ ತಾಯ್ತನದ ಮೂಲಕ ನಮಗೆ ಸಿಕ್ಕಿರುವ ಮಗು ನಮ್ಮದಲ್ಲ ಎಂದು ತಿಳಿದು ಬಂದಿತ್ತು. ಹೀಗಾಗಿ ನಮಗೆ ನ್ಯಾಯ ಕೊಡಿಸಿ ಎಂದು ಸಂತ್ರಸ್ತ ದೂರು ದಾಖಲಿಸಿದ್ದರು. ಈ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದ್ದ ಪೊಲೀಸರು, ಕಳೆದ ಒಂದು ವಾರದಿಂದ ಯುನಿವರ್ಸಲ್ ಸೃಷ್ಟಿ ಫರ್ಟಿಲಿಟಿ ಸೆಂಟರ್‌ನ ಹೈದರಾಬಾದ್, ವಿಜಯವಾಡ, ವಿಶಾಖಪಟ್ಟಣದ ಶಾಖೆಗಳಲ್ಲಿ ತೀವ್ರ ತಪಾಸಣೆ ನಡೆಸಿ ದಾಖಲೆಗಳನ್ನು ಜಾಲಾಡಿದ್ದರು ಎಂದು ಎನ್‌ಡಿಟಿವಿ ಸುದ್ದಿ ವೆಬ್‌ಸೈಟ್ ವರದಿ ಮಾಡಿದೆ.

### ಬ್ಯಾಂಕಾಕ್ ಫುಡ್ ಮಾರ್ಕೆಟ್‌ನಲ್ಲಿ ಗುಂಡಿನ ದಾಳಿಗೆ 6 ಬಲಿ

**ಬ್ಯಾಂಕಾಕ್:** ಥೈಲ್ಯಾಂಡ್ ರಾಜಧಾನಿ ಬ್ಯಾಂಕಾಕ್‌ನ ಫುಡ್‌ಮಾರ್ಕೆಟ್‌ನಲ್ಲಿ ನಡೆದ ಗುಂಡಿನ ದಾಳಿಯಲ್ಲಿ ಆರು ಮಂದಿ ಮೃತಪಟ್ಟಿದ್ದಾರೆ. ಬ್ಯಾಂಕಾಕ್‌ನ ಪ್ರಸಿದ್ಧ ಆರ್ ತೋರ್ ಕೋರ್ ಫುಡ್ ಮಾರ್ಕೆಟ್‌ನಲ್ಲಿ ವ್ಯಕ್ತಿಯೊಬ್ಬ 5 ಜನರ ಮೇಲೆ ಬಂದೂಕಿನಿಂದ ಗುಂಡು ಹಾರಿಸಿ, ಬಳಿಕ ತಾನೂ ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಆರ್ ತೋರ್ ಕೋರ್ ಮಾರ್ಕೆಟ್‌ನ ನಾಲ್ವರು ಭದ್ರತಾ ಸಿಬ್ಬಂದಿಯನ್ನು, ಮಾರ್ಕೆಟ್‌ನಲ್ಲಿ ಕೆಲಸ ಮಾಡುತ್ತಿದ್ದ ಮಹಿಳೆಯು ಗುಂಡಿನ ದಾಳಿಗೆ ಬಲಿಯಾಗಿದ್ದಾರೆ. ಇಬ್ಬರು ಮಾರಾಟಗಾರರು ಗಾಯಗೊಂಡಿದ್ದಾರೆ.

ಬಂದೂಕುಧಾರಿಗೂ ಮಾರ್ಕೆಟ್‌ನಲ್ಲಿದ್ದ ಭದ್ರತಾ ಸಿಬ್ಬಂದಿ ಮಧ್ಯೆ ವಾಗ್ವಾದ ನಡೆದಿತ್ತು ಎನ್ನಲಾಗಿದೆ. ಗುಂಡಿನ ದಾಳಿಯ ನಿಖರ ಕಾರಣವನ್ನು ತಿಳಿಯಲು ಪೊಲೀಸರು ತನಿಖೆ ಮುಂದುವರಿಸಿದ್ದಾರೆ. ಇತ್ತೀಚೆಗೆ ಥೈಲ್ಯಾಂಡ್‌ನಲ್ಲಿ ಈ ರೀತಿಯ ಗುಂಡಿನ ದಾಳಿಗಳು ಸಾಮಾನ್ಯವಾಗಿವೆ. 2020ರಲ್ಲಿ ಕಿರಿಯ ಸೇನಾಧಿಕಾರಿ ಗುಂಡಿನ ದಾಳಿ ನಡೆಸಿ, 29 ಜನರ ಸಾವಿಗೆ ಕಾರಣನಾಗಿದ್ದ. ಈ ಘಟನೆಯಲ್ಲಿ 58 ಜನ ಗಾಯಗೊಂಡಿದ್ದರು.

### ಪೊಲೀಸಪ್ಪನ ಪತ್ನಿಗೆ ಅತ್ತೆ, ಮಾವನಿಂದ ಕಿರುಕುಳ

**ಲಕ್ನೋ:** ಅತ್ತೆ-ಮಾವ ನೀಡುತ್ತಿದ್ದ ಕಿರುಕುಳ ಸಹಿಸಲಾಗದೇ ಪೊಲೀಸ್ ಕಾನ್ಸ್‌ಟೇಬಲ್ ಪತ್ನಿ ವಿಡಿಯೋ ಮಾಡಿಟ್ಟು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಉತ್ತರ ಪ್ರದೇಶದ ಲಕ್ನೋದಲ್ಲಿ ನಡೆದಿದೆ. ಪೊಲೀಸ್ ಕಾನ್ಸ್‌ಟೇಬಲ್ ಅನುರಾಗ್ ಸಿಂಗ್ ಅವರ ಪತ್ನಿ ಸೌಮ್ಯ ಕಶ್ಯಪ್ ಆತ್ಮಹತ್ಯೆ ಮಾಡಿಕೊಂಡ ಮಹಿಳೆ ಮೂಲಗಳ ಪ್ರಕಾರ, ಬಕ್ಷಿ ಕಾ ತಲಾಬ್ ಪೊಲೀಸ್ ಠಾಣೆಯಲ್ಲಿ ಕಾನ್ಸ್‌ಟೇಬಲ್‌ವೊಬ್ಬರು ಇನ್‌ಸ್ಟಾದಲ್ಲಿ ವಿಡಿಯೋ ರೀಲ್ಸ್ ನೋಡುವಾಗ ಮೃತ ಪೊಲೀಸ್ ಕಾನ್ಸ್‌ಟೇಬಲ್ ಪತ್ನಿ ಹರಿಬಿಟ್ಟ ವಿಡಿಯೋ ಗಮನಿಸಿದ್ದಾರೆ. ನಂತರ ಪ್ರಕರಣ ಬೆಳಕಿಗೆ ಬಂದಿದೆ. ವಿಡಿಯೋದಲ್ಲಿ, ಅತ್ತೆ, ಮಾವ ಹಾಗೂ ಮೈದುನ ಮೂವರು ಸೇರಿ ನನಗೆ ಕಿರುಕುಳ ನೀಡುತ್ತಿದ್ದಾರೆ.

ನನ್ನ ಗಂಡನನ್ನು ನನ್ನಿಂದ ಬೇರ್ಪಡಿಸಿ, ಅವರಿಗೆ ಬೇರೆ ಮದುವೆ ಮಾಡಲು ಬಯಸುತ್ತಿದ್ದಾರೆ. ಅದೇ ಕಾರಣಕ್ಕೆ ನನಗೆ ಚಿತ್ರಹಿಂಸೆ ನೀಡುತ್ತಿದ್ದಾರೆ ಎಂದು ಕಣ್ಣೀರಿಟ್ಟಿದ್ದಾರೆ. ಜೊತೆಗೆ ಮೈದುನ ಕೊಲೆ ಮಾಡುವುದಾಗಿ ಬೆದರಿಕೆ ಹಾಕಿದ್ದಾರೆ ಎಂದು ಆರೋಪಿಸಿದ್ದಾರೆ. ಘಟನೆ ಸಂಬಂಧ ಉತ್ತರ ಲಕ್ನೋ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಪೊಲೀಸ್ ಅಧಿಕಾರಿ ಜಿತೇಂದ್ರ ದುಬೆ ಅವರು ಮಹಿಳೆ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ದೃಢಪಡಿಸಿದ್ದಾರೆ. ಸದ್ಯ ಪ್ರಕರಣದಾಖಲಿಸಿಕೊಂಡಿರುವ ಪೊಲೀಸರು ತನಿಖೆ ಆರಂಭಿಸಿದ್ದಾರೆ.

# ಭಾನು ಆಗಿ ಮನಗೆದ್ದ ಸಂಧ್ಯಾ ಅರಕೆರೆ



'ಸಾತಿ ಮುತ್ತಿನ ಮಳೆ ಹನಿಯೇ ಚಿತ್ರದಲ್ಲಿ ಸಣ್ಣ ಪಾತ್ರ ಮಾಡಿದ್ದೆ. ನಂತರ ಟೋಬಿ ಸಿನಿಮಾದಲ್ಲಿ ಅವಕಾಶ ಸಿಕ್ಕಿತು. ಮತ್ತೆ ಆ ತಂಡದಿಂದ ಮತ್ತೆ ಆಫರ್ ಬರುತ್ತದೆ ಎಂದುಕೊಂಡಿರಲಿಲ್ಲ. ರಾಜ್ ಅವರು ನನಗೆ ಈ ಆಫರ್ ಕೊಟ್ಟರು. ನಾನು ಖುಷಿಯಿಂದ ಒಪ್ಪಿ ನಟಿಸಿದೆ' ಎನ್ನುತ್ತಾರೆ ಸಂಧ್ಯಾ. 'ಭಾನು ಆಗಿ ತೆರೆಮೇಲೆ ಏನೇ ಬಂದಿದ್ದರೂ ನಿರ್ದೇಶಕ ಜೆಪಿ ತುಮಿನಾಡ್‌ಗೆ ಅದರ ಕ್ರೆಡಿಟ್ ಸಲ್ಲುತ್ತದೆ. ಅವರು ಪಾತ್ರವನ್ನು ಬರೆದು ಜೀವಿಸಿದವರು.

ಅವರು ಹೇಳಿದಂತೆ ನಟಿಸಿದ್ದೇನೆ. ರಾಜ್ ಬಿ ಶೆಟ್ಟಿ ಅವರಿಗೆ ನಾನು ಈ ಪಾತ್ರಕ್ಕೆ ಸೂಕ್ತ ಅನಿಸಿತು. ಅವರಿಗೆ ನಾನು ಸೂಕ್ತ ಅಲ್ಲ ಎಂದು ಅನಿಸಿದ್ದರೆ ನನಗೆ ಈ ಕಥೆಯನ್ನು ಕೇಳಲು ಸಾಧ್ಯವೇ ಆಗುತ್ತಿರಲಿಲ್ಲ. ಅವರಿಗೂ ಧನ್ಯವಾದ ಹೇಳಬೇಕು. ಪಾತ್ರ ಕೇಳುವಾಗ ಮೈ ಜುಂ ಎಂದಿತ್ತು. ಜೆಪಿ ಅವರು ನರೇಟ್ ಮಾಡುವಾಗ ಅವರೇ ಭಾನು ಎನ್ನುವ ರೀತಿ ಅನಿಸುತ್ತಿತ್ತು. ನಂಗೆ ಗಂಟಲು ಕಟ್ಟುತ್ತಿತ್ತು' ಎಂದಿದ್ದಾರೆ ಸಂಧ್ಯಾ.

**ಅರಕೆರೆ ನನ್ನೂರು**

'ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣದ ಅರಕೆರೆ ನನ್ನೂರು. ಸಿನಿಮಾ ಮಾಡುವ ಯಾವುದೇ ಆಲೋಚನೆ ನನಗೆ ಇರಲಿಲ್ಲ. ಅರಕೆರೆಯಲ್ಲಿ ಪಿಯುಸಿ ಮಾಡಿದೆ. ಮೈಸೂರಿನಲ್ಲಿ ಡಿಗ್ರಿ ಮಾಡಿದೆ. ನಂತರ ನೀನಾಸಂ ಸೇರಿದೆ. 2015ರಲ್ಲಿ ಥಿಯೇಟರ್‌ನಲ್ಲಿ ಎಂಎ ಮಾಡಬೇಕು ಎಂದು ಬೆಂಗಳೂರಿಗೆ ಬಂದಿದ್ದೆ. ಆಗ ಒಂದು ಸಿನಿಮಾಗೆ ಅವಕಾಶ ಸಿಕ್ಕಿತ್ತು. ನಂತರ ಸಾಲು ಸಾಲು ಸಿನಿಮಾ ಆಫರ್‌ಗಳು ಬಂದವು' ಎಂದು ಖುಷಿಯಿಂದ ಹೇಳುತ್ತಾರೆ ಸಂಧ್ಯಾ.

**ಯಾವುದೂ ಪ್ಲ್ಯಾನ್ ಮಾಡಿದ್ದಲ್ಲ..**

ಒಂದು ಸಿನಿಮಾ ಹಿಟ್ ಆದರೆ ಮುಂದೆ ಸಾಲು ಸಾಲು ಆಫರ್‌ಗಳು ಬರುತ್ತವೆ. ಸಂಧ್ಯಾ ಆ ಬಗ್ಗೆ ಯೋಚಿಸಿಲ್ಲ. 'ಜೀವನದಲ್ಲಿ ನಾನು ಪ್ಲ್ಯಾನ್ ಮಾಡಿ ಏನನ್ನೂ ಮಾಡಿಲ್ಲ. ಅದಾಗಿಯೇ ಆಗುತ್ತಿದೆ. ನಾನು ನಾಟಕಕ್ಕೆ ಬಂದಿದ್ದು ಆಕಸ್ಮಿಕ, ಸಿನಿಮಾ ಆಫರ್ ಬಂದಿದ್ದೂ ಆಕಸ್ಮಿಕ.

# ರಮ್ಯಾ ದೂರು ಕೊಟ್ರೆ 7 ವರ್ಷ ಜೈಲು ಗ್ಯಾರಂಟಿ

## 'ಡಿ' ಫ್ಯಾನ್ಸ್‌ನಿಂದ ಅಶ್ಲೀಲ ಕಾಮೆಂಟ್



ಸ್ಯಾಂಡಲ್‌ವುಡ್ ಕ್ವೀನ್ ರಮ್ಯಾಗೆ ಇನ್‌ಸ್ಟಾಗ್ರಾಂ ಖಾತೆಯಲ್ಲಿ ಅಶ್ಲೀಲ ಮೆಸೇಜ್ ಬರುತ್ತಿರುವ ಹಿನ್ನೆಲೆ ಮಹಿಳಾ ಆಯೋಗ ಸ್ವಯಂಪ್ರೇರಿತ ದೂರು ದಾಖಲಿಸಲು ನಿರ್ಧರಿಸಿದೆ. ಅಲ್ಲದೇ ನಟಿ ರಮ್ಯಾ ಅಶ್ಲೀಲ ಕಾಮೆಂಟ್ ಮಾಡಿದವರ ವಿರುದ್ಧ ದೂರು ಕೊಟ್ಟರೆ, 3 ರಿಂದ 7 ವರ್ಷ ಜೈಲು ಶಿಕ್ಷೆಯಾಗುವ ಸಾಧ್ಯತೆ ಇದೆ ಎಂದು ಎಚ್ಚರಿಸಿದೆ.

ಈ ಕುರಿತು ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ ಜೊತೆ ಮಾತನಾಡಿ, ರಮ್ಯಾ ಅಂತಲ್ಲ, ಬೇರೆ ಬೇರೆ ಕಡೆ ಏನಾದರೂ ಆದಾಗ ಈ ತರ ಕೆಟ್ಟದಾಗಿ ಕಮೆಂಟ್ ಮಾಡುತ್ತಾರೆ. ತುಂಬಾ ಜನ ಸೆಲೆಬ್ರಿಟಿಗಳು ನಮ್ಮಲ್ಲಿಗೆ ಬಂದು ದೂರು ಕೊಡುತ್ತಾರೆ. ಯಾರು ಅಶ್ಲೀಲ ಪದವನ್ನು ಬಳಕೆ ಮಾಡಬೇಡಿ. ಯಾವ ಮಹಿಳೆಗೂ ಕೂಡ ಅಗೌರವ ತೋರಬೇಡಿ. ನಿಮ್ಮ ಕೆಟ್ಟ ಪದಬಳಕೆಯಿಂದಾಗಿ ಮುಂದೊಂದು ದಿನ ಜೈಲಿಗೂ ಹೋಗಬಹುದು. ಕಾನೂನಿನ ಪ್ರಕಾರ ಇದು ದೊಡ್ಡ ಅಪರಾಧ. ಈ ರೀತಿ ಒಬ್ಬರನ್ನು ನೋಡಿ ಇನ್ನೊಬ್ಬರು ಮಾಡೋದು ಬೇಡ. ಇದು ಸರಿಯಲ್ಲ. ಒಂದು ವೇಳೆ ರಮ್ಯಾ ದೂರು ದಾಖಲು ಮಾಡಿದರೆ ಖಂಡಿತಾ ಎಫ್ ಐಆರ್ ಆಗುತ್ತದೆ. ಬಳಿಕ ಮೂರರಿಂದ ಏಳು ವರ್ಷ ಜೈಲು ಶಿಕ್ಷೆಯಾಗುವ ಸಾಧ್ಯತೆಯಿರುತ್ತದೆ ಎಂದು ಎಚ್ಚರಿಸಿದ್ದಾರೆ.

# ರಾಜ್ ಬಿ. ಶೆಟ್ಟಿಗೆ ಪ್ರೀತಿಯ ಸಂದೇಶ



ರಾಜ್ ಬಿ ಶೆಟ್ಟಿ ನಿರ್ಮಾಣದ ಮತ್ತು ಜೆಪಿ ತುಮಿನಾಡ್ ನಿರ್ದೇಶನದ 'ಸು ಫ್ರಮ್ ಸೋ' ಚಿತ್ರವು ಬಾಕ್ಸ್ ಆಫೀಸ್‌ನಲ್ಲಿ ಅದ್ಭುತ ಯಶಸ್ಸು ಕಂಡಿದೆ. ರಿಷಬ್ ಶೆಟ್ಟಿ ಅವರು ಚಿತ್ರತಂಡಕ್ಕೆ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ. ತಮ್ಮ 'ಸಹಿಪ್ರಾ ಶಾಲೆ' ಚಿತ್ರದ ನೆನಪಾಯಿತು ಎಂದು ಹೇಳಿದ್ದಾರೆ. ರಾಜ್ ಬಿ ಶೆಟ್ಟಿ ನಿರ್ಮಾಣದ, ಜೆಪಿ ತುಮಿನಾಡ್ ನಿರ್ದೇಶನದ 'ಸು ಫ್ರಮ್ ಸೋ' ಸಿನಿಮಾ ಯಶಸ್ಸು ಕಂಡಿದೆ. ಈ ಚಿತ್ರವು ಬಾಕ್ಸ್ ಆಫೀಸ್‌ನಲ್ಲಿ ಒಳ್ಳೆಯ ಗಳಿಕೆ ಮಾಡುತ್ತಿರುವುದನ್ನು ಇಡೀ ಕರ್ನಾಟಕ ಜನತೆ ನೋಡುತ್ತಾ ಇದೆ. ಇದು ಕನ್ನಡ ಚಿತ್ರರಂಗಕ್ಕೆ ಸಿಕ್ಕ ದೊಡ್ಡ ಗೆಲುವು. ರಾಜ್ ಅವರಿಗೆ ಹಾಗೂ ತಂಡಕ್ಕೆ ಎಲ್ಲರೂ ವಿಶ್ ತಿಳಿಸುತ್ತಾ ಇದ್ದಾರೆ. ಈಗ ರಿಷಬ್ ಶೆಟ್ಟಿ ಕೂಡ ತಂಡಕ್ಕೆ ವಿಶ್ ಮಾಡಿದ್ದಾರೆ ಮತ್ತು ತಮ್ಮ ನಿರ್ದೇಶನದ 'ಸಹಿಪ್ರಾ ಶಾಲೆ' ದಿನಗಳು ನೆನಪಾದವು ಎಂದು ಹೇಳಿದ್ದಾರೆ. 'ನಮಸ್ಕಾರ ಕನ್ನಡ ಸಿನಿಪ್ರಿಯರೇ, ನೀವೆಲ್ಲರೂ 'ಸು ಫ್ರಮ್ ಸೋ' ಚಿತ್ರಕ್ಕೆ ನೀಡಿರುವ ಅದ್ಭುತ ಬೆಂಬಲ ಮತ್ತು ಪ್ರೀತಿಗೆ ಹೃತ್ಪೂರ್ವಕ ಧನ್ಯವಾದಗಳು. ಈ ಸಿನಿಮಾ ನಿಜಕ್ಕೂ ಮನಸ್ಸಿಗೆ ಖುಷಿ ನೀಡಿದೆ. ರಚಿಸಿ ನಿರ್ದೇಶನ ಮಾಡಿದ ಜೆ.ಪಿ. ತುಮಿನಾಡ್ ಅವರಿಗೆ ಚಿತ್ರರಂಗಕ್ಕೆ ಸ್ವಾಗತ. ಅವರ ಚೊಚ್ಚಲ ಪ್ರಯತ್ನ ಅತ್ಯಂತ ಯಶಸ್ವಿಯಾಗಿದೆ. ನಿರ್ಮಾಪಕರಾದ ರಾಜ್ ಬಿ. ಶೆಟ್ಟಿ, ರವಿ ರೈ ಮತ್ತು ಶಶಿಧರ್ ಶೆಟ್ಟಿ ಬಾರೋಡ ಅವರ ಈ ಹೊಸ ಪ್ರಯತ್ನಕ್ಕೆ ನನ್ನ ಶುಭಾಶಯಗಳು. ಅವರ ಪ್ರೋತ್ಸಾಹದಿಂದ ಇಂತಹ ಉತ್ತಮ ಚಿತ್ರಗಳು ಹೊರಬರುತ್ತಿವೆ.

# ಮೈಸಾ ಚಿತ್ರಕ್ಕೆ ಮುಹೂರ್ತ

## ಗೋಂಡ್ ಹಾಡಿಗೆ ಡಾನ್ಸ್



ರಶ್ಮಿಕಾ ಮಂದಣ್ಣ ನಟನೆಯ ಬಹು ನಿರೀಕ್ಷೆಯ ಮೈಸಾ ಚಿತ್ರದ ಅದ್ದೂರಿ ಮುಹೂರ್ತ ಸಮಾರಂಭ ನಡೆಯಿತು. ಹೊಸ ಸಿನಿಮಾದ ಪೂಜೆಯಲ್ಲಿ ನಟಿ ರಶ್ಮಿಕಾ ಬುಡಕಟ್ಟು ಮಹಿಳೆಯರೊಂದಿಗೆ ಗೋಂಡ್ ಹಾಡಿಗೆ ಡಾನ್ಸ್ ಮಾಡಿ ಸಂಭ್ರಮಿಸಿದರು. ಜೊತೆಗೆ ಗೋಂಡ್ ಸಮುದಾಯದೊಂದಿಗೆ ಕೆಲವು ಸಮಯ ಕಾಲ ಕಳೆದರು. ಹೊಸ ಅವತಾರದಲ್ಲಿ ರಶ್ಮಿಕಾ ಮಂದಣ್ಣ, ಮೊದಲ ಬಾರಿಗೆ ಮಹಿಳಾ ಪ್ರಧಾನ ಸಿನಿಮಾದಲ್ಲಿ ಮಿಂಚುತ್ತಿದ್ದಾರೆ. ಮೈಸಾ ಪ್ಯಾನ್ ಇಂಡಿಯಾ ಸಿನಿಮಾ ಆಗಿದ್ದು ಐದು ಭಾಷೆಯಲ್ಲಿ ನಿರ್ಮಾಣವಾಗಲಿದೆ . ಸಿನಿಮಾಗೆ ರವೀಂದ್ರ ಪುಲ್ಲೇ ನಿರ್ದೇಶನ ಮಾಡುತ್ತಿದ್ದು, ಅಜಯ್ ಹಾಗೂ ಅನಿಲ್ ಸಯ್ಯಾಪುರೆಡ್ಡಿ ಚಿತ್ರ ನಿರ್ಮಾಣ ಮಾಡುತ್ತಿದ್ದಾರೆ. ಕನ್ನಡದ ಕಿರಿಕ್ ಪಾರ್ಟಿ ಸಿನಿಮಾದ ಮೂಲಕ ಬಣ್ಣದ ಲೋಕಕ್ಕೆ ಕಾಲಿಟ್ಟವರು ನಟಿ ರಶ್ಮಿಕಾ ಮಂದಣ್ಣ. ಆ ಸಿನಿಮಾದ ಗೆಲುವು ರಶ್ಮಿಕಾರ ವೃತ್ತಿ ಬದುಕಿಗೆ ಭದ್ರಬುನಾದಿಯನ್ನೇ ಹಾಕಿತು. ಎರಡನೇ ಸಿನಿಮಾದಲ್ಲೇ ಪುನೀತ್ ರಾಜ್‌ಕುಮಾರ್ ಅವರಿಗೆ ನಾಯಕಿಯಾದರು. ಗೋಲ್ಡನ್ ಸ್ಟಾರ್ ಗಣೇಶ್, ದರ್ಶನ್, ಧ್ರುವ ಸರ್ಜಾ ಹೀಗೆ ಸ್ಟಾರ್ ನಟರ ಚಿತ್ರಗಳೇ ರಶ್ಮಿಕಾರನ್ನು ಹುಡುಕಿಕೊಂಡು ಬಂದವು. ಸಿಕ್ಕ ಅವಕಾಶವನ್ನು ಬಳಸಿಕೊಂಡು ಗೆಲುವಿನ ಏಣಿ ಏರಿಯೇ ಬಿಟ್ಟರು ರಶ್ಮಿಕಾ ಮಂದಣ್ಣ. ಈ ಹುಡುಗಿಯ ಮೇಲೆ ಪರಭಾಷಾ ನಿರ್ದೇಶಕರ ಕಣ್ಣು ಬಿತ್ತು.

# ಪಡ್ಡಾ ಹಳೆ ಚಿತ್ರಕ್ಕೆ ಜೀವ ಬಂತು!

## ಒಟಿಟಿಯಲ್ಲಿ ಶೀಘ್ರದಲ್ಲಿ ರಿಲೀಸ್

ಸೈಯಾರಾ ಸಿನಿಮಾ ಹಿಟ್ ಆಗಿದೆ. ಚಿತ್ರದ ನಾಯಕಿ ಅನೀತ್ ಪಡ್ಡಾ ಕ್ಲಿಕ್ ಆಗಿದ್ದಾರೆ. ಆದರೆ, ಇದು ಹಿಟ್ ಆಗ್ತಿದ್ದಂತೇನೆ ಇದೀಗ ಅನೀತ್ ಪಡ್ಡಾ ಹಳೇ ಚಿತ್ರವೊಂದು ಜೀವ ಪಡೆದಿದೆ.

ಸೈಯಾರಾ ಸಿನಿಮಾ ಹಿಟ್ ಆಗಿದೆ. ನಿರೀಕ್ಷೆ ಮಾಡದೇ ಇರೋ ಚಿತ್ರ ಇದು. ಆದರೂ ಈ ಚಿತ್ರ ಗೆದ್ದು ಬೀಗಿದೆ. ದೊಡ್ಡ ಸ್ಟಾರ್‌ಗಳ ಚಿತ್ರಗಳು ಮಕಾಡೆ ಮಲಗಿವೆ. ಹಾಗಿರೋವಾಗ್ಲೆ ಇದೀಗ ಇನ್ನೂ ಒಂದು ಹೊಸ ವಿಷಯ ಹೊರ ಬಂದಿದೆ. ಚಿತ್ರದ ನಾಯಕಿ ಅನೀತ್ ಪಡ್ಡಾ ಅಭಿನಯದ ಹಳೇ ಚಿತ್ರ ಒಂದು ಭಾರೀ ಸುದ್ದಿ ಮಾಡುತ್ತಿದೆ. ಸೈಯಾರಾ ಹಿಟ್ ಆಗಿದ್ದೆ ತಡ, ಈ ಒಂದು ಹಳೇ ಪ್ರೋಜೆಕ್ಟ್‌ಗೆ ಜೀವ ಬಂದಂತೆ ಇದೆ. ಅದಕ್ಕೇನೆ ಓಟಿಟಿಯಲ್ಲಿ ಈಗ ಈ ಸಿನಿಮಾದ ಸುದ್ದಿ ಜಾಸ್ತಿ ಕೇಳಿ ಬರ್ತಿದೆ. ಅನೀತ್ ಪಡ್ಡಾ ಸಂಚಲನ ಸೃಷ್ಟಿ ಮಾಡಿದ್ದಾರೆ. ಸೈಯಾರಾ ಚಿತ್ರದ ಮೂಲಕ ಬಿ ಟೌನ್ ಅಲ್ಲಿ ಸದ್ದು ಮಾಡ್ತಿದ್ದಾರೆ. ಆದರೆ, ಈ ನಟಿ ಈ ಹಿಂದೇ ಒಂದು ಚಿತ್ರ ಮಾಡಿದ್ದಾರೆ. ಆದರೆ, ಅದು ವೆಬ್ ಸಿರೀಸ್ ಆಗಿದೆ. ಸೈಯಾರಾ ಸೈನ್ ಮಾಡೋ ಮೊದಲೇ ಒಪ್ಪಿರೋ ಪ್ರೊಜೆಕ್ಟ್ ಅದಾಗಿದೆ.



# ದಿಗ್ಗಜರ ನಿವೃತ್ತಿಯೊಂದಿಗೆ ಸತತ ಸೋಲುಗಳಿಂದ ಕಂಗೆಟ್ಟ ವೆಸ್ಟ್ ಇಂಡೀಸ್

## ಖದರ್ ಕಳೆದುಕೊಂಡ ವೆಸ್ಟ್ ಇಂಡೀಸ್

ಲೆಜೆಂಡ್ಸ್ ಆಟಗಾರರ ನಿವೃತ್ತಿಯೊಂದಿಗೆ ಟಿ20 ಕ್ರಿಕೆಟ್‌ನಲ್ಲಿ ವೆಸ್ಟ್ ಇಂಡೀಸ್ ತಂಡದ ಯುಗಾಂತ್ಯವಾಯಿತಾ ಇಂತಹದೊಂದು ಪ್ರಶ್ನೆ ಹುಟ್ಟಿಕೊಳ್ಳಲು ಮುಖ್ಯ ಕಾರಣ ವಿಂಡೀಸ್ ಪಡೆಯ ಪ್ರಸ್ತುತ ಪ್ರದರ್ಶನ. 2012, 2014ರಲ್ಲಿ ಟಿ20 ವಿಶ್ವ ಚಾಂಪಿಯನ್ ಆಗಿದ್ದ ವೆಸ್ಟ್ ಇಂಡೀಸ್ ತಂಡ ಟಿ20 ಕ್ರಿಕೆಟ್‌ನಲ್ಲಿ ತನ್ನ ಖದರ್ ಕಳೆದುಕೊಳ್ಳುತ್ತಿದೆ. ಇದಕ್ಕೆ ಸಾಕ್ಷಿ ಈ ಅಂಕಿ ಅಂಶಗಳು.

ಟೆಸ್ಟ್ ಹಾಗೂ ಏಕದಿನ ಕ್ರಿಕೆಟ್‌ನಲ್ಲಿ ಕಳೆದ ಕೆಲವು ವರ್ಷಗಳಿಮದ ಅತ್ಯಂತ ಕಳಪೆ ಪ್ರದರ್ಶನ ನೀಡುತ್ತಾ ಬಂದಿದ್ದರೂ ವಿಂಡೀಸ್ ಪಡೆ ಟಿ20 ಕ್ರಿಕೆಟ್‌ನಲ್ಲಿ ಪಾರುಪತ್ಯ ಮೆರೆಯುತ್ತಿದ್ದರು. ಆದರೀಗ ಪ್ರಮುಖ ಆಟಗಾರರ ನಿವೃತ್ತಿಯೊಂದಿಗೆ ವೆಸ್ಟ್ ಇಂಡೀಸ್ ತಂಡ ಸತತ ಸೋಲುಗಳಿಂದ ಕಂಗೆಟ್ಟಿದೆ. ಈ ಸೋಲುಗಳ ಸಂಖ್ಯೆ ಇದೀಗ 16 ಕ್ಕೇರಿದೆ. ಅಂದರೆ ಕಳೆದ 18 ಟಿ20 ಪಂದ್ಯಗಳಲ್ಲಿ ವೆಸ್ಟ್ ಇಂಡೀಸ್ ತಂಡ ಗೆದ್ದಿರುವುದು ಕೇವಲ 2 ಮ್ಯಾಚ್‌ಗಳನ್ನು ಮಾತ್ರ ಎಂದರೆ ನಂಬಲೇಬೇಕು. ಹೀಗೆ ಗೆದ್ದಿರುವುದು ಶ್ರೀಲಂಕಾ ಮತ್ತು ಐರ್ಲೆಂಡ್ ವಿರುದ್ಧ ಮಾತ್ರ. ಇದರ ನಡುವೆ ಬಾಂಗ್ಲಾದೇಶ್, ಶ್ರೀಲಂಕಾ, ಇಂಗ್ಲೆಂಡ್, ಆಸ್ಟ್ರೇಲಿಯಾ ವಿರುದ್ಧ ಟಿ20 ಸರಣಿಗಳನ್ನು ಸೋತಿದೆ. ಇನ್ನು ಈ ವರ್ಷ ವಿಂಡೀಸ್ ಪಡೆ ಟಿ20 ಸರಣಿ ಗೆದ್ದಿರುವುದು ಐರ್ಲೆಂಡ್ ವಿರುದ್ಧ ಮಾತ್ರ ಎಂದರೆ ನಂಬಲೇಬೇಕು. ಅದರಲ್ಲೂ ಬಾಂಗ್ಲಾದೇಶ್, ಇಂಗ್ಲೆಂಡ್ ವಿರುದ್ಧ 3 ಪಂದ್ಯಗಳ ಟಿ20 ಸರಣಿಗಳಲ್ಲಿ ವೈಟ್ ವಾಶ್ ಸೋಲನುಭವಿಸಿದೆ. ಇದೀಗ ಆಸ್ಟ್ರೇಲಿಯಾ ವಿರುದ್ಧದ 5 ಪಂದ್ಯಗಳ ಟಿ20 ಸರಣಿಯ ನಾಲ್ಕು ಪಂದ್ಯಗಳಲ್ಲೂ ವೆಸ್ಟ್ ಇಂಡೀಸ್ ತಂಡ ಪರಾಜಯಗೊಂಡಿದೆ. ಅದು ಸಹ ತವರಿನಲ್ಲಿ ನಡೆಯುತ್ತಿರುವ ಸರಣಿಯಲ್ಲಿ ಎಂಬುದು ಇಲ್ಲಿ ಉಲ್ಲೇಖಾರ್ಹ. ಇತ್ತ ಎಲ್ಲಾ ತಂಡಗಳು ಮುಂಬರುವ ಟಿ20 ವಿಶ್ವಕಪ್‌ಗಾಗಿ ಭರ್ಜರಿ ತಯಾರಿಗಳನ್ನು ಆರಂಭಿಸುತ್ತಿದ್ದರೆ, ಅತ್ತ ವೆಸ್ಟ್ ಇಂಡೀಸ್ ತಂಡ ಮಾತ್ರ ಸತತ ಸೋಲುಗಳ ಸರಪಳಿಯಿಂದ ಹೊರಬರಲು ಪರದಾಡುತ್ತಿದೆ. ಈ ಪರದಾಟ ಆಸ್ಟ್ರೇಲಿಯಾ ವಿರುದ್ಧದ ಟಿ20 ಸರಣಿಯಲ್ಲೂ ಮುಂದುವರೆದಿದೆ. ಹೀಗಾಗಿಯೇ ಟಿ20 ಕ್ರಿಕೆಟ್‌ನಲ್ಲಿ ಕೆರಿಬಿಯನ್ ದೈತ್ಯರ ಯುಗಾಂತ್ಯವಾಗಿದೆ ಎಂದು ವಿಶ್ಲೇಷಿಸಲಾಗುತ್ತಿದೆ.




# 11 ಶತಕಗಳ ದಾಖಲೆ ಸರಿಗಟ್ಟಿದ ಯಂಗ್ ಇಂಡಿಯಾ

## ಹೊಸ ಇತಿಹಾಸ ನಿರ್ಮಾಣ



ಇಂಗ್ಲೆಂಡ್ ವಿರುದ್ಧದ ಸರಣಿಯಲ್ಲಿ ಟೀಮ್ ಇಂಡಿಯಾ ಬ್ಯಾಟರ್‌ಗಳ ಅಬ್ಬರ ಮುಂದುವರೆದಿದೆ. ಈ ಅಬ್ಬರದೊಂದಿಗೆ ಭಾರತೀಯ ದಾಂಡಿಗರು ಟೀಮ್ ಇಂಡಿಯಾದ ಬ್ಯಾಟರ್‌ಗಳ ವಿಶೇಷ ದಾಖಲೆ ಸರಿಗಟ್ಟಿದ್ದಾರೆ. ಅಂದರೆ ಬರೋಬ್ಬರಿ 46 ವರ್ಷಗಳ ಬಳಿಕ ಭಾರತೀಯ ಬ್ಯಾಟರ್‌ಗಳು ಒಂದೇ ಸರಣಿಯಲ್ಲಿ 11 ಸೆಂಚುರಿ ಸಿಡಿಸಿದ್ದಾರೆ.

ಲೀಡ್ಸ್‌ನ ಹೆಡಿಂಗ್ಲೆ ಮೈದಾನದಲ್ಲಿ ನಡೆದ ಇಂಗ್ಲೆಂಡ್ ವಿರುದ್ಧದ ಮೊದಲ ಟೆಸ್ಟ್ ಪಂದ್ಯದ ಪ್ರಥಮ ಇನಿಂಗ್ಸ್‌ನಲ್ಲಿ ಯಶಸ್ವಿ ಜೈಸ್ವಾಲ್ (101), ಶುಭ್‌ಮನ್ (147) ಹಾಗೂ ರಿಷಭ್ ಪಂತ್ (134) ಶತಕ ಸಿಡಿಸಿದ್ದರು. ಇನ್ನು ದ್ವಿತೀಯ ಇನಿಂಗ್ಸ್‌ನಲ್ಲಿ ಕೆಎಲ್ ರಾಹುಲ್ (137) ಹಾಗೂ ರಿಷಭ್ ಪಂತ್ (118) ಶತಕ ಬಾರಿಸಿದ್ದರು.

ಇನ್ನು ಬರ್ಮಿಂಗ್‌ಹ್ಯಾಮ್‌ನ ಎಡ್ಜ್‌ಬಾಸ್ಟನ್ ಮೈದಾನದಲ್ಲಿ ನಡೆದ ದ್ವಿತೀಯ ಟೆಸ್ಟ್ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಶುಭ್‌ಮನ್ ಗಿಲ್ (269) ದ್ವಿಶತಕ ಸಿಡಿಸಿದ್ದರು. ಆ ಬಳಿಕ ದ್ವಿತೀಯ ಇನಿಂಗ್ಸ್‌ನಲ್ಲಿ 161 ರನ್ ಬಾರಿಸಿ ಹೊಸ ಇತಿಹಾಸ ನಿರ್ಮಿಸಿದ್ದರು. ಹಾಗೆಯೇ ಲಂಡನ್‌ನ ಲಾರ್ಡ್ಸ್ ಮೈದಾನದಲ್ಲಿ ನಡೆದ ಮೂರನೇ ಟೆಸ್ಟ್ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ಟೀಮ್ ಇಂಡಿಯಾ ಪರ ಕೆಎಲ್ ರಾಹುಲ್ (100) ಶತಕ ಬಾರಿಸಿದ್ದರು. ಇದೀಗ ಮ್ಯಾಂಚೆಸ್ಟರ್‌ನಲ್ಲಿ ನಡೆದ ನಾಲ್ಕನೇ ಟೆಸ್ಟ್ ಪಂದ್ಯದಲ್ಲಿ ಶುಭ್‌ಮನ್ ಗಿಲ್ (103), ರವೀಂದ್ರ ಜಡೇಜಾ (107) ಹಾಗೂ ವಾಷಿಂಗ್ಟನ್ ಸುಂದರ್ (101) ಶತಕ ಸಿಡಿಸಿದ್ದಾರೆ. ಈ ಶತಕಗಳೊಂದಿಗೆ ಭಾರತೀಯ ಬ್ಯಾಟರ್‌ಗಳು ಹೊಸ ಇತಿಹಾಸ ನಿರ್ಮಿಸುವತ್ತ ದಾಪುಗಾಲಿಟ್ಟಿದ್ದಾರೆ.

ಅದು ಸಹ 46 ವರ್ಷಗಳ ಬಳಿಕ. ಅಂದರೆ 1978-79 ರಲ್ಲಿ ನಡೆದ ವೆಸ್ಟ್ ಇಂಡೀಸ್ ವಿರುದ್ಧದ ಸರಣಿಯಲ್ಲಿ ಟೀಮ್ ಇಂಡಿಯಾ ಬ್ಯಾಟರ್‌ಗಳು ಒಟ್ಟು 11 ಶತಕ ಸಿಡಿಸಿ ದಾಖಲೆ ನಿರ್ಮಿಸಿದ್ದರು. ಇದೀಗ 4 ಪಂದ್ಯಗಳ ಮೂಲಕ ಯಂಗ್ ಬ್ಯಾಟರ್‌ಗಳು ಒಟ್ಟು ಹನ್ನೊಂದು ಶತಕ ಸಿಡಿಸಿದ್ದಾರೆ.

ಈ ಮೂಲಕ 4 ದಶಕಗಳ ಹಳೆಯ ದಾಖಲೆಯನ್ನು ಸರಿಗಟ್ಟಿದ್ದಾರೆ. ಇನ್ನು ಕೆನ್ನಿಂಗ್ಟನ್ ಓವಲ್ ಮೈದಾನದಲ್ಲಿ ನಡೆಯಲಿರುವ ಕೊನೆಯ ಟೆಸ್ಟ್ ಪಂದ್ಯದಲ್ಲಿ ಟೀಮ್ ಇಂಡಿಯಾ ಪರ ಒಂದು ಶತಕ ಮೂಡಿಬಂದರೆ ಹೊಸ ಇತಿಹಾಸ ನಿರ್ಮಾಣವಾಗಲಿದೆ.

# ಬಲಿಷ್ಠ ತಂಡ ಪ್ರಕಟಿಸಿದ ಇಂಗ್ಲೆಂಡ್

ಭಾರತ ಹಾಗೂ ಇಂಗ್ಲೆಂಡ್ ನಡುವಿನ 4ನೇ ಟೆಸ್ಟ್ ಪಂದ್ಯ ಡ್ರಾನಲ್ಲಿ ಅಂತ್ಯಗೊಂಡಿದೆ. ಇದೀಗ ಉಭಯ ತಂಡಗಳ ನಡುವಿನ ಸರಣಿಯ ಐದನೇ ಹಾಗೂ ಕೊನೆಯ ಟೆಸ್ಟ್ ಪಂದ್ಯ ಓವಲ್‌ನಲ್ಲಿ ನಡೆಯಲಿದ್ದು, ಈ ನಿರ್ಣಾಯಕ ಟೆಸ್ಟ್ ಪಂದ್ಯಕ್ಕೆ ಆತಿಥೇಯ ಇಂಗ್ಲೆಂಡ್ 15 ಸದಸ್ಯರ ತಂಡವನ್ನು ಪ್ರಕಟಿಸಿದೆ. 5ನೇ ಟೆಸ್ಟ್‌ಗೆ ಆಯ್ಕೆಯಾದ ತಂಡದ ವಿಶೇಷವೆಂದರೆ 3 ವರ್ಷಗಳ ಹಿಂದೆ ತಮ್ಮ ವೃತ್ತಿಜೀವನದ ಏಕೈಕ ಟೆಸ್ಟ್ ಪಂದ್ಯವನ್ನಾಡಿದ ಆಲ್‌ರೌಂಡರ್ ಜೇಮೀ ಓವರ್ಟನ್ ಅವರಿಗೆ ತಂಡದಲ್ಲಿ ಅವಕಾಶ ನೀಡಲಾಗಿದೆ. ಉಳಿದಂತೆ ಇಂಗ್ಲೆಂಡ್ ತನ್ನ ತಂಡದಲ್ಲಿ ಹೆಚ್ಚಿನ ಬದಲಾವಣೆಗಳನ್ನು ಮಾಡಿಲ್ಲ.

**ಡ್ರಾಗೊಂಡ ಮ್ಯಾಂಚೆಸ್ಟರ್ ಟೆಸ್ಟ್:** ಪ್ರಸ್ತುತ ಸರಣಿಯಲ್ಲಿ 2-1 ಅಂತರದಿಂದ ಮುನ್ನಡೆ ಪಡೆದುಕೊಂಡಿರುವ ಬೆನ್ ಸ್ಟೋಕ್ಸ್ ಪಡೆ, ಮ್ಯಾಂಚೆಸ್ಟರ್ ಟೆಸ್ಟ್ ಗೆಲ್ಲುವ ಆತ್ಮ ವಿಶ್ವಾಸದಿಂದ ಬೀಗುತ್ತಿತ್ತು. ಇದಕ್ಕೆ ಕಾರಣ, ಈ ಟೆಸ್ಟ್ ಪಂದ್ಯದ ಮೊದಲ ಇನ್ನಿಂಗ್ಸ್‌ನಲ್ಲಿ ಇಂಗ್ಲೆಂಡ್ ಕಲೆಹಾಕಿದ ರನ್. ಭಾರತವನ್ನು 358 ರನ್‌ಗಳಿಗೆ ಆಲೌಟ್ ಮಾಡಿ ಇನ್ನಿಂಗ್ಸ್ ಆರಂಭಿಸಿದ ಇಂಗ್ಲೆಂಡ್ ಬರೋಬ್ಬರಿ 669 ರನ್ ಪೇರಿಸಿತ್ತು. ಈ ಮೂಲಕ ಮೊದಲ ಇನ್ನಿಂಗ್ಸ್‌ನಲ್ಲಿ 311 ರನ್‌ಗಳ ಬೃಹತ್ ಮುನ್ನಡೆಯನ್ನು ಪಡೆದುಕೊಂಡಿತ್ತು. 2ನೇ ಇನ್ನಿಂಗ್ಸ್‌ನಲ್ಲಿ ಭಾರತದ 2 ವಿಕೆಟ್‌ಗಳನ್ನು ಶೂನ್ಯಕ್ಕೆ ಉರುಳಿಸಿತ್ತು. ಆತಿಥೇಯ ಆಂಗ್ಲರು ಇನ್ನಿಂಗ್ ಗೆಲುವಿನ ನಿರೀಕ್ಷೆಯಲ್ಲಿದ್ದರು.



ಆದರೆ ಮೊದಲೆರಡು ಆಘಾತಗಳಿಂದ ಎಚ್ಚೆತ್ತುಕೊಂಡಿದ್ದ ಗಿಲ್ ಪಡೆ, ಆಂಗ್ಲರ ನಿರೀಕ್ಷೆಗೂ ಮೀರಿದ ಪ್ರದರ್ಶನ ನೀಡಿ ಟೆಸ್ಟ್ ಪಂದ್ಯವನ್ನು ಡ್ರಾ ಮಾಡಿಕೊಳ್ಳುವಲ್ಲಿ ಯಶಸ್ವಿಯಾಗಿದೆ.

**ಓವಲ್‌ನಲ್ಲಿ ನಿರ್ಣಾಯಕ ಪಂದ್ಯ:** ಹೀಗಾಗಿ ಓವಲ್‌ನಲ್ಲಿ ನಡೆಯಲ್ಲಿರುವ ಐದನೇ ಟೆಸ್ಟ್ ಪಂದ್ಯದ ಉಭಯ ತಂಡಗಳಿಗೂ ನಿರ್ಣಾಯಕವಾಗಿದೆ. ಈ ಪಂದ್ಯದಲ್ಲಿ ಇಂಗ್ಲೆಂಡ್ ಗೆದ್ದರೆ ಸರಣಿ ಅದರ ಕೈವಶವಾಗಲಿದೆ. ಇತ್ತ ಟೀಂ ಇಂಡಿಯಾ ಈ ಪಂದ್ಯವನ್ನು ಗೆದ್ದರೆ, ಸರಣಿ 2-2 ರ ಸಮಬಲದೊಂದಿಗೆ ಅಂತ್ಯಗೊಳ್ಳಲಿದೆ. ಹೀಗಾಗಿ ಶತಾಯಗತಾಯ ಈ ಪಂದ್ಯವನ್ನು ಗೆಲ್ಲಲೇಬೇಕಾದ ಒತ್ತಡ ಉಭಯ ತಂಡಗಳಿಗಿದೆ. ಅದರಂತೆ ಇಂಗ್ಲೆಂಡ್ ತನ್ನ ತಂಡಕ್ಕೆ ಆಲ್‌ರೌಂಡರ್ ಜೇಮೀ ಓವರ್ಟನ್ ಅವರನ್ನು ತಂಡಕ್ಕೆ ಸೇರಿಸಿಕೊಂಡಿದ್ದರೆ, ಇತ್ತ ಟೀಂ ಇಂಡಿಯಾ ಕೂಡ ಗಾಯಗೊಂಡಿರುವ ರಿಷಭ್ ಪಂತ್ ಬದಲಿಗೆ ಎನ್ ಜಗದೀಸನ್ ಅವರನ್ನು ತಂಡಕ್ಕೆ ಆಯ್ಕೆ ಮಾಡಿಕೊಂಡಿದೆ. ಇನ್ನು ಇಂಗ್ಲೆಂಡ್ ಆಯ್ಕೆ ಮಾಡಿರುವ ತಂಡಕ್ಕೆ ಎಂಟ್ರಿಕೊಟ್ಟಿರುವ ಆಲ್‌ರೌಂಡರ್ ಜೇಮೀ ಓವರ್ಟನ್ 3 ವರ್ಷಗಳ ನಂತರ ತಂಡದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. 2022 ರಲ್ಲಿ ಇಂಗ್ಲೆಂಡ್ ಪರ ಪಾದಾರ್ಪಣೆ ಮಾಡಿದ್ದ ಓವರ್ಟನ್, ಲೀಡ್ಸ್‌ನಲ್ಲಿ ನ್ಯೂಜಿಲೆಂಡ್ ವಿರುದ್ಧ ನಡೆದ ತಮ್ಮ ಚೊಚ್ಚಲ ಟೆಸ್ಟ್ ಪಂದ್ಯದಲ್ಲಿ 2 ವಿಕೆಟ್‌ಗಳನ್ನು ಪಡೆಯುವುದರ ಜೊತೆಗೆ ಎರಡೂ ಇನ್ನಿಂಗ್ಸ್‌ಗಳಲ್ಲಿ ಒಟ್ಟು 97 ರನ್ ಕಲೆಹಾಕಿದರು.




# ಗೆಲ್ಲಲು ಮಾತ್ರ ಹೊರಟ ಇಂಗ್ಲೆಂಡ್‌ಗೆ ಟೆಸ್ಟ್‌ನ ಟೇಸ್ಟ್ ತೋರಿಸಿದ ಟೀಮ್ ಇಂಡಿಯಾ

ಇಂಗ್ಲೆಂಡ್ ಬಾಝ್‌ಬಾಲ್ ಆಟ ಶುರು ಮಾಡಿ 3 ವರ್ಷಗಳಾಗಿವೆ. ಈ ಮೂರು ವರ್ಷಗಳಲ್ಲಿ ಆಂಗ್ಲರು ಟೆಸ್ಟ್ ಆಡಿದ್ದು ಗೆಲ್ಲಲು ಮಾತ್ರ. ಅಂದರೆ ಡ್ರಾ ಎಂಬ ಆಯ್ಕೆಯನ್ನೇ ಸಂಪೂರ್ಣವಾಗಿ ಮರೆತಿದ್ದರು. ಹೀಗೆ ಮೈ ಮರೆತಿದ್ದ ಇಂಗ್ಲೆಂಡ್ ತಂಡಕ್ಕೆ ಟೆಸ್ಟ್‌ನ ಅಸಲಿ ಟೇಸ್ಟ್ ತೋರಿಸುವಲ್ಲಿ ಟೀಮ್ ಇಂಡಿಯಾ ಬ್ಯಾಟರ್‌ಗಳು ಯಶಸ್ವಿಯಾಗಿದ್ದಾರೆ.

ಮ್ಯಾಂಚೆಸ್ಟರ್‌ನ ಓಲ್ಡ್ ಟ್ರಾಫೋರ್ಡ್ ಮೈದಾನದಲ್ಲಿ ನಡೆದ ಭಾರತ ವಿರುದ್ಧ 4ನೇ ಟೆಸ್ಟ್ ಪಂದ್ಯದಲ್ಲಿ ಟಾಸ್ ಗೆದ್ದ ಇಂಗ್ಲೆಂಡ್ ತಂಡದ ನಾಯಕ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಮೊದಲು ಬ್ಯಾಟ್ ಮಾಡಿದ ಟೀಮ್ ಇಂಡಿಯಾ ಪ್ರಥಮ ಇನಿಂಗ್ಸ್‌ನಲ್ಲಿ 358 ರನ್ ಕಲೆಹಾಕಿತ್ತು. ಇದಕ್ಕುತ್ತರವಾಗಿ ಬ್ಯಾಟ್ ಬೀಸಿದ ಇಂಗ್ಲೆಂಡ್ ಕಲೆಹಾಕಿದ್ದು ಬರೋಬ್ಬರಿ 669 ರನ್‌ಗಳು. ಅಂದರೆ ಮೊದಲ ಇನಿಂಗ್ಸ್‌ನಲ್ಲಿ ಇಂಗ್ಲೆಂಡ್ ತಂಡವು ಬರೋಬ್ಬರಿ 311 ರನ್‌ಗಳ ಮುನ್ನಡೆ ಪಡೆದುಕೊಂಡಿದ್ದರು. ಹೀಗಾಗಿಯೇ 4ನೇ ಟೆಸ್ಟ್ ಪಂದ್ಯದಲ್ಲಿ ಟೀಮ್ ಇಂಡಿಯಾಗೆ ಸೋಲು ಕಟ್ಟಿಟ್ಟ ಬುತ್ತಿ ಎನ್ನಲಾಗಿತ್ತು. ಇದನ್ನು ಪುಷ್ಟೀಕರಿಸುವಂತೆ ಭಾರತ ತಂಡವು ದ್ವಿತೀಯ ಇನಿಂಗ್ಸ್ ಶುರು ಮಾಡಿ ಖಾತೆ ತೆರೆಯುವ ಮುನ್ನವೇ ಎರಡು ವಿಕೆಟ್ ಕಳೆದುಕೊಂಡಿದ್ದರು.

ಆದರೆ ಆ ಬಳಿಕ ಶುರುವಾಗಿದ್ದೇ ಅಸಲಿ ಟೆಸ್ಟ್. 3ನೇ ವಿಕೆಟ್‌ಗೆ ಜೊತೆಯಾದ ಕೆಎಲ್ ರಾಹುಲ್ ಹಾಗೂ ಶುಭ್‌ಮನ್ ಗಿಲ್ ಕ್ರೀಸ್ ಕಚ್ಚಿ ನಿಂತರು. ಪರಿಣಾಮ ಇಂಗ್ಲೆಂಡ್ ಬೌಲರ್‌ಗಳ ತೋಳ್ಬಲವೇ ಹುದುಗಿ ಹೋಯಿತು. ರಕ್ಷಣಾತ್ಮಕ ಆಟದೊಂದಿಗೆ ಆಂಗ್ಲ ವೇಗಿಗಳನ್ನು ಎದುರಿಸಿದ ರಾಹುಲ್ ಹಾಗೂ ಗಿಲ್ ಜೋಡಿ 3ನೇ ವಿಕೆಟ್‌ಗೆ ಬರೋಬ್ಬರಿ 188 ರನ್ ಪೇರಿಸಿದರು.

ಇದರ ಬೆನ್ನಲ್ಲೇ 90 ರನ್‌ಗಳಿಸಿ ರಾಹುಲ್ ಔಟಾದರು. ಈ ತೊಂಬತ್ತು ರನ್‌ಗಳಿಸಲು ಕೆಎಲ್‌ಆರ್ ಎದುರಿಸಿದ್ದು ಬರೋಬ್ಬರಿ 230 ಎಸೆತಗಳನ್ನು. ಅಂದರೆ ರನ್‌ಗಳಿಸುವುದಕ್ಕಿಂತ ಪಂದ್ಯವನ್ನು ಡ್ರಾ ಗೊಳಿಸಲು ಎಲ್ಲಾ ರೀತಿಯಲ್ಲೂ ರಾಹುಲ್ ಸೆಟೆದು ನಿಂತಿದ್ದರು. ಮತ್ತೊಂದೆಡೆ ಇಂಗ್ಲೆಂಡ್ ಪಾಲಿಗೆ ಶುಭ್‌ಮನ್ ಗಿಲ್ ಕೂಡ ಮಹಾ ಗೋಡೆಯಾಗಿ ಪರಿಣಮಿಸಿತು. ಗಿಲ್ ಕೂಡ 238 ಎಸೆತಗಳನ್ನು ಎದುರಿಸಿ 103 ರನ್‌ಗಳಿಸಿದರು. ಆ ಬಳಿಕ ಬಂದ ವಾಷಿಂಗ್ಟನ್ ಸುಂದರ್ 206 ಎಸೆತಗಳೊಂದಿಗೆ 101 ರನ್ ಗಳಿಸಿದರು. ಇದರ ಜೊತೆಗೆ ರವೀಂದ್ರ ಜಡೇಜಾ 185 ಎಸೆತಗಳನ್ನು ಎದುರಿಸಿ 107 ರನ್ ಬಾರಿಸಿದರು.

4ನೇ ದಿನದಾಟದ ಕೊನೆಯ ಸೆಷನ್‌ನಲ್ಲಿ ಶುರುವಾದ ಟೀಮ್ ಇಂಡಿಯಾ ಬ್ಯಾಟರ್‌ಗಳ ಅಸಲಿ ಟೆಸ್ಟ್ ಆಟ ಕೊನೆಗೊಂಡಿದ್ದು ಐದನೇ ದಿನದಾಟದ ಮೂರನೇ ಸೆಷನ್‌ನಲ್ಲಿ. ಅದು ಕೂಡ ಇಂಗ್ಲೆಂಡ್ ತಂಡದ ನಾಯಕ ಬೆನ್ ಸ್ಟೋಕ್ಸ್ ಅವರ ಶೇಕ್ ಹ್ಯಾಂಡ್‌ನೊಂದಿಗೆ..!

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru - 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**